ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

45

ಜೂನ್ 16 ಭಾನುವಾರ 2024

₹4

ಸಂಪುಟ: 45 | ಸಂಚಿಕೆ: 61 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

ಜೂ.20ರಿಂದ ಶ್ರೀನಿವಾಸ ಕಲ್ಯಾಣೋತ್ಸವ



ಮೈಸೂರು, ಜೂ.15–ನಗರದ ವಿನಾಯಕನಗರ 6ನೇ ಮುಖ್ಯ ರಸ್ತೆಯಲ್ಲಿರುವ ಶ್ರೀ ವಿದ್ಯಾಗಣಪತಿ ಹಾಗೂ ಶ್ರೀ ಮಹಾಲಕ್ಷ್ಮಿ ದೇವಸ್ಥಾನ ಟ್ರಸ್ಟ್ ವತಿಯಿಂದ ಜೂ.20ರಿಂದ 22ರವರೆಗೆ 5ನೇ ವರ್ಷದ ಶ್ರೀನಿವಾಸ ಕಲ್ಯಾಣೋತ್ಸವವನ್ನು ಆಯೋಜಿಸಲಾಗಿದೆ.

ಜೂ.20ರಂದು ಸಂಜೆ 6 ಗಂಟೆಗೆ ಮಹಾಮಂಗಳಾರತಿ ಪೂಜೆ, ಪುಣ್ಯಾಹ, ಅಂಕುರಾರ್ಪಣೆ, ಪಂಚಗವ್ಯ, ದೇವನಾಂದಿ, ಧ್ವಜಾರೋಹಣ, ಶ್ರೀ ಸ್ವಾಮಿಯವರಿಗೆ ಪಂಚಾಮೃತಾಭಿಷೇಕ, ಶೋಡಷ ದ್ರವ್ಯಾಭಿಷೇಕ, ಭಕ್ತಾದಿಗಳಿಂದ ಸ್ವಾಮಿಗೆ ಸಾಮೂಹಿಕ ಅರಿಶಿನ ನೀರಿನಿಂದ ಅಭಿಷೇಕ ನಂತರ ತೈಲಮಜ್ಜನ ಸ್ನಾನ, ಇದಾದ ನಂತರ ಮಹಾಮಂಗಳಾರತಿ ಇರುತ್ತದೆ.

ಜೂ.21ರಂದು ಬೆಳಿಗ್ಗೆ 7ಕ್ಕೆ ಸುಪ್ರಭಾತ ಸೇವೆ ನಂತರ ಕಾಶಿಯಾತ್ರೆ, ಕಂಕಣ ಧಾರಣೆ, ಅಂತರಪಟ, ಅಕ್ಷತಾರೋಹಣ, ಕನ್ಯಾದಾನ ನಂತರ ಶ್ರೀನಿವಾಸ ಸ್ವಾಮಿಗೆ ಕಲ್ಯಾಣೋತ್ಸವ, ಮಾಂಗಲ್ಯಧಾರಣೆ ನಂತರ ಮಹಾಮಂಗಳಾರತಿ ಪುಷ್ಪವೃಷ್ಟಿ ನಂತರ ತೀರ್ಥ ಪ್ರಸಾದ ವಿನಿಯೋಗ. ಇದೇ ದಿನ ಸಂಜೆ 6.30ಕ್ಕೆ ವಿಷ್ಣು ದೀಪೋತ್ಸವ ನಂತರ 7.30ಕ್ಕೆ ಮಹಾಮಂಗಳಾರತಿ. ತೀರ್ಥ ಪ್ರಸಾದ ವಿನಿಯೋಗ. ಜೂ.22ರಂದು ಶನಿವಾರ ಹುಣ್ಣಿಮೆಯ ಪ್ರಯುಕ್ತ ಶ್ರೀ ಸತ್ಯನಾರಾಯಣ ಸ್ವಾಮಿ ಪೂಜೆ ಇರುತ್ತದೆ. ಇದೇ ದಿನ ಸಂಜೆ 5ಕ್ಕೆ ಊರಿನ ಪ್ರಮುಖ ರಸ್ತೆಗಳಲ್ಲಿ ಶ್ರೀ ಸ್ವಾಮಿಯವರ ದಿವ್ಯ ರಥೋತ್ಸವ ನಂತರ ಮಹಾಮಂಗಳಾರತಿ, ತೀರ್ಥ ಪ್ರಸಾದ ಏರ್ಪಡಿಸಲಾಗಿದೆ ಎಂದು ದೇವಸ್ಥಾನದ ಪುರೋಹಿತ ರಾಕೇಶ್ ಶರ್ಮ ತಿಳಿಸಿದ್ದಾರೆ. ಮಾಹಿತಿಗೆ ಮೊ. 8310 204050, 7204076951 ಸಂಪರ್ಕಿಸಿ.

ರಾಹುಲ್ ಗಾಂಧಿ, ಡಿ.ಕೆ.ಶಿವಕುಮಾರ್, ನನ್ನ ವಿರುದ್ಧ ಪ್ರಕರಣ ದಾಖಲಿಸಿದ್ದು ಬಿಜೆಪಿ ಟಾರ್ಗೆಟ್ ಅಲ್ಲವೆ...? ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಶ್ನೆ

- ಪ್ರತೀಕಾರದ ರಾಜಕಾರಣ ನಾವು ಮಾಡಲ್ಲ
- ದಕ್ಷಿಣ ಭಾರತದಲ್ಲಿ ಬಿಜೆಪಿ ಕಮಾಲ್ ನಡೆಯಲ್ಲ
- ಜಿ.ಪಂ. ಸೇರಿ ಸ್ಥಳೀಯ ಸಂಸ್ಥೆಗಳಿಗೆ ಶೀಘ್ರ ಚುನಾವಣೆ



ಮೈಸೂರು, ಜೂ.15(ಬಿಎಲ್‌ಯು)– ಬಿಜೆಪಿ ಸರ್ಕಾರದ 40 ಪರ್ಸೆಂಟ್ ಕಮಿಷನ್ ಆರೋಪದ ಸಂಬಂಧ ರಾಹುಲ್ ಗಾಂಧಿ, ಡಿ.ಕೆ.ಶಿವಕುಮಾರ್ ಹಾಗೂ ನನ್ನ ವಿರುದ್ಧ ಪ್ರಕರಣ ದಾಖಲಿಸಿರುವುದು ಬಿಜೆಪಿಯವರ ಟಾರ್ಗೆಟ್ ಅಲ್ಲವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಶ್ನಿಸಿದ್ದಾರೆ.

ಮೈಸೂರಿನ ರಾಮಕೃಷ್ಣನಗರದ ತಮ್ಮ ನಿವಾಸದಲ್ಲಿ ಇಂದು ಪತ್ರಕರ್ತರ ಜೊತೆ ಮಾತನಾಡಿದ ಅವರು, ದೆಹಲಿ ಮುಖ್ಯಮಂತ್ರಿ ಅರವಿಂದ ಕೇಜ್ರಿವಾಲ್ ಅವರನ್ನು ಜೈಲಿಗೆ ಕಳುಹಿಸಿದರು. ಇದನ್ನು ಪ್ರೀತಿ ಅನ್ನಬೇಕೋ ಅಥವಾ ಟಾರ್ಗೆಟ್ ಅನ್ನಬೇಕೋ ಎಂದು ಪ್ರಶ್ನಿಸಿದರು.

ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರ ಕುಟುಂಬದ ತರುವಾಯ ಈಗ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಕುಟುಂಬವನ್ನು ಕಾಂಗ್ರೆಸ್ ಟಾರ್ಗೆಟ್ ಮಾಡಿದೆ ಎಂಬ ಕೇಂದ್ರ ಬೃಹತ್ ಕೈಗಾರಿಕಾ ಸಚಿವ ಹೆಚ್.ಡಿ.ಕುಮಾರಸ್ವಾಮಿ ಆರೋಪಕ್ಕೆ ಸಿದ್ದರಾಮಯ್ಯ ತಿರುಗೇಟು ನೀಡಿದರು.

ನಾನು ನಿನ್ನೆ ಅಥವಾ ಮೊನ್ನೆ ರಾಜಕಾರಣಕ್ಕೆ ಬಂದಿಲ್ಲ. ಯಾವತ್ತೂ ನಾನು ಸೇಡಿನ ರಾಜಕಾರಣ ಮಾಡಿಲ್ಲ. ಅವರು ನಮ್ಮ ವಿರುದ್ಧ ಪ್ರಕರಣ ದಾಖಲಿಸಿದರೆಂಬ ಪ್ರತೀಕಾರಕ್ಕಾಗಿ ಯಡಿಯೂರಪ್ಪ ವಿರುದ್ಧ ಪ್ರಕರಣ ದಾಖಲಿಸಿಲ್ಲ ಎಂದು ಸಿದ್ದರಾಮಯ್ಯ ಸ್ಪಷ್ಟಪಡಿಸಿದರು.

ಬಿಜೆಪಿ ದುರಹಂಕಾರದಿಂದ ಲೋಕಸಭಾ ಚುನಾವಣೆಯಲ್ಲಿ 240 ಸ್ಥಾನಕ್ಕೆ ಕುಸಿದಿದೆ ಎಂಬ ಆರ್‌ಎಸ್‌ಎಸ್ ನಾಯಕರ ಆರೋಪಕ್ಕೆ ಪ್ರತಿಕ್ರಿಯೆ ನೀಡಿದ ಸಿದ್ದರಾಮಯ್ಯ, ಬಿಜೆಪಿ ಆರ್‌ಎಸ್‌ಎಸ್ ಮುಖವಾಡ. ದಕ್ಷಿಣ ಭಾರತದಲ್ಲಿ ಬಿಜೆಪಿಯ 8 ಸಚಿವರಿದ್ದರೂ ಯಾವುದೇ ಬದಲಾವಣೆ ಆಗುವುದಿಲ್ಲ. ಬಿಜೆಪಿಯವರು ಏನೇ ಮಾಡಿದರೂ ದಕ್ಷಿಣ ಭಾರತದಲ್ಲಿ ಹೆಚ್ಚು ಸ್ಥಾನ ಗೆಲ್ಲಲು ಸಾಧ್ಯವಿಲ್ಲ. ದಕ್ಷಿಣ ಭಾರತದಲ್ಲಿ ಸಂಘಟನೆ ವಿಸ್ತರಿಸಲು ಕೂಡ ಅವರಿಗೆ ಸಾಧ್ಯವಾಗುವುದಿಲ್ಲ ಎಂದರು.

ಲೇಖಕಿ ಅರುಂದತಿ ರಾಯ್ ಹೇಳಿಕೆ ವಿವಾದದ ಬಗ್ಗೆ ಪ್ರತಿಕ್ರಿಯೆ ನೀಡಿದ ಸಿದ್ದರಾಮಯ್ಯ, ಹೆದರಿಸುವುದು, ಬೆದರಿಸುವುದು ಬಿಜೆಪಿ ಸಂಸ್ಕೃತಿಯಾಗಿದೆ. ಅವರಿಂದ ಇನ್ನೇನು ನಿರೀಕ್ಷಿಸಲು ಸಾಧ್ಯ ಎಂದು ಪ್ರಶ್ನಿಸಿದರು. ನೀಟ್ ಪರೀಕ್ಷೆಯ ಕೆಲವು ವಿದ್ಯಾರ್ಥಿಗಳಿಗೆ ಗ್ರೇಸ್ ಮಾರ್ಕ್ಸ್ ಕೊಟ್ಟಿರುವುದು ಸರಿಯಲ್ಲ. ಇದರಿಂದ ಅರ್ಹ ವಿದ್ಯಾರ್ಥಿಗಳಿಗೆ ಅನ್ಯಾಯವಾಗಿದೆ. ಈ ಹಿನ್ನೆಲೆಯಲ್ಲಿ ಮರು ಪರೀಕ್ಷೆ ನಡೆಸಬೇಕು. ಜೊತೆಗೆ ನೀಟ್ ಪರೀಕ್ಷೆ ಅಕ್ರಮದ ಬಗ್ಗೆ ಕೂಡ ತನಿಖೆ ಆಗಬೇಕು ಎಂದು ಸಿದ್ದರಾಮಯ್ಯ ಆಗ್ರಹಿಸಿದರು. ಜಿಲ್ಲಾ ಪಂಚಾಯಿತಿ ಸೇರಿದಂತೆ ಸ್ಥಳಿಯ ಸಂಸ್ಥೆಗಳ ಚುನಾವಣೆಯನ್ನು ಯಾವಾಗ ನಡೆಸುತ್ತೀರಾ ಎಂಬ ಪ್ರಶ್ನೆಗೆ, ಆದಷ್ಟು ಬೇಗ ನಡೆಸುತ್ತೇವೆ ಎಂದು ನಗುತ್ತಾ ಹೇಳಿದರು. ಆದರೆ ಸಿದ್ದರಾಮಯ್ಯ ಅವರ ನಗುವಿನ ಆ ಉತ್ತರದಲ್ಲಿ ಕುತೂಹಲದ ಪ್ರಶ್ನೆಗಳಿತ್ತು.

ಭಾವನಾಗೆ ಚಲುವರಾಯಸ್ವಾಮಿ ಅಭಿನಂದನೆ



ಎಸ್‌ಎಸ್‌ಎಲ್‌ಸಿ ಪರೀಕ್ಷೆಯ ಮರು ಮೌಲ್ಯಮಾಪನದಲ್ಲಿ 625ಕ್ಕೆ 625 ಅಂಕ ಗಳಿಸಿದ ಭಾವನಾಳನ್ನು ಬೆಂಗಳೂರಿನ ತಮ್ಮ ಗೃಹ ಕಚೇರಿಯಲ್ಲಿ ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ಅಭಿನಂದಿಸಿದರು.

ಬೆಂಗಳೂರು, ಜೂ.15(ಬಿಎಲ್‌ಯು)– ಎಸ್‌ಎಸ್‌ಎಲ್‌ಸಿ ಪರೀಕ್ಷೆಯ ಮರು ಮೌಲ್ಯ ಮಾಪನದಲ್ಲಿ 625ಕ್ಕೆ 625 ಅಂಕ ಗಳಿಸಿದ ಭಾವನಾಳನ್ನು ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ಅಭಿನಂದಿಸಿದರು.

ತಮ್ಮ ಗೃಹ ಕಚೇರಿಯಲ್ಲಿ ಭೇಟಿ ಮಾಡಿದ ಭಾವನಾಗೆ ಶಾಲು ಹೊದಿಸಿ, ಪುಷ್ಪಗುಚ್ಛ ನೀಡಿ ಶುಭ ಹಾರೈಸಿದರು.

ಮಂಡ್ಯ ಜಿಲ್ಲೆ ನಾಗಮಂಗಲ ತಾಲೂಕಿನ ದೇವಲಾಪುರ ಹೋಬಳಿಯ ತಟ್ಟಹಳ್ಳಿಯ ಭಾವನಾ ಎಸ್‌ಎಸ್‌ಎಸ್‌ಸಿ ಪರೀಕ್ಷೆಯಲ್ಲಿ ಪೂರ್ಣ ಪ್ರಮಾಣದ ಅಂಕ ಗಳಿಸಿದ್ದಾರೆ. ಇದೇ ರೀತಿ ಮುಂದಿನ ವ್ಯಾಸಂಗದಲ್ಲೂ ಹೆಚ್ಚು ಅಂಕ ಗಳಿಸಿ ಸಾಧನೆ ಮಾಡುವಂತೆ ಈ ವೇಳೆ ಚಲುವರಾಯಸ್ವಾಮಿ ಸಲಹೆ ನೀಡಿದರು.

ಬಿಎಸ್‌ವೈ ವಿರುದ್ಧ ಹಗೆತನದ ರಾಜಕಾರಣ

ಹಿರಿಯ ಬಿಜೆಪಿ ಮುಖಂಡ ಗುರುಪಾದಸ್ವಾಮಿ ಆರೋಪ

ಮೈಸೂರು, ಜೂ.15(ಜಿಎ)–ರಾಜ್ಯದ ಕಾಂಗ್ರೆಸ್ ಸರ್ಕಾರ ಬಿ.ಎಸ್.ಯಡಿಯೂರಪ್ಪ ವಿರುದ್ಧ ಹಗೆತನ ಮತ್ತು ಹೇಡಿತನದ ರಾಜಕಾರಣ ನಡೆಸುತ್ತಿದೆ ಎಂದು ಬಿಜೆಪಿ ಹಿರಿಯ ಮುಖಂಡ ಗುರುಪಾದ ಸ್ವಾಮಿ ಆರೋಪಿಸಿದರು.

ಲೋಕಸಭಾ ಚುನಾವಣೆ ಮುಗಿಯುತ್ತಿದ್ದಂತೆ ರಾಜ್ಯ ಸರ್ಕಾರ ಅಸಹ್ಯಕರ ರಾಜಕಾರಣ ಆರಂಭಿಸಿದ್ದು, ಪೋಕ್ಸೊ ಪ್ರಕರಣ ದಾಖಲಾಗಿರುವ ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ಅವರನ್ನು ಚುನಾವಣೆ ಸಂದರ್ಭದಲ್ಲಿ ಬಂಧಿಸಿದರೆ ಮತಗಳು ಬರುವುದಿಲ್ಲ ಎಂಬ ಮುಂದಾಲೋಚನೆಯಲ್ಲಿ ಸುಮ್ಮನಿದ್ದು, ಈಗ ಬಂಧಿಸಲು ಪೊಲೀಸ್ ಇಲಾಖೆಗೆ ಹೇಳಿ ವಾರೆಂಟ್ ಹೊರಡಿಸಿದೆ ಎಂದು ದೂರಿದರು.




ಗುರುಪಾದಸ್ವಾಮಿ

ಯಡಿಯೂರಪ್ಪ ಅವರ ಮೇಲೆ ಮಾರ್ಚ್ 4 ರಂದು ಪೋಕ್ಸೊ ಪ್ರಕರಣ ದಾಖಲಾಗಿತ್ತು. ಈ ಬಗ್ಗೆ ಅಂದೇ ಗೃಹ ಸಚಿವರಾದ ಜಿ.ಪರಮೇಶ್ವರ್ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿ ದೂರುದಾರ ಮಹಿಳೆ ಮಾನಸಿಕ ಅಸ್ವಸ್ಥೆ. ಆಕೆ ಹಿರಿಯ ಅಧಿಕಾರಿಗಳು ಸೇರಿದಂತೆ ಅಂದಾಜು 50 ಜನರ ಮೇಲೆ ಈಗಾಗಲೇ ಸುಳ್ಳು ಕೇಸುಗಳನ್ನು ದಾಖಲಿಸಿದ್ದಾಗಿ ಹೇಳಿದ್ದರು. ಆದರೆ ಈಗ ಅವರು ಆ ಬಗ್ಗೆ ಮಾತನಾಡುತ್ತಿಲ್ಲ ಏಕೆ ಎಂದು ಪ್ರಶ್ನಿಸಿದ್ದಾರೆ.

ಸಂತ್ರಸ್ತೆ ಪರವಾಗಿ ದೂರು ನೀಡಿದ್ದ ಮಹಿಳೆ ಈಗಾಗಲೇ ತೀರಿಕೊಂಡಿದ್ದಾರೆ. ಆದರೂ ಯಡಿಯೂರಪ್ಪ ಅವರನ್ನು ಮಣಿಸುವ ಸಲುವಾಗಿ ಸಂಬಂಧಗಳನ್ನು ಮುಂದಿಟ್ಟು ಬಂಧಿಸುವ ಯತ್ನ ನಡೆಸಲಾಗಿದೆ. ಈ ಪ್ರಕರಣದ ಬಗ್ಗೆ ದೂರು ದಾಖಲು ಆದಾಗಲೇ ತನಿಖೆ ನಡೆಸಬಹುದಿತ್ತು. ಅದನ್ನು ಬಿಟ್ಟು ವೈಯಕ್ತಿಕ ದ್ವೇಷಕ್ಕಾಗಿ ಯಡಿಯೂರಪ್ಪ ಅವರನ್ನು ಈಗ ಬಂಧಿಸಲು ಸರ್ಕಾರ ಮುಂದಾಗಿರುವುದು ಹೇಡಿತನ. ಇದೇ ರೀತಿ ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪನವರ ಮೇಲೆ ವೈಯಕ್ತಿಕ ದ್ವೇಷವನ್ನು ಸಾಧಿಸಲು ಹೊರಟರೆ ಸರ್ಕಾರ ಮತ್ತು ಪೊಲೀಸ್ ಇಲಾಖೆ ಮೇಲೆ ಪಕ್ಷದ ವತಿಯಿಂದ ಉಗ್ರ ಹೋರಾಟವನ್ನು ಮಾಡಬೇಕಾಗುತ್ತದೆ ಎಂದು ಪತ್ರಿಕೆ ಪ್ರಕಟಣೆಯಲ್ಲಿ ಎಚ್ಚರಿಸಿದ್ದಾರೆ.

ಜೂ.18, ವಿಶೇಷ 'ಸ್ವಾತಿ' ಪೂಜೆ



ಮೈಸೂರು, ಜೂ.15– ಮೈಸೂರಿನ ಕಾಳಿದಾಸ ರಸ್ತೆಯಲ್ಲಿರುವ ಶ್ರೀ ಯದುಗಿರಿ ಯತಿರಾಜ ಮಠ, ಮೈಸೂರು ಶಾಖೆಯ ಶ್ರೀ ಲಕ್ಷ್ಮೀನರಸಿಂಹ ಸ್ವಾಮಿ ದೇವಸ್ಥಾನದಲ್ಲಿ ಜೂ.18ರಂದು ಮಂಗಳವಾರ 'ಸ್ವಾತಿ' ನಕ್ಷತ್ರದ ಪ್ರಯುಕ್ತ ವಿಶೇಷ ಪೂಜೆ ಆಯೋಜಿಸಲಾಗಿದೆ. ಅಂದು ಬೆಳಿಗ್ಗೆ 8ಕ್ಕೆ ಸಂಕಲ್ಪ, 9ಕ್ಕೆ ಅಭಿಷೇಕ, 10.30ಕ್ಕೆ ಅಲಂಕಾರ, 11.30ಕ್ಕೆ ಮಹಾ ಮಂಗಳಾರತಿ, ಮಧ್ಯಾಹ್ನ 12.30ಕ್ಕೆ ಶಾತ್ತುಮೊರೈ, 1 ಗಂಟೆಗೆ ತೀರ್ಥ ಪ್ರಸಾದ ವಿನಿಯೋಗವನ್ನು ಏರ್ಪಡಿಸಲಾಗಿದೆ. ಸಂಜೆ 7.30ಕ್ಕೆ ಪ್ರಾಕಾರೋತ್ಸವ ಹಮ್ಮಿಕೊಳ್ಳಲಾಗಿದೆ ಎಂದು ದೇವಸ್ಥಾನದ ಮುಖ್ಯಸ್ಥ ವಿದ್ವಾನ್ ಕೆ.ಆರ್.ಯೋಗಾನರಸಿಂಹನ್ (ಮುರುಳಿ ಅಯ್ಯಂಗಾರ್) ತಿಳಿಸಿದ್ದಾರೆ. ಮಾಹಿತಿಗೆ ಮೊ: 9342188323, 7598832271 ಸಂಪರ್ಕಿಸಬಹುದು.

ಇಂದು ಸಿವಿಲ್ ಸರ್ವೀಸಸ್ ಪ್ರಿಲಿಮಿನರಿ ಪರೀಕ್ಷೆ: ನಿಷೇಧಾಜ್ಞೆ ಜಾರಿ

ಮೈಸೂರು, ಜೂ.15–ಜೂ.16 ರಂದು ನಡೆಯಲಿರುವ ಸಿವಿಲ್ ಸರ್ವಿಸಸ್ (ಪ್ರಿಲಿಮಿನರಿ) ಎಕ್ಸಾಮಿನೇಷನ್–2024 ಪರೀಕ್ಷೆಗಳ 13 ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ವ್ಯಾಪ್ತಿಯಲ್ಲಿ ಪರೀಕ್ಷಾ ದಿನಗಳಂದು ಬೆಳಗ್ಗೆ 6ರಿಂದ ಸಂಜೆ 6ರವರೆಗೆ ಕಲಂ 144 ರಡಿಯಲ್ಲಿ ನಿಷೇಧಾಜ್ಞೆ ಘೋಷಿಸಲಾಗಿದೆ.

ವಾಲ್ಮೀಕಿ ರಸ್ತೆಯ ಪಡುವಾರಹಳ್ಳಿಯ ಮಹಾರಾಣಿ ಮಹಿಳಾ ವಾಣಿಜ್ಯ ಮತ್ತು ಮ್ಯಾನೇಜ್‌ಮೆಂಟ್ ಕಾಲೇಜು, ಜೆಎಲ್‌ಬಿ ರಸ್ತೆಯ ಮಹಾರಾಣಿ ಸರ್ಕಾರಿ ಕಲಾ ಕಾಲೇಜು, ನಾರಾಯಣಶಾಸ್ತ್ರಿ ರಸ್ತೆಯ ಸದ್ವಿದ್ಯಾ ಪದವಿ ಪೂರ್ವ ಕಾಲೇಜು, ಜೆಎಲ್‌ಬಿ ರಸ್ತೆಯ ಮಹಾರಾಜ ಸರ್ಕಾರಿ ಪದವಿ ಪೂರ್ವ ಕಾಲೇಜು, ನ್ಯೂ ಸಯ್ಯಾಜಿರಾವ್ ರಸ್ತೆಯ ಡಿ.ಬನುಮಯ್ಯ ಸ್ವತಂತ್ರ ಪದವಿ ಪೂರ್ವ ಕಾಲೇಜು, ಕುವೆಂಪುನಗರದ ಸರ್ಕಾರಿ ಪದವಿ ಪೂರ್ವ ಕಾಲೇಜು, ಸರಸ್ವತಿಪುರಂನ ವಿಜಯ ವಿಠಲ ಪದವಿ ಪೂರ್ವ ಕಾಲೇಜು, ಕೃಷ್ಣಮೂರ್ತಿಪುರಂನ ಎಂಎಂಕೆ ಮತ್ತು ಎಸ್‌ಡಿಎಂ ಪದವಿ ಪೂರ್ವ ಕಾಲೇಜು, ಎಸ್‌ಬಿಆರ್‌ಆರ್ ಮಹಾಜನ ಪದವಿ ಪೂರ್ವ ಕಾಲೇಜು, ಶಂಕರ ಮಠ ರಸ್ತೆಯ ಶ್ರೀ ನಟರಾಜ ಬಾಲಕಿಯರ ಪಿಯು ಕಾಲೇಜು, ಪೀಪಲ್ಸ್ ಪಾರ್ಕ್‌ನ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜು (ಪ್ರೌಢ ಶಾಲಾ ವಿಭಾಗ) ಹಾಗೂ ಎನ್ ಎನ್ ರಸ್ತೆಯ ಮಹಾರಾಣಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಪರೀಕ್ಷಾರ್ಥಿಗಳು ಹಾಗೂ ಪರೀಕ್ಷಾ ಸಿಬ್ಬಂದಿಗಳನ್ನು ಹೊರತುಪಡಿಸಿ ಅನಧಿಕೃತ ವ್ಯಕ್ತಿಗಳು ಸಂಚರಿಸಬಾರದು ಮತ್ತು ಯಾರೂ ಆಕ್ಷೇಪಾರ್ಹ ವಸ್ತುಗಳನ್ನು ಒಯ್ಯಬಾರದು ಹಾಗೂ ಪರೀಕ್ಷಾ ಕೇಂದ್ರಗಳ ಸುತ್ತಮುತ್ತಲಿರುವ ಎಲ್ಲಾ ಜೆರಾಕ್ಸ್/ ಸೈಬರ್ ಕೇಂದ್ರಗಳನ್ನು ಪರೀಕ್ಷೆ ಪ್ರಾರಂಭವಾಗುವ ಅರ್ಧ ಗಂಟೆ ಮುಂಚಿತವಾಗಿ ಮತ್ತು ಪರೀಕ್ಷಾ ಅವಧಿ ಮುಗಿಯುವವರೆಗೆ ಮುಚ್ಚುವಂತೆ ಆದೇಶಿಸಲಾಗಿದೆ.

ಎಂಎಂ ಕೋಚಿಂಗ್ ಸೆಂಟರ್‌ನ ವಿದ್ಯಾರ್ಥಿಗಳ ಅಪ್ರತಿಮ ಸಾಧನೆ



ಎಸ್.ಜಾನ್ಹವಿ

ಮೈಸೂರು, ಜೂ.15– ಕಳೆದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಮೈಸೂರಿನ ಮಲೆ ಮಹದೇಶ್ವರ ಎಜುಕೇಷನಲ್ ಟ್ರಸ್ಟ್‌ನ ಎಂಎಂ ಕೋಚಿಂಗ್ ಸೆಂಟರ್‌ನ ವಿದ್ಯಾರ್ಥಿಗಳು ಅಪ್ರತಿಮ ಸಾಧನೆ ಮೆರೆದಿದ್ದಾರೆ.

ಇಲ್ಲಿ ಕೋಚಿಂಗ್ ಪಡೆದ ರಾಜ್ಯ ಪಠ್ಯಕ್ರಮದ ವಿದ್ಯಾರ್ಥಿಗಳಲ್ಲಿ 36 ಮಂದಿ 625ಕ್ಕೆ 600ಕ್ಕೂ ಅಧಿಕ ಅಂಕ ಗಳಿಸಿದ್ದಾರೆ ಅದರಲ್ಲೂ ಎಸ್.ಜಾನ್ಹವಿ 625ಕ್ಕೆ 623 ಅಂಕ ಗಳಿಸಿ ರಾಜ್ಯಕ್ಕೆ ಮೂರನೇ ಟಾಪರ್ ಆಗಿ ಹೊರಹೊಮ್ಮಿದ್ದಾರೆ. ಈಕೆ ಸಂಸ್ಕೃತದಲ್ಲಿ 125, ಇಂಗ್ಲಿಷ್ 100, ಕನ್ನಡ 100, ಗಣಿತ 98, ವಿಜ್ಞಾನ 100 ಹಾಗೂ ಸಾಮಾಜಿಕ ವಿಜ್ಞಾನದಲ್ಲಿ 100 ಅಂಕ ಗಳಿಸಿದ್ದಾಳೆ.

ಇನ್ನು ಕ್ಲಾಸ್ X (ಸಿಬಿಎಸ್‌ಇ) ವಿಭಾಗದಲ್ಲಿ ಕೋಚಿಂಗ್ ಪಡೆದ ವಿದ್ಯಾರ್ಥಿಗಳಲ್ಲಿ 26 ಮಂದಿ ಶೇ.90ಕ್ಕೂ ಅಧಿಕ ಅಂಕ ಗಳಿಸಿ ಅತ್ಯುನ್ನತ ಶ್ರೇಣಿಯಲ್ಲಿ ತೇರ್ಗಡೆ ಹೊಂದಿದ್ದಾರೆ. ಇವರಲ್ಲಿ ಹೆಚ್. ಮನೀಷ್ ಶೇ.96.4ರಷ್ಟು ಅಂಕ ಗಳಿಸಿ ಸಾಧನೆ ಮೆರೆದಿದ್ದಾನೆ. ಇದರ ಜೊತೆಗೆ ಸಿಇಟಿಯಲ್ಲೂ ಸಿಂಚನಾ ಎಸ್., 9245 ರ್‍ಯಾಂಕ್ ಗಳಿಸಿದ್ದಾರೆ. ಇವರು ದ್ವಿತೀಯ ಪಿಯುಸಿಯಲ್ಲಿ 600ಕ್ಕೆ 594 ಅಂಕ ಗಳಿಸಿದ್ದು, ರಸಾಯನಾಶಾಸ್ತ್ರದಲ್ಲಿ 98, ಗಣಿತದಲ್ಲಿ 100 ಅಂಕ ಪಡೆದಿದ್ದಾರೆ. ಹಾಗೆಯೇ ರಶ್ಮಿಕಾ ಶೇಖರ್ ಸಿಇಟಿಯಲ್ಲಿ 2489ನೇ ರ್‍ಯಾಂಕ್ ಗಳಿಸಿದ್ದಾರೆ. ಇವರು ದ್ವಿತೀಯ ಪಿಯುಸಿಯಲ್ಲಿ 600ಕ್ಕೆ 591 ಅಂಕ ಗಳಿಸಿದ್ದಾರೆ. ಭೌತಶಾಸ್ತ್ರ 100, ರಸಾಯನಾಶಾಸ್ತ್ರ 100, ಗಣಿತಶಾಸ್ತ್ರ 100, ಜೀವಶಾಸ್ತ್ರ 100 ಅಂಕ ಪಡೆದಿದ್ದಾರೆ.

ಜೂ.19ರವರೆಗೆ ಮೈಸೂರು, ಮಂಡ್ಯ, ಕೊಡಗು, ಚಾಮರಾಜನಗರ ಜಿಲ್ಲೆಗಳಲ್ಲಿ ತುಂತುರು ಮಳೆ

ಮೈಸೂರು,ಜೂ.15(ಪಿಎಂ)– ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆಯಂತೆ ಜೂ.15ರಿಂದ 19ರವರೆಗೆ ಮೈಸೂರು, ಮಂಡ್ಯ, ಕೊಡಗು ಹಾಗೂ ಚಾ.ನಗರ ಜಿಲ್ಲೆಗಳಲ್ಲಿ ತುಂತುರು ಮಳೆಯಾಗುವ ಸಂಭವವಿದೆ ಎಂದು ನಾಗನಹಳ್ಳಿಯ ಕೃಷಿ ಹವಾಮಾನ ಕ್ಷೇತ್ರ ವಿಭಾಗವು ಪ್ರಕಟಣೆಯಲ್ಲಿ ತಿಳಿಸಿದೆ.

ಅದರಂತೆ ಮೈಸೂರು ಜಿಲ್ಲೆಯಲ್ಲಿ ಮೋಡ ಕವಿದ ವಾತಾವರಣವಿದ್ದು, ತುಂತುರು ಮಳೆಯಾಗುವ ಸಂಭವವಿದೆ. ಗರಿಷ್ಠ ಉಷ್ಣಾಂಶ 28ರಿಂದ 30 ಡಿಗ್ರಿ ಸೆಲ್ಸಿಯಸ್ ಮತ್ತು ಕನಿಷ್ಠ ಉಷ್ಣಾಂಶ 16.8ರಿಂದ 17.1 ಡಿಗ್ರಿ ಸೆಲ್ಸಿಯಸ್‌ವರೆಗೆ ದಾಖಲಾಗುವ ಸಾಧ್ಯತೆಯಿದೆ. ಬೆಳಗಿನ ಗಾಳಿಯ ತೇವಾಂಶ ಶೇ.85ರಿಂದ 89ವರೆಗೆ ಮತ್ತು ಮಧ್ಯಾಹ್ನದ ತೇವಾಂಶ ಶೇ.44ರಿಂದ 73ರವರೆಗೆ ದಾಖಲಾಗುವ ಸಾಧ್ಯತೆ ಇದೆ. ಗಾಳಿಯು ಗಂಟೆಗೆ 16ರಿಂದ 18 ಕಿಮೀ ವೇಗದಲ್ಲಿ ಬೀಸುವ ಸಂಭವವಿದೆ.

ಮಂಡ್ಯ ಜಿಲ್ಲೆಯಲ್ಲಿ ಭಾಗಶಃ ಮೋಡ ಕವಿದ ವಾತಾವರಣವಿದ್ದು, ತುಂತುರು ಮಳೆ ಬರುವ ಸಂಭವವಿದೆ. ಗರಿಷ್ಠ ಉಷ್ಣಾಂಶ 28ರಿಂದ 30 ಡಿಗ್ರಿ ಸೆಲ್ಸಿಯಸ್ ಮತ್ತು ಕನಿಷ್ಠ ಉಷ್ಣಾಂಶ 18.5ರಿಂದ 19.4 ಡಿಗ್ರಿ ಸೆಲ್ಸಿಯಸ್‌ವರೆಗೆ ದಾಖಲಾಗುವ ಸಾಧ್ಯತೆಯಿದೆ. ಬೆಳಗಿನ ಗಾಳಿಯ ತೇವಾಂಶ ಶೇ.80ರಿಂದ 86ರವರೆಗೆ ಮತ್ತು ಮಧ್ಯಾಹ್ನದ ತೇವಾಂಶ ಶೇ.41ರಿಂದ 65ರವರೆಗೆ ದಾಖಲಾಗುವ ಸಾಧ್ಯತೆ ಇದೆ. ಗಾಳಿಯು ಗಂಟೆಗೆ 18ರಿಂದ 21 ಕಿಮೀ ವೇಗದಲ್ಲಿ ಬೀಸುವ ಸಾಧ್ಯತೆ ಇದೆ.

ಕೊಡಗು ಜಿಲ್ಲೆಯಲ್ಲಿ ಮೋಡ ಕವಿದ ವಾತಾವರಣವಿದ್ದು, ತುಂತುರಿನಿಂದ ಸಾಧಾರಣ ಮಳೆಯಾಗುವ ಸಂಭವವಿದೆ. ಗರಿಷ್ಠ ಉಷ್ಣಾಂಶ 26ರಿಂದ 28 ಡಿಗ್ರಿ ಸೆಲ್ಸಿಯಸ್ ಮತ್ತು ಕನಿಷ್ಠ ಉಷ್ಣಾಂಶ 17.4ರಿಂದ 18.6 ಡಿಗ್ರಿ ಸೆಲ್ಸಿಯಸ್‌ವರೆಗೆ ದಾಖಲಾಗುವ ಸಾಧ್ಯತೆಯಿದೆ. ಬೆಳಗಿನ ಗಾಳಿಯ ತೇವಾಂಶ ಶೇ.92ರಿಂದ 95ರವರೆಗೆ ಮತ್ತು ಮಧ್ಯಾಹ್ನದ ತೇವಾಂಶ ಶೇ.53ರಿಂದ 86ರವರೆಗೆ ದಾಖಲಾಗುವ ಸಾಧ್ಯತೆ ಇದೆ. ಗಾಳಿಯು ಗಂಟೆಗೆ 8ರಿಂದ9 ಕಿಮೀ ವೇಗದಲ್ಲಿಬೀಸುವ ಸಂಭವವಿದೆ.

ಚಾ.ನಗರ ಜಿಲ್ಲೆಯಲ್ಲಿ ಮೋಡ ಕವಿದ ವಾತಾವರಣವಿದ್ದು, ತುಂತುರು ಮಳೆಯಾಗುವ ಸಂಭವವಿದೆ. ಗರಿಷ್ಠ ಉಷ್ಣಾಂಶ 29ರಿಂದ 31 ಡಿಗ್ರಿ ಸೆಲ್ಸಿಯಸ್ ಮತ್ತು ಕನಿಷ್ಠ ಉಷ್ಣಾಂಶ 16.8ರಿಂದ 18 ಡಿಗ್ರಿ ಸೆಲ್ಸಿಯಸ್‌ವರೆಗೆ ದಾಖಲಾಗುವ ಸಾಧ್ಯತೆಯಿದೆ. ಬೆಳಗಿನ ಗಾಳಿಯ ತೇವಾಂಶ ಶೇ.79ರಿಂದ 83ರವರೆಗೆ ಮತ್ತು ಮಧ್ಯಾಹ್ನದ ತೇವಾಂಶ ಶೇ.41ರಿಂದ 67ರವರೆಗೆ ದಾಖಲಾಗುವ ಸಂಭವವಿದೆ. ಗಾಳಿಯು ಗಂಟೆಗೆ 13ರಿಂದ 16 ಕಿಮೀ ವೇಗದಲ್ಲಿ ಬೀಸುವ ಸಾಧ್ಯತೆ ಇದೆ.

ಇಂದು ರಕ್ತದಾನ ಜಾಗೃತಿ ಕಾರ್ಯಕ್ರಮ



ಮೈಸೂರು, ಜೂ.15– ಜನಸೇವಕ ಯುವ ಬ್ರಿಗೇಡ್ ವತಿಯಿಂದ ವಿಶ್ವ ರಕ್ತದಾನಿಗಳ ದಿನಾಚರಣೆ ಅಂಗವಾಗಿ ರಕ್ತದಾನದ ಮಹತ್ವದ ಜಾಗೃತಿ ಕಾರ್ಯಕ್ರಮವನ್ನು ಬೋಗಾದಿಯ ರೂಪನಗರದ ಕಾರುಣ್ಯ ಮನೆ ಆವರಣದಲ್ಲಿ ನಾಳೆ (ಜೂ.16) ಮಧ್ಯಾಹ್ನ 4 ಗಂಟೆಗೆ ಆಯೋ ಜಿಸಲಾಗಿದೆ ಎಂದು ಜನ ಸೇವಕ ಯುವ ಬ್ರಿಗೇಡ್ ಅಧ್ಯಕ್ಷ ರಾಘವೇಂದ್ರ ತಿಳಿಸಿದ್ದಾರೆ.

ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಪ್ರಸೂತಿ ಮತ್ತು ಸ್ತ್ರೀ ರೋಗ ತಜ್ಞರಾದ ಡಾ.ಬಿಂದು ಬಾಲಸುಬ್ರಮಣ್ಯಂ, ಆಪರೇಷನ್ ಶಾಂತಿ ಎನ್‌ಜಿಓ ಸಂಸ್ಥೆಯ ನಿರ್ದೇಶಕಿ ಎಂ.ಎಸ್.ಸುಲೋಚನ, ಜೀವಧಾರ ರಕ್ತನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಅರ್ಥಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ.ಆರ್ ಎಚ್.ಪವಿತ್ರ, ಉದ್ಯಮಿ ಮೋನಿಕಾ, ಪ್ರಣವ್ಯ ಎಜುಕೇಶನ್ ಟ್ರಸ್ಟ್ ಅಧ್ಯಕ್ಷೆ ಸವಿತಾ ಪುಟ್ಟೇಗೌಡ ಇನ್ನಿತರರು ಭಾಗವಹಿಸಲಿದ್ದಾರೆ


ಆಧುನಿಕ ವಚನ ರಚನಾ ಸ್ಪರ್ಧೆ

ಮೈಸೂರು, ಜೂ. 15–ಶರಣ ಸಾಹಿತ್ಯ ಪರಿಷತ್ತು, ಮೈಸೂರು ನಗರ ಘಟಕವು ಆಧುನಿಕ ವಚನ ರಚನಾ ಸ್ಪರ್ಧೆಯನ್ನು ಏರ್ಪಡಿಸಿದೆ. ಆಧುನಿಕ ವಚನ ಸ್ಪರ್ಧೆಯು ಯುವ ಬರಹಗಾರರನ್ನು ಪ್ರೋತ್ಸಾಹಿಸುವ, ವಚನ ಸಾಹಿತ್ಯ ಮತ್ತು ವಚನಕಾರರ ಅರಿವು ಮತ್ತು ಅಧ್ಯಯನವನ್ನು ವಿಸ್ತರಿಸಿಕೊಳ್ಳುವ ದೆಸೆಯಲ್ಲಿ ಹಾಗೂ ಸೃಜನಶೀಲತೆಗೆ ಅನುವು ಮಾಡಿಕೊಡುವುದು ಮೂಲ ಆಶಯ. ಸ್ಪರ್ಧಿಗಳು 8ರಿಂದ 18 ವರ್ಷ, 19ರಿಂದ 30 ವರ್ಷ, 31ರಿಂದ 60 ವರ್ಷದವರು ಭಾಗವಹಿಸಬಹುದು. ವಚನ 4 ಸಾಲಿನಿಂದ 8 ಸಾಲು ಇದ್ದು, ಈ ಮೊದಲು ಎಲ್ಲಿಯೂ ಪ್ರಕಟವಾಗಿರಬಾರದು. ಒಂದೇ ಮಗ್ಗುಲಿನಲ್ಲಿ 2 ಅಥವಾ 3 ವಚನ ಕಳುಹಿಸುವುದು. ಆಯ್ಕೆಯಾದವರಿಗೆ ಗೋಷ್ಠಿಯಲ್ಲಿ ವಾಚಿಸಲು ಅವಕಾಶವಿದೆ. ಗ್ರಂಥ ರೂಪದಲ್ಲೂ ಪ್ರಕಟಿಸುವ ಉದ್ದೇಶವಿದೆ. ತಾವು ಸ್ಪರ್ಧೆಗೆ ರಚಿಸಿದ ವಚನಗಳನ್ನು ಜು.20ರೊಳಗೆ ಮ.ಗು.ಸದಾನಂದಯ್ಯ, ಅಧ್ಯಕ್ಷರು, ಶರಣ ಸಾಹಿತ್ಯ ಪರಿಷತ್ತು, ನಗರ ಘಟಕ, ಕುವೆಂಪುನಗರ ಇಲ್ಲಿಗೆ ಕಳುಹಿಸಲು ಕೋರಲಾಗಿದೆ. ಮಾಹಿತಿಗೆ ಮೊ. 9535500538 ಸಂಪರ್ಕಿಸಬಹುದು.

ನಾಳೆಯಿಂದ ಉಚಿತ ತಪಾಸಣಾ ಶಿಬಿರ

ಮೈಸೂರು,ಜೂ.15–ಮೈಸೂರಿನ ನಿರ್ಮಲ ಫೌಂಡೇಷನ್ ವತಿಯಿಂದ ಆಲನಹಳ್ಳಿಯಲ್ಲಿರುವ ನಿರ್ಮಲ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ಗರ್ಭಿಣಿಯರಿಗೆ ಉಚಿತ ತಪಾಸಣಾ ಶಿಬಿರವನ್ನು ಜೂ.17ರಿಂದ 22ರವರೆಗೆ ಆಯೋಜಿಸಲಾಗಿದೆ. ಬೆಳಗ್ಗೆ 10ರಿಂದ ಮಧ್ಯಾಹ್ನ 2ರವರೆಗೆ ಶಿಬಿರದಲ್ಲಿ ಪಾಲ್ಗೊಂಡು ಇದರ ಪ್ರಯೋಜನ ಪಡೆದುಕೊಳ್ಳಬಹುದು.

ನಿಧನ




ಅಸ್ಮತ್ ಪಾಷ

ಮೈಸೂರು, ಜೂ. 15–ಮೈಸೂರಿನ ಮಂಡಿ ಮೊಹಲ್ಲಾದಲ್ಲಿರುವ ಇಸ್ಲಾಮಿಕ್ ಬುಕ್ ಸೆಂಟರ್ & ಜೆ.ಎ.ಪಿ. ಆಟೋಪಾರ್ಟ್ಸ್ ಮಾಜಿ ಮಾಲೀಕರು ಹಾಗೂ ರಾಜೀವ್‌ನಗರದ ಈಡನ್ ಗಾರ್ಡನ್ ಕ್ರಿಶ್ಚಿಯನ್ ಕಾಲೋನಿ ನಿವಾಸಿ ಅಸ್ಮತ್ ಪಾಷ (84) ಶನಿವಾರ ಬೆಳಗ್ಗೆ 6.30ರಲ್ಲಿ ನಗರದ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದರು.

ಮೃತರು ಪತ್ನಿ, ಐವರು ಪುತ್ರಿಯರು, ಓರ್ವ ಪುತ್ರ, ಮೊಮ್ಮಕ್ಕಳು ಹಾಗೂ ಅಪಾರ ಬಂಧುಮಿತ್ರರನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಟಿಪ್ಪು ಸರ್ಕಲ್‌ನಲ್ಲಿರುವ ಮುಸ್ಲಿಮರ ರುದ್ರಭೂಮಿಯಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ–ಡಾ. ಶುಭಶ್ರೀ ಪ್ರಸಾದ್, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ಒಡಹುಟ್ಟಿನ ನುಡಿಗಳು– ಕನ್ನಡದ ಒಡನಾಡಿ ಭಾಷೆಗಳನ್ನು ಕುರಿತ ಬಾನುಲಿ ಸರಣಿ, ಲೇಖನ ಹಾಗೂ ಪ್ರಸ್ತುತಿ– ಡಾ. ತೀತೀರ ರೇಖಾ ವಸಂತ, 6.40 ಪದ ಸಂಸ್ಕೃತಿ, ಪ್ರಸ್ತುತಿ–ಡಾ. ಶ್ರೀಧರ್ ಹೆಗಡೆ ಭದ್ರನ್, 6.50 ರೈತರಿಗೆ ಸಲಹೆ, 7.15 ಯೋಗೋತ್ಸವ: ಅಂತರರಾಷ್ಟ್ರೀಯ ಯೋಗ ದಿನದ ಅಂಗವಾಗಿ ಪ್ರಾಯೋಜಿತ ಕಾರ್ಯಕ್ರಮ. ಪ್ರಾಯೋಜಕರು: ಆಯುಷ್ ಇಲಾಖೆ, ಕರ್ನಾಟಕ ಸರ್ಕಾರ, 8.30 ಕನ್ನಡ ಚಿತ್ರಗೀತೆಗಳು, 9.40 ನಮ್ಮ ಆರೋಗ್ಯ ಕಾರ್ಯಕ್ರಮ: ಅಂತರರಾಷ್ಟ್ರೀಯ ಯೋಗ ದಿನಾಚರಣೆಯ ಸಂಬಂಧವಾಗಿ ವಿಶೇಷ ಕಾರ್ಯಕ್ರಮ. 'ಆರೋಗ್ಯ ರಕ್ಷಣೆ ಮತ್ತು ಹಠಯೋಗ' ಕುರಿತು ಆಯುರ್ವೇದ ವೈದ್ಯರು ಹಾಗೂ ಆರೋಗ್ಯ ಭಾರತೀಯ ರಾಷ್ಟ್ರೀಯ ಕಾರ್ಯದರ್ಶಿ ಡಾ. ಟಿ. ಎನ್. ಮಂಜುನಾಥ್ ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ: ಬೇದ್ರೆ ಮಂಜುನಾಥ್, 10.00ಕೇಳಿ ಗಿಳಿಗಳೇ: ಕಥೆ ಹೇಳ್ತೀಯೋ ಹಾಡು ಹೇಳ್ತೀಯೋ, 10.30 ಮಕ್ಕಳ ಮಂಟಪ : 'ಹಕ್ಕಿ ಗೂಡು' ಕಾರ್ಯಕ್ರಮ. ಪ್ರಸ್ತುತಿ: ಎಂ. ಎಸ್. ಭಾರತಿ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ

ಮಧ್ಯಾಹ್ನ: 12.30 ದೇವರನಾಮ, 12.45 ಜನಪದ ಸಂಗೀತ: ಬನ್ನೂರು ಮಾದಿಗಳ್ಳಿಯ ಗೌರಮ್ಮ ಮತ್ತು ಸಂಗಡಿಗರಿಂದ ಧಾರೆ ಹಾಡು, 1.20 ಭಾವಗೀತೆಗಳು–ಕೆ.ಆರ್. ಹರ್ಷ ದೀಪ್, 2.40 ಕನ್ನಡ ಚಲನಚಿತ್ರ ಧ್ವನಿ ವಾಹಿನಿ 'ನಮ್ಮೂರ ಹಮ್ಮೀರ', 3.40 ಸಿರಿ ಗನ್ನಡಂ ಗೆಲ್ಗೆ, ಪ್ರಸ್ತುತಿ : ಜಿ.ಕೆ. ರವೀಂದ್ರ ಕುಮಾರ್, 3.45 ಯಕ್ಷಗಾನ : ತಾಳ ಮದ್ದಲೆ, ಪ್ರಸಂಗ – ಮಾರುತಿ ಪ್ರತಾಪ, ಪ್ರಸ್ತುತಿ– ಕರಾವಳಿ ಯಕ್ಷಗಾನ ಮಿತ್ರ ಮಂಡಳಿ, ಶಕ್ತಿನಗರ, ಮಂಗಳೂರು, 4.45 ಚಟ್ ಪಟ್ ಚುರುಮುರಿ, ಪ್ರಸ್ತುತಿ– ಪ್ರಭುಸ್ವಾಮಿ ಮಳೀಮಠ್ ಹಾಗೂ ಕೆ.ಬಿ.ಮೀನಾ, 5.30 Pashudhan Se Behthar Jeevan, ಪ್ರಾಯೋಜಕರು: ಪಶು ಸಂಗೋಪನೆ, ಹೈನುಗಾರಿಕೆ ಮತ್ತು ಮೀನುಗಾರಿಕೆ ಸಚಿವಾಲಯ, 6.50 ಕೃಷಿರಂಗ : ತೋರಣ ಹೂರಣ–ಸಾಪ್ತಾಹಿಕ ಸರಣಿ ಕಾರ್ಯಕ್ರಮ, ಪ್ರಸ್ತುತಿ– ಎನ್. ಕೇಶವಮೂರ್ತಿ, ಆರ್. ಲೋಕೇಶ್ವರಿ, ಡಾ. ಮೈಸೂರು ಉಮೇಶ್, ಕೃಷಿ ಲೋಕ, ಕೃಷಿ ದರ್ಪಣ–ವಾರದ ಕೃಷಿರಂಗ, ಕಿಸಾನ್‌ವಾಣಿ ಕಾರ್ಯಕ್ರಮಗಳ ಮುನ್ನೋಟ, ಪ್ರಸ್ತುತಿ– ಆರ್. ಲೋಕೇಶ್ವರಿ, 8.00 'ಹಾದಿಯಲ್ಲಿ ಕಂಡ ಮುಖ' –ಬಾನುಲಿ ಸರಣಿ. ಚಾಮರಾಜನಗರ ಜಿಲ್ಲೆ ರಾಮಸಮುದ್ರದ ಗೊರವರ ಕುಣಿತ ಕಲಾವಿದರಾದ ಆರ್. ಎಂ. ಶಿವಮಲ್ಲೇಗೌಡ, ಶಿವಣ್ಣೇಗೌಡ ಹಾಗೂ ಕರಿಯಗೌಡ ಅವರೊಂದಿಗೆ ಸಂವಾದ. ಪ್ರಸ್ತುತಿ: ಅಬ್ದುಲ್ ರಶೀದ್, 9.15 ರಂಗಗೀತೆಗಳು, 9.30 ರಾಷ್ಟ್ರೀಯ ನಾಟಕ, 10.00 ರವಿವಾಸರೀಯ ಅಖಿಲ ಭಾರತೀಯ ಸಂಗೀತ ಸಭಾ, ವಿದುಷಿ ಕಮಲಾ ಶಂಕರ್–ಗಿಟಾರ್ ವಾದನ

ಇಂದಿನ ಪಂಚಾಂಗ

16.06.2024 ಭಾನುವಾರ, ಮಳೆ ನಕ್ಷತ್ರ: ಮೃಗಶಿರ, 08.06.2024 ರಿಂದ 21.06.2024
ಕ್ರೋಧಿನಾಮ ಸಂವತ್ಸರ, ಉತ್ತರಾಯಣ, ಗ್ರೀಷ್ಮ ಋತು, ಜ್ಯೇಷ್ಠ ಮಾಸ, ಶುಕ್ಲ ಪಕ್ಷ,
ತಿಥಿ: ದಶಮಿ, ನಕ್ಷತ್ರ: ಹಸ್ತ, ರಾಹುಕಾಲ: ಸಂಜೆ 4.30 ರಿಂದ 6ರವರೆಗೆ

- **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಸೋರಿಯಾಸಿಸ್ ತಪಾಸಣಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿಪುರ ರಸ್ತೆ, ಬೆಳಗ್ಗೆ 9 ಗಂಟೆಯಿಂದ.
- **ಭಾವನೆಗಳ ಅನಾವರಣಕ್ಕೊಂದು ವೇದಿಕೆ :** ಮೈಸೂರು ಸಾಹಿತ್ಯ ದಾಸೋಹ, ಶ್ರೀಮತಿ ಪದ್ಮಾ ಆನಂದ್ ವಿರಚಿತ 'ತಂಗಾಳಿಯಲ್ಲಿ ವಾಕಿಂಗ್, ಬದುಕು ಬಿಂಬ' ಕೃತಿಗಳ ಲೋಕಾರ್ಪಣೆ ಸಮಾರಂಭ, ಉದ್ಘಾಟನೆ : ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷ ಮಾನಸ, ಅಧ್ಯಕ್ಷತೆ : ಹಿರಿಯ ವಿಜ್ಞಾನ ಲೇಖಕ ಎಸ್. ರಾಮಪ್ರಸಾದ್, ಕೃತಿಗಳ ಲೋಕಾರ್ಪಣೆ : ಹಿರಿಯ ವಿದ್ವಾಂಸ ಡಾ. ಕಬ್ಬಿನಾಲೆ ವಸಂತ ಭಾರದ್ವಾಜ, ಕೃತಿ ಕುರಿತು ಮಾತನಾಡುವವರು : ಡಾ. ಮೈಸೂರು ಕೃಷ್ಣಮೂರ್ತಿ, ಶಿಕ್ಷಣ ಇಲಾಖೆ ಸಹಾಯಕ ಸಮಗ್ರ ಯೋಜನಾಧಿಕಾರಿ ಜಿ. ವೆಂಕಟಾಚಲ, ಮುಖ್ಯ ಅತಿಥಿಗಳು : ಲೇಖಕ ಮೋಹನ್ ವರ್ಣೇಕರ್, ಲೇಖಕಿ ಶ್ರೀಮತಿ ಕೆರೋಡಿ ಎಂ. ಲೋಲಾಕ್ಷಿ, ಉಪಸ್ಥಿತರು : ಮೈಸೂರು ಸಾಹಿತ್ಯ ದಾಸೋಹ ಸಂಸ್ಥಾಪಕರಾದ ಶ್ರೀಮತಿ ಪದ್ಮಾ ಆನಂದ್, ಸ್ಥಳ: ಇನ್‌ಸ್ಟಿಟ್ಯೂಷನ್ ಆಫ್ ಇಂಜಿನಿಯರ್ಸ್ ಸಭಾಂಗಣ, ಜೆಎಲ್‌ಬಿ ರಸ್ತೆ, ಬೆಳಗ್ಗೆ 10.30ಕ್ಕೆ.
- **ಸಖಿ ಫೌಂಡೇಷನ್, ಸೂರ್ಯ ಚಾರಿಟಬಲ್ ಟ್ರಸ್ಟ್ :** ಎಸ್‌ಎಸ್‌ಎಲ್‌ಸಿ, ಪಿಯುಸಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ, ವಿಶ್ವ ಪರಿಸರ ದಿನಾಚರಣೆ, ಫಲಾನುಭವಿಗಳಿಗೆ ಪ್ರಮಾಣ ಪತ್ರ ವಿತರಣಾ ಸಮಾರಂಭ, ಉದ್ಘಾಟನೆ : ಕೇಂದ್ರ ಸರ್ಕಾರದ ನಿವೃತ್ತ ಹೆಚ್ಚುವರಿ ಕಾರ್ಯದರ್ಶಿ ಸಿ.ವಿ. ಗೋಪಿನಾಥ್, ಮುಖ್ಯ ಅತಿಥಿಗಳು : ಶಾಸಕ ಜಿ.ಡಿ. ಹರೀಶ್‌ಗೌಡ, ಮಾಜಿ ಶಾಸಕ ಎಸ್. ಬಾಲರಾಜು, ಭಾರತೀಯ ಜೈನ್ ಸಂಘಟನೆಯ ಜಿಲ್ಲಾ ಕಾರ್ಯಕ್ರಮ ಅಧಿಕಾರಿ ಸ್ವರಾಜ್ ಜೈನ್, ಸ್ಥಳ: ರಮಾಗೋವಿಂದ ರಂಗ ಮಂದಿರ, ರಾಮಕೃಷ್ಣನಗರ ಇ ಅಂಡ್ ಎಫ್ ಬ್ಲಾಕ್, ಬೆಳಗ್ಗೆ 10.30ಕ್ಕೆ.
- **ದೇಸಿರಂಗ ಸಾಂಸ್ಕೃತಿಕ ಟ್ರಸ್ಟ್ :** ಬೆಳಗ್ಗೆ 10.30ಕ್ಕೆ ವಿಚಾರವಾದಿ, ಪ್ರಗತಿಪರ ಚಿಂತಕ ಪ್ರೊ. ಕೆ. ರಾಮದಾಸ್ ನೆನಪಿನಲಿ... ಸಂವಾದ, ಪುಸ್ತಕ ಬಿಡುಗಡೆ, ಲೇಖನ ಪ್ರಶಸ್ತಿ ಪ್ರದಾನ ಸಮಾರಂಭ, ಉದ್ಘಾಟನೆ : ಹಿರಿಯ ಪತ್ರಕರ್ತ ಕೃಷ್ಣಪ್ರಸಾದ್, ಅಧ್ಯಕ್ಷತೆ : ವಿಶ್ರಾಂತ ಕುಲಪತಿ ಪ್ರೊ. ಮುಜಾಫರ್ ಅಸ್ಸಾದಿ, ಪುಸ್ತಕ ಬಿಡುಗಡೆ : ಚಿಂತಕರಾದ ಸವಿತಾ ನಾಗಭೂಷಣ್, ಪ್ರಶಸ್ತಿ ಪ್ರದಾನ : ಹಿರಿಯ ಪತ್ರಕರ್ತ ರವೀಂದ್ರ ಭಟ್, ಮುಖ್ಯ ಅತಿಥಿಗಳು : ಪ್ರಕಾಶಕ ಸಂಸ್ಕೃತಿ ಸುಬ್ರಹ್ಮಣ್ಯ; ಸಂಜೆ 4ಕ್ಕೆ ಸಮಾರೋಪ ಸಮಾರಂಭ, ಸಮಾರೋಪ ನುಡಿ : ವನ್ಯಜೀವಿ ತಜ್ಞ ಕೃಪಾಕರ ಸೇನಾನಿ, ಅಧ್ಯಕ್ಷತೆ : ಮಾಜಿ ಶಾಸಕ ಎಂ.ಕೆ. ಸೋಮಶೇಖರ್, ಮುಖ್ಯ ಅತಿಥಿಗಳು : ವಿಚಾರವಾದಿ ಡಾ. ಎಚ್.ಆರ್. ಸ್ವಾಮಿ, ಉಪಸ್ಥಿತರು : ದೇಸಿರಂಗ ಸಾಂಸ್ಕೃತಿಕ ಟ್ರಸ್ಟ್ ಅಧ್ಯಕ್ಷ ಕೃಷ್ಣ ಜನಮನ, ಸ್ಥಳ: ಶ್ರೀರಂಗ ವೇದಿಕೆ, ರಂಗಾಯಣ.
- **ಸಹಜ ಸಮೃದ್ಧ ಸಾವಯುವ ಕೃಷಿಕರ ಬಳಗ, ರೋಟರಿ ಕ್ಲಬ್ ಆಫ್ ಮೈಸೂರು ವೆಸ್ಟ್, ರಿಬಿಲ್ಡ್ ಇಂಡಿಯಾ ಫಂಡ್ :** ಹಲಸಿನ ಹಬ್ಬ, ಸ್ಥಳ: ನಂಜರಾಜ ಬಹದ್ದೂರ್ ಛತ್ರ, ಬೆಳಗ್ಗೆ 11 ರಿಂದ
- **ಯೋಗ ಸತ್ಸಂಗ ಸೊಸೈಟಿ ಆಫ್ ಇಂಡಿಯಾ :** ಯೋಗ–ಧ್ಯಾನದ ಮೂಲಕ ಸಮತೋಲನ ಹಾಗೂ ಪ್ರಶಾಂತತೆಯನ್ನು ಕಂಡುಕೊಳ್ಳುವುದು ಕುರಿತು ಉಪನ್ಯಾಸ, ಸ್ಥಳ: ಯೋಗದ ಸತ್ಸಂಗ ಧ್ಯಾನ ಕೇಂದ್ರ, ಸರಸ್ವತಿಪುರಂ, ಮಧ್ಯಾಹ್ನ 12ಕ್ಕೆ
- **ಜನಸೇವಕ ಯುವ ಬ್ರಿಗೇಡ್, ರೂಪನಗರ :** ವಿಶ್ವ ರಕ್ತದಾನಿಗಳ ದಿನಾಚರಣೆ ಅಂಗವಾಗಿ ರಕ್ತದಾನದ ಮಹತ್ವ ಕುರಿತು ಜಾಗೃತಿ ಕಾರ್ಯಕ್ರಮ, ಮುಖ್ಯ ಅತಿಥಿಗಳು : ಪ್ರಸೂತಿ ತಜ್ಞೆ ಡಾ. ಬಿಂದು ಬಾಲಸುಬ್ರಮಣ್ಯಂ, ಎನ್‌ಜಿಓ ಸಂಸ್ಥೆ ನಿರ್ದೇಶಕ ಎಂ.ಎಸ್. ಸುಲೋಚನಾ, ಜೀವಧಾರ ರಕ್ತನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ಕರಾಮುವಿವಿ ಅರ್ಥಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ. ಆರ್.ಎಚ್. ಪವಿತ್ರ, ಉದ್ಯಮಿ ಮೋನಿಕಾ, ಪ್ರಣವ್ಯ ಎಜುಕೇಷನ್ ಟ್ರಸ್ಟ್ ಅಧ್ಯಕ್ಷೆ ಸವಿತಾ ಪುಟ್ಟೇಗೌಡ, ಸ್ಥಳ: ಕಾರುಣ್ಯ ಮನೆ ಆವರಣ, ರೂಪಾನಗರ, ಬೋಗಾದಿ, ಸಂಜೆ 4ಕ್ಕೆ.
- **ಸ್ವರಾಲಯ ಸಂಗೀತ ಸಂಸ್ಥೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ :** ಸ್ವರಾಲಯ ಸಂಗೀತ ಸಂಭ್ರಮ, ಉದ್ಘಾಟನೆ : ಸಂಗೀತ ಉಪಾಧ್ಯಾಯರಾದ ಶಶಿಕಲಾ ಚಂದ್ರಶೇಖರ್, ಜಾನಪದ ಕಲಾವಿದ ಅಮ್ಮ ರಾಮಚಂದ್ರ ಅವರಿಂದ ಜಾನಪದ ಗಾಯನ, ಸ್ಪಂದನಾ ಮತ್ತು ಸ್ನೇಹ ಅವರಿಂದ ಭರತನಾಟ್ಯ ಪ್ರದರ್ಶನ, ಮುಖ್ಯ ಅತಿಥಿಗಳು : ಸಂಗೀತ ಉಪಾಧ್ಯಾಯರಾದ ಭಾಗ್ಯಲಕ್ಷ್ಮಿ, ಸ್ಥಳ: ವೀಣೆ ಶೇಷಣ್ಣ ಭವನ, ಆದಿಚುಂಚನಗಿರಿ ರಸ್ತೆ, ಕುವೆಂಪುನಗರ, ಸಂಜೆ 4ಕ್ಕೆ.
- **ಅಲೆಯನ್ಸ್ ಕ್ಲಬ್ ಆಫ್ ಮೈಸೂರು ನಾಲ್ವಡಿ ಗಾನ –ನಂದನ :** ಸಾಧಕ ಪತ್ರಕರ್ತರಿಗೆ ಮಾಧ್ಯಮ ರತ್ನ ಪ್ರಶಸ್ತಿ ಪ್ರದಾನ ಹಾಗೂ ಗಾನ–ನಂದನ : ಸವಿಗಾನ, ಉದ್ಘಾಟನೆ : ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಅಧ್ಯಕ್ಷತೆ : ಅಲಯನ್ಸ್ ಕ್ಲಬ್ ಅಂತರರಾಷ್ಟ್ರೀಯ ನಿರ್ದೇಶಕ ಡಾ. ನಾಗರಾಜ ವಿ. ಬೈರಿ, ಅಭಿನಂದಿಸುವವರು : ವಿಧಾನಪರಿಷತ್ ಸದಸ್ಯ ಸಿ.ಎನ್. ಮಂಜೇಗೌಡ, ಮುಖ್ಯ ಅತಿಥಿಗಳು : ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಕಸಾಪ ಮಾಜಿ ಅಧ್ಯಕ್ಷ ಡಾ.ವೈ.ಡಿ. ರಾಜಣ್ಣ, ಅಲಯನ್ಸ್ ಕ್ಲಬ್ ಆಫ್ ನಾಲ್ವಡಿ ಅಧ್ಯಕ್ಷ ಎನ್. ಬೆಟ್ಟೇಗೌಡ, ಪ್ರಾಸ್ತಾವಿಕ ನುಡಿ : ಜಿಲ್ಲಾ ರಾಜ್ಯಪಾಲ ಬಾಲಕೃಷ್ಣರಾಜು, ಸ್ಥಳ: ಜಿಲ್ಲಾ ಕನ್ನಡ ಸಾಹಿತ್ಯ ಭವನ, ವಿಜಯನಗರ 1ನೇ ಹಂತ, ಸಂಜೆ 4.30ಕ್ಕೆ.
- **ಶಬರಿಮಲೆ ಶ್ರೀ ಅಯ್ಯಪ್ಪ ಪೂಜಾ ಸಮಿತಿ :** ಪ್ರತಿಷ್ಠಾಪನಾ ವಾರ್ಷಿಕ ಮಹೋತ್ಸವ, ಸಂಜೆ 5.30 ರಿಂದ ಶ್ರೀ ಗುರುವಾಯೂರಪ್ಪನಿಗೆ ಪ್ರಸಾದ ಶುದ್ಧಿ, ಅಸ್ತ್ರ ಕಳಸ ಪೂಜಾ, ವಾಸ್ತು ಹೋಮಂ, ವಾಸ್ತು ಕಳಶ ಪೂಜಾ, ವಾಸ್ತು ಕಳಶಾಭಿಷೇಕಂ, ವಾಸ್ತು ಬಲಿ, ರಾಕ್ಷೋಘ್ನ, ಹೋಮಂ, ಅತ್ತಾಳ ಪೂಜಾ, ಸ್ಥಳ: ಶಬರಿಮಲೆ ಶ್ರೀ ಅಯ್ಯಪ್ಪಸ್ವಾಮಿ ದೇವಾಲಯ, ಚಾಮುಂಡಿಬೆಟ್ಟ,
- **ಶ್ರೀ ರಾಮಕೃಷ್ಣ ಆಶ್ರಮ :** ಸ್ವಾಮಿ ಜ್ಞಾನಯೋಗಾನಂದ ಅವರಿಂದ ಶ್ರೀ ರಾಮಕೃಷ್ಣ ವಚನವೇದ ಕುರಿತು ಉಪನ್ಯಾಸ, ಸ್ಥಳ: ಆಶ್ರಮದ ಸಭಾಂಗಣ, ಯಾದವಗಿರಿ, ಸಂಜೆ 6ಕ್ಕೆ.

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಜೂನ್ 16 ಭಾನುವಾರ 2024

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 242869
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 45 | ಸಂಚಿಕೆ: 61 | ಪುಟಗಳು: 12

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, *website: www.mysurumithra.com*

₹4

ಲೋಕಸಭಾ ಚುನಾವಣೆಯಲ್ಲಿ ಹಿನ್ನಡೆ

ಕೆಲ ಸಚಿವರ ತಲೆದಂಡ ಸಾಧ್ಯತೆ

- ಪಕ್ಷ, ಸರ್ಕಾರಕ್ಕೆ ಹೊರೆಯಾಗಿರುವ ಸಚಿವರ ಕೈ ಬಿಡಿ: ರಾಜ್ಯ ನಾಯಕರಿಗೆ ಸೂಚನೆ
- ಪಂಚ ಗ್ಯಾರಂಟಿ ಫಲ ನೀಡದ ಬಗ್ಗೆ ಕಾಂಗ್ರೆಸ್ ವರಿಷ್ಠರ ತೀವ್ರ ಅಸಮಾಧಾನ

ಬೆಂಗಳೂರು, ಜೂ.15(ಕೆಎಂಶಿ)– ಸರ್ಕಾರ, ಪಕ್ಷಕ್ಕೆ ಹೊರೆಯಾಗಿರುವ ಸಚಿವರನ್ನು ಅಧಿಕಾರದಿಂದ ಕೆಳಗಿಳಿಸಿ ಎಂದು ಕಾಂಗ್ರೆಸ್ ವರಿಷ್ಠರು ರಾಜ್ಯ ನಾಯಕರಿಗೆ ಸೂಚಿಸಿದ್ದಾರೆ.

ಪಂಚ ಗ್ಯಾರಂಟಿಗಳನ್ನು ನೀಡಿದ ನಂತರವೂ ಕರ್ನಾಟಕದಲ್ಲಿ ಕಾಂಗ್ರೆಸ್ ಲೋಕಸಭಾ ಚುನಾವಣೆಯಲ್ಲಿ ಎರಡಂಕಿ ದಾಟದಿರುವುದು ಭಾರೀ ಮುಜುಗರ ತಂದಿದೆ. ಕಳೆದ ಒಂದು ವರ್ಷದಲ್ಲಿ ಮುಖ್ಯಮಂತ್ರಿ ಮತ್ತು ಉಪಮುಖ್ಯಮಂತ್ರಿಯನ್ನು ಹೊರತುಪಡಿಸಿ ಉಳಿದ ಸಚಿವರುಗಳು ತಮ್ಮ ಇಲಾಖೆಗಳಲ್ಲಿ ಮಾಡಿರುವ ಸಾಧನೆಯ ವರದಿಯನ್ನು ಸಲ್ಲಿಸುವಂತೆ ಸಿದ್ದರಾಮಯ್ಯ ಅವರಿಗೆ ಎಐಸಿಸಿ ಸೂಚಿಸಿದೆ. ಸಚಿವರುಗಳು ತಮಗೆ ವಹಿಸಿದ ಹೊಣೆಗಾರಿಕೆಯನ್ನು ಸಮರ್ಪಕವಾಗಿ ನಿರ್ವಹಿಸಿ ಅಭಿವೃದ್ಧಿ ಕಾರ್ಯ ಕೈಗೊಳ್ಳುವ ಜೊತೆಗೆ ಪಕ್ಷ ಸಂಘಟನೆಗೆ ಒತ್ತು ನೀಡಿದ್ದರೆ, ಕರ್ನಾಟಕದಲ್ಲಿ



ಹೆಚ್ಚು ಸ್ಥಾನ ಗಳಿಸಬಹುದಿತ್ತು ಎಂಬುದು ವರಿಷ್ಠರ ಅಭಿಪ್ರಾಯ. ಐದು ಗ್ಯಾರಂಟಿಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಿದ ನಂತರವೂ ಕೇವಲ 9 ಕ್ಷೇತ್ರಗಳಲ್ಲಿ ಮಾತ್ರ ಪಕ್ಷ ಗೆಲುವು ಸಾಧಿಸಿದೆ. ರಾಜ್ಯದಲ್ಲಿ 15 ರಿಂದ 18 ಸ್ಥಾನ ನಿರೀಕ್ಷಿಸಿದ್ದ ವರಿಷ್ಠರಿಗೆ ಅದರಲ್ಲಿ ಅರ್ಧದಷ್ಟು ಸೀಟು ಬಂದಿರುವುದೇ ಕೋಪಕ್ಕೆ ಕಾರಣ. ಸಚಿವರು ಪ್ರತಿನಿಧಿಸುವ 14 ವಿಧಾನಸಭಾ ಕ್ಷೇತ್ರಗಳಲ್ಲೇ ಪಕ್ಷಕ್ಕೆ ಹಿನ್ನಡೆಯಾಗಿದೆ, ಸಚಿವರುಗಳೇ ಪಕ್ಷದ ಅಭ್ಯರ್ಥಿಗಳಿಗೆ ಮುನ್ನಡೆ ದೊರಕಿಸಿಕೊಡದಿದ್ದರೆ ಬೇರೆ ಕ್ಷೇತ್ರಗಳ ಸ್ಥಿತಿ ಏನು, ಅದರಲ್ಲೂ ಎರಡು–ಮೂರು ಮಂತ್ರಿಗಳ ಕ್ಷೇತ್ರದಲ್ಲಿ ಬಿಜೆಪಿ–ಜೆಡಿಎಸ್‌ಗೆ 50 ಸಾವಿರ ಮತಗಳು ಹೆಚ್ಚು ಹೋಗಿವೆ.

ಟಿಕೆಟ್ ಹಂಚಿಕೆ ಸಂದರ್ಭದಲ್ಲೂ ಸಚಿವರ ಶಿಫಾರಸಿಗೆ ಮನ್ನಣೆ ನೀಡಿರುವುದಲ್ಲದೆ, ಕೆಲವು ಕ್ಷೇತ್ರಗಳಲ್ಲಿ ನಮಗೆ ನಿರ್ದಿಷ್ಟ ಅಭ್ಯರ್ಥಿಯೇ ಬೇಕೆಂದಾಗ ಅಂತಹವರಿಗೇ ಟಿಕೆಟ್ ನೀಡಿದರೂ ನಮ್ಮ ಪರ ಫಲಿತಾಂಶ ಬರಲಿಲ್ಲ. ಜನಸ್ನೇಹಿ ಆಡಳಿತ ನೀಡಿ, ಸರ್ಕಾರದ ಯೋಜನೆಗಳು ಜನರಿಗೆ ತಲುಪುವಂತಾಗಬೇಕು. ಯಾವುದೇ ಕಡತಗಳೂ ನಿಗದಿತ ಸಮಯದಲ್ಲಿ ವಿಲೇವಾರಿ ಆಗುವಂತೆ ನೋಡಿಕೊಳ್ಳಿ. ● 6ನೇ ಪುಟಕ್ಕೆ

ಕೋಟ್ಯಾಂತರ ವೆಚ್ಚದಲ್ಲಿ

ನೆಟ್ಟ ಗಿಡಗಳೇ ಕಾಣಿಸುತ್ತಿಲ್ಲ!

ಅರಣ್ಯ ಇಲಾಖೆ ಪವಾಡಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅಚ್ಚರಿ!

- ಮೈಸೂರಿನಲ್ಲಿ 40 ಡಿಗ್ರಿ ಸೆಲ್ಸಿಯಸ್ ಉಷ್ಣಾಂಶ ದಾಖಲು
- ನಿವೃತ್ತಿದಾರರ ಸ್ವರ್ಗವೆಂಬ ಮೈಸೂರಿನ ಪ್ರಖ್ಯಾತಿ ಮರೆ
- ಪರಿಸರ ಸಂರಕ್ಷಣೆ ಎಲ್ಲರ ಹೊಣೆ



ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಘಟಿಕೋತ್ಸವ ಭವನದಲ್ಲಿ ಶನಿವಾರ ರಾಜೀವ್ ಸ್ನೇಹ ಬಳಗ ಹಾಗೂ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಯೋಜನೆ ಬಿ.ಸಿ.ಟ್ರಸ್ಟ್ ಸಂಯುಕ್ತವಾಗಿ ಆಯೋಜಿಸಿದ್ದ ಲಕ್ಷ ವೃಕ್ಷ ಯೋಜನಾ ಕಾರ್ಯಕ್ರಮವನ್ನು ಸಸಿಗೆ ನೀರೆರೆಯುವ ಮೂಲಕ ಸಿಎಂ ಸಿದ್ದರಾಮಯ್ಯ ಉದ್ಘಾಟಿಸಿದರು. ಸುತ್ತೂರು ಶ್ರೀಗಳು ಸಾನ್ನಿಧ್ಯ ವಹಿಸಿದ್ದರು.

ಮೈಸೂರು, ಜೂ.15(ಬಿಎಲ್‌ಯು)– ಪರಿಸರ ಸಂರಕ್ಷಣೆಗಾಗಿ ಸರ್ಕಾರ ಕೋಟ್ಯಾಂತರ ರೂಪಾಯಿ ವೆಚ್ಚ ಮಾಡಿ ಗಿಡ ನೆಡುತ್ತಿದೆ. ಆದರೆ, ನೆಟ್ಟ ಗಿಡಗಳು ನನ್ನ ಕಣ್ಣಿಗೆ ಕಾಣಿಸುತ್ತಿಲ್ಲ ಎಂದು ಸ್ವತಃ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೇ ಅಚ್ಚರಿ, ಸಂಶಯ ವ್ಯಕ್ತಪಡಿಸಿದ್ದಾರೆ.

ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಘಟಿಕೋತ್ಸವ ಭವನದಲ್ಲಿ ಇಂದು ರಾಜೀವ್ ಸ್ನೇಹ ಬಳಗ ಹಾಗೂ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ● 6ನೇ ಪುಟಕ್ಕೆ

5 ವರ್ಷದಲ್ಲಿ 25 ಕೋಟಿ ಸಸಿ ನೆಡುವ ಗುರಿ

ಮುಂದಿನ ಐದು ವರ್ಷದ ಅವಧಿಯಲ್ಲಿ 25 ಕೋಟಿ ಸಸಿ ನೆಡುವ ಗುರಿ ಹೊಂದಿದ್ದೇವೆ ಎಂದು ಅರಣ್ಯ ಸಚಿವ ಈಶ್ವರ ಖಂಡ್ರೆ ತಿಳಿಸಿದರು. ಕಳೆದ ವರ್ಷ ಕರ್ನಾಟಕದಲ್ಲಿ 5 ಕೋಟಿ ಸಸಿ ನೆಡಲಾಗಿದೆ. ಮೈಸೂರಿನಲ್ಲಿ 20 ಲಕ್ಷ ಸಸಿ ನೆಟ್ಟಿದ್ದು, ಈ ಬಾರಿ ಕೂಡ 11 ಲಕ್ಷ ಸಸಿ ನೆಡುವ ಯೋಜನೆ ರೂಪಿಸಲಾಗಿದೆ. ಸಸಿ ನೆಡಸುವುದಷ್ಟಕ್ಕೆ ಸೀಮಿತವಾಗದೆ ಅದನ್ನು ಉಳಿಸುವ ಪರಿಣಾಮಕಾರಿ ಕಾರ್ಯ ನಡೆಯಬೇಕು ಎಂದು ಹೇಳಿದರು. ನೆಡಲಾಗಿರುವ ಗಿಡಗಳಲ್ಲಿ ಎಷ್ಟು ಬದುಕಿವೆ, ಎಷ್ಟು ಬೆಳೆಯುತ್ತಿವೆ ಎಂಬ ಬಗ್ಗೆ ಮೂರನೇ ಹಂತದ ತಪಾಸಣೆ ಮಾಡಿ ಆಡಿಟ್ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲಾಗುವುದು ಎಂದು ಈಶ್ವರ ಖಂಡ್ರೆ ತಿಳಿಸಿದರು. ಹವಾಮಾನ ಬದಲಾವಣೆ ಭಾರತ ಸೇರಿದಂತೆ ವಿಶ್ವವನ್ನು ಕಾಡುತ್ತಿರುವ ದೊಡ್ಡ ಸಮಸ್ಯೆ. ಈ ಬಗ್ಗೆ ಈಗಲೇ ಜಾಗೃತಿ ಮೂಡಿಸಿ ಪರಿಸರ ● 6ನೇ ಪುಟಕ್ಕೆ

ಪೆಟ್ರೋಲ್, ಡೀಸೆಲ್ ದುಬಾರಿ ಇದು 'ಗ್ಯಾರಂಟಿ' ಬರೆ!



ಮೈಸೂರಲ್ಲಿ ದರ ಪಟ್ಟಿ

	ಹಳೆ ದರ	ಹೊಸ ದರ
ಪೆಟ್ರೋಲ್	99.40	102.41
ಡೀಸೆಲ್	85.54	88.53

ಬೆಂಗಳೂರು, ಜೂ.15–ಲೋಕಸಭಾ ಚುನಾವಣೆ ಫಲಿತಾಂಶದ ಬೆನ್ನಲ್ಲೇ ರಾಜ್ಯ ಸರ್ಕಾರ ಪೆಟ್ರೋಲ್ ಹಾಗೂ ಡೀಸೆಲ್ ಮೇಲಿನ ಮಾರಾಟ ತೆರಿಗೆಯನ್ನು ಹೆಚ್ಚಿಸಿದೆ. ಇದರ ಪರಿಣಾಮ ಪ್ರತಿ ಲೀಟರ್ ಪೆಟ್ರೋಲ್ ಬೆಲೆ 3 ರೂ. ಮತ್ತು ಡೀಸೆಲ್ ಬೆಲೆ 3.50 ರೂಪಾಯಿ ಬೆಲೆ ಹೆಚ್ಚಳವಾಗಿದೆ. ತಕ್ಷಣದಿಂದಲೇ ಈ ಪರಿಷ್ಕೃತ ದರ ಜಾರಿಯಾಗಿದೆ. ನೂತನ ದರ ಏರಿಕೆಯಿಂದ ಮೈಸೂರಲ್ಲಿ ಪೆಟ್ರೋಲ್ ದರ 99.40 ರಿಂದ ಇದೀಗ 102.41 ರೂ.ಗೆ ಏರಿಕೆಯಾಗಿದೆ. 85 ರೂ. 54 ಪೈಸೆಯಿದ್ದ ಡೀಸೆಲ್ ಬೆಲೆ 88 ರೂ. 53 ಪೈಸೆಗೆ ಏರಿಕೆಯಾಗಿದೆ.

ಸರಿಸುಮಾರು ಕಳೆದೆರಡು ವರ್ಷದಿಂದ ಕೇಂದ್ರ ಸರ್ಕಾರ ಪೆಟ್ರೋಲ್ ಹಾಗೂ ಡೀಸೆಲ್ ಬೆಲೆಯಲ್ಲಿ ಯಥಾಸ್ಥಿತಿ ಕಾಪಾಡಿಕೊಂಡಿತ್ತು. ಮಾರ್ಚ್ ತಿಂಗಳಲ್ಲಿ ಪೆಟ್ರೋಲ್, ಡೀಸೆಲ್ ಮೇಲಿನ ಬೆಲೆಯಲ್ಲಿ ಗರಿಷ್ಠ 2 ರೂಪಾಯಿ ಕಡಿತಗೊಂಡಿತ್ತು. ಈ ಬದಲಾವಣೆ ಹೊರತುಪಡಿಸಿದರೆ ಪೆಟ್ರೋಲ್ ಡೀಸೆಲ್ ದುಬಾರಿಯಾದರೂ ಯಥಾಸ್ಥಿತಿ ಕಾಪಾಡಿಕೊಂಡಿತ್ತು. ● 6ನೇ ಪುಟಕ್ಕೆ

ನಟ ದರ್ಶನ್, ಪವಿತ್ರಾಗೌಡ ಸೇರಿ 13 ಮಂದಿ ಮತ್ತೆ 5 ದಿನ ಪೊಲೀಸ್ ಕಸ್ಟಡಿಗೆ

ಬೆಂಗಳೂರು, ಜೂ.15–ರೇಣುಕಾಸ್ವಾಮಿ ಕೊಲೆ ಕೇಸಿನಲ್ಲಿ ಬಂಧನವಾಗಿರುವ ನಟ ದರ್ಶನ್ ಸೇರಿದಂತೆ ಒಟ್ಟು 16 ಜನರ ಪೊಲೀಸ್ ಕಸ್ಟಡಿ ಅಂತ್ಯಗೊಂಡಿದ್ದ ಹಿನ್ನೆಲೆಯಲ್ಲಿ ಮ್ಯಾಜಿಸ್ಟ್ರೇಟ್ ನ್ಯಾಯಾಲಯದ ಮುಂದೆ ಇಂದು ಹಾಜರುಪಡಿಸಲಾಗಿತ್ತು. ಈ ವೇಳೆ ವಿಚಾರಣೆ ಮಾಡಿದ ಮ್ಯಾಜಿಸ್ಟ್ರೇಟ್ ವಿಶ್ವನಾಥ್ ಸಿ.ಗೌಡರ್, ದರ್ಶನ್, ಪವಿತ್ರಾಗೌಡ ಸೇರಿ 13 ಆರೋಪಿಗಳನ್ನು ಪೊಲೀಸ್ ಕಸ್ಟಡಿಗೆ ಒಪ್ಪಿಸಿ ಆದೇಶ ಹೊರಡಿಸಿದ್ದಾರೆ.


ಕೋರ್ಟ್ ವಿಚಾರಣೆ ವೇಳೆ ನ್ಯಾಯಾಧೀಶರು, ಪೊಲೀಸರು ನಿಮಗೆ ವಿಚಾರಣೆ ವೇಳೆ ತೊಂದರೆ ಕೊಟ್ಟಿದ್ದಾರಾ ಎಂದು ● 6ನೇ ಪುಟಕ್ಕೆ



ನಟ ದರ್ಶನ್ ಮತ್ತು ಪವಿತ್ರಾಗೌಡರನ್ನು ಪೊಲೀಸರು ಕರೆದೊಯ್ಯುತ್ತಿರುವುದು.

ಬೆಂಗಳೂರು–ಮೈಸೂರು ಎಕ್ಸ್‌ಪ್ರೆಸ್ ವೇನಲ್ಲಿ ಭೀಕರ ಅಪಘಾತ:

ಇಬ್ಬರು ವಿದ್ಯಾರ್ಥಿಗಳ ದುರ್ಮರಣ



ರಾಮನಗರ, ಜೂ.15– ಬೆಂಗಳೂರು–ಮೈಸೂರು ಎಕ್ಸ್‌ಪ್ರೆಸ್ ವೇನಲ್ಲಿ ತಡರಾತ್ರಿ ಭೀಕರ ಅಪಘಾತ ಸಂಭವಿಸಿ ಇಬ್ಬರು ಎಂಜಿನಿಯರಿಂಗ್ ವಿದ್ಯಾರ್ಥಿಗಳು ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ರಾಮನಗರ ತಾಲೂಕಿನ ಕಪನಯ್ಯನ ದೊಡ್ಡಿ ಬಳಿ ನಡೆದಿದೆ.

ಮೈಸೂರಿನಿಂದ ಬೆಂಗಳೂರಿನ ಕಡೆಗೆ ಹೋಗುತ್ತಿದ್ದ ಫಾರ್ಚುನರ್ ಕಾರು ಓವರ್‌ಟೇಕ್ ಮಾಡಲು ಹೋಗಿ ಲಾರಿಗೆ ಹಿಂಭಾಗದಿಂದ ಡಿಕ್ಕಿ ಹೊಡೆದಿದೆ. ಕಾರು ಸಂಪೂರ್ಣ ನುಜ್ಜುಗುಜ್ಜಾಗಿದ್ದು, ಡಿಕ್ಕಿ ರಭಸಕ್ಕೆ ಕಾರಿನಲ್ಲಿದ್ದ ವಿಶ್ವ (21) ಮತ್ತು ಸೂರ್ಯ (21) ಸ್ಥಳದಲ್ಲೇ ಸಾವನ್ನಪ್ಪಿದ್ದು, ಚಾಲಕ ಸುಹಾಸ್ ಗಂಭೀರವಾಗಿ ಗಾಯಗೊಂಡಿದ್ದಾರೆ.

ಆಂಧ್ರ ಮೂಲದ ವಿದ್ಯಾರ್ಥಿಗಳು ಬೆಂಗಳೂರಿನ ವಿದ್ಯಾರಣ್ಯಪುರದ ಖಾಸಗಿ ಕಾಲೇಜಿನಲ್ಲಿ ಎಂಜಿನಿಯರಿಂಗ್ ವ್ಯಾಸಂಗ ಮಾಡುತ್ತಿದ್ದರು ಎನ್ನಲಾಗಿದೆ. ಕಾರ್ಯನಿಮಿತ್ತ ಮೈಸೂರಿಗೆ ಹೋಗಿ ಬೆಂಗಳೂರಿಗೆ ವಾಪಸ್ಸಾಗುವ ಸಂದರ್ಭ ದುರ್ಘಟನೆ ಸಂಭವಿಸಿದೆ. ಸ್ಥಳಕ್ಕೆ ರಾಮನಗರ ಸಂಚಾರಿ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಮೃತದೇಹಗಳನ್ನು ರಾಮನಗರ ಸರ್ಕಾರಿ ಆಸ್ಪತ್ರೆಗೆ ರವಾನಿಸಲಾಗಿದೆ.

ನಕ್ಕರೆ ಅದೇ ಸ್ವರ್ಗ

ಹೆಂಡ್ತಿ : ದಿನಾ ಹೋಟೆಲ್‌ನಲ್ಲಿ ತಿನ್ನಬೇಡಿ ಅಲ್ಸರ್ ಆಗುತ್ತೆ.
ಗಂಡ : ಹಾಗಾದ್ರೆ ದಿನಾ ಪಾರ್ಸಲ್ ತಂದು ಮನೆಲೇ ತಿನ್ನಾ

ಮೈಸೂರು ಮಿತ್ರ

ಭಾನುವಾರ, 16 ಜೂನ್ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ.........

ಯಾವತ್ತೂ ಕಾಯುತ್ತಾ, ಯೋಚಿಸುತ್ತಾ ಕಾಲ ಕಳೆಯಬೇಡಿ. ಯಾಕೆಂದರೆ ಬದುಕು ಯೋಚನೆಗಿಂತಲೂ ವೇಗವಾಗಿ ಸಾಗುತ್ತಿರುತ್ತದೆ. –ನುಡಿಮುತ್ತು

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ದಡ್ಡನಿಗೆ ಹಗಲು ಕಳೆಯುವುದಿಲ್ಲ, ಒಳ್ಳೆಯವನಿಗೆ ರಾತ್ರಿ ಸಾಲುವುದಿಲ್ಲ.

ನಿಮ್ಮ ಪತ್ರಗಳು

ತಿಂಡಿ, ಆಹಾರ ಪದಾರ್ಥಗಳ ಮೇಲಿನ ಜಿಎಸ್‌ಟಿ ರದ್ದುಪಡಿಸಲಿ

ಮಾನ್ಯರೆ,

ಚುನಾವಣೆ ಮುಗಿದು ಅಧಿಕಾರಕ್ಕೆ ಬಂದ ಕೂಡಲೇ 53ನೇ ಜಿಎಸ್‌ಟಿ ಮಂಡಳಿಯ ಸಭೆಯನ್ನು ಕರೆಯಲಾಗಿದ್ದು, ಆನ್‌ಲೈನ್ ಗೇಮಿಂಗ್ ವಲಯದ ಮೇಲಿರುವ ಶೇ.28ರ ಜಿಎಸ್‌ಟಿಯ ಪರಾಮರ್ಶೆ ನಡೆಸಲಿದೆ ಎಂದು ವರದಿಯಾಗಿದೆ. ಆದರೆ ಇದೇ ಜಿಎಸ್‌ಟಿ ಮಂಡಳಿಯು ಮೊಸರು, ಅಕ್ಕಿ, ಕಾಫಿ, ಟಿ, ಹೋಟೆಲ್ ತಿಂಡಿ ಪದಾರ್ಥಗಳ ಮೇಲೆ ಜಿಎಸ್‌ಟಿ ವಿಧಿಸಿರುವುದು ಮಧ್ಯಮ ವರ್ಗದ ಜನರಿಗೆ ಹೊರೆಯಾಗಿದೆ. ಜಿಎಸ್‌ಟಿ ಕಾರಣದಿಂದ ಹೋಟೆಲ್‌ಗಳವರು 1,2, ರೂ ಏರಿಸುವ ಬದಲಿಗೆ ಪ್ರತಿ ಬಾರಿ 5,10 ರೂ. ಏರಿಸಿ ಎಲ್ಲಾ ತೆರಿಗೆಯನ್ನೂ ಗ್ರಾಹಕರಿಂದಲೇ ವಸೂಲು ಮಾಡುತ್ತಿದ್ದಾರೆ. ವರ್ಗ 3 ಹಾಗೂ ಅದಕ್ಕಿಂತ ಕೆಳ ಮಟ್ಟದ ಹೋಟೆಲ್‌ಗಳಲ್ಲಿ ಊಟ, ತಿಂಡಿಗಳ ಮೇಲೆ ಜಿಎಸ್‌ಟಿ ತೆಗೆಯಲಿ.

ಅಲ್ಲದೆ ಈಗಿರುವ ಕೇವಲ 5,12,18 ಹಾಗೂ 28ರ ತೆರಿಗೆ ಹಂತವನ್ನು ಕೆಳಹಂತದಿಂದ ವಿಧಿಸುವ ಕ್ರಮವಾಗಲಿ. ಅಂದರೆ ವಸ್ತುಗಳಿಗನುಗುಣವಾಗಿ, 2,3,5,6,8,10,12,14 ಮತ್ತು 18,20 ಕ್ಕೆ ನಿಗದಿ ಪಡಿಸಲಿ. ಯಾವುದೇ ಲ್ಯಾಂಬ್ಬರ್ಗಿನಿ ಕಾರ್ ಕೊಳ್ಳುವವರು ಕೂಡ ತಮ್ಮ ವಾರ್ಷಿಕ ಆದಾಯ ತೆರಿಗೆ ಪಾವತಿಸಿಯೇ ಕಾರು ಕೊಳ್ಳುತ್ತಾರೆ. ನಾವು ದೇಶವನ್ನು ಭಾರಿ ಅಭಿವೃದ್ಧಿಯ ಪಥದಲ್ಲಿ ಕೊಂಡೊಯ್ಯುತ್ತೇವೆ ಎಂದು ಹೇಳುತ್ತಾ, ಜಿಎಸ್‌ಟಿ, ಹೆದ್ದಾರಿ ಟೋಲ್ ಮುಂತಾದ ತೆರಿಗೆಗಳನ್ನು ಭಾರಿ ಪ್ರಮಾಣದಲ್ಲಿ ವಿಧಿಸಿದರೆ ತೆರಿಗೆ ಪಾವತಿಸಿದ ಯಾವ ಉದ್ಯಮಿ, ಅಂಗಡಿ, ಕೈಗಾರಿಕೆಗಳಾಗಲಿ ಅದನ್ನು ತಮ್ಮ ಕೈಯಿಂದ ಕೊಡುವುದಿಲ್ಲ, ಬದಲಾಗಿ ಅದನ್ನು ತಾವು ಮಾರುವ, ಉತ್ಪಾದಿಸುವ ವಸ್ತುಗಳ ಮೇಲೆ ಹಾಕುತ್ತಾರೆ. ಸಹಜವಾಗಿಯೇ ಇದು ಜನಸಾಮಾನ್ಯರ ಮೇಲೆ ಬೀಳುತ್ತದೆ. ಆದ್ದರಿಂದ ತೆರಿಗೆಗಳನ್ನು ಸರಳಗೊಳಿಸಬೇಕಿದೆ.

ಇನ್ನು ನಿರ್ಮಲಾ ಸೀತಾರಾಮನ್ ಅವರೇ ಮತ್ತೆ ಹಣಕಾಸು ಸಚಿವರಾಗಿದ್ದಾರೆ. ಜನರಿಂದ ನೇರವಾಗಿ ಆಯ್ಕೆಯಾಗುವವರಿಗೆ, ನಾನು ಮತ್ತೆ ಜನರ ಬಳಿ ಓಟು ಕೇಳಲು ಹೋಗಬೇಕು ಎಂಬ ಅಳುಕು ಸ್ವಲ್ಪವಾದರೂ ಇರುತ್ತದೆ. ಆದ್ದರಿಂದ ಅಂತವರು ತೆರಿಗೆ ವಿಧಿಸುವಾಗ ಹಿಂದು–ಮುಂದು ನೋಡುತ್ತಾರೆ. ಹಲವು ವೇಳೆ ರಿಯಾಯಿತಿಗಳನ್ನು ಕೂಡ ನೀಡುತ್ತಾರೆ. ಆದರೆ ನಿರ್ಮಲಾ ಸೀತಾರಾಮನ್ ಅವರಿಗೆ ಆ ಭಯವೇ ಇಲ್ಲ. ಏಕೆಂದರೆ ಕಳೆದ 3 ಬಾರಿಯೂ ಅವರು ರಾಜ್ಯಸಭಾ ಸದಸ್ಯರಾಗಿ ಹಿಂಬಾಗಿಲ ಮೂಲಕ ಪ್ರವೇಶಿಸಿದವರು.

– ಮುಳ್ಳೂರು ಪ್ರಕಾಶ್, ಕನಕದಾಸನಗರ, ದಟ್ಟಗಳ್ಳಿ 3ನೇ ಹಂತ, ಮೈಸೂರು.

ಗುಂಡಿಮಯವಾಗಿರುವ ಮೈಸೂರಿನ ರಸ್ತೆಗಳು



ಮಾನ್ಯರೆ,

ಸಾಂಸ್ಕೃತಿಕ ನಗರಿ ಮೈಸೂರಿನ ರಸ್ತೆಗಳು ಗುಂಡಿಮಯವಾಗಿವೆ. ಯಾವ ರಸ್ತೆಯಲ್ಲಿ ಚಲಿಸಿದರೂ ಗುಂಡಿಗಳು ಎದ್ದು ಕಾಣುತ್ತವೆ. ಅದರಲ್ಲೂ ಆರ್‌ಎಂಸಿ ತರಕಾರಿ ಮಾರುಕಟ್ಟೆಯಿಂದ ನ್ಯಾಯಾಲಯದ ರಸ್ತೆ (ಎಂ.ಜಿ. ರಸ್ತೆ)ಯಲ್ಲಿ ಹಲವಾರು ಗುಂಡಿಗಳಿದ್ದು, ವಾಹನ ಚಾಲಕರಿಗೆ ತುಂಬಾ ಕಿರಿಕಿರಿಯಾಗುತ್ತಿದೆ. ಅಲ್ಲದೆ, ರಾಮಾನುಜ ರಸ್ತೆಯ ದುಸ್ಥಿತಿಯಂತೂ ಹೇಳತೀರದಾಗಿದೆ. ಈ ರಸ್ತೆಯಲ್ಲಿ ಜೆಎಸ್‌ಎಸ್ ಆಸ್ಪತ್ರೆ, ತರಕಾರಿ ಮಾರುಕಟ್ಟೆ ಇದ್ದು, ವಾಹನ ದಟ್ಟಣೆ ಹೆಚ್ಚಾಗಿರುತ್ತದೆ. ಬೆಳಗಿನ ವೇಳೆ ಈ ರಸ್ತೆಯಲ್ಲಿ ಚಲಿಸುವುದು ಕಷ್ಟಕರವಾಗಿದೆ. ಮಳೆ ಬಂದರಂತೂ ಗುಂಡಿಗಳು ನೀರಿನಿಂದ ತುಂಬಿಕೊಂಡಿರುತ್ತವೆ. ವಾಹನ ಚಾಲಕರು ಗುಂಡಿ ಯಾವುದು ಎಂದು ತಿಳಿಯದೇ ಚಲಿಸಿ ಅಪಘಾತಗಳಾಗುವ ಸಾಧ್ಯತೆಗಳು ಹೆಚ್ಚು. ಆದ್ದರಿಂದ ಕೂಡಲೆ ಸಂಬಂಧಪಟ್ಟ ಜನಪ್ರತಿನಿಧಿಗಳು, ಪಾಲಿಕೆ ಅಧಿಕಾರಿಗಳು ರಸ್ತೆ ಗುಂಡಿಗಳನ್ನು ಕೂಡಲೆ ದುರಸ್ತಿಗೊಳಿಸಿ ಸುಗಮ ಸಂಚಾರಕ್ಕೆ ಅನುಕೂಲ ಮಾಡಿಕೊಡಬೇಕೆಂದು ಈ ಮೂಲಕ ಮನವಿ.

–ನೊಂದ ಚಾಲಕರು, ಮೈಸೂರು.

ಹೆಚ್‌ಎಸ್‌ಆರ್ ಪ್ಲೇಟ್ ಅಳವಡಿಕೆಯ ದಿನಾಂಕ ಮುಂದೂಡಿ

ಮಾನ್ಯರೆ,

ಕಾರು ಮತ್ತು ದ್ವಿಚಕ್ರ ವಾಹನಗಳಿಗೆ, ಹೈ ಸೆಕ್ಯೂರಿಟಿ ರಿಜಿಸ್ಟ್ರೇಷನ್ ಪ್ಲೇಟ್ (HSRP) ಗಳನ್ನು ಅಳವಡಿಸಿಕೊಳ್ಳಲು ಈಗಾಗಲೇ ದಿನಾಂಕ ನಿಗದಿಪಡಿಸಲಾಗಿದೆ.

ಹಲವು ತಾಂತ್ರಿಕ ಸಮಸ್ಯೆಗಳಿಂದಾಗಿ ಶೇ.80ರಷ್ಟು ಜನರು ಇನ್ನೂ ಹೆಚ್‌ಎಸ್‌ಆರ್ ಪ್ಲೇಟ್‌ಗಳನ್ನು ಅಳವಡಿಸಿಕೊಳ್ಳಲು ಸಾಧ್ಯವಾಗಿಲ್ಲ, ಕಾರಣವೆಂದರೆ, ಇಲ್ಲಿ ನನ್ನ ಸ್ವಂತ ಸಮಸ್ಯೆಯನ್ನು ಹೇಳುತ್ತೇನೆ. ನಾನು 1993 ರಲ್ಲಿ ಹೀರೋ ಹೊಂಡಾ ಕಂಪೆನಿಯ ಮೋಟಾರ್ ಬೈಕ್ ಅನ್ನು ತೆಗೆದುಕೊಂಡಿದ್ದೇನೆ. ಈ ಹೀರೋ ಹೊಂಡಾ ಕಂಪೆನಿಯು ಕಳೆದ 20 ವರ್ಷಗಳ ಹಿಂದೆಯೇ ಹೀರೋ ಮತ್ತು ಹೊಂಡಾ ಎಂಬುದಾಗಿ ಎರಡು ಕಂಪನಿಗಳಾಗಿವೆ. ಈಗ ನಾನು ನನ್ನ ವಾಹನಕ್ಕೆ ಹೆಚ್‌ಎಸ್‌ಆರ್ ಪ್ಲೇಟ್‌ನ ರಿಜಿಸ್ಟ್ರೇಷನ್‌ಗಾಗಿ ಸೈಬರ್ ಸೆಂಟರ್‌ಗೆ ಹೋದರೆ ಈ (ಹೀರೋ ಹೊಂಡಾ) ಹೆಸರಿನ ಕಂಪನಿಯೇ ಇಲ್ಲ ಎಂದು ಕಂಪ್ಯೂಟರ್ ತೋರಿಸುತ್ತದೆ. ಮತ್ತೊಮ್ಮೆ ತಾಂತ್ರಿಕ ದೋಷವಿದೆ ಎಂದು ತೋರುತ್ತದೆ. ಇದೇ ರೀತಿ ಸ್ಪ್ಲೆಂಡರ್ ಕಂಪನಿ ವಾಹನಗಳ ಸಮಸ್ಯೆಯು ಇದೆ ಎಂದು ಸಾರ್ವಜನಿಕರು ಹೇಳುತ್ತಾರೆ.

ಇಂತಹ ತಾಂತ್ರಿಕ ಸಮಸ್ಯೆಗಳನ್ನು ಪ್ರಾದೇಶಿಕ ಸಾರಿಗೆ ಅಧಿಕಾರಿಗಳು (ಆರ್.ಟಿ.ಓ.) ಮೊದಲು ಬಗೆಹರಿಸಬೇಕು. ಸರ್ಕಾರ ಈ ಬಗ್ಗೆ ಗಮನಹರಿಸಲಿ ಮತ್ತು ಹೆಚ್‌ಎಸ್‌ಆರ್ ಪ್ಲೇಟ್‌ಗಳ ಅಳವಡಿಕೆಯ ದಿನಾಂಕವನ್ನು ಇನ್ನೊಂದು ತಿಂಗಳ ಮಟ್ಟಿಗಾದರೂ ಮುಂದೂಡಬೇಕು.

–ಬೂಕನಕೆರೆ ವಿಜೇಂದ್ರ, ಕುವೆಂಪುನಗರ, ಮೈಸೂರು



ಡಾ.ರಮಾ ವಿ. ಬೆಣ್ಣೂರ್
ಸಂಗೀತ ವಿಮರ್ಶಕರು
ಮೊ: 99452 82346

ನಾದಲಹರಿ

ಎಂದೋ ವಿಶ್ವಗುರುವಾಗಿತ್ತು ನಮ್ಮ ಭಾರತ...!

ಜಗತ್ತಿನ ಅನೇಕ ನಾಗರಿಕತೆಗಳು ಇನ್ನೂ ಕಣ್ಣು ಬಿಡದಿದ್ದಾಗ ಭಾರತವು ಅದಾಗಲೇ ತನ್ನ ಸ್ವಂತಿಕೆಯನ್ನು, ಸಂಸ್ಕೃತಿಯನ್ನು, ಆಲೋಚನಾ ಕ್ರಮವನ್ನು ರೂಪಿಸಿಕೊಂಡು ಬದುಕಿನ ಅರ್ಥವನ್ನು ಕಂಡುಕೊಳ್ಳುವ ದಿಸೆಯಲ್ಲಾಗಲೇ ಬಲು ದೂರ ಉಪಕ್ರಮಿಸಿತ್ತು. ಸಂಗೀತ, ಸಾಹಿತ್ಯ, ಕಲೆ, ವಿಜ್ಞಾನ, ಶಿಲ್ಪ, ರಾಜಕೀಯ, ಸಂಸ್ಕೃತಿ ಯಾವುದೇ ಇರಲಿ ಅದರಲ್ಲಿ ಭಾರತವು ತನ್ನದೇ ಛಾಪನ್ನು ಒತ್ತಿರುವುದನ್ನು ಮುಕ್ತ ಮನಸುಗಳು ಗುರುತಿಸಿಯಾವು. ವಸುದೈವ ಕುಟುಂಬಕಮ್, ಸರ್ವೇ ಜನಾಃ ಸುಖಿನೋ ಭವಂತು ಎಂಬ ಉದಾತ್ತ ಭಾವನೆಗಳು ಭಾರತೀಯರ ಮನದಲ್ಲಿ ಎಂದೋ ಬೇರು ಬಿಟ್ಟಿತ್ತು. ಶಾಂತಿಪ್ರಿಯರಾದ ಭಾರತೀಯರು ಎಂದೂ ಮತ್ತೊಬ್ಬರ ಮೇಲೆ ತಾವಾಗಿಯೇ ಆಕ್ರಮಣ ಮಾಡಿದವರಲ್ಲ. ಯುದ್ಧಕ್ಕೆ ಹೊರಡುವ ಮುನ್ನ ಶತ್ರುವಿಗೆ ಸೂಚನೆ ಕೊಟ್ಟೇ ಹೊರಡುತ್ತಿದ್ದಂತಹ ಧೀಮಂತ ಕಲಿಗಳಾಗಿದ್ದರು. ಶರಣಾದವರಿಗೆ ತಮ್ಮ ಜೀವ ಕೊಟ್ಟಾದರೂ ಕಾಪಾಡುವಂತಹ ವೀರಾಗ್ರಣಿಗಳು.

ನಮ್ಮ ಋಷಿ ಮುನಿಗಳು ಬದುಕಿನ ಅರ್ಥವನ್ನು, ಗುರಿಯನ್ನು ಅರಸುವ ಕಾರ್ಯದಲ್ಲಿ, ಸಮಾಜಕ್ಕೆ ಒಳಿತನ್ನು ಬಯಸುವ ದಿಸೆಯಲ್ಲಿ, ವಿದ್ಯೆಯನ್ನು ಮುಂದಿನ ಪೀಳಿಗೆಗೆ ವರ್ಗಾಯಿಸುವ ಕಾರ್ಯದಲ್ಲಿ, ತಾವು ಕಂಡುಕೊಂಡಂತಹ ಸತ್ಯದ ದರ್ಶನವನ್ನು ಪಾತ್ರರಿಗೆ ಮಾಡಿಸುವ ಮಹಾನ್ ಕಾರ್ಯಕ್ಕಾಗಿ ತಮ್ಮ ಬದುಕನ್ನೇ ಮುಡುಪಾಗಿಟ್ಟ ಕಥೆಗಳನ್ನು ನಾವು ಕೇಳುತ್ತಲೇ ಬೆಳೆದಿದ್ದೇವೆ. ನಮ್ಮ ಋಷಿಮುನಿಗಳು ಗಳಿಸಿದ ಅಪಾರ ಜ್ಞಾನ ಭಂಡಾರಕ್ಕೆ ಸಾಕ್ಷಿಯಾಗಿ ಅವರಿಂದ ರಚಿತವಾದ ಶಾಸ್ತ್ರಗ್ರಂಥಗಳು ನಮ್ಮಲ್ಲಿವೆ. ಯಾವುದೇ ವಿಷಯದ ಬಗ್ಗೆಯಾದರೂ ತಲಸ್ಪರ್ಶಿಯಾದ ಶೋಧನೆ ಮಾಡುತ್ತಿದ್ದ ಅವರ ಸಹನೆ, ಕಷ್ಟ ಸಹಿಷ್ಣುತೆ, ಸಾಧನೆ, ಗುರಿ ಮುಟ್ಟುವ ಛಲ ಮುಂತಾದ ಗುಣಗಳು ಎಂದೆಂದಿಗೂ ಅನುಕರಣೀಯ. ವೇದ, ಉಪನಿಷತ್ತುಗಳು ಅವರ ಅಗಾಧ ಮುಂಗಾಣಿಕೆಗೆ, ಸಮಾಜಮುಖೀ ಚಿಂತನೆಗೆ ಹಿಡಿದ ಕೈಗನ್ನಡಿಯಾಗಿವೆ. ರಾಮಾಯಣ, ಮಹಾಭಾರತಗಳಲ್ಲಿ ಅಡಕವಾಗಿರುವ ಹತ್ತಾರು ವೈಜ್ಞಾನಿಕ ಸಂಗತಿಗಳ ಉಲ್ಲೇಖವು ಇಂದಿಗೂ ನಮಗೆ ವಿಸ್ಮಯಕಾರಿ ಸಂಗತಿಗಳಾಗಿಯೇ ಉಳಿದಿವೆ. ಅರ್ಥಶಾಸ್ತ್ರ, ಗಣಿತ, ವೈಮಾನಿಕ ಶಾಸ್ತ್ರ, ಗಜಶಾಸ್ತ್ರ, ಪಾಕಶಾಸ್ತ್ರ, ಖಗೋಳ. ಹೀಗೆ ಅವರ ಜ್ಞಾನದ ಹರಿವು ಬಲು ವಿಸ್ತಾರ.



> “ ನಮ್ಮ ಋಷಿಮುನಿಗಳು ಗಳಿಸಿದ ಅಪಾರ ಜ್ಞಾನ ಭಂಡಾರಕ್ಕೆ ಸಾಕ್ಷಿಯಾಗಿ ಅವರಿಂದ ರಚಿತವಾದ ಶಾಸ್ತ್ರ ಗ್ರಂಥಗಳು ನಮ್ಮಲ್ಲಿವೆ. ಯಾವುದೇ ವಿಷಯದ ಬಗ್ಗೆಯಾದರೂ ತಲಸ್ಪರ್ಶಿಯಾದ ಶೋಧನೆ ಮಾಡುತ್ತಿದ್ದ ಅವರ ಸಹನೆ, ಕಷ್ಟ ಸಹಿಷ್ಣುತೆ, ಸಾಧನೆ, ಗುರಿ ಮುಟ್ಟುವ ಛಲ ಮುಂತಾದ ಗುಣಗಳು ಎಂದೆಂದಿಗೂ ಅನುಕರಣೀಯ. ವೇದ, ಉಪನಿಷತ್ತುಗಳು ಅವರ ಅಗಾಧ ಮುಂಗಾಣಿಕೆಗೆ, ಸಮಾಜಮುಖೀ ಚಿಂತನೆಗೆ ಹಿಡಿದ ಕೈಗನ್ನಡಿಯಾಗಿವೆ.

ಸಾವಿರ ವರ್ಷಗಳ ಹಿಂದೆಯೇ ಕವಿರಾಜಮಾರ್ಗಕಾರನು ಕನ್ನಡಿಗರ ಗುಣ–ಲಕ್ಷಣಗಳನ್ನು ಶಬ್ದಗಳಲ್ಲಿ ಕಡೆದು ನಿಲ್ಲಿಸಿದ್ದಾನೆ. ಸೌಂದರ್ಯ ಎನ್ನುವುದು ಕೇವಲ ಅವರ ಭೌತಿಕ ರೂಪದಲ್ಲಷ್ಟೇ ಇರದೆ, ಅವರ ಸ್ವಭಾವದಲ್ಲೂ ಅದು ಮನೆ ಮಾಡಿತ್ತು ಎಂಬುದನ್ನು ಸರಳ–ನೇರ ಮಾತುಗಳಲ್ಲಿ ಹೇಳಿದ್ದಾನೆ. ಸಾಹಿತ್ಯ ಪ್ರೀತಿ, ರಚನೆ ಎನ್ನುವುದು ಕನ್ನಡಿಗರ ವ್ಯಕ್ತಿತ್ವದ ಒಂದು ಭಾಗವೇ ಆಗಿತ್ತು ಎಂಬಂತೆ ಅವರು ಕುರಿತೋದದೆಯುಂ ಕಾವ್ಯಪ್ರಯೋಗ ಪರಿಣತಮತಿಗಳ್? ಆಗಿದ್ದರು ಎನ್ನುವ ಅವನ ಮಾತಂತೂ ಅದೆಷ್ಟು ನಿಜವಾಗಿತ್ತು ಎಂಬುದಕ್ಕೆ ಇತ್ತೀಚಿನವರೆಗೂ ಹಳ್ಳಿಗಳಲ್ಲಿ ಸಿಗುತ್ತಿದ್ದ, ಅನೇಕ ಕಾವ್ಯಗಳನ್ನು ನಿರರ್ಗಳವಾಗಿ ಹಾಡಬಲ್ಲಂತಹ ಹಿರಿಯರು ಇರುತ್ತಿದ್ದುದೇ ಸಾಕ್ಷಿ. ಅವರಿಗೆ ಅಕ್ಷರ ಜ್ಞಾನ ಇರುತ್ತಿರಲಿಲ್ಲವಾದರೂ ಕನ್ನಡ ರಾಮಾಯಣ, ರನ್ನ, ಕುಮಾರ ವ್ಯಾಸ, ಜೈಮಿನಿ ಭಾರತ ಮುಂತಾದ ಕಾವ್ಯಗಳನ್ನು ಅದ್ಭುತವಾಗಿ ಹಾಡುವ, ವಿವರಿಸುವ ಕಲೆ ಒಲಿದಿತ್ತು. ಇಂತಹವರಿಂದಲೇ ಕನ್ನಡ ಕಾವ್ಯಗಳು ಉಳಿದು ಬಂದಿರುವುದು ಎಂದು ಅನೇಕ ಬಾರಿ ನನಗೆ ಅನಿಸಿದೆ. ಇದೇ ಗಮಕ ಕಲೆಯ ಮೂಲ ಅಲ್ಲವೇ?

ಆದಿಕವಿ ಪಂಪನಿಗಿಂತಲೂ ಮೊದಲೇ ಹಲವಾರು ಮಹಾನ್ ಕವಿಗಳು ನಮ್ಮಲ್ಲಿ ಇದ್ದರೆಂಬುದಕ್ಕೆ ಅವನೇ ಸಾಕ್ಷಿ. ತನ್ನ ಕಾವ್ಯದಲ್ಲಿ ಅವರನ್ನು ಸ್ಮರಿಸುವ ಮೂಲಕ ಅವರೆಲ್ಲರಿಗೆ ತನ್ನ ಗೌರವವನ್ನು ಪಂಪನು ಸಲ್ಲಿಸಿದ್ದಾನೆ. ಅವನ ನಂತರ ಬಂದಂತಹ ಕವಿಗಳಿಗೆಲ್ಲ ಒಂದು ಮಾರ್ಗವನ್ನು ಹಾಕಿಕೊಟ್ಟ ಪಂಪ ಯುಗಪುರುಷ ಎಂದೆನಿಸಿಕೊಂಡ. ಆಗಮ–ಲೌಕಿಕ ಕಾವ್ಯ ರಚನೆಯ ಸಮೃದ್ಧ ಸೃಷ್ಟಿಗೆ ಕಾರಣೀಭೂತನಾದ. ಪಂಪನ ಕಾವ್ಯದ ಅವಲೋಕನವು ಸಂಗೀತ ಮತ್ತು ನೃತ್ಯಕಲೆಗಳಲ್ಲಿ ಅವನಿಗಿದ್ದ ಪ್ರಾವೀಣ್ಯತೆಯನ್ನು ಸ್ಪಷ್ಟವಾಗಿ ತೋರಿಸುತ್ತವೆ. ಕುತಪ (ವಾದ್ಯ ವೃಂದ) ಗಳ ಬಗ್ಗೆಯಾಗಲೀ, ನೃತ್ಯದ ಜತಿಗಳ ಬಗ್ಗೆಯಾಗಲೀ ಮಾಡುವ ಅವನ ವರ್ಣನೆಗಳು ಓದುಗರಲ್ಲಿ ಒಂದು ಅಚ್ಚರಿಯ ಭಾವವನ್ನು ಹುಟ್ಟುಹಾಕುತ್ತವೆ. ಆತ ಕವಿ, ಕಲಿ ಮತ್ತು ಕಲಾಕಾರನೂ ಆಗಿದ್ದ ಎಂಬುದರಲ್ಲಿ ಸಂಶಯವಿಲ್ಲ. ನಂತರ ಬಂದ ಅನೇಕ ಕವಿಗಳು ತಮ್ಮ ಕಾವ್ಯದಲ್ಲಿ ಸಂದರ್ಭೋಚಿತವಾಗಿ ಸಂಗೀತ, ವಾದ್ಯ ಮತ್ತು ನರ್ತನಗಳನ್ನು ಅತ್ಯಂತ ಜಾಣ್ಮೆಯಿಂದ ಬಳಸಿಕೊಂಡಿರುವುದನ್ನು ಕಾಣಬಹುದು.

ಶಿಲ್ಪಕಲೆಯಲ್ಲಿಯೂ ಸಹ ಭಾರತೀಯರು ತಮ್ಮ ನೈಪುಣ್ಯವನ್ನು ಮೆರೆದಿರುವುದಕ್ಕೆ ಸಾಕ್ಷಿಯಾಗಿ ಇನ್ನೂ ಅಳಿದುಳಿದ ಶಿಲ್ಪ–ಗುಡಿಗೋಪುರಗಳು ತಮ್ಮ ಗತವೈಭವವನ್ನು ಸಾರುತ್ತಿರುವುದನ್ನು ಗಮನಿಸಬಹುದು. ಕರ್ನಾಟಕದ ಐಹೊಳೆ ಮತ್ತು ಪಟ್ಟದಕಲ್ಲುಗಳನ್ನು ಭಾರತೀಯ ಶಿಲ್ಪಕಲೆಯ ತೊಟ್ಟಿಲು? ಎಂದೇ ಇತಿಹಾಸಕಾರರು ಗುರುತಿಸುತ್ತಾರೆ. ಭಾರತದ ಉದ್ದಗಲಕ್ಕೂ ಅದೆಷ್ಟು ಗುಡಿಗಳ ಅವಶೇಷಗಳು ಉಳಿದುಬಂದಿಲ್ಲ! ಅಳಿದುಳಿದ ಕೋಟೆ ಕೊತ್ತಲಗಳಂತೂ ತಮ್ಮ ಗತವೈಭವವನ್ನು ಸಾರಿ ಸಾರಿ ಹೇಳುತ್ತಿವೆ. ಅದನ್ನು ಕೇಳಿಸಿಕೊಳ್ಳುವ, ಅವುಗಳ ಇತಿಹಾಸವನ್ನು ಸ್ಮರಿಸುವ, ಅದಕ್ಕಾಗಿ ಮಿಡಿವ ಮನಗಳು ಬೇಕಷ್ಟೆ. ಜಗತ್ತಿನ ಅನೇಕ ದೇಶಗಳಿಂದ ತಮ್ಮ ಜ್ಞಾನವನ್ನು ಹೆಚ್ಚಿಸಿಕೊಳ್ಳಲೆಂದೇ ಭಾರತಕ್ಕೆ, ಅದರ ವಿಶ್ವವಿಖ್ಯಾತ ವಿಶ್ವವಿದ್ಯಾಲಯಗಳಿಗೆ ಕಲಿಯಲು ಬರುತ್ತಿದ್ದ ಜ್ಞಾನ ಪಿಪಾಸುಗಳ ಕಾಲ ಒಂದಿತ್ತು. ಜ್ಞಾನ ಇಲ್ಲಿ ಮಡುಗಟ್ಟಿತ್ತು ಎಂದರೆ ಉತ್ಪ್ರೇಕ್ಷೆ ಅಲ್ಲ. ಅಂತಹ ಮಹಾನ್ ದೇಶದಲ್ಲಿ ಹುಟ್ಟಿರುವ ನಾವು ನಮ್ಮ ಪರಂಪರೆಯನ್ನು, ನಮ್ಮ ಪುರಾಣ, ಕಾವ್ಯ, ಉಪನಿಷತ್ತುಗಳ ಮಹತ್ವವನ್ನು, ಅದರ ಹಿರಿಮೆ ಗರಿಮೆಗಳನ್ನು ಅರಿಯುವ ಪ್ರಯತ್ನವನ್ನಾದರೂ ಮಾಡದೇ ಹೋದಲ್ಲಿ ಅದರಿಂದ ಉಂಟಾಗುವ ನಷ್ಟ ಯಾರಿಗೆ ಎಂಬುದನ್ನು ಕುರಿತು ಆಲೋಚಿಸಬೇಕು. ಇಡೀ ಜಗತ್ತಿಗೇ ಎಂದೋ ವಿಶ್ವಗುರು ಆಗಿದ್ದ ಭಾರತದ ಮೌಲ್ಯಗಳ ಬಗ್ಗೆ ತಿರಸ್ಕಾರವಾಗಲೀ, ಮೌಢ್ಯವಾಗಲೀ ಸಲ್ಲ. ಇಂದು ವಿದೇಶೀಯರು ನಮ್ಮ ಧರ್ಮ, ಮೌಲ್ಯ, ಆಚಾರ ವಿಚಾರಗಳ ಬಗ್ಗೆ ಆಸಕ್ತಿ ತೋರುತ್ತಿರುವಾಗ ನಮ್ಮಲ್ಲಿ ಅವಜ್ಞೆ ಇರಬಾರದಲ್ಲವೇ?

ಇಂತಹ ಹಲವಾರು ವಿಷಯಗಳ ಬಗ್ಗೆ ಚಿಂತನ–ಮಂಥನ ನಡೆಸುವ ಸುವಿಚಾರ ನಮ್ಮದು. ಓದುಗರಾದ ನೀವು ಇದನ್ನು ಸ್ವಾಗತಿಸುತ್ತೀರೆಂಬ ಅಗಾಧ ನಂಬಿಕೆ ನಮ್ಮದು. ಇದೇ ಅಂಕಣದಲ್ಲಿ ವಾರಕ್ಕೆ ಒಮ್ಮೆ ಸಂಗೀತ–ಸಾಹಿತ್ಯ–ಸಂಸ್ಕೃತಿ ಮುಂತಾದ ವಿಚಾರಗಳನ್ನು ಕುರಿತ ಲಹರಿ ನಿಮ್ಮ ಕೈ ಸೇರಲಿದೆ. ನಿಮ್ಮ ಅನಿಸಿಕೆ –ಅಭಿಪ್ರಾಯಗಳಿಗೆ ಸ್ವಾಗತ.

ನಮ್ಮ ಮೈಸೂರಿನ ಅಸಾಮಾನ್ಯರು



ಮಹಾರಾಜ ಮುಮ್ಮಡಿ ಕೃಷ್ಣರಾಜ ಒಡೆಯರಿಂದ ಹಿಡಿದು ಯದುವಂಶದ ಕೊನೆಯ ಮಹಾರಾಜರಾದ ಜಯಚಾಮರಾಜ ಒಡೆಯರ್ ಆಡಳಿತದ ಅವಧಿಯವರೆಗೆ ಅನೇಕ ಶ್ರೇಷ್ಠ ಮಹನೀಯರು ಮೈಸೂರು ರಾಜ್ಯದಲ್ಲಿ ಗಣನೀಯ ಸೇವೆ ಸಲ್ಲಿಸಿದ್ದಾರೆ. ಅಂತಹ ಕೆಲವರ ಹೆಸರುಗಳನ್ನು ಮೈಸೂರು ಚರಿತ್ರೆಗೆ ಸಂಬಂಧಪಟ್ಟ ಇತಿಹಾಸದ ಪುಸ್ತಕಗಳಲ್ಲಿ ಪ್ರಸ್ತಾಪಿಸಿರುವುದನ್ನು ನಾವು ಕಾಣುತ್ತೇವೆ. ಆಡಳಿತದ ಪ್ರಮುಖ ಹುದ್ದೆಯಲ್ಲಿದ್ದು, ಗಣನೀಯ ಸೇವೆ ಸಲ್ಲಿಸಿದ್ದ ಕೆಲವರ ಹೆಸರುಗಳು ಅವುಗಳಲ್ಲಿ ಕಂಡು ಬಂದರೂ, ಅವರಂತೆಯೇ ಸೇವೆ ಸಲ್ಲಿಸಿರುವ ಇತರ ನೂರಾರು ಮಂದಿ ಎಲ್ಲಿಯೂ ಪ್ರಸ್ತಾಪಗೊಳ್ಳದೆ ಎಲೆಮರೆಕಾಯಿಯಾಗಿ ಉಳಿದು ಹೋಗಿದ್ದಾರೆ. ನೆನಪಿನ ಅಂಗಳದಿಂದ ಜಾರಿ ಹೋಗಿದ್ದಾರೆ. ಹಾಗೆ ಸೇವೆ ಸಲ್ಲಿಸಿದರಲ್ಲಿ ಹಲವಾರು ಮಂದಿ ಅಂದಿಗೆ ಖ್ಯಾತನಾಮರಾಗಿದ್ದರೂ ಇಂದು ಅವರ ಬಗ್ಗೆ ನಮಗೆ ಹೆಚ್ಚು ತಿಳಿಯದೆ ಹೋಗಿವೆ. ನೆನಪಿನಿಂದ ಅಳಿಸಿಹೋಗಿದ್ದಾರೆ. ಕೆಲವರ ಸೇವೆಯನ್ನಾದರೂ ಇಲ್ಲಿ ಗುರುತಿಸುವ ಪ್ರಯತ್ನ ನನ್ನದು. ಇಂತಹ ಪ್ರಯತ್ನ ಬಹಳ ಹಿಂದೆಯೇ ಪ್ರಾರಂಭಿಸುವ ಉದ್ದೇಶ ಹೊಂದಿದ್ದರೂ, ಅದು ಈಗ ಸಾಧ್ಯವಾಗುತ್ತಿದೆ. ನೆನಪಿನಂಗಳದಿಂದ ಮರೆಯಾದ ಮಹನೀಯರ ಪರಿಚಯ ಒಂದು ಮಾಲಿಕೆಯಾಗಿ ಪ್ರಕಟಗೊಳ್ಳಲಿದೆ. ಅವು 'ಮೈಸೂರು ಮಿತ್ರ' ಓದುಗರಿಗೆ ಮೆಚ್ಚುಗೆಯಾದರೆ, ಅದೇ ನನಗೆ ಬರೆದ ತೃಪ್ತಿ.

23.ಮಹಮ್ಮದ್ ಜ಼ಹೀರುದ್ದೀನ್ ಮ್ಯಾಕಿ





ಗೌರಿ ಸತ್ಯ
ಹಿರಿಯ ಪತ್ರಕರ್ತರು
ಮೊ. 87627 88685

ಮಹಾರಾಜರ ಅವಧಿಯಲ್ಲಿ ಹಲವಾರು ಮುಸ್ಲಿಮರು ಆಡಳಿತದಲ್ಲಿ ಪಾಲ್ಗೊಂಡು ಅಧಿಕಾರ ನಡೆಸಿದರು. ಅಂತಹವರಲ್ಲಿ ಒಬ್ಬರು ಮಹಮ್ಮದ್ ಜಹೀರುದ್ದೀನ್ ಮ್ಯಾಕಿ. ಮೈಸೂರಿನ ಪೊಲೀಸ್ ಸೂಪರಿಂಟೆಂಡೆಂಟ್‌ರಾಗಿ ಇವರು ಪೊಲೀಸ್ ಇಲಾಖೆಯಲ್ಲಿ ಉನ್ನತ ಸ್ಥಾನದಲ್ಲಿದ್ದರು ಎಂಬುದು ಗಮನಾರ್ಹ. ಸುಮಾರು 1950ರಲ್ಲಿ ಇವರಂತೆಯೇ ಖ್ವಾದಿರ್ ಆಲಿ ಎಂಬುವರು ಮೈಸೂರಿನ ಪೊಲೀಸ್ ಸೂಪರಿಂಟೆಂಡೆಂಟ್ ಆಗಿದ್ದರು ಎಂಬುದನ್ನು ಇಲ್ಲಿ ಸ್ಮರಿಸಿಕೊಳ್ಳಬಹುದು.

1872ರ ಡಿಸೆಂಬರ್ ತಿಂಗಳ 10ರಂದು ಬೆಂಗಳೂರಿನಲ್ಲಿ ಜನಿಸಿದ ಮ್ಯಾಕಿ ಅವರು ಸರ್‌ಖಾಜಿ ಕುಟುಂಬಕ್ಕೆ ಸೇರಿದವರಾಗಿದ್ದರು. ಸರ್‌ಖಾಜಿ ಕುಟುಂಬದ ಸದಸ್ಯರು ಸತತವಾಗಿ ಬೆಂಗಳೂರು ಮತ್ತು ಸುತ್ತಮುತ್ತಲಿನ ಪ್ರದೇಶಗಳು, ಬೆಂಗಳೂರು ಸಿವಿಲ್ ಮತ್ತು ಲಿಬರ್ಟಿ ಸ್ಟೇಷನ್ ಹಾಗೂ ಕೋಲಾರದ ಖಾಜಿಗಳಾಗಿದ್ದರು. ಖಾಜಿಗಳ ನೇಮಕ ಅಕ್ಬರ್ ಕಾಲದಿಂದ ಸನ್ನದುಗಳ ಮೂಲಕ ನಡೆದು ಬಂದಿತ್ತು. ಈ ಪದ್ಧತಿಯನ್ನು ಮಹಾರಾಜ ನಾಲ್ವಡಿ ಕೃಷ್ಣರಾಜ ಒಡೆಯರೂ ಮುಂದುವರಿಸಿಕೊಂಡು ಬಂದಿದ್ದರು. ಕುಟುಂಬದ ಇತರೇ ಸದಸ್ಯರೂ ಇಂತಹ ಸನ್ನದುಗಳ ಮೂಲಕ ಶ್ರೀರಂಗಪಟ್ಟಣ, ಹೊಸಕೋಟೆ, ಚಿತ್ರದುರ್ಗ ಮುಂತಾದ ಊರುಗಳ ಖಾಜಿಗಳಾಗಿದ್ದರು.

ಮ್ಯಾಕಿ ಅವರ ಚಿಕ್ಕಪ್ಪ ಬಹಳ ಹಿಂದಿನಿಂದ ಬೆಂಗಳೂರಿನ ಖಾಜಿಗಳಾಗಿದ್ದವರ ವಂಶದವರು. 28 ವರ್ಷಗಳ ಕಾಲ ಮೈಸೂರು ಸರ್ಕಾರದಲ್ಲಿ ಸೇವೆ ಸಲ್ಲಿಸಿದ್ದುದನ್ನು ಗುರುತಿಸಿ 1872ರ ಜನವರಿಯಲ್ಲಿ ಮೈಸೂರಿನ ಚೀಫ್ ಕಮೀಷನರ್ ಸಿ. ಸ್ಯಾಂಡರ್ಸ್ ಅವರು ಮ್ಯಾಕಿ ಅವರ ಚಿಕ್ಕಪ್ಪನವರಿಗೆ ಭಾರತದ ಸಾಮ್ರಾಜ್ಞಿಯಾಗಿದ್ದ ವಿಕ್ಟೋರಿಯಾ ರಾಣಿಯ ಹೆಸರಿನಲ್ಲಿ ಪ್ರಶಂಸಾ ಪತ್ರವೊಂದನ್ನು ನೀಡಿ ಗೌರವಿಸಿದ್ದರು.

ಮ್ಯಾಕಿ ಅವರ ವಂಶಸ್ಥರು ಪೂರ್ವದಲ್ಲಿ ಮೆಕ್ಕಾದಿಂದ ಭಾರತಕ್ಕೆ ಬಂದು ನೆಲೆಸಿದ್ದರು. ಮಹಮ್ಮದ್ ಜ಼ಹೀರುದ್ದೀನ್ ಹೆಸರಿಗೆ ಸೇರಿದ್ದ ಮ್ಯಾಕಿ ಇದನ್ನು ಸೂಚಿಸುತ್ತದೆ. 1872ರಲ್ಲಿ ಬೆಂಗಳೂರಿನಲ್ಲಿ ಜನಿಸಿದ ಮ್ಯಾಕಿ ಬೆಂಗಳೂರಿನ ಸೆಂಟ್ರಲ್ ಕಾಲೇಜಿನಲ್ಲಿ ಓದಿ ಮದ್ರಾಸ್ ವಿಶ್ವವಿದ್ಯಾನಿಲಯದಿಂದ 1893ರಲ್ಲಿ ಬಿ.ಎ. ಪದವಿ ಗಳಿಸಿದ್ದರಲ್ಲದೆ, ಕಾನೂನುಶಾಸ್ತ್ರದ ಬಿ.ಎಲ್. ಪದವಿಗಾಗಿ ಮದ್ರಾಸಿನ ಕಾನೂನು ಕಾಲೇಜಿನಲ್ಲಿ ಶಿಕ್ಷಣ ಮುಂದುವರಿಸಿದರು. 1895ರಲ್ಲಿ ಎಫ್.ಎಲ್. ಪರೀಕ್ಷೆಯಲ್ಲಿ ಉತ್ತೀರ್ಣರಾದರು. ಅದೇ ಅವಧಿಯಲ್ಲಿ ಮದ್ರಾಸಿನ ಕ್ರಿಶ್ಚಿಯನ್ ಕಾಲೇಜಿನಲ್ಲಿ ವಿಜ್ಞಾನ ವಿಷಯವನ್ನೂ ಅಭ್ಯಾಸ ಮಾಡಿದರು. ಮೈಸೂರು ಸರ್ಕಾರದಿಂದ ವಿದ್ಯಾರ್ಥಿವೇತನ ಪಡೆಯುತ್ತಿದ್ದ ಕೆಲವೇ ವಿದ್ಯಾರ್ಥಿಗಳಲ್ಲಿ ಇವರೂ ಒಬ್ಬರಾಗಿದ್ದರು. ಮೈಸೂರು ಸರ್ಕಾರ ಈ ವಿದ್ಯಾರ್ಥಿವೇತನವನ್ನು ಮದ್ರಾಸ್ ವಿಶ್ವವಿದ್ಯಾನಿಲಯದ ಪರೀಕ್ಷೆಗಳಲ್ಲಿ ಅತೀ ಹೆಚ್ಚಿನ ಅಂಕ ಪಡೆದು ಉತ್ತೀರ್ಣರಾಗಿ ಮೊದಲ ಸ್ಥಾನದಲ್ಲಿ ನಿಲ್ಲುತ್ತಿದ್ದ ಮೈಸೂರು ಪ್ರಾಂತದ ವಿದ್ಯಾರ್ಥಿಗಳಿಗೆ ನೀಡುತ್ತಿತ್ತು. ಇದಲ್ಲದೆ ಕಾನೂನು ಕಾಲೇಜಿನಲ್ಲಿ ಓದುತ್ತಿದ್ದಾಗ ಮೈಸೂರು ಮಹಾರಾಜರ ಸರ್ಕಾರದಿಂದ 200 ರೂ.ಗಳ ವಿದ್ಯಾರ್ಥಿವೇತನವನ್ನು ಪಡೆದುಕೊಳ್ಳುತ್ತಿದ್ದರು. ಅಲ್ಲದೆ ಹೈದರಾಬಾದಿನ ನಿಜಾಂ ಸರ್ಕಾರ ಪ್ರತಿ ತಿಂಗಳೂ ಕೊಡುವ 45 ರೂ. ವಿದ್ಯಾರ್ಥಿವೇತನಕ್ಕೂ ಅವರು ಅರ್ಹರಾಗಿದ್ದರು.

ದಕ್ಷಿಣ ಭಾರತದಲ್ಲಿ ಅಂದು ಖ್ಯಾತ ಶಿಕ್ಷಣ ತಜ್ಞರಾಗಿದ್ದ ಜೆ.ಕುಕ್‌ಅವರು ಮ್ಯಾಕಿಯವರ ಬಗ್ಗೆ ಬರೆಯುತ್ತಾ, 'ಮ್ಯಾಕಿ ನಾನು ಹಿಂದೆಂದೂ ಪಡೆಯದಿದ್ದ ಅತ್ಯಂತ ಪ್ರತಿಭಾನ್ವಿತ ಮುಸ್ಲಿಂ ವಿದ್ಯಾರ್ಥಿ ಹಾಗೂ ಪ್ರಾಯಶಃ ಮದ್ರಾಸ್ ವಿಶ್ವವಿದ್ಯಾನಿಲಯದಲ್ಲಿ ಉತ್ತೀರ್ಣರಾಗಿರುವ ಪ್ರತಿಭಾನ್ವಿತ ವಿದ್ಯಾರ್ಥಿಗಳ ಪೈಕಿ ಅತ್ಯಂತ ಪ್ರತಿಭಾನ್ವಿತ' ಎಂದು ಪ್ರಶಂಸಿಸಿದ್ದರು.

ಇವರ ಪ್ರತಿಭೆಯನ್ನು ಗುರುತಿಸಿ ದಿವಾನ್ ಕೆ. ಶೇಷಾದ್ರಿ ಅಯ್ಯರ್ ಅವರು ಮಾಡಿದ್ದ ಸಲಹೆಯ ಮೇಲೆ ಮೈಸೂರಿನ ರೀಜೆಂಟ್ ವಾಣೀ ವಿಲಾಸ ಸನ್ನಿಧಾನದವರು ಮ್ಯಾಕಿ ಅವರನ್ನು ಪ್ರೊಬೇಷನರಿ ಅಸಿಸ್ಟೆಂಟ್ ಪೊಲೀಸ್ ಸೂಪರಿಂಟೆಂಡೆಂಟರನ್ನಾಗಿ ನವೆಂಬರ್ 1897ಲ್ಲಿ ನೇಮಕ ಮಾಡಿದರು. ಕೆಲ ದಿನಗಳಲ್ಲೇ ಅವರನ್ನು ಚಿತ್ರದುರ್ಗ ಜಿಲ್ಲೆಗೆ ವರ್ಗ ಮಾಡಿ ಅಲ್ಲಿನ ಗಡಿ ಪ್ರದೇಶದ ಪ್ಲೇಗ್ ಆಫೀಸರನ್ನಾಗಿ ನೇಮಕ ಮಾಡಲಾಯಿತು. ಆದರೆ ಬೆಂಗಳೂರಿನಲ್ಲಿ ಭೀಕರವಾಗಿ ಪ್ಲೇಗ್ ತಲೆ ಎತ್ತಿದ್ದರಿಂದ 1898ರಲ್ಲಿ ಇವರನ್ನು ಚಿತ್ರದುರ್ಗದಿಂದ ಅಲ್ಲಿಗೆ ವರ್ಗಾ ಮಾಡಲಾಯಿತು. ವಿಶೇಷ ಕಾರ್ಯದ ಮೇಲೆ ಅವರನ್ನು ಬೆಂಗಳೂರಿಗೆ ವರ್ಗಾ ಮಾಡಿದ್ದ ಉದ್ದೇಶವಾದರೋ ಪ್ಲೇಗ್ ಖಾಯಿಲೆಗೆ ಒಳಗಾಗಿದ್ದ ಮುಸ್ಲಿಂ ಜನಾಂಗದವರ ಬಗ್ಗೆ ಹೆಚ್ಚು ಗಮನ ನೀಡುವುದು. ಅಲ್ಲಿನ ಪ್ಲೇಗ್ ನಿವಾರಣಾ ಕಾರ್ಯಗಳ ಬಗ್ಗೆ ಆ ಜನಾಂಗದವರು ತೀವ್ರ ಆಕ್ಷೇಪಣೆ ಮಾಡುತ್ತಿದ್ದ ಕಾರಣ ಮುಸ್ಲಿಂ ಅಧಿಕಾರಿಯೊಬ್ಬರನ್ನು ಅಲ್ಲಿಗೆ ವರ್ಗಾಯಿಸುವುದು ಅವಶ್ಯಕವಾಗಿ ಕಂಡು ಬಂದು ಅವರನ್ನು ಬೆಂಗಳೂರಿಗೆ ವರ್ಗಾ ಮಾಡಲಾಗಿತ್ತು. ಹಲವಾರು ಶತಮಾನಗಳ ಕಾಲ ಬೆಂಗಳೂರಿನ ಕ್ವಾಜಿಯಾಗಿ ಸೇವೆ ಸಲ್ಲಿಸಿದ್ದ ವಂಶದವರಾಗಿದ್ದ ಇವರಿಗೆ ತಮ್ಮ ಜನಾಂಗದವರ ಆಕ್ಷೇಪಣೆಗಳನ್ನು ನಿವಾರಿಸುವುದು ಕಷ್ಟದ ಕೆಲಸವಾಗಿರಲಿಲ್ಲ. ಅವರ ಅನುಮಾನಗಳನ್ನು ಪರಿಹರಿಸಿ ಚುಚ್ಚುಮದ್ದನ್ನು ಜನಪ್ರಿಯಗೊಳಿಸಿದರು. ಪ್ಲೇಗ್ ಬಗ್ಗೆ ಮುಸ್ಲಿಮರಲ್ಲಿ ಜಾಗೃತಿಯನ್ನು ತರಲು ಉರ್ದು ಭಾಷೆಯಲ್ಲಿ ಮಾಹಿತಿ ಪತ್ರವೊಂದನ್ನು ಪ್ರಕಟಿಸಿದರು. ಅವರು ಪ್ರಕಟಿಸಿದ್ದ ಉರ್ದು ಭಾಷೆಯ ಮಾಹಿತಿ ಪತ್ರವನ್ನು ನಂತರ ಇಂಗ್ಲಿಷ್ ಭಾಷೆಗೂ ತರ್ಜುಮೆ ಮಾಡಿ ಎಲ್ಲಾ ಜನಾಂಗದವರಿಗೂ ಹಂಚಲಾಯಿತು. ಇದರಿಂದಾಗಿ ಭೀಕರವಾಗಿ ವ್ಯಾಪಿಸುತ್ತಿದ್ದ ಪ್ಲೇಗ್ ಮಾರಿಯ ಬಗ್ಗೆ ಜಾಗೃತಿಯನ್ನು ತರಲು ಸಾಧ್ಯವಾಯಿತು. ಹೀಗಾಗಿ ಬೆಂಗಳೂರಿನಲ್ಲಿ ಪ್ಲೇಗ್ ನಿವಾರಣೆಯಲ್ಲಿ ಇವರು ಹೆಚ್ಚಿನ ಯಶಸ್ಸು ಸಾಧಿಸಿದರು. ಇವರ ಕಾರ್ಯ ಸಾಧನೆಯನ್ನು ದಕ್ಷಿಣ ಭಾರತದ ವೃತ್ತಪತ್ರಿಕೆಗಳು ಮತ್ತು ಆಗ ಪ್ಲೇಗ್ ಕಮೀಷನರ್ ಆಗಿ ಮುಂದೆ ದಿವಾನರಾದ ವಿ.ಪಿ.ಮಾಧವರಾವ್ ಮುಕ್ತಕಂಠದಿಂದ ಪ್ರಶಂಸಿಸಿದರು. ಇಂಗ್ಲಿಷ್ ಭಾಷೆಯ ಮಾಹಿತಿ ಪತ್ರವನ್ನು ಸರ್ಕಾರದ ಖರ್ಚಿನಲ್ಲಿ ಪ್ರಕಟಿಸಿ ರಾಜ್ಯದಲ್ಲೆಲ್ಲಾ ಹಂಚುವಂತೆ ಮಾಧವರಾವ್ ಆಜ್ಞೆ ಮಾಡಿದರು.

ಜನವರಿ 1899ರಲ್ಲಿ ಮ್ಯಾಕಿ ಮೈಸೂರಿನ ಪ್ಲೇಗ್ ವಿಶೇಷಾಧಿಕಾರಿಯಾಗಿ ನೇಮಕಗೊಂಡರಾದರೂ, ಮುಂದಿನ ತಿಂಗಳಿನಲ್ಲಿಯೇ ಅವರನ್ನು ವಿಶೇಷಾಧಿಕಾರಿಯನ್ನಾಗಿ ನೇಮಿಸಿ ಪ್ಲೇಗಿನಿಂದಾಗಿ ಮೈಸೂರು ನಗರದಲ್ಲಿ ಕೆಡವಬೇಕಾಗಿದ್ದ ಮನೆಗಳನ್ನು ಗುರುತಿಸುವ ಜವಾಬ್ದಾರಿಯನ್ನು ಅವರಿಗೆ ವಹಿಸಲಾಯಿತು. ಫ್ರೆಂಚ್‌ರಾಕ್ಸ್ (ಪಾಂಡವಪುರ) ಮತ್ತು ಚಿತ್ರದುರ್ಗಗಳ ಪೊಲೀಸ್ ಅಧಿಕಾರಿಯಾಗಿಯೂ ಸ್ವಲ್ಪ ಕಾಲ ಕರ್ತವ್ಯ ನಿರ್ವಹಿಸಿದ್ದ ಇವರಿಗೆ 1904ರಲ್ಲಿ ಪೊಲೀಸ್ ಸೂಪರಿಂಟೆಂಡೆಂಟ್ ಹುದ್ದೆಗೆ ಸರಿಸಮಾನವಾಗಿ ಮೇಲ್ಬಡ್ತಿಕೊಡಲಾಯಿತು.

ನಾಲ್ವಡಿ ಕೃಷ್ಣರಾಜರ ಮದುವೆ ಸಂದರ್ಭದಲ್ಲಿ ಮಹಾರಾಜರನ್ನು ಅಧಿಕಾರ ಪೀಠದ ಮೇಲೆ ಕೂರಿಸಲು ವೈಸರಾಯ್ ಲಾರ್ಡ್‌ಕರ್ಜ಼ನ್ ಮೈಸೂರಿಗೆ ಭೇಟಿ ಕೊಟ್ಟಾಗ ಹಾಗೂ ಎರಡು ವರ್ಷಗಳ ನಂತರ ವೇಲ್ಸ್‌ನ ರಾಜಕುಮಾರ ಮತ್ತು ರಾಜಕುಮಾರಿ ಮೈಸೂರಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಅಗತ್ಯ ವ್ಯವಸ್ಥೆಗಳನ್ನು ಮಾಡಲು ಮ್ಯಾಕಿ ಅವರನ್ನು 1906ರಲ್ಲಿ ವಿಶೇಷ ಕರ್ತವ್ಯಾಧಿಕಾರಿಯನ್ನಾಗಿ ನೇಮಕ ಮಾಡಲಾಯಿತು. ಅದೇ ವರ್ಷ ಅವರಿಗೆ ಒಂದನೇ ಶ್ರೇಣಿಯ ಅಸಿಸ್ಟೆಂಟ್ ಕಮೀಷನರ್ ಆಗಿ ಬಡ್ತಿ ನೀಡಿ, ಮೈಸೂರಿನ ಪೊಲೀಸ್ ಕಮೀಷನರ್ ಸ್ಥಾನಕ್ಕೆ ನೇಮಿಸಲಾಯಿತು. ಕ್ರೀಡೆಗಳಲ್ಲಿ ಆಸಕ್ತಿಯಿದ್ದ ಅವರು ಪೊಲೀಸರಲ್ಲಿ ಕ್ರೀಡೆಗಳಲ್ಲಿ ಆಸಕ್ತಿ ಹೆಚ್ಚಿಸಲು 'ಶ್ರೀ ಕೃಷ್ಣರಾಜ ಪೊಲೀಸ್ ವ್ಯಾಯಾಮಶಾಲೆ'ಯ ವ್ಯವಸ್ಥೆ ಮಾಡಿದರು.

ಮ್ಯಾಕಿ ಅವರು ಚಿತ್ರದುರ್ಗದಲ್ಲಿದ್ದಾಗ ಮೊಳಕಾಲ್ಮೂರಿನಲ್ಲಿ ವಾಸವಾಗಿದ್ದ ಮುಸ್ಲಿಮರ ಸ್ಥಿತಿಗತಿಯನ್ನು ಉತ್ತಮಪಡಿಸಲು ಹಾಗೂ ಹಿಂದೂಗಳು ಮತ್ತು ಮುಸ್ಲಿಂ ಜನಾಂಗದ ನಡುವೆ ಹೆಚ್ಚಿನ ಸೌಹಾರ್ದ ಬೆಳೆಸಲು ತಮ್ಮ ಜನಾಂಗದವರು ಸಹಕಾರಿ ಸಂಘವೊಂದನ್ನು ಸ್ಥಾಪಿಸಿಕೊಳ್ಳಲು ಕಾರಣಕರ್ತರಾದರು. ಅವರ ಈ ಪ್ರಯತ್ನ ಮಹಾರಾಜರ ಮೆಚ್ಚುಗೆ ಪಡೆಯಿತು. ಮೂರು ವರ್ಷಗಳ ನಂತರ ಈ ಸಹಕಾರಿ ಸಂಘವನ್ನು ಅಲ್ಲಿಂದ ಬದಲಾಯಿಸಿದಾಗ ಅದರ ಹೆಸರನ್ನು 'ಜ಼ಹೀರ್–ಉಲ್–ಇಸ್ಲಾಂ ಸಹಕಾರಿ ಸಂಘ' ವೆಂದು ಬದಲಾಯಿಸಲಾಯಿತು. ಹೀಗೆ ಮೈಸೂರು ರಾಜ್ಯದಲ್ಲಿ ಹಲವಾರು ಪ್ರಮುಖ ಸ್ಥಾನಗಳಲ್ಲಿ ಸೇವೆ ಸಲ್ಲಿಸಿ ಮಹಮ್ಮದ್ ಜ಼ಹೀರುದ್ದೀನ್ ಮ್ಯಾಕಿ ನಿವೃತ್ತರಾದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com, website: www.mysurumithra.com

ಮೈಸೂರು ಮಿತ್ರ

ಪ್ರವಾಸೋದ್ಯಮ ಅಭಿವೃದ್ಧಿಗೆ ಹೂಡಿಕೆದಾರರ ಆಕರ್ಷಿಸಲು ನೂತನ ನೀತಿ ಜಾರಿ

● ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾಹಿತಿ
● ದಕ್ಷಿಣ ಭಾರತ ಉತ್ಸವ ಕಾರ್ಯಕ್ರಮದಲ್ಲಿ ಭಾಗಿ; ಹೆಚ್ಚಿನ ಪ್ರವಾಸಿಗರ ಸೆಳೆಯಲು ಕಾರ್ಯಸೂಚಿ



ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಮಹಾಸಂಸ್ಥೆ (ಎಫ್‌ಕೆಸಿಸಿಐ) ಮತ್ತು ಪ್ರವಾಸೋದ್ಯಮ ಇಲಾಖೆ ಆಯೋಜಿಸಿದ್ದ ದಕ್ಷಿಣ ಭಾರತ ಉತ್ಸವ ಕಾರ್ಯಕ್ರಮವನ್ನು ಡಿಸಿಎಂ ಡಿ.ಕೆ.ಶಿವಕುಮಾರ್ ಉದ್ಘಾಟಿಸಿದರು.

ಬೆಂಗಳೂರು, ಜೂ.15(ಕೆಎಂಶಿ)– ಕರ್ನಾಟಕ ಸರ್ಕಾರ ಪ್ರವಾಸೋದ್ಯಮದ ಅಭಿವೃದ್ಧಿಗೆ ಬದ್ಧವಾಗಿದ್ದು, ಹೆಚ್ಚು ಬಂಡವಾಳ ಆಕರ್ಷಣೆಗೆ ಪ್ರವಾಸೋದ್ಯಮ ನೀತಿ ಜಾರಿಗೆ ತರಲು ಉದ್ದೇಶಿಸಲಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇಂದಿಲ್ಲಿ ತಿಳಿಸಿದ್ದಾರೆ.

ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಮಹಾಸಂಸ್ಥೆ (ಎಫ್‌ಕೆಸಿಸಿಐ) ಮತ್ತು ಪ್ರವಾಸೋದ್ಯಮ ಇಲಾಖೆ ಆಯೋಜಿಸಿದ್ದ ದಕ್ಷಿಣ ಭಾರತ ಉತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಪ್ರವಾಸೋದ್ಯಮ ನೀತಿಯಿಂದ ಹೆಚ್ಚು ಹೂಡಿಕೆದಾರರನ್ನು ಸೆಳೆಯಬಹುದು, ಕೈಗಾರಿಕೋದ್ಯಮಿಗಳು ಬಲಗೊಂಡಷ್ಟು ಉದ್ಯೋಗ ಸೃಷ್ಟಿಯಾಗುತ್ತದೆ, ಸರ್ಕಾರ ಬಲಗೊಳ್ಳುತ್ತದೆ ಎಂದರು.

ಆಂಧ್ರ, ತಮಿಳುನಾಡು, ಪಾಂಡಿಚೇರಿ, ತೆಲಂಗಾಣದ ಪ್ರತಿನಿಧಿಗಳು ಅನುಭವಗಳನ್ನು ಹಂಚಿಕೊಳ್ಳಬೇಕು, ಕರ್ನಾಟಕ ರಾಜ್ಯ 300 ಕಿ.ಮೀ.ಗೂ ಹೆಚ್ಚು ಕರಾವಳಿ ಪ್ರದೇಶ ಹೊಂದಿದೆ, ಸಾಗರೋತ್ತರ ಉದ್ದಿಮೆಯ ಅಭಿವೃದ್ಧಿಗೆ ಸಲಹೆ ನೀಡಿ.

ನೀರಾವರಿ ಹಾಗೂ ಬೆಂಗಳೂರು ಅಭಿವೃದ್ಧಿಗೆ ಸಲಹೆ ಸೂಚನೆಗಳನ್ನು ನಿರೀಕ್ಷೆ ಮಾಡುತ್ತೇನೆ, ಬೆಂಗಳೂರು ಐಟಿ, ಬಿಟಿ ಸೇರಿದಂತೆ ಅನೇಕ ಕ್ಷೇತ್ರಗಳಲ್ಲಿ ಸದೃಢವಾಗಿದೆ, ಬೆಂಗಳೂರಿಗೆ ಹೆಚ್ಚಿನ ಪ್ರಮಾಣದಲ್ಲಿ ಪ್ರವಾಸಿಗರನ್ನು ಸೆಳೆಯಲು ಕಾರ್ಯಸೂಚಿ ಸಿದ್ಧಪಡಿಸಬೇಕು. ಕಬ್ಬನ್ ಪಾರ್ಕ್, ಲಾಲ್‌ಬಾಗ್ ಪ್ರವಾಸಿಗರನ್ನು ಸೆಳೆಯುತ್ತಿದ್ದವು, ಈಗ ಹೊಸ ಪೀಳಿಗೆಗೆ ಹೊಸತನ್ನು ನೀಡಬೇಕಿದೆ, ಅದಕ್ಕಾಗಿ ಸ್ಕೈಡೆಕ್ ನಿರ್ಮಾಣಕ್ಕೆ ಯೋಜಿಸಲಾಗಿದೆ, ಅನೇಕ ಪ್ರಸಿದ್ಧ ನಗರಗಳಲ್ಲಿ ಎತ್ತರದ ಗೋಪುರಗಳು ಆಕರ್ಷಣೀಯ ಕೇಂದ್ರಗಳಾಗಿವೆ, ಅದರಂತೆ ಬೆಂಗಳೂರಿನಲ್ಲೂ ನಿರ್ಮಾಣಕ್ಕೆ ಯೋಜನೆ ರೂಪಿಸಲಾಗಿದೆ, ಮುಂದಿನ 8–10 ದಿನಗಳಲ್ಲಿ ಟೆಂಡರ್ ಕರೆಯಲಾಗುವುದು. ಬೃಂದಾವನ ಉದ್ಯಾನವನ್ನು ಡಿಸ್ನಿಲ್ಯಾಂಡ್ ಮಾದರಿಯಲ್ಲಿ ಅಭಿವೃದ್ಧಿಪಡಿಸಲಾಗುವುದು, ಕಳೆದ ಬಜೆಟ್‌ನಲ್ಲೇ ಅನುದಾನ ನೀಡಲು ತೀರ್ಮಾನಿಸಲಾಗಿತ್ತು.

ಕಾಂಗ್ರೆಸ್ ಅಧಿಕಾರಕ್ಕೆ ಬಂದ ನಂತರ ಬ್ರ್ಯಾಂಡ್ ಬೆಂಗಳೂರು ಯೋಜನೆಯಡಿ ಕಸ ವಿಲೇವಾರಿ, ನೀರು, ರಸ್ತೆ, ಮೂಲ ಸೌಕರ್ಯ ಅಭಿವೃದ್ಧಿ, ಟ್ರಾಫಿಕ್ ಸೇರಿದಂತೆ ಅನೇಕ ಸಮಸ್ಯೆಗಳ ನಿವಾರಣೆಗೆ ಸಾಕಷ್ಟು ಯೋಜನೆ ಹಾಕಿಕೊಳ್ಳಲಾಗಿದೆ.

ಶೇ.18ಕ್ಕೂ ಹೆಚ್ಚಿನ ಜಿಎಸ್‌ಟಿ ಪ್ರವಾಸೋದ್ಯಮವನ್ನು ಕೊಲ್ಲುತ್ತಿದೆ. ಇದರ ಬಗ್ಗೆ ಕೇಂದ್ರ ಎಚ್ಚೆತ್ತುಕೊಳ್ಳುವಂತೆ ದಕ್ಷಿಣ ಭಾರತೀಯರು ಹೋರಾಡಬೇಕು, ಬ್ಯಾಂಕ್ ಬಡ್ಡಿ ದರ, ಇತರೇ ತೆರಿಗೆಗಳು ಸೇರಿ ಅರ್ಧಕ್ಕೂ ಹೆಚ್ಚು ಹಣ ಕೇಂದ್ರದ ಪಾಲಾದರೆ ಹೂಡಿಕೆದಾರರು ಪ್ರವಾಸೋದ್ಯಮದ ಕಡೆ ಗಮನಹರಿಸುವುದಿಲ್ಲ, ಹೂಡಿಕೆದಾರ ಸ್ನೇಹಿ ವಾತಾವರಣ ನಿರ್ಮಾಣ ಮಾಡಬೇಕು. ಹೂಡಿಕೆದಾರರಿಗೆ ಕೇವಲ ಸಹಾಯಧನ ನೀಡಿದರೆ ಸಾಲದು, ಎಲ್ಲರೂ ಒಟ್ಟಿಗೆ ಸೇರಿ ಹೆಜ್ಜೆ ನಿರ್ಮಾಣ ಮಾಡೋಣ ಎಂದರು.

ಸಂವಿಧಾನ ಬದಲಾವಣೆ ಪ್ರಸ್ತಾಪಿಸಿದವರಿಗೆ ಮತದಾರರಿಂದ ತಕ್ಕಪಾಠ

● ಸುಪ್ರೀಂಕೋರ್ಟ್ ಹಿರಿಯ ವಕೀಲ ಡಾ.ಆದಿತ್ಯ ಸೋಂಧಿ ಅಭಿಮತ ● ಸಂವಿಧಾನ ಬಿಕ್ಕಟ್ಟಿನಲ್ಲಿದೆಯೇ? ವಿಷಯವಾಗಿ ಭಾಷಣ

ಮೈಸೂರು, ಜೂ.15(ಎಂಟಿವೈ)– ಲೋಕಸಭೆ ಚುನಾವಣೆಗೆ ಮುನ್ನ ಆಡಳಿತ ಪಕ್ಷದ ಕೆಲವು ನಾಯಕರು 400ಕ್ಕೂ ಹೆಚ್ಚು ಸ್ಥಾನ ಪಡೆದರೆ ಸಂವಿಧಾನವನ್ನು ಬದಲಾಯಿಸುವುದಾಗಿ ಬಹಿರಂಗವಾಗಿ ಘೋಷಿಸಿದ್ದರಿಂದ ಸಂವಿಧಾನದ ಅಸ್ತಿತ್ವದ ಬಿಕ್ಕಟ್ಟು ಉಂಟಾಗಿತ್ತು ಎಂದು ಸುಪ್ರಿಂಕೋರ್ಟ್‌ನ ಹಿರಿಯ ವಕೀಲ ಡಾ.ಆದಿತ್ಯ ಸೋಂಧಿ ವಿಷಾದಿಸಿದ್ದಾರೆ.


ಮೈಸೂರಿನ ವಿಜಯನಗರದ 4ನೇ ಹಂತದಲ್ಲಿರುವ ಕಲ್ಪಕ್ಷೇತ್ರ ಆಡಿಟೋರಿಯಂನಲ್ಲಿ ಮೈಸೂರು ಫೋರಂ ಸಂಸ್ಥೆ ಆಯೋಜಿಸಿದ್ದ 'ಸಂವಿಧಾನ ಬಿಕ್ಕಟ್ಟಿನಲ್ಲಿದೆಯೇ?..' ವಿಷಯ ಕುರಿತು ಮಾತನಾಡಿದ ಅವರು, ಲೋಕಸಭಾ ಚುನಾವಣೆಗೂ ಮುನ್ನ ಸಂವಿಧಾನದ ರಕ್ಷಣೆ, ಅಸ್ತಿತ್ವದ ಪ್ರಶ್ನೆ ಹಾಗೂ ಅದರ ಬದಲಾವಣೆ ಕುರಿತ ಚರ್ಚೆ ವ್ಯಾಪಕವಾಗಿ ನಡೆಯುತ್ತಿತ್ತು. ಅದರಲ್ಲೂ ಆಡಳಿತ ಪಕ್ಷದ ಕೆಲವು ನಾಯಕರು ಅನೇಕ ಪ್ರಚಾರ ಸಭೆಗಳಲ್ಲಿ ಚುನಾವಣೆಯಲ್ಲಿ 400ಕ್ಕೂ ಹೆಚ್ಚು ಸ್ಥಾನ ಬಂದರೆ ಸಂವಿಧಾನವನ್ನು ಬದಲಿಸುತ್ತೇವೆ ಎಂದು ಬಹಿರಂಗವಾಗಿ ಹೇಳಿದ್ದರು. ಇದರಿಂದ ಜನರಲ್ಲಿ ಆತಂಕ ಉಂಟಾಗಿತ್ತು. ಸಂವಿಧಾನದ ಅಸ್ತಿತ್ವದ ಪ್ರಶ್ನೆ ಕಾಡಲಾರಂಭಿಸಿತ್ತು. ಸಹಜವಾಗಿ ಸಂವಿಧಾನ ಬಿಕ್ಕಟ್ಟಿನಲ್ಲಿದೆಯೇ ಎಂಬ ಆತಂಕ ಜನರಲ್ಲಿ ಮನೆ ಮಾಡಿತ್ತು ಎಂದರು.

ಡಾ.ಬಿ.ಆರ್.ಅಂಬೇಡ್ಕರ್ ರಚಿಸಿದ ಸಂವಿಧಾನವನ್ನು ಏಕಾಏಕಿ ಅಸ್ತಿತ್ವಕ್ಕೆ ತಂದಿಲ್ಲ. ಬಹುತೇಕರ ಅಭಿಪ್ರಾಯದಂತೆ ನಿರ್ಧರಿಸಲಾಗಿದೆ. ಅಲ್ಲದೆ, ತಿದ್ದುಪಡಿ ಮಾಡುವುದಕ್ಕೂ ಸಂವಿಧಾನದಲ್ಲಿ ಅವಕಾಶ ಕಲ್ಪಿಸಲಾಗಿದೆ. ಇದುವರೆಗೂ 100ಕ್ಕೂ ಹೆಚ್ಚು ಬಾರಿ ತಿದ್ದುಪಡಿ ಮಾಡಲಾಗಿದೆ. ಆದರೆ, ಸಂವಿಧಾನ ಬದಲಿಸಲು ಯಾರಿಂದಲೂ ಸಾಧ್ಯವಿಲ್ಲ. ಎಷ್ಟೇ ತಿದ್ದುಪಡಿ ಮಾಡಿದರೂ ಮೂಲ ಆಶಯ ಬದಲಿಸಲು ಆಗುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಭಾರತದ ಸಂವಿಧಾನವು ಪರಿಪೂರ್ಣವಾಗಿಲ್ಲದಿದ್ದರೂ, ಶಿಕ್ಷಣ, ಬದುಕುವ ಸೇರಿದಂತೆ ನಾಗರಿಕ ಹಕ್ಕುಗಳು, ಫೆಡರಲ್ ವ್ಯವಸ್ಥೆ ಮತ್ತು ನಾಗರಿಕರಿಗೆ ಅಧಿಕಾರ ನೀಡುವಂತಹ ಹಲವು ಅವಕಾಶವನ್ನು ಕಲ್ಪಿಸಿದೆ. ಅಲ್ಲದೆ, ಕಲ್ಯಾಣ ಕರ್ನಾಟಕದಂತಹ ವಿಶೇಷ ಸ್ಥಾನಮಾನ ಕಲ್ಪಿಸುವುದಕ್ಕೂ ಸಂವಿಧಾನದಲ್ಲಿ ಅವಕಾಶವಿದೆ. ಬದಲಾದ ಕಾಲಮಾನಕ್ಕೆ ಹೊಂದಿಕೊಳ್ಳುವ ಕಾರಣದಿಂದಲೇ ನಮ್ಮ ಸಂವಿಧಾನ ಹೆಚ್ಚಿನ ಮಹತ್ವ ಪಡೆದುಕೊಂಡಿದೆ ಎಂದರು.

ಲೋಕಸಭಾ ಚುನಾವಣೆಯಲ್ಲಿ 400 ಸ್ಥಾನ ಬಂದರೆ ಸಂವಿಧಾನ ಬದಲಿಸುವುದಾಗಿ ಹೇಳಿದ್ದ ಅಂದಿನ ಆಡಳಿತ ಪಕ್ಷ ಇದೀಗ ಬಹುಮತ ಪಡೆದಿಲ್ಲ. ಮಿತ್ರ ಪಕ್ಷಗಳ ಸಹಾಯದಿಂದ ಮತ್ತೆ ಅಧಿಕಾರಕ್ಕೆ ಬಂದಿರಬಹುದು. ಆದರೆ, ಈಗ ಏನೇ ಮಾಡಬೇಕಾದರೂ ಮಿತ್ರಪಕ್ಷಗಳ ಸಹಕಾರ ಪಡೆಯಬೇಕಾಗಿದೆ. ಈಗಂತೂ ಸಂವಿಧಾನ ಬದಲಿಸಲು ಆಗುವುದಿಲ್ಲ. ಒಂದು ವೇಳೆ 400 ಸ್ಥಾನ ಬಂದಿದ್ದರೆ, ಸಂವಿಧಾನವನ್ನು ಬದಲಿಸಿ, ಭಾರತವನ್ನು 'ಹಿಂದು ರಾಷ್ಟ್ರ' ಎಂದು ಘೋಷಿಸಿ, ಮುಸ್ಲಿಂ ಸಮುದಾಯಕ್ಕೆ ಮತದ ಹಕ್ಕನ್ನು ಕಸಿದುಕೊಳ್ಳುವ ಹುನ್ನಾರ ನಡೆಸಲು ಸಿದ್ಧತೆ ಮಾಡಿಕೊಳ್ಳಲಾಗಿತ್ತು. ಆದರೆ ಜನ ತಕ್ಕಪಾಠ ಕಲಿಸಿದ್ದಾರೆ ಎಂದರು.

ನಮ್ಮಲ್ಲಿ ಸಂವಿಧಾನದ ವಿಷಯದಲ್ಲಿ ರಾಜಕೀಯ ನಡೆಯುತ್ತಿರುವುದು ವಿಪರ್ಯಾಸ. ಅಯೋಧ್ಯೆಯಲ್ಲಿ ಭವ್ಯವಾದ ಶ್ರೀರಾಮಮಂದಿರ ಕಟ್ಟಿದ್ದರೂ, ಅಲ್ಲಿ ಬಿಜೆಪಿ ಸೋಲನುಭವಿಸಿದೆ. ಸಂವಿಧಾನ ಬದಲಿಸುವ ವಿಚಾರವನ್ನು ಮುನ್ನೆಲೆಗೆ ತಂದ ಹಿನ್ನೆಲೆಯಲ್ಲಿ ಸಂವಿಧಾನ ಪರ ಇರುವ ಜನ ತಮ್ಮ ಶಕ್ತಿಯನ್ನು ಚುನಾವಣೆ ಮೂಲಕ ತೋರಿಸಿದ್ದಾರೆ. ಅಲ್ಲದೆ, ಸಂವಿಧಾನ ರಕ್ಷಣೆ ಮಾಡಲು ಬದ್ಧವಾಗಿರುವ ಸಂದೇಶ ನೀಡಿದ್ದಾರೆ. ಉತ್ತರ ಪ್ರದೇಶದಲ್ಲಿ ಅತೀ ಹೆಚ್ಚು ಸ್ಥಾನ ಪಡೆಯುವ ಅಭಿಲಾಷೆ ಹೊಂದಿದ್ದ ಬಿಜೆಪಿಗರಿಗೆ ಹಿನ್ನಡೆಯಾಗಿದೆ. ದೊಡ್ಡಮಟ್ಟದ ನಾಯಕ ಎಂದು ಗುರುತಿಸಿಕೊಂಡಿದ್ದವರು ಗೆದ್ದ ಅಂತರವನ್ನು ಗಮನಿಸಬೇಕಾಗಿದೆ ಎಂದು ಡಾ.ಆದಿತ್ಯ ಸೋಂಧಿ ತಿಳಿಸಿದರು.



ಮೈಸೂರಿನ ವಿಜಯನಗರ 4ನೇ ಹಂತದಲ್ಲಿರುವ ಕಲ್ಪಕ್ಷೇತ್ರ ಆಡಿಟೋರಿಯಂನಲ್ಲಿ ಮೈಸೂರು ಫೋರಂ ಸಂಸ್ಥೆ ಆಯೋಜಿಸಿದ್ದ 'ಸಂವಿಧಾನ ಬಿಕ್ಕಟ್ಟಿನಲ್ಲಿದೆಯೇ'? ವಿಷಯ ಕುರಿತು ಸುಪ್ರಿಂಕೋರ್ಟ್ ಹಿರಿಯ ವಕೀಲ ಡಾ.ಆದಿತ್ಯ ಸೋಂಧಿ ಮಾತನಾಡಿದರು.

> "ದೇಶದಲ್ಲಿ ಕಳೆದ ಹತ್ತು ವರ್ಷದಿಂದ ಆಡಳಿತ ನಡೆಸುತ್ತಿರುವ ಬಿಜೆಪಿ ನಾಯಕರು ರಾಹುಲ್ ಗಾಂಧಿಯನ್ನು 'ಪಪ್ಪು' ಎಂದು ಲೇವಡಿ ಮಾಡುತ್ತಾ ಟೀಕಿಸುತ್ತಿದ್ದಾರೆ. ನಾನು ಈ ಹಿಂದೆ ರಾಹುಲ್ ಗಾಂಧಿಯನ್ನು ಟೀಕಿಸಿದ್ದು ಉಂಟು. ಆದರೆ, ಇತ್ತೀಚಿನ ವರ್ಷಗಳಲ್ಲಿ ರಾಹುಲ್ ಗಾಂಧಿ ಸಂವಿಧಾನ ರಕ್ಷಣೆ, ಜನರ ರಕ್ಷಣೆ ವಿಚಾರದಲ್ಲಿ ಬದ್ಧತೆಯಿಂದ ಹೋರಾಟಕ್ಕಿಳಿದಿರುವುದು ಕಂಡು ಬರುತ್ತಿದೆ. ಆ ಕಾರಣದಿಂದ ಜನರಲ್ಲಿ ಅವರ ಮೇಲೆ ವಿಶ್ವಾಸ ಹೆಚ್ಚಾದಂತೆ ಕಂಡು ಬರುತ್ತಿದ್ದು, ಪ್ರಸಕ್ತ ಲೋಕಸಭಾ ಚುನಾವಣೆಯ ಫಲಿತಾಂಶದಲ್ಲಿ ಅದು ಸಾಬೀತಾಗಿದೆ.
> –ಡಾ.ಆದಿತ್ಯ ಸೋಂಧಿ

ತಳಮಟ್ಟದ(ಕೇಡರ್ ಬೇಸ್) ಹಂತದಿಂದ ಬೆಳೆದು ಬಂದಿರುವ ಪಕ್ಷ ಎನ್ನುವ ಬಿಜೆಪಿಯಲ್ಲಿ ಇದೀಗ 'ಒನ್ ಮ್ಯಾನ್ ಶೋ' ನಡೆಯುತ್ತಿದೆ. ಎಲ್ಲದಕ್ಕೂ ಒಬ್ಬರೇ ನಾಯಕರನ್ನು ಹೆಸರಿಸುವ ಪರಿಸ್ಥಿತಿ ನಿರ್ಮಾಣವಾಗಿದೆ. ಒನ್ ಮ್ಯಾನ್ ಶೋ ಪರಿಸ್ಥಿತಿಯನ್ನು ಜನ ಒಪ್ಪುವುದಿಲ್ಲ. ಈ ಹಿಂದೆ ಕಾಂಗ್ರೆಸ್‌ನಲ್ಲಿ 'ಒನ್ ಮ್ಯಾನ್ ವುಮೆನ್' ಎಂಬ ಪರಿಸ್ಥಿತಿ ಇತ್ತು. ಇಂದಿರಾಗಾಂಧಿ ಅವರು ಮಾಡಿದ ತಪ್ಪುಗಳು, ನಿಯಮ ಉಲ್ಲಂಘನೆಗಳಿಂದಾಗಿ ಅವರನ್ನು ಅಂದು ಜನರು ಸೋಲಿಸಿದರು. ಹಾಗಾಗಿ ದೇಶದ ಜನ 'ಒನ್ ಮ್ಯಾನ್ ಶೋ'ಗೆ ಮನ್ನಣೆ ನೀಡುವುದಿಲ್ಲ. ಆ ಕಾರಣದಿಂದಲೇ ಈ ಲೋಕಸಭಾ ಚುನಾವಣೆಯಲ್ಲಿ 400ಕ್ಕಿಂತ ಹೆಚ್ಚು ಸ್ಥಾನ ನೀಡಿಲ್ಲ ಎಂದು ವಿಶ್ಲೇಷಿಸಿದರು.

ದೇಶದಲ್ಲಿ ಬಹುತೇಕ ಮುಖ್ಯ ಸುದ್ದಿವಾಹಿನಿಗಳನ್ನು ಆಡಳಿತಾರೂಢ ಪಕ್ಷ ನಿಯಂತ್ರಣದಲ್ಲಿಟ್ಟುಕೊಂಡಿದೆ. ಆ ಕಾರಣದಿಂದ ವಾಹಿನಿಗಳು ಮನಬಂದಂತೆ ಸುದ್ದಿ ಬಿತ್ತರಿಸುತ್ತಿವೆ. ಅಲ್ಲದೆ, ಸ್ವಾಯತ್ತ ಸಂಸ್ಥೆಗಳನ್ನು ಹಿಡಿತದಲ್ಲಿಟ್ಟುಕೊಂಡಿರುವುದರಿಂದ ಅವುಗಳು ಸ್ವಯಂಪ್ರೇರಣೆಯಿಂದ ಹಾಗೂ ಮುಕ್ತವಾಗಿ ಕಾರ್ಯನಿರ್ವಹಿಸಲು ಆಗದ ಪರಿಸ್ಥಿತಿ ನಿರ್ಮಾಣವಾಗಿದೆ. ನಮ್ಮ ಪ್ರಧಾನಿಗಳು ಮಣಿಪುರದ ಗಲಭೆ ಪೀಡಿತ ಪ್ರದೇಶಕ್ಕೆ ಭೇಟಿ ನೀಡಲು ಇದುವರೆಗೂ ಮುಂದಾಗಿಲ್ಲ ಎಂದರು.

ದೇಶದಲ್ಲಿ ಏಕರೂಪದ ನಾಗರಿಕ ಸಂಹಿತೆ ಜಾರಿಗೊಳಿಸಲು ಸಾಧ್ಯವಾಗುವುದಿಲ್ಲ. ದೇಶದಲ್ಲಿ ತಮ್ಮದೇ ಆದ ಕಲೆ, ಸಂಸ್ಕೃತಿ, ಆಚರಣೆ, ಆಚಾರ–ವಿಚಾರವನ್ನೊಳಗೊಂಡ ಸಮುದಾಯಗಳಿವೆ. ಬುಡಕಟ್ಟು ಸಮುದಾಯ ಇತರೆ ಸಮುದಾಯಕ್ಕಿಂತ ವಿಭಿನ್ನವಾದ ಆಚರಣೆ ಹಾಗೂ ಇತರೆ ಪದ್ಧತಿಯನ್ನು ಒಳಗೊಂಡಿವೆ. ಈ ಎಲ್ಲಾ ಸಮುದಾಯವನ್ನು ಏಕರೂಪ ನಾಗರಿಕ ಸಂಹಿತೆಗೆ ಒಳಪಡಿಸುವುದು ಸಾಧ್ಯವಿಲ್ಲ. ಉದಾಹರಣೆಗೆ ಹಿಜಾಬ್ ಪ್ರಕರಣವನ್ನೇ ತೆಗೆದುಕೊಳ್ಳಿ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಮೈಸೂರು ಓಪನ್ ಫೋರಂ ಸಂಚಾಲಕರೂ ಆಗಿರುವ ಭಾರತ ಸರ್ಕಾರದ ಕ್ಯಾಬಿನೆಟ್ ಸೆಕ್ರೆಟರಿಯೇಟ್‌ನ ನಿವೃತ್ತ ಜಂಟಿ ಕಾರ್ಯದರ್ಶಿ ರವಿ ಜೋಶಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಉಪನ್ಯಾಸಕರಾದ ಪ್ರೊ.ಶಾಲಿನಿ ಅರಸ್ ಅತಿಥಿಯನ್ನು ಪರಿಚಯಿಸಿದರು.

ಫಸಲ್ ಭಿಮಾ ಬೆಳೆ ವಿಮೆ ಮಾಹಿತಿ ರಥಕ್ಕೆ ಚಾಲನೆ



ಮೈಸೂರು, ಜೂ. 15(ಆರ್‌ಕೆ)– 2024–25ನೇ ಸಾಲಿನ ಮುಂಗಾರು ಹಂಗಾಮಿಗೆ ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಭಿಮಾ ಬೆಳೆ ವಿಮೆ ಮಾಹಿತಿ ರಥಕ್ಕೆ ಮೈಸೂರಿನ ರಾಮಕೃಷ್ಣನಗರದ ಮುಖ್ಯಮಂತ್ರಿ ಸಿದ್ದರಾಮಯ್ಯ ನಿವಾಸದ ಬಳಿ ವಿಧಾನಪರಿಷತ್ ಸದಸ್ಯ ಡಾ.ಯತೀಂದ್ರ ಶನಿವಾರ ಮಧ್ಯಾಹ್ನ ಚಾಲನೆ ನೀಡಿದರು.


ಪ್ರಧಾನಮಂತ್ರಿ ಫಸಲ್ ಭಿಮಾ ಯೋಜನೆಯಡಿ ಅಲಸಂದೆ, ಹೆಸರು, ಉದ್ದು, ತೊಗರಿ, ಮುಸುಕಿನ ಜೋಳ, ರಾಗಿ, ಹುರುಳಿ ಮತ್ತು ಭತ್ತದ ಬೆಳೆಗಳಿಗೆ ವಿಮೆ ಮಾಡಿಸಲು ನೋಂದಣಿ ಪ್ರಕ್ರಿಯೆ ಆರಂಭವಾಗಿದೆ. ದ್ವಿದಳ ಧಾನ್ಯ ಬೆಳೆಗಳಿಗೆ ಜುಲೈ 1 ಅಂತಿಮ ದಿನವಾಗಿದ್ದು, ರಾಗಿ ಬೆಳೆಗೆ ಜುಲೈ 31 ಹಾಗೂ ಭತ್ತದ ಬೆಳೆಗೆ ಆಗಸ್ಟ್ 16ರವರೆಗೆ ನೋಂದಣಿ ಮಾಡಿಸಲು ಅವಕಾಶ ಕಲ್ಪಿಸಲಾಗಿದೆ. ಬೆಳೆ ವಿಮೆ ಕುರಿತು ರೈತರಿಗೆ ಮಾಹಿತಿ ನೀಡಿ ಅರಿವು ಮೂಡಿಸಲು ಈ ರಥವನ್ನು ಬಳಸಿಕೊಳ್ಳಲಾಗಿದೆ. ರಥವು ಮೈಸೂರು ತಾಲೂಕಿನಾದ್ಯಂತ ಸಂಚರಿಸಲಿದ್ದು, ಕೃಷಿ ಇಲಾಖೆ ಅಧಿಕಾರಿಗಳು ರೈತರಿಗೆ ಜಾಗೃತಿ ಮೂಡಿಸುವರು. ಈ ಸಂದರ್ಭದಲ್ಲಿ ಕೃಷಿ ಜಂಟಿ ನಿರ್ದೇಶಕ ಡಾ.ಬಿ.ಎಸ್.ಚಂದ್ರಶೇಖರ್, ಉಪನಿರ್ದೇಶಕ ಬಿ.ಎನ್.ಧನಂಜಯ, ಸಹಾಯಕ ನಿರ್ದೇಶಕ ಬಿ.ಡಿ.ಜಯರಾಮ್ ಹಾಗೂ ಇತರರು ಉಪಸ್ಥಿತರಿದ್ದರು.

ಸಚಿವ ಈಶ್ವರ ಖಂಡ್ರೆಗೆ ಅಭಿನಂದನೆ



ಶನಿವಾರ ಮೈಸೂರಿಗೆ ಆಗಮಿಸಿದ ಅರಣ್ಯ ಮತ್ತು ಪರಿಸರ ಸಚಿವರೂ ಆದ ಅಖಿಲ ಭಾರತ ವೀರಶೈವ ಲಿಂಗಾಯಿತ ಮಹಾಸಭಾ ಮಹಾ ಪ್ರಧಾನ ಕಾರ್ಯದರ್ಶಿ ಈಶ್ವರ್ ಖಂಡ್ರೆ ಅವರನ್ನು ಸಮುದಾಯದ ಮುಖಂಡರಾದ ವರುಣ ಮಹೇಶ್, ಅಂದನಳ್ಳಿ ಸೋಮಶೇಖರ್, ಕಾನ್ಯ ಶಿವಮೂರ್ತಿ, ಮಡಳ್ಳಿ ಮಂಜುನಾಥ್, ಬಸವನಪುರ ಮಹಾದೇವಪ್ರಸಾದ್ ಆತ್ಮೀಯವಾಗಿ ಅಭಿನಂದಿಸಿದರು.

ಮೈಸೂರಲ್ಲಿ ಹೈ ಲೈಫ್ ವಸ್ತುಪ್ರದರ್ಶನ ಉದ್ಘಾಟನೆ



ಮೈಸೂರು, ಜೂ. 15– ಹೈ ಲೈಫ್ ಸಂಸ್ಥೆಯು 10 ವರ್ಷಗಳ ಪೂರ್ಣಗೊಳಿಸಿರುವ ಹಿನ್ನೆಲೆಯಲ್ಲಿ ದಶಮಾನೋತ್ಸವ ಪ್ರಯುಕ್ತ ಮೈಸೂರಿನ ರ್ಯಾಡಿಸನ್ ಬ್ಲೂ ಪ್ಲಾಜಾ ಹೋಟೆಲ್‌ನಲ್ಲಿ ಎರಡು ದಿನಗಳ ಹೈ ಲೈಫ್ ವಸ್ತು ಪ್ರದರ್ಶನ ಏರ್ಪಡಿಸಲಾಗಿದೆ.

ಫ್ಯಾಷನ್ ಮತ್ತು ಐಷಾರಾಮಿ ಪ್ರದರ್ಶನ ಕಂಪನಿ ಫ್ಯಾಷನ್, ಪರಿಕರಗಳು, ಆಭರಣಗಳು ಮತ್ತು ಅಲಂಕಾರಿಕಗಳು, ಟ್ಯೂನಿಕ್ಸ್, ಕೇಪ್‌ಗಳು, ಜಾಕೆಟ್‌ಗಳು ಮತ್ತು ಡ್ರೇಪ್‌ಗಳು, ಸಮಕಾಲೀನ ಕಟ್‌ಗಳಲ್ಲಿ ಕ್ರೇಪ್ ಶೈಲಿಯ, ಸೊಗಸಾದ ಕಸೂತಿ ಪದಾರ್ಥಗಳ ಪ್ರದರ್ಶಿಸಲಾಗಿದೆ.

ಉದ್ಘಾಟನಾ ಸಮಾರಂಭದಲ್ಲಿ ಪ್ಯಾಟ್ರಿಕ್ ಲಿಬೆರಾ–ಹೈ ಲೈಫ್ ಎಕ್ಸಿಬಿಷನ್ಸ್ ನಿರ್ದೇಶಕ; ಶೋಮಿಕಾ ಎಸ್ ರಾವ್– ಹೈ ಲೈಫ್ ಎಕ್ಸಿಬಿಷನ್ ಈವೆಂಟ್ ಆರ್ಗನೈಸರ್; ಶ್ರೀಕಾಂತ್ ಎಸ್– ಕಾರ್ಯಕ್ರಮ ಸಂಯೋಜಕರು; ಊರ್ವಶಿ ಹರ್ಷ ಮೇಲಾಂತ ಮೈಸೂರು ಯೂನಿಯನ್– ನಾರ್ತ್ ಅವೆನ್ಯೂ ಮತ್ತು ಕ್ಲಿಂಗ್ ಬ್ರೆವರಿಯಲ್ಲಿ ಸಹ–ಸ್ಥಾಪಕ; ಶಿಲ್ಪಾ ವಿಶ್ವಾಸ್, ವಾಣಿಜ್ಯೋದ್ಯಮಿ, ಬುಡಕಟ್ಟು ಕಲ್ಯಾಣ ಸ್ವಯಂಸೇವಕ; ಧಾನ್ಯ ಶುಶ್ರುತ, ನಿರ್ವಾಹಕರು, ನ್ಯೂರೋಝೋನ್ ಟ್ರಸ್ಟ್– ಗೋಪಾಲಗೌಡ ಶಾಂತವೇರಿ ಸ್ಮಾರಕ ಆಸ್ಪತ್ರೆ; ಡಾ. ಸಂಧ್ಯಾ ಆರ್.ರಾವ್, ಸಲಹೆಗಾರ, ಇಎನ್‌ಟಿ ತಜ್ಞರು, ಕ್ಲಿನಿಕಲ್ ಕಾಸ್ಮೆಟಾಲಜಿಯಲ್ಲಿ ತಜ್ಞ(ಮುಖ ಸೌಂದರ್ಯಶಾಸ್ತ್ರ); ನಾಜಿಯಾ ನಯೀಮ್ ಎನ್ MN ಆಗ್ರೋ ಇಂಡಸ್ಟ್ರಿಯಲ್ಲಿ ವ್ಯಾಪಾರ ಪಾಲುದಾರ; ಗಾಯತ್ರಿ ದೇವಿ, ಮಲ್ಬೆರಿ ಬೇ ಸರ್ವಿಸ್ ಅಪಾರ್ಟ್‌ಮೆಂಟ್‌ನಲ್ಲಿ ಉದ್ಯಮಿ; ಮೋರ್ತಾ ಸುಷ್ಮಾ ESS ಇಓಪಿ ಆಟೋ ಬ್ರೇಕ್ಸ್ ಪ್ರೈವೇಟ್ ಲಿಮಿಟೆಡ್‌ನಲ್ಲಿ ನಿರ್ದೇಶಕರು; ಸೌಮ್ಯ ಪ್ರಕಾಶ್, GLN ಕನ್ವೆನ್ಷನ್ ಸೆಂಟರ್‌ನ ವ್ಯಾಪಾರ ಪಾಲುದಾರ; ಹರ್ಷಿದಾ ಹರಿಕುಮಾರ್, ಮಾನಸ ಸರೋವರ ಪುಷ್ಕರಿಣಿ ವಿದ್ಯಾಶ್ರಮದ ಪ್ರಾಂಶುಪಾಲರು, ಲತಾ ರಘುನಾಥ್, ವಾಣಿಜ್ಯೋದ್ಯಮಿ (SewKrafty) ಉಪಸ್ಥಿತರಿದ್ದರು.

ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆ: ನಾಳೆ ಬಿಜೆಪಿ ರಾಜ್ಯಾದ್ಯಂತ ಪ್ರತಿಭಟನೆ

ಬೆಂಗಳೂರು: ರಾಜ್ಯದಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಏರಿಕೆಯನ್ನು ಹಿಂಪಡೆಯುವಂತೆ ಆಗ್ರಹಿಸಿ ಬಿಜೆಪಿ ಜೂನ್ 17 ರಂದು ರಾಜ್ಯಾದ್ಯಂತ ಪ್ರತಿಭಟನೆ ನಡೆಸುವುದಾಗಿ ಎಚ್ಚರಿಕೆ ನೀಡಿದೆ.

ಶನಿವಾರ ಸುದ್ದಿಗಾರರೊಂದಿಗೆ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ಮೊದಲನೆಯದಾಗಿ, ರಾಜ್ಯದ ಆರ್ಥಿಕ ಪರಿಸ್ಥಿತಿ ದಿನದಿಂದ ದಿನಕ್ಕೆ ಹದಗೆಡುತ್ತಿದೆ. ಗ್ಯಾರಂಟಿಗಳ ಕಾರಣದಿಂದಾಗಿ ಅವರು ಸರ್ಕಾರವನ್ನು ನಡೆಸಲು ಸಾಧ್ಯವಾಗುತ್ತಿಲ್ಲ. ಸಂಪನ್ಮೂಲಗಳನ್ನು ಕ್ರೋಢೀಕರಿಸಲು ಅವರಿಗೆ ಸಾಧ್ಯವಾಗುತ್ತಿಲ್ಲ ಎಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರ ಪೆಟ್ರೋಲ್ ಬೆಲೆಯನ್ನು ಲೀಟರ್‌ಗೆ 3 ರೂ. ಮತ್ತು ಡೀಸೆಲ್ ಬೆಲೆಯನ್ನು ರೂ. 3.50 ರಷ್ಟು ಹೆಚ್ಚಿಸಲು ನಿರ್ಧಾರ ಕೈಗೊಂಡಿದೆ. ಇದನ್ನು ಹಿಂಪಡೆಯಬೇಕು ಎಂಬುದು ಬಿಜೆಪಿಯ ಒತ್ತಾಯವಾಗಿದೆ. ಈ ನಿರ್ಧಾರದ ಬಗ್ಗೆ ಪಕ್ಷ ಸುಮ್ಮನಿರುವುದಿಲ್ಲ. ಸೋಮವಾರ ನಾವು ರಾಜ್ಯದಾದ್ಯಂತ ಪ್ರತಿಭಟನೆ ನಡೆಸಲಿದ್ದೇವೆ ಮತ್ತು ಬೆಲೆ ಹಿಂಪಡೆಯಲು ಒತ್ತಾಯಿಸುತ್ತೇವೆ ಎಂದು ತಿಳಿಸಿದರು.

ರಾಷ್ಟ್ರ ಮತ್ತು ರಾಜ್ಯದಲ್ಲಿ ಹೀನಾಯ ಸೋಲಿನ ನಂತರ ಕರ್ನಾಟಕದ ಕಾಂಗ್ರೆಸ್ ಸರ್ಕಾರ ಸೇಡು ತೀರಿಸಿಕೊಂಡಿದ್ದು, ರಾಜ್ಯದ ಜನರ ಮೇಲೆ ತಮ್ಮ ಸಿಟ್ಟನ್ನು ಹೊರಹಾಕುತ್ತಿದ್ದಾರೆ. ನೋಂದಣಿ ಶುಲ್ಕ ಕೂಡಾ ಹೆಚ್ಚಿಸಿದ್ದಾರೆ. ಇದರ ಬಗ್ಗೆ ವಿಧಾನಸೌಧ ಹಾಗೂ ಹೊರಗಡೆ ಚರ್ಚೆ ನಡೆಸಿದ್ದೇವೆ. ವಿದ್ಯುತ್ ದರ ಕೂಡಾ ಹೆಚ್ಚಳ ಮಾಡಲಾಗಿದೆ. ಗ್ಯಾರಂಟಿ ಯೋಜನೆಗಳನ್ನು ಈಡೇರಿಸಲು ಸಾಧ್ಯವಾಗದ ಕಾಂಗ್ರೆಸ್ ಸರ್ಕಾರ ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆ ಮಾಡಿದೆ ಎಂದು ಆರೋಪಿಸಿದರು.

ಫಿಲ್ಮ್ ಚೇಂಬರ್‌ನಿಂದ ರೇಣುಕಾಸ್ವಾಮಿ ಕುಟುಂಬಕ್ಕೆ 5 ಲಕ್ಷ ರೂ. ಪರಿಹಾರ; ಶಾಶ್ವತ ಪರಿಹಾರದ ಭರವಸೆ



ಚಿತ್ರದುರ್ಗ, ಜೂ.15– ದರ್ಶನ್ ಗ್ಯಾಂಗ್‌ನಿಂದ ಹತ್ಯೆಗೀಡಾದ ಚಿತ್ರದುರ್ಗದ ರೇಣುಕಾಸ್ವಾಮಿ ಅವರ ನಿವಾಸಕ್ಕೆ ಇಂದು ಫಿಲ್ಮ್ ಚೇಂಬರ್ ತಂಡ ಭೇಟಿ ನೀಡಿತ್ತು. ರೇಣುಕಾಸ್ವಾಮಿ ಕುಟುಂಬಸ್ಥರಿಗೆ ಧೈರ್ಯ ತುಂಬಿ, ಚಲನಚಿತ್ರ ವಾಣಿಜ್ಯ ಮಂಡಳಿಯಿಂದ 5 ಲಕ್ಷ ರೂ. ಪರಿಹಾರ ನೀಡಲಾಯಿತು. ಮುಂದೆ ಕುಟುಂಬಕ್ಕೆ ಯಾವ ರೀತಿ ಸಹಾಯ ಮಾಡಬೇಕು ಎಂಬುದನ್ನು ನೋಡಿಕೊಂಡು ಶಾಶ್ವತ ಪರಿಹಾರ ಕೊಡಿಸುವ ಭರವಸೆಯನ್ನೂ ಚೇಂಬರ್ ಅಧ್ಯಕ್ಷರು ನೀಡಿದರು.

ಬಳಿಕ ಫಿಲ್ಮ್ ಚೇಂಬರ್‌ನಿಂದ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಮಾಜಿ ಅಧ್ಯಕ್ಷ ಸಾ.ರಾ ಗೋವಿಂದು, ತಪ್ಪು ಮಾಡುವುದು ಮನುಷ್ಯನ ಸಹಜ ಗುಣ. ಆದರೆ ಈ ರೀತಿ ಮಾಡಬಾರದಿತ್ತು. ಇದಕ್ಕೆ ಚಿತ್ರರಂಗ ಹೊಣೆ ಅಲ್ಲ ಅವರೊಬ್ಬರಿಂದ ನಾವೆಲ್ಲ ತಲೆ ತಗ್ಗಿಸುವ ಕೆಲಸವಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಜನರು ಸಿನಿಮಾ ಅಂದರೆ ಅದಕ್ಕೆ ಕೊಡುವ ಗೌರವವೇ ಬೇರೆ ಇತ್ತು. ಡಾ.ರಾಜ್‌ಕುಮಾರ್, ಡಾ.ವಿಷ್ಣುವರ್ಧನ್ ಅವರ ಹೆಸರಿಗೂ ಅಷ್ಟೇ ಗೌರವ ಕೊಡುತ್ತಿದ್ದರು. ಆದರೆ ಇತ್ತೀಚೆಗೆ ಯುವ ನಟರಿಂದ ಚಿತ್ರರಂಗ ದಾರಿ ತಪ್ಪುತ್ತಿದೆ. ಈ ಪ್ರಕರಣದಲ್ಲಿ ಪೊಲೀಸ್ ಇಲಾಖೆ ನಿಷ್ಪಕ್ಷಪಾತವಾಗಿ ತನಿಖೆ ನಡೆಸುತ್ತಿದೆ ಎಂದು ಶ್ಲಾಘಿಸಿದರು. ನಾವು ಯಾರ ಪರವಾಗಿಯೂ ಬಂದಿಲ್ಲ. ನೊಂದ ಕುಟುಂಬಸ್ಥರಿಗೆ ಸಾಂತ್ವನ ಹೇಳಲು ಬಂದಿದ್ದೇವೆ. ಆ ತಾಯಿಯನ್ನು ನೋಡಿದರೆ ಹೊಟ್ಟೆ ಉರಿಯುತ್ತದೆ. ಆ ತಾಯಿ ಕೇಳಿಕೊಳ್ಳುತ್ತಿರುವುದು ಒಂದೇ, ತಪ್ಪು ಮಾಡಿದವರಿಗೆ ಶಿಕ್ಷೆ ನೀಡಬೇಕು ಅಂತ. ಖಂಡಿತ ಅದು ಆಗುತ್ತದೆ ಎಂದರು.

ನಿರ್ಮಾಪಕರ ಸಂಘದ ಅಧ್ಯಕ್ಷ ಎನ್.ಎಂ ಸುರೇಶ್ ಮಾತನಾಡಿ, ಯಾರೇ ಮಾಡಿದರೂ ತಪ್ಪು ತಪ್ಪೆ. ವಾಣಿಜ್ಯ ಮಂಡಳಿ ಇಂತಹ ತಪ್ಪುಗಳನ್ನು ಖಂಡಿಸಿದೆ. ಮೃತನ ತಂದೆ–ತಾಯಿ ಕಣ್ಣೀರು ನೋಡಿ ನಮಗೂ ಕಣ್ಣೀರು ಬಂತು ಎಂದು ಭಾವುಕರಾದರು.

ಇದೇ ವೇಳೆ ದರ್ಶನ್ ಬ್ಯಾನ್ ವಿಚಾರಕ್ಕೆ ಪ್ರತಿಕ್ರಿಯಿಸಿ, ಈ ನಿರ್ಧಾರ ನಾವು ಮಾಡಲು ಆಗಲ್ಲ. ಕಲಾವಿದರ ಸಂಘ ನಿರ್ಮಾಪಕರ ಸಂಘ ಕೂಡ ಇದೆ. ಅಲ್ಲಿ ಸಭೆ ಮಾಡಿದ ನಂತರ ನಿರ್ಧಾರ ಮಾಡುತ್ತೇವೆ. ಈ ಹಿಂದೆಯೂ ರಾಜಕುಮಾರ್, ವಿಷ್ಣುವರ್ಧನ್, ಶಂಕರ್ ನಾಗ್ ಅಂಬರೀಶ್ ಅವರಿಗೂ ಫ್ಯಾನ್ಸ್ ಇದ್ದರು. ಆದರೆ ಇತ್ತೀಚಿನ ಫ್ಯಾನ್ಸ್ ಪ್ರಚೋದನೆಗೆ ಒಳಗಾಗುತ್ತಿದ್ದಾರೆ. ಪ್ರಚೋದನೆಗೆ ಒಳಗಾಗಿದ್ದೇ ಈ ರೀತಿ ಘಟನೆ ನಡೆದಿದೆ. ಅಭಿಮಾನಿಗಳು ಸಹ ಎಚ್ಚರಿಕೆಯಿಂದಿರಬೇಕು ಎಂದು ಸಲಹೆ ನೀಡಿದರು.

ಕೃಷಿಗಿಂತಲೂ ಉನ್ನತ ಇಲಾಖೆಯನ್ನು ಮೋದಿ ಕೊಟ್ಟಿದ್ದಾರೆ

ಕುದುರೆಮುಖ ಯೋಜನೆಗೆ ಆತುರದಲ್ಲಿ ಸಹಿ ಮಾಡಿಲ್ಲ, ಮಂಡ್ಯದಲ್ಲಿ ನೂತನ ಕಚೇರಿ ಉದ್ಘಾಟಿಸಿದ ಹೆಚ್ಡಿಕೆ

ಮಂಡ್ಯ,ಜೂ.15(ಮೋಹನ್‌ರಾಜ್)– ಮಂಡ್ಯ ಜಿಲ್ಲೆ ಸೇರಿದಂತೆ ರಾಜ್ಯದ ರೈತರ ಅಭಿವೃದ್ಧಿಗಾಗಿ ನಾನು ಕೃಷಿ ಖಾತೆಯನ್ನೇ ಅಪೇಕ್ಷೆ ಪಟ್ಟಿದ್ದೆ. ಆದರೆ ಪ್ರಧಾನಿ ನರೇಂದ್ರ ಮೋದಿ ಅದಕ್ಕಿಂತಲೂ ಉನ್ನತವಾದ ಎರಡು ಇಲಾಖೆಯ ಜವಾಬ್ದಾರಿಯನ್ನು ನನಗೆ ನೀಡಿದ್ದಾರೆ ಎಂದು ಕೇಂದ್ರ ಉಕ್ಕು ಹಾಗೂ ಭಾರಿ ಕೈಗಾರಿಕಾ ಸಚಿವ ಹೆಚ್.ಡಿ.ಕುಮಾರಸ್ವಾಮಿ ತಿಳಿಸಿದರು.

ಶನಿವಾರ ನಗರದ ಜಿಲ್ಲಾಧಿಕಾರಿ ಕಚೇರಿಯ ಆವರಣದಲ್ಲಿರುವ ಕೇಂದ್ರ ಸಚಿವರು ಹಾಗೂ ಮಂಡ್ಯ ಲೋಕಸಭಾ ಕ್ಷೇತ್ರದ ಸಂಸದರ ನೂತನ ಕಚೇರಿಯನ್ನು ಉದ್ಘಾಟಿಸಿ, ದೇವರಿಗೆ ಪೂಜೆ ಸಲ್ಲಿಸಿ ಬಳಿಕ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ನಾನು ಕೃಷಿ ಮಂತ್ರಿಯಾಗದಿದ್ದರೂ ಕೃಷಿ ಇಲಾಖೆಯ ಸಚಿವರೊಂದಿಗೆ ರೈತರ ಸಮಸ್ಯೆಗಳ ಬಗ್ಗೆ ಚರ್ಚಿಸಿ, ಸದನ ಅಥವಾ ಕ್ಯಾಬಿನೆಟ್‌ನಲ್ಲಿ ಮಾತನಾಡುವ ಶಕ್ತಿ ನನಗಿದೆ ಎಂದ ಅವರು, ಮಂಡ್ಯ ಜಿಲ್ಲೆಯ ಅಭಿವೃದ್ಧಿಯ ದೃಷ್ಟಿಯಿಂದ ಕೈಗಾರಿಕೆ ಹಾಗೂ ಉಕ್ಕು ಇಲಾಖೆಗೆ ಸಂಬಂಧಿಸಿದ ಕಾರ್ಖಾನೆಗಳನ್ನು ತೆರೆಯಲು ಜಿಲ್ಲಾಧಿಕಾರಿಗಳಿಗೆ ಜಾಗವನ್ನು ಪರಿಶೀಲಿಸಿ, ಅದರ ಬಗ್ಗೆ ಮಾಹಿತಿಕೊಡುವಂತೆ ಸೂಚಿಸಿದ್ದೇನೆ ಎಂದರು.



ಮಂಡ್ಯದಲ್ಲಿ ತಮ್ಮ ನೂತನ ಕಚೇರಿಯನ್ನು ಉದ್ಘಾಟಿಸಿ, ಪೂಜೆ ಸಲ್ಲಿಸಿದ ಹೆಚ್‌ಡಿಕೆ

ಮುಂದಿನ ಶುಕ್ರವಾರ ಸಾಧ್ಯವಾದರೆ ಮತ್ತೆ ಕ್ಷೇತ್ರಕ್ಕೆ ಬರುತ್ತೇನೆ. ಕೇಂದ್ರದ ಕ್ಯಾಬಿನೆಟ್ ಸಚಿವರೆಂದ ಮೇಲೆ ಇಂತಿಷ್ಟು ದಿನ ಸಂಸತ್‌ನ ಕಚೇರಿಯಲ್ಲಿ, ತಿಂಗಳಲ್ಲಿ ಒಂದು ದಿನ ದೇಶ ಪ್ರವಾಸ, ಜೊತೆಗೆ ರಾಜ್ಯದ ಒಂದು ಜಿಲ್ಲಾ ಪ್ರವಾಸ ಹಾಗೂ ನನ್ನ ಕ್ಷೇತ್ರ ಪ್ರವಾಸ ಮಾಡಲು ಅವಕಾಶವಿದೆ. ತಿಂಗಳಿಗೆ ಎಷ್ಟು ಬಾರಿ ಸಾಧ್ಯವಾಗುತ್ತದೋ ಅಷ್ಟು ಬಾರಿ ಮಂಡ್ಯಕ್ಕೆ ಬರುತ್ತೇನೆ ಎಂದು ಸ್ಪಷ್ಟಪಡಿಸಿದರು.

ಕಾವೇರಿ ವಿಚಾರವು ಒಂದು ಸೂಕ್ಷ್ಮ ವಿಚಾರವಾಗಿದ್ದು, ಈ ಬಗ್ಗೆ ದೇವೇಗೌಡರು ಸೇರಿದಂತೆ ತಜ್ಞರ ಜೊತೆಗೆ ಚರ್ಚಿಸಿ, ಕಾನೂನಾತ್ಮಕವಾಗಿ ಸಮಸ್ಯೆಗಳನ್ನು ಅವಲೋಕಿಸಿ, ಶಾಶ್ವತ ಪರಿಹಾರ ಒದಗಿಸುವೆ. ಜೊತೆಗೆ ಮೇಕೆದಾಟು ಯೋಜನೆಯನ್ನು ಸ್ಥಾಪಿಸಲು ಒತ್ತು ನೀಡುವೆ ಎಂದರು.

ರಾಜ್ಯದಲ್ಲಿ ಗ್ಯಾರಂಟಿ ಯೋಜನೆಗಳಿಗೆ ಹಣವಿಲ್ಲ. ಈ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಪೆಟ್ರೋಲ್ ಹಾಗೂ ಡೀಸೆಲ್ ಬೆಲೆಯನ್ನು ಏರಿಸಿದೆ. ಇದಕ್ಕೆ ಪೂರಕ ಎಂಬಂತೆ ರಾಜ್ಯದ ಕೆಲ ಸಚಿವರು ಮಾತನಾಡಿದ್ದು, ಗ್ಯಾರಂಟಿ ಯೋಜನೆಗೆ ಹಣ ಅನುಷ್ಠಾನ ಮಾಡಲಾಗದ ಸರ್ಕಾರ ಪೆಟ್ರೋಲ್ ದರ ಏರಿಕೆ ಮೂಲಕ ಜನರ ಜೇಬಿಗೆ ಕತ್ತರಿ ಹಾಕಿದೆ ಎಂದು ಟೀಕಿಸಿದರು.

ಕುದುರೆಮುಖದಲ್ಲಿ ಐರನ್‌ಓರ್ ಯೂನಿಟ್ ಯೋಜನೆಗೆ ಸಂಬಂಧಿಸಿದಂತೆ ಆತುರದಲ್ಲಿ ನಾನು ಸಹಿ ಮಾಡಿಲ್ಲ, ಕೆಲವು ಅತುರದ ನಿರ್ಧಾರ ಎಂದು ಅಭಿಪ್ರಾಯಪಟ್ಟಿದ್ದಾರೆ. ನಾನು ಉಕ್ಕು ಹಾಗೂ ಕೈಗಾರಿಕಾ ಸಚಿವನಾಗಿ ರಾಜ್ಯಕ್ಕೆ ಸಂಬಂಧಿಸಿದಂತೆ ಒಂದು ಯೋಜನೆಗೆ ಚಾಲನೆ ನೀಡುವ ದೃಷ್ಟಿಯಿಂದ ಸಹಿ ಮಾಡಿದ್ದೇನೆ. ಈ ಯೋಜನೆಯಿಂದ ಅರಣ್ಯ ನಾಶವಾಗುತ್ತದೆ ಎಂಬುದು ತಪ್ಪು ಕಲ್ಪನೆಯಾಗಿದ್ದು, 2005ರಲ್ಲೇ ಕುದುರೆಮುಖ ಯೋಜನೆಯ ಪುನಶ್ಚೇತನದ ಚರ್ಚೆ ನಡೆದಿತ್ತು. ಅದರ ಅನುಮೋದನೆ ಸಿಕ್ಕಿದ್ದು 2016ರಲ್ಲಿ ಯೋಜನೆಯಿಂದ ಸರ್ಕಾರಕ್ಕೆ ಲಾಭ ಹಾಗೂ ಸಾವಿರಾರು ಮಂದಿಗೆ ಉದ್ಯೋಗ ಸೃಷ್ಟಿಯಾಗುವ ಉದ್ದೇಶದಿಂದ ಯೋಜನೆಗೆ ಸಹಿ ಮಾಡಿದ್ದೇನೆ ಎಂದು ಸ್ಪಷ್ಟನೆ ನೀಡಿದರು.

ಈ ಸಂದರ್ಭದಲ್ಲಿ ಶಾಸಕರಾದ ಜಿ.ಟಿ.ದೇವೇಗೌಡ, ಹೆಚ್.ಟಿ.ಮಂಜು, ಕೆ.ವಿವೇಕಾನಂದ, ಮಾಜಿ ಶಾಸಕರಾದ ಸಿ.ಎಸ್.ಪುಟ್ಟರಾಜು, ರವೀಂದ್ರ ಶ್ರೀಕಂಠಯ್ಯ, ಸುರೇಶ್‌ಗೌಡ, ಡಾ.ಕೆ.ಅನ್ನದಾನಿ, ಮುಖಂಡರಾದ ಬಿ.ಆರ್.ರಾಮಚಂದ್ರು, ಸಚ್ಚಿದಾನಂದ ಸೇರಿದಂತೆ ಹಲವು ಮಂದಿ ಉಪಸ್ಥಿತರಿದ್ದರು.

ಸುದ್ದಿಗೋಷ್ಠಿಯ ಬಳಿಕ ಜಿಲ್ಲಾಧಿಕಾರಿ ಡಾ.ಕುಮಾರ, ಎಸ್ಪಿ ಎನ್.ಯತೀಶ್, ಜಿ.ಪಂ. ಸಿಇಓ ಶೇಕ್ ತನ್ವೀರ್ ಆಸೀಫ್ ಸೇರಿದಂತೆ ಹಲವು ಮಂದಿ ಅಧಿಕಾರಿಗಳೊಂದಿಗೆ ಜಿಲ್ಲಾಧಿಕಾರಿ ಕಚೇರಿಯಲ್ಲಿ ಹೆಚ್ಡಿಕೆ ಸಭೆ ನಡೆಸಿದರು.

ಕೆರೆಗಳ ಹೂಳೆತ್ತುವ ಕೆಲಸ ಚುರುಕುಗೊಳಿಸಿ



ಕೆರೆ ಅಭಿವೃದ್ಧಿ ಮತ್ತು ಸಂರಕ್ಷಣೆ ಕುರಿತು ಎಡಿಸಿ ಡಾ.ಎಚ್.ಎಲ್.ನಾಗರಾಜ್ ಮಾತನಾಡಿದರು.

ಮಂಡ್ಯ, ಜೂ.15–ಮಳೆಗಾಲ ಪ್ರಾರಂಭವಾಗುತ್ತಿದ್ದು, ಹೂಳೆತ್ತುವ ಕೆಲಸ ಬಾಕಿ ಇರುವ ಕೆರೆಗಳನ್ನು ಪಟ್ಟಿ ಮಾಡಿ ಕೆಲಸ ಚುರುಕುಗೊಳಿಸಿ ಎಂದು ಅಪರ ಜಿಲ್ಲಾಧಿಕಾರಿ ಡಾ.ಎಚ್.ಎಲ್.ನಾಗರಾಜ್ ಅವರು ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸಿದರು.

ಅವರು ಇಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಕೆರೆಗಳ ಸಂರಕ್ಷಣೆ ಮತ್ತು ಅಭಿವೃದ್ಧಿಗೆ ಸಂಬಂಧಿಸಿದ ಸಭೆ ನಡೆಸಿ ಮಾತನಾಡಿದರು.

ಮಂಡ್ಯ ಜಿಲ್ಲೆಯಲ್ಲಿ 962 ಕೆರೆಗಳನ್ನು ಈಗಾಗಲೇ ಗುರುತಿಸಿದ್ದೇವೆ, ಕೆರೆ ಸಂರಕ್ಷಣೆ ಮತ್ತು ಅಭಿವೃದ್ಧಿಗೆ ಸಂಬಂಧಿಸಿದಂತೆ ಈಗಾಗಲೇ ರಾಜ್ಯಮಟ್ಟದ ಸಮಿತಿಯಿಂದ ನಿರ್ದೇಶನ ಬಂದಿರುವ ರೀತಿ ಹಾಗೂ ಮಾನ್ಯ ಕರ್ನಾಟಕ ಉಚ್ಚನ್ಯಾಯಾಲಯದ ರೀತಿ ನಮ್ಮ ಜಿಲ್ಲೆಯಲ್ಲು ಕೂಡ ಒಂದು ಜಿಲ್ಲಾ ಮಟ್ಟದ ಸಮಿತಿಯನ್ನು ಮಾಡಿ ನಮ್ಮ ಜಿಲ್ಲಾ ವ್ಯಾಪ್ತಿಯಲ್ಲಿ ಬರುವಂತಹ ಜಿಲ್ಲಾ ಪಂಚಾಯತ್, ಸಣ್ಣ ನೀರಾವರಿ ಇಲಾಖೆ, ಕಾವೇರಿ ನೀರಾವರಿ ನಿಗಮ ಇಲಾಖೆ, ಹೇಮಾವತಿ ಎಡದಂಡೆ ನಾಲಾ ವಿಭಾಗದ ವ್ಯಾಪ್ತಿಗೆ ಬರುವಂತಹ ಕೆರೆಗಳನ್ನು ಗುರುತಿಸಿ ಆಯಾ ಇಲಾಖೆ ಅವರು ಸರ್ವೆ ಕಾರ್ಯಕೈಗೊಂಡು ಸುಮಾರು 262 ಕೆರೆಗಳ ಒತ್ತುವರಿ ತೆರವುಗೊಳಿಸಲಾಗಿದೆ. ಇನ್ನುಳಿದ ಕೆರೆಗಳ ತೆರವುಗೊಳಿಸುವ ಕಾರ್ಯವು ಪ್ರಗತಿಯಲ್ಲಿದೆ ಎಂದರು.

ರಕ್ತಕ್ಕೆ ಪರ್ಯಾಯವಾದ ಯಾವುದೇ ವಸ್ತುವಿಲ್ಲ



ಶ್ರೀರಂಗಪಟ್ಟಣ, ಜೂ.15–ರಕ್ತಕ್ಕೆ ಪರ್ಯಾಯವಾದ ಯಾವುದೇ ವಸ್ತುವಿಲ್ಲ, ರಕ್ತದಾನದಿಂದ ಮಾತ್ರ ಮನುಷ್ಯರ ಜೀವ ಉಳಿಸಲು ಸಾಧ್ಯ ಎಂದು ಓಂ ಶ್ರೀನಿಕೇತನ ಟ್ರಸ್ಟ್ ಅಧ್ಯಕ್ಷರೂ ಆದ ವಕೀಲ ಎಂ. ಪುಟ್ಟೇಗೌಡ ಅಭಿಪ್ರಾಯಪಟ್ಟಿದ್ದಾರೆ.

ಪಟ್ಟಣದ ಸಾರ್ವಜನಿಕ ಆಸ್ಪತ್ರೆಯಲ್ಲಿ ತಾಲೂಕು ಆರೋಗ್ಯಾಧಿಕಾರಿಗಳ ಕಚೇರಿ, ಓಂ ಶ್ರೀನಿಕೇತನ ಟ್ರಸ್ಟ್, ಪರಿವರ್ತನಾ ಕಾಲೇಜು, ಉದ್ಯೋಗದಾತ ಸಂಸ್ಥೆ, ರಕ್ತನಿಧಿ ಕೇಂದ್ರ ಮಂಡ್ಯ, ಇತರೆ ಸಂಘ ಸಂಸ್ಥೆಗಳ ಸಹಯೋಗದಲ್ಲಿ ವಿಶ್ವ ರಕ್ತದಾನಿಗಳ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ ಬೃಹತ್ ಸ್ವಯಂ ಪ್ರೇರಿತ ರಕ್ತದಾನ ಶಿಬಿರ ಉದ್ಘಾಟಿಸಿ ಅವರು ಮಾತನಾಡಿದರು.

ದಿನ ನಿತ್ಯ ಸಂಭವಿಸುತ್ತಿರುವ ಅಪಘಾತದ ಗಾಯಾಳುಗಳಿಗೆ, ಹೆರಿಗೆಗೆ ದಾಖಲಾಗುವ ಗರ್ಭಿಣಿಯರಿಗೆ, ರಕ್ತಹೀನತೆ ಹಾಗೂ ಇತರೆ ರೋಗಗಳಿಂದ ಬಳಲುತ್ತಿರುವವರಿಗೆ ತುರ್ತಾಗಿ ರಕ್ತದ ಅಗತ್ಯವಿರುತ್ತದೆ. 18 ರಿಂದ 65 ವರ್ಷದ ನಡುವಿನ ಆರೋಗ್ಯವಂತರು ರಕ್ತದಾನ ಮಾಡಿ, ಇಂತಹ ಪವಿತ್ರ ಕಾರ್ಯದಲ್ಲಿ ಭಾಗವಹಿಸಿ ರಕ್ತದಾನ ಮಾಡಬೇಕು. ಹಾಗೂ ಬೇರೆಯವರಿಗೂ ರಕ್ತದಾನ ಮಾಡಲು ಪ್ರೇರೇಪಣೆ ನೀಡಬೇಕು ಎಂದು ಮನವಿ ಮಾಡಿದರು.

ತಹಶೀಲ್ದಾರ್ ಪರಶುರಾಮ ಸತ್ತಿಗೇರಿ ಮಾತನಾಡಿ, ರಕ್ತದಾನ ಮಾಡುವುದು ಒಗ್ಗಟ್ಟಿನ ಪ್ರಕ್ರಿಯೆ ಆಗಿದ್ದು ಈ ಪ್ರಯತ್ನಕ್ಕೆ ಕೈಜೋಡಿಸಿ ಜೀವ ಉಳಿಸುವ ಕೆಲಸ ಮಾಡೋಣ. ಯುವಕರು ರಕ್ತದಾನದಂತಹ ಪವಿತ್ರ ಕಾರ್ಯದಲ್ಲಿ ಸ್ವಯಂ ಪ್ರೇರಿತರಾಗಿ ರಕ್ತದಾನ ಮಾಡಲು ಮುಂದೆ ಬರಬೇಕು ಎಂದರು. ಹಿರಿಯ ಗಾಂಧಿವಾದಿ ಡಾ.ಸುಜಯ್ ಕುಮಾರ್, ಆರಕ್ಷಕ ನಿರೀಕ್ಷಕ ಪುನೀತ್, ಶ್ರೀ ರಂಗನಾಯಕಿ ಸ್ತ್ರೀ ಸಮಾಜದ ಅಧ್ಯಕ್ಷೆ ಆಶಾಲತ ಪುಟ್ಟೇಗೌಡ, ಅನನ್ಯ ಹಾಟ್ಸರ್ ಅಧ್ಯಕ್ಷೆ ಅನುಪಮ ಮಾತನಾಡಿದರು.

ಸುಮಾರು ನೂರಕ್ಕೂ ಹೆಚ್ಚು ಮಂದಿ ವಿವಿದೆಡೆಯಿಂದ ಆಗಮಿಸಿ ಸ್ವಯಂ ಪ್ರೇರಿತ ರಕ್ತದಾನ ಮಾಡಿದರು.

ಇಂದು ಡಾ.ಜೀಶಂಪ ಸಾಹಿತ್ಯ ವೇದಿಕೆಯಿಂದ ಅಕ್ಷರ ಜಾತ್ರೆ



ಮಂಡ್ಯ, ಜೂ.15 ಡಾ.ಜೀಶಂಪ ಸಾಹಿತ್ಯ ವೇದಿಕೆ, ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಫಿಲಂಸ್ ಮಂಡ್ಯ ಇವರ ಸಂಯುಕ್ತಾಶ್ರಯದಲ್ಲಿ ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಜಯಂತಿ ಅಂಗವಾಗಿ 6ನೇ ಕನ್ನಡ ಅಕ್ಷರ ಜಾತ್ರೆ, ವಿವಿಧ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಜೂನ್ 16ರ ಭಾನುವಾರ ನಗರದ ಗಾಂಧಿಭವನದಲ್ಲಿ ಬೆಳಗ್ಗೆ 10.30ಕ್ಕೆ ಹಮ್ಮಿಕೊಳ್ಳಲಾಗಿದೆ.

ಸಮ್ಮೇಳನಾಧ್ಯಕ್ಷರಾಗಿ ಖ್ಯಾತ ವೈದ್ಯರೂ ಆದ ಸಾಹಿತಿ ಡಾ.ಕೆ.ಚಂದ್ರಶೇಖರ್ ಅವರನ್ನು ಆಯ್ಕೆ ಮಾಡಲಾಗಿದ್ದು, ಸಮ್ಮೇಳನವನ್ನು ಮೈಸೂರು ವಿವಿ ಸಿಂಡಿಕೇಟ್‌ನ ಮಾಜಿ ಸದಸ್ಯ ಡಾ.ಈ.ಸಿ.ನಿಂಗರಾಜೇಗೌಡ ಉದ್ಘಾಟಿಸಲಿದ್ದಾರೆ. ರಾಜ್ಯ ಆರ್‌ಟಿಓ ನೌಕರರ ಸಂಘದ ಅಧ್ಯಕ್ಷ ಮಲ್ಲಿಕಾರ್ಜುನ್ ಆರ್‌ಟಿಓ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದು, ಕನ್ನಡ ಸಾಹಿತ್ಯ ಪರಿಷತ್ತಿನ ಮಾಜಿ ಜಿಲ್ಲಾಧ್ಯಕ್ಷ ಡಾ.ಎಚ್.ಎಸ್. ಮುದ್ದೇಗೌಡ 'ಹೆಜ್ಜೆ ಗುರುತು' ಕೃತಿ ಬಿಡುಗಡೆ ಮಾಡಲಿದ್ದು, ಕವಿ ಹಾಗೂ ಶಿಕ್ಷಕ ಕೊತ್ತತ್ತಿ ರಾಜು 'ಹೆಜ್ಜೆ ಗುರುತು' ಪುಸ್ತಕ ಕುರಿತು ಮಾತನಾಡಲಿದ್ದಾರೆ.

ವಿಧಾನಪರಿಷತ್ ಸದಸ್ಯ ಕೆ.ವಿವೇಕಾನಂದ ವಿವಿಧ ಪ್ರಶಸ್ತಿ ಪ್ರದಾನ ಮಾಡಲಿದ್ದು, ಮುಖ್ಯ ಅತಿಥಿಗಳಾಗಿ ಹಿರಿಯ ಪತ್ರಕರ್ತ ಮತ್ತೀಕೆರೆ ಜಯರಾಂ ಭಾಗಿಯಾಗಲಿದ್ದು, ಜೀಶಂಪ ಸಾಹಿತ್ಯ ವೇದಿಕೆ ಅಧ್ಯಕ್ಷ ಎಸ್.ಕೃಷ್ಣಸ್ವರ್ಣಸಂದ್ರ ಪ್ರಾಸ್ತಾವಿಕ ನುಡಿಗಳನ್ನಾಡಲಿದ್ದಾರೆ. ಇದೇ ಸಂದರ್ಭದಲ್ಲಿ ಗಣ್ಯರಾದ ಈ.ಸಿ.ನಿಂಗರಾಜೇಗೌಡ, ಆರ್‌ಟಿಓ ಮಲ್ಲಿಕಾರ್ಜುನ್, ಕೆ.ವಿವೇಕಾನಂದ, ಸಮಾಜ ಸೇವಕಿ ಕಾವೇರಮ್ಮ ಅವರಿಗೆ ನಾಗರೀಕ ಅಭಿನಂದನೆ ನೆರವೇರಿಸಲಾಗುವುದು.

ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಪ್ರಶಸ್ತಿಯನ್ನು ಉಪನ್ಯಾಸಕ ಮಂಜುನಾಥ್, ಕವಿ ರಮೇಶ್ ಕಟ್ಟೆಪುರ, ಶಿಕ್ಷಕಿ ಇಂದಿರಾ ಲೋಕೇಶ್, ಕವಿ ಬಿ.ಆರ್.ಉಮಾ, ಸಮಾಜ ಸೇವಕಿ ಲೀಲಾ ಗುರುರಾಜ್, ಕಲಾವಿದ ಡಾ.ಶ್ರೀಕಾಂತ್, ಪತ್ರಕರ್ತ ಎಸ್.ನಾರಾಯಣ ಸ್ವಾಮಿ, ಸಮಾಜಸೇವಕಿ ಡಾ.ಶೇಕ್ ಉಮ್ಮರ್, ಚಿತ್ರನಟಿ ಸುಶ್ಮಿತಾ ಶೆಟ್ಟಿಗೆ ನೀಡಲಾಗುವುದು. ಕನ್ನಡರತ್ನ ಪ್ರಶಸ್ತಿಯನ್ನು ಎ.ಸೋಮಶೇಖರ್, ಕಲೀಮುಲ್ಲಾ, ಪ್ರಕಾಶ್, ಎಸ್.ಜೆ.ಮಂಜುನಾಥ್, ಎಸ್. ಕೃಷ್ಣೇಗೌಡ, ವಾಣಿ ರಾಘವೇಂದ್ರ, ಜಿ. ಸರಸ್ವತಮ್ಮ, ಕೃಷ್ಣಮೂರ್ತಿ, ಹೆಚ್.ಶಿವಮಾದಯ್ಯ ಅವರಿಗೆ ನೀಡಲಾಗುವುದು.

ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಅಕ್ಷರ ಜಾತ್ರೆ ಕಾರ್ಯಕ್ರಮವು ಮಧ್ಯಾಹ್ನ 2.30ಕ್ಕೆ ಜರುಗಲಿದ್ದು, ಸಾಹಿತಿ ಡಾ.ವಿಜಯ್ ಕುಮಾರ್ ಕಾರ್ಯಕ್ರಮಕ್ಕೆ ಚಾಲನೆ ನೀಡಲಿದ್ದು, ಸಮ್ಮೇಳನಾಧ್ಯಕ್ಷ ಡಾ.ಚಂದ್ರಶೇಖರ್ ಉಪಸ್ಥಿತರಿರಲಿದ್ದು, ಶಿಕ್ಷಕ ಮಂಗಲ ಶಿವಣ್ಣ ಕವಿಗಳಿಗೆ ಪ್ರಮಾಣ ಪತ್ರ ವಿತರಣೆ ಮಾಡಲಿದ್ದು, ಶರಣ ಸಾಹಿತ್ಯ ಪರಿಷತ್ತಿನ ಮಾಜಿ ಅಧ್ಯಕ್ಷ ಬನ್ನಂಗಾಡಿ ಸಿದ್ದಲಿಂಗಯ್ಯ ಕವಿಕಾವ್ಯ ಮೇಳನದ ಪ್ರಶಸ್ತಿ ಪ್ರದಾನ ಮಾಡುವರು. ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ರಾಜ್ಯ ಮಟ್ಟದ ಕಾವ್ಯಶ್ರೀ ಪ್ರಶಸ್ತಿಯನ್ನು ಸುಧೀಂದ್ರ ಆರ್.ವೈದ್ಯ, ಋತು ಸ್ಪರ್ಶ, ಶೋಭಾ ನಾಗಭೂಷಣ, ಸರಿತ.ಹೆಚ್, ಎಂ.ರೂಪ ಸೇರಿದಂತೆ ರಾಜ್ಯದ ವಿವಿಧ ಮೂಲೆಗಳಿಂದ ನೂರಾರು ಕವಿಗಳು ಭಾಗವಹಿಸಲಿದ್ದಾರೆ.

ಸಮ್ಮೇಳನಾಧ್ಯಕ್ಷ ಡಾ.ಕೆ.ಚಂದ್ರಶೇಖರ್ ಪರಿಚಯ: ಮಂಡ್ಯ ಜಿಲ್ಲೆ ರಾಜ್ಯದಲ್ಲೇ ಅತಿ ಹೆಚ್ಚು ಕನ್ನಡವನ್ನು ಮಾತನಾಡುವ ಗಂಡು ಮೆಟ್ಟಿನ ಕನ್ನಡದ ಗಂಡು ಭೂಮಿ. ಹತ್ತು ಹಲವು ಪ್ರಥಮಗಳನ್ನು ಸಾಧಿಸಿದ ಜಿಲ್ಲೆ ಏಷ್ಯಾ ಖಂಡಕ್ಕೆ ಪ್ರಥಮವಾಗಿ ಮೂಲಭೂತ ಸೌಕರ್ಯಗಳಾದ ನೀರು, ಬೆಳಕು, ಸಿಹಿಯನ್ನು ನೀಡಿದೆ. ಸಾಹಿತ್ಯ, ಶಿಕ್ಷಣ, ಧಾರ್ಮಿಕ, ಸಿನಿಮಾ ಹಾಗೂ ರಾಜಕೀಯ ಕ್ಷೇತ್ರದಲ್ಲೂ ಮೈಲಿಗಲ್ಲು ಸಾಧಿಸಿದೆ. ಇಂತಹ ಹಸಿರು ಜಿಲ್ಲೆ, ಭತ್ತದಕಣಜ, ಸಕ್ಕರೆ ನಾಡು ಎಂಬ ಹೆಗ್ಗಳಿಕೆಗೆ ಪಾತ್ರವಾಗಿರುವ ಮಂಡ್ಯ ತಾಲೂಕಿನ ಹೆಚ್.ಕೋಡಿಹಳ್ಳಿ ಗ್ರಾಮದ ರೈತ ಕುಟುಂಬದ ಶ್ರೀ ಕೆ.ಸಿ.ಕಾಳೇಗೌಡ ಮತ್ತು ಶ್ರೀಮತಿ ಜಯಮ್ಮ ಪುತ್ರರಾಗಿ ಡಾ.ಕೆ. ಚಂದ್ರಶೇಖರ್ ಅವರು ಜನಿಸಿದರು.

ವೃತ್ತಿಯಲ್ಲಿ ವೈದ್ಯರು, ಪ್ರವೃತ್ತಿಯಲ್ಲಿ ಸಾಹಿತಿಗಳಾದ ಡಾ.ಕೆ.ಚಂದ್ರಶೇಖರ್ ಅವರು ಮೈಸೂರು ಮೆಡಿಕಲ್ ಕಾಲೇಜಿನಲ್ಲಿ ಪದವಿ ಮತ್ತು ರೋಗ ಶಾಸ್ತ್ರ ವಿಭಾಗದಲ್ಲಿ ಸ್ನಾತಕೋತ್ತರ ಪದವಿ ಪಡೆದು, ಸರ್ಕಾರಿ ಕೆಲಸಕ್ಕೆ ಜೋತು ಬೀಳದೆ, ಪತ್ನಿ ಹೆಸರಿನಲ್ಲಿ ತಾರಾ ಡಯೋಗ್ನೋಸ್ಟಿಕ್ ಸೆಂಟರ್ ಸ್ಥಾಪಿಸಿ, ಆ ಮೂಲಕ ರೋಗಿಗಳ ರೋಗರುಜಿನ ಪರೀಕ್ಷೆಗೆ ತಮ್ಮನ್ನು ತಾವು ಅರ್ಪಿಸಿಕೊಂಡು. ಮಂಡ್ಯದಲ್ಲಿ ಹೆಸರು ಮಾಡಿದರು. ನಂತರ ತಾರಾ ಸೂಪರ್ ಸ್ಪೆಷಾಲಿಟಿ ಪಾಲಿಕ್ಲಿನಿಕ್, ತಾರಾ ಸ್ಟಾರ್ ಡಯೊಗ್ನೋಸ್ಟಿಕ್, ತಾರಾ ಇನ್‌ಸ್ಟಿಟ್ಯೂಟ್ ಆಫ್ ಪ್ಯಾರ ಮೆಡಿಕಲ್ ಸೈನ್ಸಸ್, ತಾರಾ ಕಣ್ಣಿನ ಆಸ್ಪತ್ರೆ, ಡಾ.ಅಪ್ಪಾಜಿ ಮೆಮೋರಿಯಲ್ ಡೆಂಟಲ್ ಕ್ಲಿನಿಕ್‌ನ್ನು ಸ್ಥಾಪಿಸಿ 'ವೈದ್ಯೋ ನಾರಾಯಣ ಹರಿ' ಎಂಬತೆ. ಮಂಡ್ಯ ಜನರ ರೋಗಕ್ಕೆ ಆರೋಗ್ಯ ಭಾಗ್ಯ ನೀಡುತ್ತಿರುವ 'ನಿಜವಾದ ವೈದ್ಯೋ ನಾ ರಾಯಣ ಹರಿ', ಡಾ.ಚಂದ್ರಶೇಖರ್ ಅವರು ಎಂದರೆ ತಪ್ಪಾಗಲಾರದು.

ಶ್ರೀಮಂಚಮ್ಮ ದೇವಸ್ಥಾನದ ಕಾಮಗಾರಿಗೆ ಭೂಮಿಪೂಜೆ



ಭಾರತೀನಗರ ಸಮೀಪದ ಅಣ್ಣೂರು ಗ್ರಾಮದಲ್ಲಿ ನೂತನವಾಗಿ ನಿರ್ಮಾಣಗೊಳ್ಳುತ್ತಿರುವ ಶ್ರೀಮಂಚಮ್ಮ ದೇವಸ್ಥಾನದ ಅಭಿವೃದ್ಧಿ ಕಾಮಗಾರಿಗೆ ಭೂಮಿಪೂಜೆ ನೆರವೇರಿತು.

ಮೂರನೇ ಪುಟದಿಂದ

ಕೋಟ್ಯಾಂತರ ವೆಚ್ಚದಲ್ಲಿ ನೆಟ್ಟ ಗಿಡಗಳೇ ಕಾಣಿಸುತ್ತಿಲ್ಲ!

ಯೋಜನೆ ಬಿ.ಸಿ. ಟ್ರಸ್ಟ್ ಸಂಯುಕ್ತವಾಗಿ ಆಯೋಜಿಸಿದ್ದ ಲಕ್ಷ ವೃಕ್ಷ ಯೋಜನಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಈ ವರ್ಷ 5 ಕೋಟಿ ಗಿಡಗಳನ್ನು ನೆಡಲಾಗಿದೆ. ಇವುಗಳಲ್ಲಿ ಶೇಕಡ 80ರಷ್ಟು ಗಿಡಗಳು ಬೆಳೆಯುತ್ತಿವೆ ಎಂದು ಅರಣ್ಯ ಇಲಾಖೆಯವರು ಮಾಹಿತಿ ನೀಡುತ್ತಿದ್ದಾರೆ. ಆದರೆ ಆ ಗಿಡಗಳು ನನ್ನ ಕಣ್ಣಿಗೆ ಕಾಣಿಸುತ್ತಿಲ್ಲ ಎಂದರು. ಸರ್ಕಾರ ಕೋಟ್ಯಾಂತರ ರೂಪಾಯಿ ವೆಚ್ಚ ಮಾಡಿ ನೆಟ್ಟ ಗಿಡಗಳು ಕಾಣಿಸುತ್ತಿವಲ್ಲ ಎಂದು ವೇದಿಕೆಯಲ್ಲಿದ್ದ ಅರಣ್ಯ ಸಚಿವ ಈಶ್ವರ ಖಂಡ್ರೆ ಅವರನ್ನು ಕೇಳಿದರು. ಅಂದರೆ ನೆಟ್ಟ ಗಿಡಗಳು ಏನಾಯಿತು ಎಂದು ನಾನು ಅರಣ್ಯ ಇಲಾಖೆಯ ಅಧಿಕಾರಿಗಳನ್ನು ಪ್ರಶ್ನಿಸುತ್ತಿದ್ದೇನೆ ಎಂದರು. ಸಾಮಾಜಿಕ ಅರಣ್ಯ ಯೋಜನೆಯಲ್ಲಿ ಗಿಡಗಳನ್ನು ನೆಟ್ಟು ಬೆಳೆಸುವ ಸಲುವಾಗಿ ಸರ್ಕಾರ ಕೋಟ್ಯಾಂತರ ರೂಪಾಯಿ ಖರ್ಚು ಮಾಡುತ್ತದೆ.

ಗಿಡ ನೆಟ್ಟು ಬೆಳೆಸಿದ ಬಗ್ಗೆ ದಾಖಲಾತಿ ಕೂಡ ಇರುತ್ತದೆ. ಆದರೆ ಗಿಡಗಳು ಮಾತ್ರ ಕಾಣಿಸುವುದಿಲ್ಲ. ಈ ಮೂಲಕ ಸಾಮಾಜಿಕ ಅರಣ್ಯ ಯೋಜನೆಯಲ್ಲಿ ಅವ್ಯವಹಾರ ನಡೆಯುತ್ತಿದೆ ಎಂಬ ಆರೋಪಗಳಿಗೆ ಸಿದ್ದರಾಮಯ್ಯ ನೀಡಿರುವ ಈ ಹೇಳಿಕೆ ಪುಷ್ಟಿ ನೀಡಿದೆ. ಪ್ರಕೃತಿ ನಮ್ಮ ಆದ್ಯತೆಯನ್ನು ಪೂರೈಸುತ್ತದೆಯೇ ಹೊರತು ದುರಾಸೆಯನ್ನಲ್ಲ ಎಂಬ ರಾಷ್ಟ್ರಪಿತ ಮಹಾತ್ಮ ಗಾಂಧಿ ಅವರ ಮಾತನ್ನು ಅರ್ಥೈಸಿಕೊಳ್ಳಬೇಕು. ಈ ಮೂಲಕ ಪರಿಸರ ಸಂರಕ್ಷಣೆ ನಮ್ಮ ಆದ್ಯ ಕರ್ತವ್ಯವಾಗಬೇಕು ಎಂದು ಸಿದ್ದರಾಮಯ್ಯ ಸಲಹೆ ನೀಡಿದರು.

ಪ್ರಕೃತಿಯಲ್ಲಿ ಶೇಕಡ 33ರಷ್ಟು ಕಾಡಿರಬೇಕು. ಆದರೆ ಕರ್ನಾಟಕದಲ್ಲಿ ಶೇಕಡ 19 ರಿಂದ 20ರಷ್ಟು ಮಾತ್ರ ಅರಣ್ಯವಿದೆ. ಕೆಲವು ಜಿಲ್ಲೆಗಳಲ್ಲಿ ಅರಣ್ಯ ಪ್ರದೇಶ ಬಹಳ ಕಡಿಮೆ ಇದ್ದು, ಶೇಕಡ 5ರಷ್ಟು ಅರಣ್ಯವಿರುವ ಬೀದರ್ ಇದಕ್ಕೆ ಸ್ಪಷ್ಟ ಉದಾಹರಣೆ ಎಂದು ಹೇಳಿದರು. ಶೇಕಡ 33ರಷ್ಟು ಅರಣ್ಯವಿದ್ದರೆ ಪರಿಸರ ಸಮತೋಲನವಾಗಿರುತ್ತದೆ. ಗಾಳಿ, ನೀರು, ಆಕಾಶ ಸ್ವಚ್ಛವಾಗಿರುತ್ತದೆ. ಗಿಡ, ಮರ ಬೆಳೆದು ಹಸಿರಾಗಿದ್ದರೆ ಜನರ ಆರೋಗ್ಯ ಕೂಡ ಚೆನ್ನಾಗಿರುತ್ತದೆ. ಆದ ಕಾರಣ ಪ್ರಕೃತಿ ಪ್ರೀತಿಸಿ, ಗೌರವಿಸಿ, ಸಂರಕ್ಷಣೆ ಮಾಡಬೇಕು ಎಂದು ಸಿದ್ದರಾಮಯ್ಯ ಮತ್ತೊಮ್ಮೆ ಸಲಹೆಯಿತ್ತರು. ಆದರೆ ಕಳೆದ ವರ್ಷ ಉಷ್ಣತೆಯ ಪ್ರಮಾಣ ಬಹಳ ಹೆಚ್ಚಾಗಿತ್ತು. ದೆಹಲಿಯಲ್ಲಿ 50 ಡಿಗ್ರಿ ಸೆಲ್ಸಿಯಸ್ ಉಷ್ಣಾಂಶ ದಾಖಲಾಗಿತ್ತು. ನಾನು ದೆಹಲಿಗೆ ಹೋದಾಗ ಹವಾ ನಿಯಂತ್ರಿತ ಕೊಠಡಿ ಬಿಟ್ಟು ಬರದಂತಹ ಪರಿಸ್ಥಿತಿ ನಿರ್ಮಾಣವಾಗಿತ್ತು ಎಂದು ಹೇಳಿದರು.

ಮೈಸೂರನ್ನು ನಿವೃತ್ತಿದಾರರ ಸ್ವರ್ಗ, ಬೆಂಗಳೂರನ್ನು ಉದ್ಯಾನನಗರಿ ಎಂಬ ಹೆಸರಿನಿಂದ ಕರೆಯಲಾಗುತ್ತಿತ್ತು. ಆದರೆ ಇಲ್ಲಿ ಕೂಡ 40 ಡಿಗ್ರಿ ಸೆಲ್ಸಿಯಸ್ ಮೀರಿದ ಉಷ್ಣಾಂಶ ದಾಖಲಾಗಿತ್ತು. ಇದರಿಂದ ಮೈಸೂರು ಹಾಗೂ ಬೆಂಗಳೂರಿಗಿದ್ದ ಹೆಸರುಗಳು ಮರೆಯಾಗುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಕರ್ನಾಟಕದ ಕೆಲವು ಜಿಲ್ಲೆಗಳಲ್ಲಿ 47 ಡಿಗ್ರಿ ಸೆಲ್ಸಿಯಸ್ ಉಷ್ಣಾಂಶ ದಾಖಲಾಗಿತ್ತು. ಇದಕ್ಕೆ ಪ್ರಮುಖ ಕಾರಣವೆಂದರೆ ಅರಣ್ಯದ ಪ್ರಮಾಣ ಕಡಿಮೆ ಆಗಿರುವುದು. ಆದ ಕಾರಣ ಪರಿಸರ ಸಂರಕ್ಷಣೆ ಮಾಡಬೇಕು ಎಂದು ಸಲಹೆ ನೀಡಿದರು.

ಪ್ರತಿಯೊಬ್ಬ ವ್ಯಕ್ತಿ ಎರಡು ಗಿಡ ನೆಡುವ ಪ್ರತಿಜ್ಞೆ ಮಾಡಬೇಕು. ಮನೆ ಮುಂದೆ ಇರುವ ಗಿಡ ಮರ ಕೀಳದೆ ಅವುಗಳನ್ನು ಬೆಳೆಸಬೇಕು ಎಂದು ಸಿದ್ದರಾಮಯ್ಯ ಹೇಳಿದರು. ಬಿಳಿಗಿರಿ ರಂಗನಬೆಟ್ಟದ ಸಸ್ಯ ಸಂರಕ್ಷಕ ರಾಮೇಗೌಡ, ಬೆಂಗಳೂರಿನ ಸಸ್ಯ ಸಂವರ್ಧಕ ವಿ.ಶ್ರೀನಿವಾಸರಾಜು ಅವರನ್ನು ಈ ವೇಳೆ ಸನ್ಮಾನಿಸಲಾಯಿತು. ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದ ಕಾರ್ಯಕ್ರಮದಲ್ಲಿ ಮೈಸೂರಿನ ಕುಂದೂರು ಮಠದ ಡಾ.ಶ್ರೀ ಶರತ್‌ಚಂದ್ರ ಸ್ವಾಮಿ ಆಶೀರ್ವಚನ ನೀಡಿದರು. ಅರಣ್ಯ ಸಚಿವ ಈಶ್ವರ ಖಂಡ್ರೆ ಸಸಿ ವಿತರಣೆ ಮಾಡಿದರು. ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಸಸ್ಯ ಸಂಭ್ರಮ ಕಿರು ಹೊತ್ತಿಗೆ ಬಿಡುಗಡೆ ಮಾಡಿದರು.

ಪಶು ಸಂಗೋಪನಾ ಸಚಿವ ಕೆ.ವೆಂಕಟೇಶ್, ಶಾಸಕ ತನ್ವೀರ್ ಸೇಠ್, ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಕಾರ್ಯಕ್ರಮದ ರೂವಾರಿ ಮಾಜಿ ಮುಡಾ ಅಧ್ಯಕ್ಷ ಹೆಚ್.ವಿ.ರಾಜೀವ್, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಶರಣಪ್ಪ ವಿ.ಹಲಸೆ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಕಾಡು ನಾಶವಾದರೆ ಮನುಷ್ಯನಿಗೆ ಸಂತೋಷ



ಕಾಡು ನಾಶವಾದರೆ ಮನುಷ್ಯ ಸಂಭ್ರಮಪಡುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಬೇಸರ ವ್ಯಕ್ತಪಡಿಸಿದರು. ಜಮೀನಿನ ಪಕ್ಕದಲ್ಲಿರುವ ಅರಣ್ಯ ನಾಶ ಮಾಡಿ ಒತ್ತುವರಿ ಮಾಡಿಕೊಳ್ಳುತ್ತಾರೆ. ಆ ವೇಳೆ 10 ಗಂಟೆ ಜಮೀನು ನನಗೆ ದಕ್ಕಿತು ಎಂದು ಮನುಷ್ಯ ಸಂತೋಷ ಪಡುತ್ತಾನೆ. ಮನುಷ್ಯನ ಇಂತಹ ಸಂತಸದ ಕ್ಷಣಗಳಿಗಾಗಿ ಅರಣ್ಯ ನಾಶವಾಗುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಇಂದು ಜಾಗತಿಕ ತಾಪಮಾನ ಹೆಚ್ಚಾಗುತ್ತಿದೆ. ಹಿಮಾಲಯದಲ್ಲಿ ಮಂಜಿನಗಡ್ಡೆ ಕರಗುತ್ತಿದೆ. ಇದರಿಂದ ಪರಿಸರದ ಮೇಲೆ ಬಹಳಷ್ಟು ದುಷ್ಪರಿಣಾಮ ಬೀರುತ್ತಿದೆ ಎಂದರು. ಪರಿಸರ ಸಮತೋಲನ ಬಹಳ ಮುಖ್ಯ ವಾಗಿದೆ. ಈ ನಿಟ್ಟಿನಲ್ಲಿ ಸ್ವಯಂ ಪ್ರೇರಣೆಯಿಂದ ಗಿಡ ಮರ ಬೆಳೆಸಬೇಕು. ಗಾಳಿ, ನೀರು, ಆಕಾಶ ಶುದ್ಧವಾಗಿದ್ದರೆ ಮನುಷ್ಯ ಕೂಡ ಕ್ಷೇಮವಾಗಿರುತ್ತಾನೆ ಎಂದು ಶ್ರೀಗಳು ಅಭಿಪ್ರಾಯಪಟ್ಟರು.

ಪರಿಸರ ಮಾಲಿನ್ಯದಿಂದ ಮನುಷ್ಯನ ಆಯಸ್ಸು ಕಡಿಮೆ



ಪರಿಸರ ಮಾಲಿನ್ಯದಿಂದ ಇಂಗಾಲ ಡೈಆಕ್ಸೈಡ್ ಪ್ರಮಾಣ ಹೆಚ್ಚಾದರೆ ಮನುಷ್ಯನ ಆಯಸ್ಸು ಕೂಡ ಕಡಿಮೆಯಾಗುತ್ತದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಎಚ್ಚರಿಸಿದರು. ಇಂಗಾಲ ಡೈಆಕ್ಸೈಡ್ ಪ್ರಮಾಣ ಹೆಚ್ಚಾದರೆ ಮನುಷ್ಯನ ಬದುಕಿನ ದಿನಗಳು ಕಡಿಮೆಯಾಗುತ್ತದೆ. ಜೊತೆಗೆ ಚರ್ಮ ರೋಗ ಸೇರಿದಂತೆ ಇತರೆ ಖಾಯಿಲೆಗಳಿಂದ ಮನುಷ್ಯ ಬಾಧಿಸಬೇಕಾಗುತ್ತದೆ ಎಂದು ಹೇಳಿದರು.

ಸ್ವತಂತ್ರ ಬಂದಾಗ ಭಾರತದಲ್ಲಿ 35 ಕೋಟಿ ಜನ ಸಂಖ್ಯೆ ಇತ್ತು. ಆದರೆ ಈಗ 140 ಕೋಟಿ ಜನಸಂಖ್ಯೆಯಾಗಿದೆ. ಜನಸಂಖ್ಯೆ ಹೆಚ್ಚಳದಿಂದ ಗಿಡಮರಗಳು ನಾಶವಾಗುತ್ತಿವೆ. ರಾಷ್ಟ್ರೀಯ ಅರಣ್ಯ ನೀತಿ ಪ್ರಕಾರ ಭೌಗೋಳಿಕವಾಗಿ ಶೇಕಡ 33ರಷ್ಟು ಅರಣ್ಯವಿರಬೇಕು. ಆದರೆ ನಮ್ಮಲ್ಲಿ ಅರಣ್ಯ ವ್ಯಾಪ್ತಿ ಕಡಿಮೆಯಾಗುತ್ತಿದೆ. ಹಸಿರು ಮರೆಯಾದರೆ ಉಸಿರಾಟದ ತೊಂದರೆ ಸೇರಿದಂತೆ ಇತರೆ ಸಮಸ್ಯೆಗಳು ಮನುಷ್ಯನನ್ನು ಕಾಡಲಾರಂಭಿಸುತ್ತದೆ ಎಂದು ಆತಂಕ ವ್ಯಕ್ತಪಡಿಸಿದರು.

ಮೈಸೂರು ಸುತ್ತಲಿನ 140 ಕಿಲೋಮೀಟರ್ ವ್ಯಾಪ್ತಿಯಲ್ಲಿ ಗಿಡಮರ ಬೆಳೆಸುವ ಅವಕಾಶವಿದ್ದು, ಈ ಕಾರ್ಯವನ್ನು ಎಲ್ಲರೂ ಸೇರಿ ಮಾಡಬೇಕು. ಕಾಡು ಉಳಿದರೆ ನಾಡು ಉಳಿಯುತ್ತದೆ ಎಂಬ ವಾಸ್ತವತೆಯನ್ನು ಅರಿಯಬೇಕು ಎಂದು ಡಾ.ಮಹದೇವಪ್ಪ ಸಲಹೆ ನೀಡಿದರು.

25 ಕೋಟಿ ಸಸಿ ನೆಡುವ ಗುರಿ

ಸಂರಕ್ಷಣೆ ಮಾಡದಿದ್ದರೆ ಮನುಕುಲಕ್ಕೆ ಉಳಿಗಾಲವಿಲ್ಲ ಎಂದು ಎಚ್ಚರಿಸಿದರು. ಮೈಸೂರನ್ನು ನಿವೃತ್ತಿದಾರರ ಸ್ವರ್ಗ ಎಂದು ಕರೆಯಲಾಗುತ್ತಿತ್ತು. ಆದರೆ ಮೈಸೂರಿನಲ್ಲೇ ಇತ್ತೀಚೆಗೆ 40 ಡಿಗ್ರಿ ಸೆಲ್ಸಿಯಸ್ ಉಷ್ಣಾಂಶ ದಾಖಲಾಗಿತ್ತು. ಉತ್ತರ ಕರ್ನಾಟಕದಲ್ಲಿ 45 ಡಿಗ್ರಿ ಸೆಲ್ಸಿಯಸ್‌ಗೂ ಮೀರಿದ ಉಷ್ಣಾಂಶವಿತ್ತು. ಇದು ಮಿತಿ ಮೀರಿ ಉಷ್ಣಾಂಶದ ಪ್ರಮಾಣ 55 ಡಿಗ್ರಿ ಸೆಲ್ಸಿಯಸ್ ತಲುಪಿದರೆ ಮನುಷ್ಯನಿಗೆ ಉಳಿಗಾಲವಿಲ್ಲ ಎಂದು ಮತ್ತೊಮ್ಮೆ ಎಚ್ಚರಿಕೆ ನೀಡಿದರು. ಹವಾಮಾನ ವೈಪರೀತ್ಯದ ಕಾರಣ ಅತಿವೃಷ್ಟಿ, ಅನಾವೃಷ್ಟಿಗಳಾಗುತ್ತಿದೆ. ಮನುಷ್ಯ ಐಷಾರಾಮಿ ಜೀವನಕ್ಕಾಗಿ ನೈಸರ್ಗಿಕ ಸಂಪತ್ತನ್ನು ನಾಶ ಮಾಡುತ್ತಿದ್ದಾನೆ. ಕೈಗಾರಿಕೆಗಳ ತ್ಯಾಜ್ಯ ಸೇರಿದಂತೆ ಕಲುಷಿತ ನೀರು ನದಿ ಸೇರುತ್ತಿದೆ. ಇದರ ದುಷ್ಪರಿಣಾಮ ಅರಿಯಬೇಕು. ಈ ಹಿನ್ನೆಲೆ ಪರಿಸರದ ಬಗ್ಗೆ ಜಾಗೃತಿ ಮೂಡಿಸಬೇಕು, ಕಾಳಜಿ ವಹಿಸಿ ಪರಿಸರ ಸಂರಕ್ಷಿಸಬೇಕು ಎಂದು ಈಶ್ವರ ಖಂಡ್ರೆ ಸಲಹೆ ನೀಡಿದರು.

ಮತ್ತೆ 5 ದಿನ ಪೊಲೀಸ್ ಕಸ್ಟಡಿಗೆ

ಕೇಳಿದರು. ಇದಕ್ಕೆ ಉತ್ತರಿಸಿದ ನಟ ದರ್ಶನ್ ಮತ್ತು ಸಹಚರರು ಇಲ್ಲವೆಂದು ಹೇಳಿದ್ದಾರೆ. ಆದರೆ, ನ್ಯಾಯಾಧೀಶರ ವಿಚಾರಣೆ ವೇಳೆ ನಟಿ ಹಾಗೂ ನಟ ದರ್ಶನ್ 2ನೇ ಪತ್ನಿ ಪವಿತ್ರಾಗೌಡ ಅವರು ಕಣ್ಣೀರು ಹಾಕಿದ್ದಾರೆ. ರೇಣುಕಾಸ್ವಾಮಿ ಕೊಲೆ ಬಗ್ಗೆ ವಾದ ಮಂಡಿಸುತ್ತಿರುವ ಎಸ್‌ಪಿಪಿ ಪ್ರಸನ್ನ ಕುಮಾರ್, ಪೊಲೀಸರು ರೇಣುಕಾಸ್ವಾಮಿ ಕೊಲೆ ಕೇಸಿನ ಬಗ್ಗೆ ಮತ್ತಷ್ಟು ಸ್ಥಳ ಮಹಜರು ಮತ್ತು ಟೆಕ್ನಿಕಲ್ ಎವಿಡೆನ್ಸ್ ಸಂಗ್ರಹ ಮಾಡಬೇಕಿದೆ. ಜೊತೆಗೆ ರೇಣುಕಾಸ್ವಾಮಿಗೆ ಎಲೆಕ್ಟ್ರಿಕ್ ಶಾಕ್ ಕೊಟ್ಟು ಸಾಯಿಸಲಾಗಿದ್ದು, ಈ ಸಂಬಂಧಿತ ವಸ್ತುಗಳನ್ನು ವಶಕ್ಕೆ ಪಡೆಯಬೇಕಿದೆ. ಕೊಲೆ ಆರೋಪಿಗಳ ಎಲ್ಲ ಮೊಬೈಲ್ ಡೇಟಾ ರಿಟ್ರೀವ್ ಮಾಡಬೇಕಿದೆ. ಜೊತೆಗೆ, ಮೈಸೂರಿನಲ್ಲಿ ಕೊಲೆ ಕೇಸಿನ ಕುರಿತು ಕೆಲವು ಸಾಕ್ಷಿಗಳು ಲಭ್ಯವಾಗಬಹುದೆಂಬ ಮಾಹಿತಿಯಿದೆ. ಈ ಹಿನ್ನೆಲೆಯಲ್ಲಿ ಮತ್ತಷ್ಟು ದಿನ ಆರೋಪಿಗಳನ್ನು ಪೊಲೀಸ್ ಕಸ್ಟಡಿಗೆ ಕೊಡಬೇಕು ಎಂದು ಎಸ್‌ಪಿಪಿ ಮನವಿ ಮಾಡಿದರು.ಈ ಹಿನ್ನೆಲೆಯಲ್ಲಿ ದರ್ಶನ್ ಮತ್ತು ಆತನ ಸಹಚರರನ್ನು ಮತ್ತೆ 8 ದಿನಗಳ ಕಾಲ ಪೊಲೀಸ್ ಕಸ್ಟಡಿಗೆ ಒಪ್ಪಿಸುವಂತೆ ವಾದ ಮಂಡಿಸಿದರು.

ಸರ್ಕಾರಿ ವಕೀಲರ ವಾದಕ್ಕೆ ಪ್ರತಿವಾದ ಮಂಡಿಸಿದ ನಟ ದರ್ಶನ್ ಪರ ವಕೀಲರು, ಈಗಾಗಲೇ ಪೊಲೀಸ್ ಕಸ್ಟಡಿ ಅಂತ್ಯಗೊಂಡಿದೆ. ಈಗ ಪುನಃ ಆರೋಪಿಗಳನ್ನು ಪೊಲೀಸ್ ಕಸ್ಟಡಿಗೆ ಒಪ್ಪಿಸಬಾರದು ಎಂದು ಆಕ್ಷೇಪ ವ್ಯಕ್ತಪಡಿಸಿದ್ದಾರೆ. ವಾದ–ಪ್ರತಿವಾದ ಆಲಿಸಿದ ನ್ಯಾಯಾಧೀಶರು ಒಟ್ಟು 13 ಜನರ ಆರೋಪಿಗಳನ್ನು ಮುಂದಿನ 5 ದಿನಗಳ ಕಾಲ ಪೊಲೀಸ್ ಕಸ್ಟಡಿಗೆ ಒಪ್ಪಿಸಿ ಆದೇಶ ಹೊರಡಿಸಿದ್ದಾರೆ.

ಪೊಲೀಸ್ ಕಸ್ಟಡಿಗೆ ಹೋಗುವ ಆರೋಪಿಗಳು: ಎ1 ಪವಿತ್ರ ಗೌಡ, ಎ2 ದರ್ಶನ್, ಎ3 ಪವನ್, ಎ4 ರಾಘವೇಂದ್ರ, ಎ5 ನಂದೀಶ್, ಎ6 ಜಗದೀಶ್, ಎ7 ಅನುಕುಮಾರ್, ಎ10 ವಿನಯ್, ಎ11 ನಾಗರಾಜು, ಎ12 ಲಕ್ಷ್ಮಣ್, ಎ13 ದೀಪಕ್, ಎ14 ಪ್ರದೋಶ್, ಎ16 ನಿಖಿಲ್.

ಇದು ಗ್ಯಾರಂಟಿ ಬರೆ

ಇದೀಗ ಕರ್ನಾಟಕ ಸರ್ಕಾರ ಪೆಟ್ರೋಲ್ ಹಾಗೂ ಡೀಸೆಲ್ ಮೇಲಿನ ಬೆಲೆ ಏರಿಕೆ ಮಾಡಿದೆ. ಗರಿಷ್ಠ 3.50 ರೂಪಾಯಿ ಏರಿಕೆ ಮಾಡಿ ಜನಸಾಮಾನ್ಯರಿಗೆ ಶಾಕ್ ನೀಡಿದೆ. ಸದ್ಯದ ಬೆಲೆ ಏರಿಕೆಯಿಂದ ಅಗತ್ಯವಸ್ತುಗಳ ಬೆಲೆಯೂ ಏರಿಕೆಯಾಗಲಿದೆ. ಆದಾಯ ಕ್ರೋಢೀಕರಿಸಲು ರಾಜ್ಯ ಸರ್ಕಾರ ಹಲವು ಮೂಲಗಳನ್ನು ಹುಡುಕುತ್ತಿದೆ. ಇದೀಗ ಪೆಟ್ರೋಲ್ ಡೀಸೆಲ್ ಬೆಲೆ ಏರಿಕೆ ನೇರವಾಗಿ ಜನಸಾಮಾನ್ಯರಿಗೆ ತಟ್ಟಲಿದೆ. ಇತ್ತೀಚೆಗೆ ಕೇಂದ್ರ ಸರ್ಕಾರ ಪೆಟ್ರೋಲ್ ಹಾಗೂ ಡೀಸೆಲ್ ಅನ್ನು ಜಿಎಸ್‌ಟಿ ವ್ಯಾಪ್ತಿಗೆ ತರುವ ಆಸಕ್ತಿ ವ್ಯಕ್ತಪಡಿಸಿತ್ತು. ಈ ಕುರಿತು ನೂತನ ಪೆಟ್ರೋಲ್ ಹಾಗೂ ನೈಸರ್ಗಿಕ ಖಾತೆ ಸಚಿವ ಹರ್ದೀಪ್ ಸಿಂಗ್ ಪುರಿ ಹೇಳಿದ್ದರು. 2020ರಲ್ಲಿ ಕೇಂದ್ರ ಸರ್ಕಾರ ಈ ಪ್ರಸ್ತಾಪ ಇಡಲಾಗಿತ್ತು. ಆದರೆ ಬಹುತೇಕ ರಾಜ್ಯಗಳು ಈ ಪ್ರಸ್ತಾಪ ತಿರಸ್ಕರಿಸಿತ್ತು. ಕಾರಣ ಹಲವು ರಾಜ್ಯಗಳು ಪೆಟ್ರೋಲ್ ಡೀಸೆಲ್ ಮೇಲಿನ ರಾಜ್ಯ ತೆರಿಗೆಯಿಂದಲೇ ಆದಾಯ ಕ್ರೋಢೀಕರಿಸುತ್ತಿರುವ ಕಾರಣ ಈ ಪ್ರಸ್ತಾಪಕ್ಕೆ ಮನ್ನಣೆ ಸಿಗಲಿಲ್ಲ ಎಂದು ಪುರಿ ಹೇಳಿದ್ದರು.



ಬಿಜೆಪಿ ಸರ್ಕಾರದ ಅವಧಿಯಲ್ಲಿ ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆಯಾದಾಗ ಸಿದ್ದರಾಮಯ್ಯ ಮತ್ತು ಡಿ.ಕೆ.ಶಿವಕುಮಾರ್ ಅವರು ದ್ವಿಚಕ್ರ ವಾಹನದ ಅಣಕು ಶವಯಾತ್ರೆ ಮಾಡುವ ಮೂಲಕ ವಿನೂತನ ಪ್ರತಿಭಟನೆ ಮಾಡಿದ್ದರು. ಇದೀಗ ಅಧಿಕಾರಕ್ಕೆ ಬಂದ ನಂತರ ಅವರೇ ಬೆಲೆ ಏರಿಕೆ ಮಾಡಿದ್ದಾರೆ ಎಂದು ಸಾಮಾಜಿಕ ಜಾಲತಾಣದಲ್ಲಿ ಟೀಕೆಗಳು ಹರಿದಾಡುತ್ತಿವೆ.

ಕೆಲ ಸಚಿವರ ತಲೆದಂಡ ಸಾಧ್ಯತೆ

ಸಚಿವರ ಕಾರ್ಯವೈಖರಿ ಬಗ್ಗೆ ಗಮನ ಹರಿಸಿ ಎಂದು ಪಕ್ಷದ ಅಧಿನಾಯಕ ರಾಹುಲ್ ಗಾಂಧಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಕಿವಿಮಾತು ಹೇಳಿದ್ದರು.

ಲೋಕಸಭಾ ಚುನಾವಣೆ ನಂತರ ಸೇರಿದ್ದ ಮೊದಲ ಸಂಪುಟ ಸಭೆಯಲ್ಲೇ ಮುಖ್ಯಮಂತ್ರಿ ಸಚಿವರಿಗೆ ಕ್ಲಾಸ್ ತೆಗೆದುಕೊಂಡು ನೀತಿ ಪಾಠ ಮಾಡಿದ್ದರು.

ಆಡಳಿತದಲ್ಲಿ ಸುಧಾರಣೆ ಆಗಬೇಕು, ಕಡತಗಳ ವಿಳಂಬವನ್ನು ತಪ್ಪಿಸಿ, ಜನಸ್ನೇಹಿ ಆಡಳಿತ ನೀಡಿ ಎಂದು ಮುಖ್ಯಮಂತ್ರಿ ಅವರು ಅಂದಿನ ಸಭೆಯಲ್ಲಿ ತಿಳಿಸಿದ್ದಲ್ಲದೆ, ಮುಖ್ಯಕಾರ್ಯದರ್ಶಿ ಅವರಿಗೂ ಸೂಚನೆಗಳನ್ನು ನೀಡಿದ್ದರು.

ಲೋಕಸಭಾ ಚುನಾವಣಾ ಫಲಿತಾಂಶಕ್ಕೆ ಸಂಬಂಧಿಸಿದಂತೆ ಸೋಲಿನ ಪರಾಮರ್ಶೆ ನಡೆಯುತ್ತಿದ್ದು, ಜಿಲ್ಲಾ ಸಚಿವರುಗಳಿಂದಲೇ ವರದಿ ಪಡೆಯಲಾಗುತ್ತಿದೆ. ಸಚಿವರುಗಳು ಕಳೆದ ಒಂದು ವರ್ಷದಲ್ಲಿ ತಮ್ಮ ಇಲಾಖೆಗಳಲ್ಲಿ ಮಾಡಿರುವ ಸಾಧನೆ ಬಗ್ಗೆ ಪಕ್ಷ ಮತ್ತು ಸರ್ಕಾರ ಪ್ರತ್ಯೇಕವಾಗಿ ವರದಿ ಸಿದ್ಧಪಡಿಸಿ, ಪಕ್ಷದ ವರಿಷ್ಠರಿಗೆ ತಲುಪಿಸಲಿದ್ದಾರೆ.

ವರದಿ ತಲುಪಿದ ನಂತರವೇ ಕೆಲವು ಸಚಿವರ ತಲೆದಂಡ ಆಗುವುದು ನಿಶ್ಚಿತ. ಕನಿಷ್ಠ ನಾಲ್ಕರಿಂದ ಆರು ಮಂದಿ ಅಧಿಕಾರ ಕಳೆದುಕೊಳ್ಳುವ ಸಾಧ್ಯತೆ ಇದೆ ಎಂದು ಪಕ್ಷದ ಮೂಲಗಳು ತಿಳಿಸಿವೆ.

ರಾಜ್ಯ ಕಾಂಗ್ರೆಸ್ ಸರ್ಕಾರಕ್ಕೆ ವರ್ಷ: ಶಾಸಕ ಹರೀಶ್‌ಗೌಡರ ನೇತೃತ್ವದಲ್ಲಿ

ಅಭಿವೃದ್ಧಿಯ ಯಶಸ್ವಿ ಮಿಲನ ಸಂಭ್ರಮಾಚರಣೆ

- ಕಾರ್ಯಕರ್ತರ ಅವಿರತ ಪ್ರಯತ್ನಕ್ಕೆ ಕೃತಜ್ಞತೆ
- ವಿವಿಧ ಸೇವಾಕಾರ್ಯದ ಮೂಲಕ ಅರ್ಥಪೂರ್ಣ ಆಚರಣೆ



ಮೈಸೂರಿನ ನಜರ್‌ಬಾದ್‌ನಲ್ಲಿ ಆಯೋಜಿಸಿದ್ದ ಅಭಿವೃದ್ಧಿಯ ಯಶಸ್ವಿ ಮಿಲನ ಕಾರ್ಯಕ್ರಮವನ್ನು ಶಾಸಕ ಕೆ.ಹರೀಶ್‌ಗೌಡರು ಉದ್ಘಾಟಿಸಿದರು. ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಮತ್ತಿತರರು ಉಪಸ್ಥಿತರಿದ್ದರು.



ಆರೋಗ್ಯ ತಪಾಸಣೆಯಲ್ಲಿ ಮುಡಾ ಅಧ್ಯಕ್ಷ ಕೆ.ಮರೀಗೌಡ ಹಾಗೂ ಕಾಂಗ್ರೆಸ್ ಮುಖಂಡರು ಪಾಲ್ಗೊಂಡಿದ್ದರು.

ಮೈಸೂರು, ಜೂ.15(ಎಸ್‌ಬಿಡಿ)– ಕಾಂಗ್ರೆಸ್ ಸರ್ಕಾರಕ್ಕೆ ಒಂದು ವರ್ಷ ಹಾಗೂ ಚಾಮರಾಜ ಕ್ಷೇತ್ರದ ಶಾಸಕರಾಗಿ ಕೆ.ಹರೀಶ್ ಗೌಡರೂ ಒಂದು ವರ್ಷ ಪೂರೈಸಿದ ಹಿನ್ನೆಲೆಯಲ್ಲಿ ನಜರ್‌ಬಾದ್, ಇಟ್ಟಿಗೆಗೂಡು ಹಾಗೂ ಲಷ್ಕರ್ ಮೊಹಲ್ಲಾ ಕಾಂಗ್ರೆಸ್ ಕಾರ್ಯಕರ್ತರು 'ಅಭಿವೃದ್ಧಿಯ ಯಶಸ್ವಿ ಮಿಲನ' ಕಾರ್ಯಕ್ರಮದ ಮೂಲಕ ಸಂಭ್ರಮಾಚರಿಸಿದರು.

ನಜರ್‌ಬಾದ್‌ನ ರೇಡಿಯೋ ಪಾರ್ಕ್‌ನಲ್ಲಿ ಶನಿವಾರ ನಡೆದ ಕಾರ್ಯಕ್ರಮವನ್ನು ಶಾಸಕ ಕೆ.ಹರೀಶ್‌ಗೌಡರು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ, ಚುನಾವಣೆಯಲ್ಲಿ ಕಾರ್ಯಕರ್ತರು ಸೇನಾನಿಗಳಂತೆ ಕೆಲಸ ಮಾಡಿದ್ದರಿಂದಲೇ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಸ್ತಿತ್ವದಲ್ಲಿದೆ. ಹಾಗೆಯೆ ಲೋಕಸಭಾ ಚುನಾವಣೆಯಲ್ಲೂ ಉತ್ತಮ ಸಾಧನೆ ಸಾಧ್ಯವಾಗಿದೆ ಎಂದು ಕೃತಜ್ಞತೆ ಸಲ್ಲಿಸಿದರು.

ಕಾರ್ಯಕ್ರಮದ ಅಂಗವಾಗಿ ಪ್ರತಿಭಾನ್ವಿತ ಮಕ್ಕಳಿಗೆ ಪ್ರತಿಭಾ ಪುರಸ್ಕಾರ, ಶಾಲಾ ಮಕ್ಕಳಿಗೆ ಉಚಿತ ನೋಟ್‌ಬುಕ್ ವಿತರಣೆ, ಆಟೋ ಚಾಲಕರಿಗೆ ಉಚಿತ ವಿಮೆ, ಉಚಿತ ಆರೋಗ್ಯ ತಪಾಸಣೆ ನಡೆಸಲಾಯಿತು. ಅನೇಕ ಆಟೋ ಚಾಲಕರು ಹಾಗೂ ಸಾರ್ವಜನಿಕರು ಆರೋಗ್ಯ ತಪಾಸಣೆಯ ಪ್ರಯೋಜನ ಪಡೆದರು.

ಕಾರ್ಯಕ್ರಮದಲ್ಲಿ ಮಾಜಿ ಶಾಸಕ ಎಂ.ಕೆ.ಸೋಮಶೇಖರ್, ಮುಡಾ ಅಧ್ಯಕ್ಷ ಕೆ.ಮರಿಗೌಡ, ಕಾಂಗ್ರೆಸ್ ನಗರಾಧ್ಯಕ್ಷ ಆರ್.ಮೂರ್ತಿ, ಪ್ರಧಾನ ಕಾರ್ಯದರ್ಶಿ ಎಂ.ಶಿವಣ್ಣ, ಓಬಿಸಿ ಘಟಕದ ಎನ್.ಆರ್.ನಾಗೇಶ್, ನಜರ್‌ಬಾದ್ ಕಾಂಗ್ರೆಸ್ ಮುಖಂಡರಾದ ದೀಪಕ್ ಪುಟ್ಟಸ್ವಾಮಿ, ಮಾದೇಶ್, ಶಿವಣ್ಣ, ಶ್ರೀಪಾಲ್, ರವಿ ನಾಯಕ್, ವರದರಾಜ್, ಮೋಹನ್ ಕುಮಾರ್ ಗೌಡ, ವಿಕಾಸ್ ಸಿಂಹ ಮತ್ತಿತರರು ಭಾಗವಹಿಸಿದ್ದರು.

ಮೈಸೂರು ಮಿತ್ರ

ಭಾನುವಾರ 16 ಜೂನ್ 2024

ದೇಶ - ವಿದೇಶ

ನೀರಿನ ಬಿಕ್ಕಟ್ಟು; ಹರಿಯಾಣಕ್ಕೆ ದೆಹಲಿ ಸರ್ಕಾರ ಮನವಿ

ನವದೆಹಲಿ: ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ಉಂಟಾಗಿರುವ ನೀರಿನ ಬಿಕ್ಕಟ್ಟನ್ನು ಗಮನದಲ್ಲಿಟ್ಟುಕೊಂಡು, ಮಾನವೀಯ ನೆಲೆಯಲ್ಲಿ ಯಮುನಾ ನದಿಗೆ ಹೆಚ್ಚುವರಿ ನೀರು ಹರಿಸುವಂತೆ ದೆಹಲಿ ಸರ್ಕಾರವು ಹರಿಯಾಣಕ್ಕೆ ಮನವಿ ಮಾಡಿದೆ ಎಂದು ಎಎಪಿ ನಾಯಕಿ, ಸಚಿವೆ ಅತಿಶಿ ತಿಳಿಸಿದ್ದಾರೆ.



ಮುನಕ್ ಕಾಲುವೆ ಮತ್ತು ವಜೀರಾಬಾದ್ ಜಲಾಶಯದಲ್ಲಿ ನೀರಿನ ಕೊರತೆ ಉಂಟಾಗಿದ್ದು, ರಾಷ್ಟ್ರ ರಾಜಧಾನಿಯು 70 ದಶಲಕ್ಷ ಗ್ಯಾಲನ್ ನೀರಿನ ಉತ್ಪಾದನೆ ಕೊರತೆಯನ್ನು ಎದುರಿಸುತ್ತಿದೆ. ನಗರದಲ್ಲಿ ದಿನಕ್ಕೆ ಸುಮಾರು 1,002 ದಶಲಕ್ಷ ಗ್ಯಾಲನ್ ಇದ್ದ ಸಾಮಾನ್ಯ ನೀರಿನ ಉತ್ಪಾದನೆಯು ಶುಕ್ರವಾರ 932 ದಶಲಕ್ಷ ಗ್ಯಾಲನ್‌ಗೆ ಇಳಿಕೆಯಾಗಿದೆ. ನಗರದ ಜನರಿಗೆ ಮಾನವೀಯ ನೆಲೆಯಲ್ಲಿ ಹೆಚ್ಚುವರಿ ನೀರನ್ನು ಬಿಡುಗಡೆ ಮಾಡುವಂತೆ ದೆಹಲಿ ಸರ್ಕಾರವು ಹರಿಯಾಣಕ್ಕೆ ಮನವಿ ಮಾಡಿದೆ. ದೆಹಲಿಯಲ್ಲಿ ಬಿಸಿಗಾಳಿ ಮತ್ತು ಶಾಖದ ಪರಿಸ್ಥಿತಿಗಳು ಕಡಿಮೆಯಾದ ಬಳಿಕ ಯಮುನಾ ನದಿ ನೀರಿನ ಹಂಚಿಕೆಗೆ ಸಂಬಂಧಿಸಿದ ಸಮಸ್ಯೆಗಳನ್ನು ಚರ್ಚಿಸಲಾಗುತ್ತದೆ ಎಂದು ಅತಿಶಿ ತಿಳಿಸಿದ್ದಾರೆ.

ರಿಷಿಕೇಶ–ಬದ್ರಿನಾಥ್ ಹೆದ್ದಾರಿಯಲ್ಲಿ ಕಮರಿಗೆ ಉರುಳಿದ ಟೆಂಪೋ; 12 ಮಂದಿ ಸಾವು

ರುದ್ರಪ್ರಯಾಗ: ಉತ್ತರಾಖಂಡದ ರುದ್ರಪ್ರಯಾಗ ಜಿಲ್ಲೆಯ ಬದರಿನಾಥ್ ಹೆದ್ದಾರಿಯಲ್ಲಿ ಶನಿವಾರ ಟೆಂಪೋ ಟ್ರಾವೆಲರೊಂದು ಆಳವಾದ ಕಮರಿಗೆ ಬಿದ್ದ ಪರಿಣಾಮ ಹನ್ನೆರಡು ಜನ ಸಾವನ್ನಪ್ಪಿದ್ದಾರೆ ಮತ್ತು ಹತ್ತು ಮಂದಿ ಗಾಯಗೊಂಡಿದ್ದಾರೆ. ಜನಪ್ರಿಯ ಪ್ರವಾಸಿ ತಾಣವಾದ ಚೋಪ್ತಾಗೆ ತೆರಳುತ್ತಿದ್ದಾಗ ಈ ಅಪಘಾತ ಸಂಭವಿಸಿದೆ.



ಎಸ್‌ಡಿಆರ್‌ಎಫ್ ಮತ್ತು ಪೊಲೀಸ್ ತಂಡಗಳು ರಕ್ಷಣಾ ಕಾರ್ಯಾಚರಣೆ ನಡೆಸುತ್ತಿವೆ. ಘಟನೆಯ ಕುರಿತು ಪ್ರತಿಕ್ರಿಯಿಸಿದ ಉತ್ತರಾಖಂಡ ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ, ಸ್ಥಳೀಯ ಆಡಳಿತ ಮತ್ತು ಎಸ್‌ಡಿಆರ್‌ಎಫ್ ತಂಡಗಳು ಪರಿಹಾರ ಮತ್ತು ರಕ್ಷಣಾ ಕಾರ್ಯಾಚರಣೆಯಲ್ಲಿ ತೊಡಗಿವೆ. ಗಾಯಾಳುಗಳನ್ನು ಹತ್ತಿರದ ಆಸ್ಪತ್ರೆಗಳಿಗೆ ದಾಖಲಿಸಲಾಗಿದೆ ಎಂದರು. ಈ ಘಟನೆಯ ಕುರಿತು ತನಿಖೆ ನಡೆಸುವಂತೆ ಜಿಲ್ಲಾ ಮ್ಯಾಜಿಸ್ಟ್ರೇಟ್‌ಗೆ ಆದೇಶ ನೀಡಲಾಗಿದೆ ಎಂದು ಧಾಮಿ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.

ಸೆಕ್ಸ್‌ಗಾಗಿ ವಿಮಾನ ಪರಿಚಾರಕಿಗೆ ಕುದುರೆ ಆಫರ್ ಕೊಟ್ಟಿದ್ದ ಎಲಾನ್ ಮಸ್ಕ್!

ನ್ಯೂಯಾರ್ಕ್: ಸ್ಪೇಸ್ ಎಕ್ಸ್‌ನ ಮಾಜಿ ಉದ್ಯೋಗಿಗಳು ಎಲಾನ್ ಮಸ್ಕ್ ವಿರುದ್ಧ ಲೈಂಗಿಕ ಕಿರುಕುಳ ಆರೋಪ ಹೊರಿಸಿ, ಕಾನೂನು ಮೊರೆ ಹೋಗಿರುವ ಬೆನ್ನಲ್ಲೇ ಮತ್ತಷ್ಟು ವಿಷಯಗಳು ಹೊರಬಂದಿವೆ. ವಾಲ್ ಸ್ಟ್ರೀಟ್ ಜರ್ನಲ್‌ನ ವರದಿಯ ಪ್ರಕಾರ, ಎಲಾನ್ ಮಸ್ಕ್ ತಮ್ಮ ಸಂಸ್ಥೆಯ ಇಂಟರ್ನ್ ಸೇರಿದಂತೆ ಇಬ್ಬರು ಸಿಬ್ಬಂದಿಗಳೊಂದಿಗೆ ಲೈಂಗಿಕ ಸಂಬಂಧ ಹೊಂದಿರುವ ಆರೋಪ ಎದುರಿಸುತ್ತಿದ್ದು, 2016ರಲ್ಲಿ ವಿಮಾನ ಪರಿಚಾರಕಿಯೊಬ್ಬರಿಗೆ ಸೆಕ್ಸ್‌ಗಾಗಿ ಕುದುರೆಯ ಆಫರ್ ನೀಡಿದ್ದು ಈಗ ಬಹಿರಂಗಗೊಂಡಿದೆ.



ಮಹಿಳೆ ನೀಡಿರುವ ಮಾಹಿತಿಯ ಪ್ರಕಾರ, ತನ್ನೊಂದಿಗೆ ಲೈಂಗಿಕ ಕ್ರಿಯೆಯಲ್ಲಿ ತೊಡಗುವಂತೆ ಕೇಳಿದ್ದ ಎಲಾನ್ ಮಸ್ಕ್ ಇದಕ್ಕಾಗಿ ನನಗೆ ಕುದುರೆಯನ್ನು ಖರೀದಿ ಮಾಡಿಕೊಡುವ ಆಫರ್ ಮುಂದಿಟ್ಟಿದ್ದರು ಎಂದು ಹೇಳಿದ್ದಾರೆ. ವಿಮಾನದಲ್ಲೇ ಎಲಾನ್ ಮಸ್ಕ್ ತನ್ನೆದುರು ತನ್ನ ಖಾಸಗಿ ಅಂಗ ಪ್ರದರ್ಶಿಸಿದ್ದ. ಇದಕ್ಕೆ ತಾನು ಒಪ್ಪದೇ ಇದ್ದಾಗ ಸಂಸ್ಥೆಯೂ ನನ್ನ ಪಾಳಿಗಳನ್ನು ಕಡಿತಗೊಳಿಸಿತ್ತು ಎಂದು ಮಹಿಳೆ ಹೇಳಿದ್ದಾರೆ. ಎಲಾನ್ ಮಸ್ಕ್ ಅವರ ಆರೋಪಗಳನ್ನು ನಿರಾಕರಿಸಿದ್ದಾನೆ.

ಎರಡು ಹಡಗುಗಳ ನಡುವೆ ಡಿಕ್ಕಿ; 80ಕ್ಕೂ ಅಧಿಕ ಮಂದಿ ಸಾವು

ಕಾಂಗೋ: ಎರಡು ಹಡಗುಗಳು ಡಿಕ್ಕಿ ಹೊಡೆದ ಪರಿಣಾಮ 80ಕ್ಕೂ ಅಧಿಕ ಮಂದಿ ಮೃತಪಟ್ಟಿರುವ ಘಟನೆ ಡೆಮಾಕ್ರಟಿಕ್ ರಿಪಬ್ಲಿಕ್ ಆಫ್ ಕಾಂಗೋದ ಮೈ–ಎನ್ ಡೊಂಬೆ ಪ್ರಾಂತ್ಯದ ಕ್ವಾ ನದಿಯಲ್ಲಿ ನಡೆದಿದೆ. ಈ ಹಡಗು ಕಾಂಗೋದ ರಾಜಧಾನಿ ಕಿನ್ಶಾಸಾಗೆ ಹೋಗುತ್ತಿತ್ತು ಎಂದು ತಿಳಿದು ಬಂದಿದೆ.



ಕಾಂಗೋಲೀಸ್ ನದಿಯಲ್ಲಿ ಹಡಗುಗಳ ನಡುವೆ ಅಪಘಾತ ಸಾಮಾನ್ಯವಾಗಿದ್ದು, ಮಧ್ಯ ಆಫ್ರಿಕಾ ದೇಶದ ವಿಶಾಲವಾದ ಅರಣ್ಯ ಪ್ರದೇಶದಲ್ಲಿ ಕೆಲವೇ ಸುಸಜ್ಜಿತ ರಸ್ತೆಗಳಿವೆ. ಆದ್ದರಿಂದ ನದಿಯ ಮೂಲಕ ಪ್ರಯಾಣಿಸುವುದು ಸಾಮಾನ್ಯವಾಗಿದೆ. ನದಿಯಲ್ಲಿ ಮಗುಚಿದ ಹಡಗಿನಲ್ಲಿ 270 ಮಂದಿ ಪ್ರಯಾಣಿಸುತ್ತಿದ್ದರು ಎಂದು ತಿಳಿದು ಬಂದಿದೆ. 80ಕ್ಕೂ ಅಧಿಕ ಮಂದಿ ಪ್ರಾಣ ಕಳೆದುಕೊಂಡಿದ್ದಾರೆ. ಈ ಕುರಿತು ಪ್ರತಿಕ್ರಿಯಿಸಿರುವ ಕಾಂಗೋದ ಅಧ್ಯಕ್ಷರು, ಘಟನೆ ದುರದೃಷ್ಟಕರವಾಗಿದ್ದು, ಭವಿಷ್ಯದಲ್ಲಿ ಇಂತಹ ಅನಾಹುತವು ಮತ್ತೆ ಸಂಭವಿಸದಂತೆ ತಡೆಯಲು ತನಿಖೆಗೆ ಆದೇಶಿಸಲಾಗುತ್ತಿದೆ ಎಂದು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಬರೆದುಕೊಂಡಿದ್ದಾರೆ.

80 ವರ್ಷದ ಮುದುಕನನ್ನು ಮದ್ವೆಯಾದ 23ರ ಯುವತಿ!

ಬೀಜಿಂಗ್: ಹುಡುಗಿಯೊಬ್ಬಳು ತನ್ನ ಅಜ್ಜನ ವಯಸ್ಸಿನ ವ್ಯಕ್ತಿಯನ್ನು ಪ್ರೀತಿಸಿ ಮದುವೆ ಸಹ ಆಗಿದ್ದಾಳೆ. ಆಡಿಟಿ ಸೆಂಟ್ರಲ್ ವೆಬ್‌ಸೈಟ್‌ನ ವರದಿಯ ಪ್ರಕಾರ ಹೆಬೈ ಪ್ರಾಂತ್ಯದ ವೃದ್ಧಾಶ್ರಮ ಒಂದರಲ್ಲಿ ಸ್ವಯಂಸೇವಕಳಾಗಿ ಕೆಲಸ ಮಾಡುತ್ತಿದ್ದ 23 ವರ್ಷದ ಯುವತಿ, 80 ವರ್ಷದ ವ್ಯಕ್ತಿಯನ್ನು ಭೇಟಿಯಾದರು. ಆರಂಭದ ಪರಿಚಯ ಕೆಲವು ದಿನಗಳ ಬಳಿಕ ಸ್ನೇಹಕ್ಕೆ ತಿರುಗಿತು. ಇಬ್ಬರು ಒಟ್ಟಿಗೆ ಸಮಯ ಕಳೆಯಲು ಆರಂಭಿಸಿದರು. ಕ್ರಮೇಣ ಇಬ್ಬರ ಸ್ನೇಹ, ಪ್ರೀತಿಯ ಸ್ವರೂಪವನ್ನು ಪಡೆದುಕೊಂಡಿತು.



ವರದಿಗಳ ಪ್ರಕಾರ, ಮುದುಕನ ಪ್ರಬುದ್ಧತೆ, ಸ್ಥಿರತೆ ಮತ್ತು ಬುದ್ಧಿವಂತಿಕೆಗೆ ತಾನು ಆಕರ್ಷಿತಳಾಗಿದ್ದೇನೆ ಎಂದು ಹುಡುಗಿ ಹೇಳಿದ್ದಾಳೆ. ಅದೇ ಸಮಯದಲ್ಲಿ ಯುವತಿಯ ದಯೆ ಮತ್ತು ದೈಹಿಕ ಸೌಂದರ್ಯದಿಂದ ಪ್ರಭಾವಿತನಾಗಿದ್ದೇನೆ ಎಂದು ವೃದ್ಧ ಹೇಳಿದ್ದಾರೆ. ಇಬ್ಬರೂ ಪರಸ್ಪರ ತಮ್ಮ ಪ್ರೀತಿಯನ್ನು ವ್ಯಕ್ತಪಡಿಸಿದ್ದು, ಇಬ್ಬರೂ ಪರಸ್ಪರ ಮದುವೆಯಾಗಲು ಬಯಸಿದರು. ಆದರೆ, ಇವರಿಬ್ಬರ ನಿರ್ಧಾರಕ್ಕೆ ಯುವತಿಯ ಮನೆಯವರು ವಿರೋಧ ವ್ಯಕ್ತಪಡಿಸಿದರು. ಆದರೆ, ಯುವತಿ ತನ್ನ ಪಾಲಕರನ್ನು ಧಿಕ್ಕರಿಸಿ, ಮನೆಯಿಂದ ಹೊರಬಂದು ಇತ್ತೀಚೆಗೆ ವೃದ್ಧನನ್ನು ಮದುವೆಯಾಗಿದ್ದಾಳೆ. ಈ ಮದುವೆಗೆ ಹುಡುಗಿಯ ಸಂಬಂಧಿಕರು ಯಾರೂ ಬಂದಿರಲಿಲ್ಲ. ಮದುವೆಯ ಸಮಯದಲ್ಲಿ, ತಾವಿಬ್ಬರು ಪರಸ್ಪರ ಬೇರ್ಪಡುವುದಿಲ್ಲ ಎಂದು ಭರವಸೆಗಳನ್ನು ವಿನಿಮಯ ಮಾಡಿಕೊಂಡರು.

ಬಂಗಾಳದಲ್ಲಿ ಚುನಾವಣೋತ್ತರ ಹಿಂಸಾಚಾರ: ಪರಿಶೀಲನಾ ಸಮಿತಿ ರಚಿಸಿದ ಬಿಜೆಪಿ

ನವದೆಹಲಿ: ಪಶ್ಚಿಮ ಬಂಗಾಳದಲ್ಲಿ ಚುನಾವಣೋತ್ತರ ರಾಜಕೀಯ ಹಿಂಸಾಚಾರ ನಡೆಯುತ್ತಿದೆ ಎಂಬ ಆರೋಪದ ಕುರಿತು ಪರಿಶೀಲಿಸಲು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ ನೇತೃತ್ವದಲ್ಲಿ ನಾಲ್ವರು ಸದಸ್ಯರ ಸಮಿತಿಯನ್ನು ರಚಿಸಲಾಗಿದೆ. ಟಿಎಂಸಿ ಪಕ್ಷದ ಮುಖ್ಯಸ್ಥೆ ಹಾಗೂ ಪಶ್ಚಿಮ ಬಂಗಾಳದ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರು ರಾಜಕೀಯ ಹಿಂಸಾಚಾರದ ಕುರಿತು ಮೌನ ವಹಿಸಿದ್ದಾರೆ. ಅವರ (ಟಿಎಂಸಿ) ಪಕ್ಷದವರು ಪ್ರತಿಪಕ್ಷದ ಕಾರ್ಯಕರ್ತರು ಮತ್ತು ಜನರ ಮೇಲೆ ದಾಳಿ ನಡೆಸುತ್ತಿದ್ದಾರೆ ಎಂದು ಬಿಜೆಪಿ ಆರೋಪಿಸಿದೆ.

ಮಂಡ್ಯದಲ್ಲಿ ಕೇಂದ್ರ ಸಚಿವ ಕುಮಾರಸ್ವಾಮಿಗೆ ಅದ್ಧೂರಿ ಸ್ವಾಗತ

ಮಂಡ್ಯ ಅಭಿವೃದ್ಧಿ ಮೊದಲ ಆದ್ಯತೆ

ಯುವಕರಿಗೆ ಉದ್ಯೋಗ, ರೈತರ ಸಮಸ್ಯೆ ಬಗೆಹರಿಸುವುದು ನನ್ನ ಮೊದಲ ಆದ್ಯತೆ: ಹೆಚ್ಡಿಕೆ



ಶನಿವಾರ ಮಂಡ್ಯ ಜಿಲ್ಲೆಗೆ ಆಗಮಿಸಿದ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು ಮೆರವಣಿಗೆ ಮೂಲಕ ಜನರನ್ನುದ್ದೇಶಿಸಿ ಮಾತನಾಡಿದರು.



ಮಂಡ್ಯ, ಜೂ.15(ಮೋಹನ್‌ರಾಜ್)– ಪ್ರಧಾನಿ ನರೇಂದ್ರಮೋದಿ ಸಂಪುಟದಲ್ಲಿ ಉಕ್ಕು ಹಾಗೂ ಭಾರಿ ಕೈಗಾರಿಕಾ ಸಚಿವರಾದ ಬಳಿಕ ಇದೇ ಮೊದಲ ಬಾರಿಗೆ ಮಂಡ್ಯಕ್ಕೆ ಆಗಮಿಸಿದ ಹೆಚ್.ಡಿ.ಕುಮಾರಸ್ವಾಮಿ ಅವರನ್ನು ಅದ್ಧೂರಿಯಾಗಿ ಸ್ವಾಗತಿಸಲಾಯಿತು.

ಜಿಲ್ಲೆಯ ಮದ್ದೂರು ತಾಲೂಕಿನ ಗಡಿಭಾಗ ನಿಡಘಟ್ಟ ಗ್ರಾಮದಲ್ಲಿ ಜೆಡಿಎಸ್ ಮತ್ತು ಬಿಜೆಪಿ ಕಾರ್ಯಕರ್ತರು ಜಂಟಿಯಾಗಿ, ಕುಮಾರಸ್ವಾಮಿ ಅವರನ್ನು ಸ್ವಾಗತಿಸಿದರು. ಕ್ರೇನ್ ಮೂಲಕ ಬೃಹತ್ ಹಾರ, ಸೇಬು ಹಾಗೂ ಮೂಸಂಬಿ ಹಾರಗಳನ್ನು ಹಾಕಿ ಕುಮಾರಸ್ವಾಮಿ ಅವರನ್ನು ಬರಮಾಡಿಕೊಂಡ ಮುಖಂಡರು, ನಿಡಘಟ್ಟದಿಂದ ಮಂಡ್ಯ ನಗರದವರೆಗೆ ಬೃಹತ್ ರೋಡ್‌ಶೋ ಹಾಗೂ ಬೈಕ್ ರ್‍ಯಾಲಿ ಮೂಲಕ ಕುಮಾರಸ್ವಾಮಿ ಅವರನ್ನು ಸ್ವಾಗತಿಸಲಾಯಿತು.

ಮದ್ದೂರು ತಾಲೂಕಿನ ನಿಡಘಟ್ಟದಲ್ಲಿ ಮಾಜಿ ಸಚಿವರಾದ ಸಿ.ಎಸ್.ಪುಟ್ಟರಾಜು ಹಾಗೂ ಡಿ.ಸಿ.ತಮ್ಮಣ್ಣ ನೇತೃತ್ವದಲ್ಲಿ ಸ್ವಾಗತ ಕೋರಿ ಬೃಹತ್ ಹಾರ ಹಾಕಲಾಯಿತು. ಬಳಿಕ ಕೊಲ್ಲಿ ವೃತ್ತ, ಐಬಿ ಸರ್ಕಲ್, ಗೆಜ್ಜಲಗೆರೆಯಲ್ಲಿ ಹೆಚ್ಡಿಕೆ ಅವರನ್ನು ಆಯಾ ಸ್ಥಳೀಯ ಗ್ರಾಮಸ್ಥರು ಅದ್ಧೂರಿಯಾಗಿ ಸ್ವಾಗತಿಸಿದರು.

ಮಂಡ್ಯ ತಾಲೂಕಿನ ಗಡಿಗ್ರಾಮ ಹನಕೆರೆಗೆ ಆಗಮಿಸುತ್ತಿದ್ದಂತೆಯೇ ಮನ್‌ಮುಲ್ ಮಾಜಿ ಅಧ್ಯಕ್ಷ ಬಿ.ಆರ್.ರಾಮಚಂದ್ರ ನೇತೃತ್ವದಲ್ಲಿ ಹೆಚ್ಡಿಕೆ ಅವರನ್ನು ಬರಮಾಡಿಕೊಳ್ಳಲಾಯಿತು. ನಂತರ ಬೂದನೂರು, ಮಂಡ್ಯ ನಗರದ ಫ್ಯಾಕ್ಟರಿ ವೃತ್ತ, ನಂದಾ ವೃತ್ತ, ಮಹಾವೀರ ವೃತ್ತ, ಸಂಜಯ ವೃತ್ತದಲ್ಲಿ ಹೆಚ್ಡಿಕೆಗೆ ಜೆಡಿಎಸ್ ಹಾಗೂ ಬಿಜೆಪಿ ಮುಖಂಡರು ಅದ್ಧೂರಿ ಸ್ವಾಗತ ಕೋರಿದರು.

ಉದ್ಯೋಗ ಸೃಷ್ಟಿ ರೈತರ ಸಮಸ್ಯೆ ಬಗೆಹರಿಸಲು ಆದ್ಯತೆ: ಮದ್ದೂರು ಪಟ್ಟಣದಲ್ಲಿ ಸಾರ್ವಜನಿಕರನ್ನುದ್ದೇಶಿಸಿ ಮಾತನಾಡಿದ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ, ಕೇಂದ್ರ ಸಚಿವರಾಗಿ ಮಂಡ್ಯ ಜಿಲ್ಲೆಯನ್ನು ಪ್ರತಿನಿಧಿಸುವ ಅವಕಾಶ ಕೊಟ್ಟ ಇಲ್ಲಿನ ಜನತೆಗೆ ಧನ್ಯವಾದಗಳು. ಜನರ ನಿರೀಕ್ಷೆಗೆ ತಕ್ಕಂತೆ ಕಾರ್ಯ ನಿರ್ವಹಿಸುವೆ. ಜಿಲ್ಲೆಯ ಹಲವು ಸಮಸ್ಯೆಗಳಿಗೆ ಪರಿಹಾರ ಒದಗಿಸುವ ನಿಟ್ಟಿನಲ್ಲಿ ಹಾಗೂ ಯುವಕರಿಗೆ ಉದ್ಯೋಗ ಕಲ್ಪಿಸಲು ಕೇಂದ್ರ ಸಚಿವನಾಗಿ ಶ್ರಮಿಸುವೆ. ಜೊತೆಗೆ ಈ ಭಾಗದ ರೈತರ ಸಮಸ್ಯೆ ಬಗೆಹರಿಸಲು ಸಹ ಕ್ರಮ ವಹಿಸುವೆ ಎಂದು ಭರವಸೆ ನೀಡಿದರು.

ಪ್ರಧಾನಿ ಮೋದಿ ದೇಶದಲ್ಲಿ ಕೇಂದ್ರ ಸಚಿವನಾಗಿ ಕಾರ್ಯನಿರ್ವಹಿಸಲು ಅವಕಾಶ ಕೊಟ್ಟಿದ್ದಾರೆ. ಅದಕ್ಕೆ ತಕ್ಕಂತೆ ದೇಶ, ರಾಜ್ಯ ಹಾಗೂ ಅದರಲ್ಲೂ ನನ್ನ ಕ್ಷೇತ್ರ ಮಂಡ್ಯ ಜಿಲ್ಲೆಯ ಅಭಿವೃದ್ಧಿಗೆ ನನ್ನ ಮೊದಲ ಆದ್ಯತೆಯಾಗಿದೆ. ನನ್ನ ಮೇಲೆ ಜನ ವಿಶ್ವಾಸವಿಟ್ಟರೆ, ಮಂಡ್ಯ ಜಿಲ್ಲೆಯನ್ನು ಸಮಗ್ರ ಅಭಿವೃದ್ಧಿ ಮಾಡಲು ಕ್ರಮ ವಹಿಸುತ್ತೇನೆ ಎಂದರು.

ಮೋದಿ ಅವರು ಎರಡು ಪ್ರಮುಖ ಖಾತೆಯನ್ನು ನನಗೆ ನೀಡಿ ದೇಶಾದ್ಯಂತ ಕೆಲಸ ಮಾಡಲು ಸೂಚಿಸಿದ್ದಾರೆ. ಈ ಎರಡು ಖಾತೆಯಿಂದ ಆಗಬಹುದಾದ ಎಲ್ಲಾ ರೀತಿಯ ಅಭಿವೃದ್ಧಿಯನ್ನು ನನ್ನ ಕ್ಷೇತ್ರ ಹಾಗೂ ಇಡೀ ದೇಶಕ್ಕೆ ಮಾಡಬೇಕೆಂಬುದು ನನ್ನ ಹಂಬಲವಾಗಿದೆ. ಇದಕ್ಕೆ ಜೆಡಿಎಸ್, ಬಿಜೆಪಿ ಹಾಗೂ ಜಿಲ್ಲೆಯ ಜನರ ಸಹಕಾರ ನನಗೆ ಬೇಕಿದೆ. ಜನರ ನಿರೀಕ್ಷೆಗೆ ತಕ್ಕಂತೆ ನಾನು ಕಾರ್ಯನಿರ್ವಹಿಸುವೆ ಎಂದು ನುಡಿದರು.

ನಾನು ಕೃಷಿ ಇಲಾಖೆಯ ಜವಾಬ್ದಾರಿ ವಹಿಸಿಕೊಳ್ಳಲು ಸಿದ್ಧನಿದ್ದೆ. ಇದಕ್ಕೆ ಕಾರಣ ಮಂಡ್ಯ ಜಿಲ್ಲೆ ಸೇರಿದಂತೆ ರಾಜ್ಯದಲ್ಲಿ ರೈತರು ಎದುರಿಸುತ್ತಿರುವ ಸಮಸ್ಯೆಯನ್ನು ಬಗೆಹರಿಸಬೇಕೆಂಬುದು ನನ್ನ ಉದ್ದೇಶವಾಗಿತ್ತು. ಆದರೆ ಮೋದಿ ಅವರು ಉಕ್ಕು ಹಾಗೂ ಕೈಗಾರಿಕಾ ಖಾತೆ ನೀಡಿದ್ದು, ಈ ಖಾತೆಗಳು ಸಹ ಜನರಿಗೆ ಅನುಕೂಲವಾಗುವ ಖಾತೆಗಳಾಗಿದ್ದು, ಇದರಿಂದ ಜನರಿಗೆ ಉಪಯೋಗ ಕಲ್ಪಿಸಿ, ಜೊತೆಗೆ ರೈತರ ಸಮಸ್ಯೆಗಳನ್ನು ಪರಿಹರಿಸಲು ಶ್ರಮಿಸುವೆ ಎಂದು ಭರವಸೆ ನೀಡಿದರು.

ನನಗೆ ಸಚಿವ ಸ್ಥಾನ ಸಿಕ್ಕಿರಬಹುದು. ಆದರೆ, ನನ್ನ ಹಾದಿ ಕಠಿಣವಾಗಿದೆ. ಒಂದು ಕಡೆ ನನ್ನ ಇಲಾಖೆಯ ವ್ಯಾಪ್ತಿಯಲ್ಲಿ ದೇಶದ ಅಭಿವೃದ್ಧಿಯನ್ನು ನೋಡಬೇಕಿದೆ. ಜೊತೆಗೆ ಮಂಡ್ಯ ಜಿಲ್ಲೆಯ ಸಮಗ್ರ ಅಭಿವೃದ್ಧಿಗೂ ಆದ್ಯತೆ ಕೊಡಬೇಕಿದೆ. ಮುಂದಿನ ದಿನಗಳಲ್ಲಿ ನನಗೆ ಮತ ಕೊಟ್ಟಿರುವ ಮಂಡ್ಯ ಲೋಕಸಭಾ ಕ್ಷೇತ್ರದ ಪ್ರತಿ ಹಳ್ಳಿ ಹಳ್ಳಿಯ ಪ್ರವಾಸ ಮಾಡಿ ಜನರಿಗೆ ಕೃತಜ್ಞತೆ ಅರ್ಪಿಸುವ ಜೊತೆಗೆ ಜನರ ಅಹವಾಲು ಸ್ವೀಕರಿಸುವೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಜೆಡಿಎಸ್ ಕೋರ್ ಕಮಿಟಿ ಅಧ್ಯಕ್ಷ ಹಾಗೂ ಶಾಸಕ ಜಿ.ಟಿ.ದೇವೇಗೌಡ, ಮಾಜಿ ಸಚಿವರಾದ ಡಿ.ಸಿ.ತಮ್ಮಣ್ಣ, ಸಿ.ಎಸ್.ಪುಟ್ಟರಾಜು, ಶಾಸಕ ಹೆಚ್.ಟಿ.ಮಂಜು, ಮಾಜಿ ಶಾಸಕರಾದ ಡಾ.ಕೆ.ಅನ್ನದಾನಿ, ಕೆ.ಸುರೇಶ್‌ಗೌಡ, ಕೆ.ಟಿ.ಶ್ರೀಕಂಠೇಗೌಡ, ರವೀಂದ್ರ ಶ್ರೀಕಂಠಯ್ಯ, ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್‌ಕುಮಾರಸ್ವಾಮಿ, ವಿಧಾನ ಪರಿಷತ್ ಸದಸ್ಯರಾದ ಕೆ.ವಿವೇಕಾನಂದ, ಮಂಜೇಗೌಡ, ಮುಖಂಡರಾದ ಬಿ.ಆರ್. ರಾಮಚಂದ್ರ ನೆಲ್ಲಿಗೆರೆ ಬಾಲು, ಡಿ.ರಮೇಶ್, ಡಾ.ಇಂದ್ರೇಶ್, ಅಬ್ಬಾಸ್ ಅಲಿ ಬೊಹ್ರಾ, ಎಸ್.ಪಿ.ಸ್ವಾಮಿ, ರೂಪಾ ಸೇರಿದಂತೆ ನೂರಾರು ಮಂದಿ ಭಾಗವಹಿಸಿದ್ದರು.

ಕೊನೆ ಘಳಿಗೆಯಲ್ಲಿ ಕೇಂದ್ರ ಸಚಿವ ಕುಮಾರಸ್ವಾಮಿ ಮೈಸೂರು ಭೇಟಿ ರದ್ದು

- ಸ್ವಾಗತಕ್ಕೆ ಕಾದಿದ್ದ ಅಪಾರ ಕಾರ್ಯಕರ್ತರು, ಅಭಿಮಾನಿಗಳಲ್ಲಿ ನಿರಾಸೆ
- ಭಾರಿ ಸೇಬಿನ ಹಾರ, ಹೂಮಳೆ ಗರೆಯಲು ಸಜ್ಜಾಗಿದ್ದ ಜೆಸಿಬಿಗಳು



ಮೈಸೂರು–ಬೆಂಗಳೂರು ಹೆದ್ದಾರಿ ಕೆಂಪೇಗೌಡ ವೃತ್ತದ ಬಳಿ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಸ್ವಾಗತಕ್ಕೆ ಸಿದ್ಧವಾಗಿದ್ದ ಬೃಹತ್ ಸೇಬಿನ ಹಾರ.

ಮೈಸೂರು, ಜೂ.15(ಎಸ್‌ಬಿಡಿ)– ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕೆ ಸಚಿವರಾದ ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಅವರ ಶನಿವಾರದ ಮೈಸೂರು ಭೇಟಿ ಕಡೇ ಘಳಿಗೆಯಲ್ಲಿ ರದ್ದಾಯಿತು.

ಮಂಡ್ಯದ ಕಾರ್ಯಕ್ರಮದ ಬಳಿಕ ಸಂಜೆ 7.30ಕ್ಕೆ ಮೈಸೂರಿನ ಸುತ್ತೂರು ಮಠಕ್ಕೆ ಭೇಟಿ ನಿಗದಿಯಾಗಿತ್ತು. ಶ್ರೀಗಳು ವಿದೇಶ ಪ್ರವಾಸ ನಿಮಿತ್ತ ರಾತ್ರಿ 8.30ಕ್ಕೆ ಬೆಂಗಳೂರಿಗೆ ಪ್ರಯಾಣಿಸಬೇಕಿತ್ತು. ಆದರೆ ಮಂಡ್ಯದಲ್ಲಿ ಕಾರ್ಯಕ್ರಮ ತಡವಾಗಿದ್ದರಿಂದ ಹೆಚ್.ಡಿ.ಕುಮಾರಸ್ವಾಮಿ ಅವರು ನಿಗದಿತ ಸಮಯಕ್ಕೆ ಮೈಸೂರಿನತ್ತ ಪ್ರಯಾಣ ಬೆಳೆಸಲು ಸಾಧ್ಯವಾಗಲಿಲ್ಲ. ಈ ಹಿನ್ನೆಲೆಯಲ್ಲಿ ಶನಿವಾರದ ಪ್ರವಾಸವನ್ನು ಕಡೇ ಕ್ಷಣದಲ್ಲಿ ರದ್ದುಗೊಳಿಸಲಾಯಿತು. ಭಾನುವಾರ ಮಧ್ಯಾಹ್ನ 2ಕ್ಕೆ ಚಾಮುಂಡಿಬೆಟ್ಟಕ್ಕೆ ಭೇಟಿ ನೀಡಿ, ದೇವಿಯ ಆಶೀರ್ವಾದ ಪಡೆಯಲಿದ್ದಾರೆ ಎಂದು ತಿಳಿದುಬಂದಿದೆ.

ಅಭಿಮಾನಿಗಳಿಗೆ ನಿರಾಸೆ: ಹೆಚ್.ಡಿ.ಕುಮಾರಸ್ವಾಮಿ ಅವರು ಕೇಂದ್ರ ಸಚಿವರಾಗಿ ಮೊದಲ ಬಾರಿಗೆ ಆಗಮಿಸುತ್ತಿದ್ದಾರೆಂದು ಜೆಡಿಎಸ್ ಕಾರ್ಯಕರ್ತರು ಹಾಗೂ ಅವರ ಅಭಿಮಾನಿಗಳು ಅದ್ಧೂರಿ ಸ್ವಾಗತಕ್ಕೆ ಸಜ್ಜಾಗಿದ್ದರು. ಮೈಸೂರು–ಬೆಂಗಳೂರು ಹೆದ್ದಾರಿ ಮಣಿಪಾಲ್ ಆಸ್ಪತ್ರೆ ಬಳಿಯ ಕೆಂಪೇಗೌಡ ವೃತ್ತದಲ್ಲಿ ನೂರಾರು ಮಂದಿ ಜಮಾಯಿಸಿದ್ದರು. ಕ್ರೇನ್‌ನಲ್ಲಿ ಸುಮಾರು 150 ಕೆಜಿಯ ಬೃಹತ್ ಸೇಬಿನ ಹಾರ ಹಾಗೂ ಮೂರು ಜೆಸಿಬಿಗಳಲ್ಲಿ ಹೂಮಳೆಗರೆಯಲು ಸಿದ್ಧತೆ ಮಾಡಿಕೊಂಡಿದ್ದರು. ರಸ್ತೆ ದೀಪಗಳು ಹೆಚ್ಚು ಬೆಳಕು ಬೀರದಿರುವ ಕಾರಣ ತಾತ್ಕಾಲಿಕ ಫೋಕಸ್ ಲೈಟಿಂಗ್ ವ್ಯವಸ್ಥೆಯನ್ನೂ ಮಾಡಿಕೊಂಡಿದ್ದರು. ಆದರೆ ರಾತ್ರಿ 8.15ರ ವೇಳೆಗೆ ಕುಮಾರಸ್ವಾಮಿ ಅವರ ಇಂದಿನ ಪ್ರವಾಸ ರದ್ದಾದ ವಿಷಯ ತಿಳಿದು ತೀವ್ರ ನಿರಾಸೆಗೊಂಡರು. ಅನಿವಾರ್ಯವಾಗಿ ಸ್ವಾಗತಕ್ಕೆ ತಂದಿದ್ದ ಬೃಹತ್ ಸೇಬಿನ ಹಾರ, ಅಪಾರ ಹೂಗಳನ್ನು ವಾಪಸ್ ಕೊಂಡೊಯ್ದರು.

ಇತ್ತ ಕುಮಾರಸ್ವಾಮಿ ಆಗಮಿಸಿದಾಗ ರಿಂಗ್ ರೋಡ್ ಜಂಕ್ಷನ್‌ನಲ್ಲಿ ವಾಹನ ದಟ್ಟಣೆ ಹಾಗೂ ಸ್ವಾಗತ ಕಾರ್ಯಕ್ರಮದ ವೇಳೆ ಬಂದೋಬಸ್ತ್‌ಗೆ ಇನ್ಸ್‌ಪೆಕ್ಟರ್‌ಗಳು, ಸಬ್‌ಇನ್ಸ್‌ಪೆಕ್ಟರ್‌ಗಳು ಸೇರಿದಂತೆ ಸುಮಾರು 30 ಮಂದಿ ಪೊಲೀಸರು ನೆರೆದಿದ್ದರು.

ಅರಣ್ಯ ಸಚಿವರಿಗೆ ಸ್ವಾಗತ..



ಅರಣ್ಯ ಇಲಾಖೆ ಸಚಿವ ಈಶ್ವರ್ ಖಂಡ್ರೆ ಮೈಸೂರಿನ ಸುತ್ತೂರು ಮಠಕ್ಕೆ ಆಗಮಿಸಿದ್ದ ಸಂದರ್ಭ ಅವರನ್ನು ಸ್ವಾಗತಿಸಲಾಯಿತು. ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಕನಕ ಮೂರ್ತಿ, ವರುಣ ಕ್ಷೇತ್ರ ಯುವ ಕಾಂಗ್ರೆಸ್ ಮುಖಂಡ ಕಿರಗಸೂರು ಶಿವಕುಮಾರ್, ವೀರಶೈವ ಮಹಾಸಭಾದ ಜಿಲ್ಲಾಧ್ಯಕ್ಷ ಕಾನ್ಯ ಶಿವಮೂರ್ತಿ ಉಪಸ್ಥಿತರಿದ್ದರು.

ಯುವ ರಾಜ್‌ಕುಮಾರ್ ಪತ್ನಿ ವಿರುದ್ಧ ನ್ಯಾಯಾಲಯದ ಮೆಟ್ಟಿಲೇರಿದ ನಟಿ ಸಪ್ತಮಿ ಗೌಡ


ಬೆಂಗಳೂರು, ಜೂ.15– ಅಗೌರವ, ಮಾನಸಿಕ ಕ್ರೌರ್ಯದ ಆರೋಪ ಹೊರಿಸಿ ನಟ ಯುವರಾಜ್ ಕುಮಾರ್ ಅವರು ಪತ್ನಿ ಶ್ರೀದೇವಿ ಅವರಿಂದ ವಿಚ್ಛೇದನ ಪಡೆಯಲು ಕೌಟುಂಬಿಕ ನ್ಯಾಯಾಲಯದಲ್ಲಿ ಅರ್ಜಿ ಸಲ್ಲಿಸಿದ್ದರು. ಬಳಿಕ ಮಾಧ್ಯಮಗಳಿಗೆ ಹೇಳಿಕೆ ಬಿಡುಗಡೆ ಮಾಡಿದ್ದ ಶ್ರೀದೇವಿ ಅವರು ಸಪ್ತಮಿ ಗೌಡ ಹಾಗೂ ಯುವರಾಜ್ ಪರಸ್ಪರ ಸಂಬಂಧದಲ್ಲಿದ್ದಾರೆ.



ಸಪ್ತಮಿ ಗೌಡ

ತಾವು ಅಮೆರಿಕಕ್ಕೆ ತೆರಳಿದಾಗ ಯುವ ಹಾಗೂ ಸಪ್ತಮಿ ಸಹಜೀವನ ನಡೆಸಿದ್ದಾರೆ. ಸಪ್ತಮಿ ಗೌಡ ಅವರಿಗಾಗಿ ನನ್ನನ್ನು ಮನೆಯಿಂದ ಹೊರಗೆ ಹಾಕುವ ಪ್ರಯತ್ನವೂ ನಡೆದಿತ್ತು ಎಂದು ತಮ್ಮ ವಕೀಲರ ಮೂಲಕ ಆರೋಪ ಮಾಡಿದ್ದರು. ಇದೀಗ ತಮ್ಮ ವಿರುದ್ಧ ಶ್ರೀದೇವಿ, ಇಲ್ಲ ಸಲ್ಲದ ಹೇಳಿಕೆ ನೀಡಿದ್ದಾರೆ. ಸುಳ್ಳು ಆರೋಪ ಹೊರಿಸಿದ್ದಾರೆ ಎಂದು ಸಪ್ತಮಿ ಆರೋಪ ಮಾಡಿದ್ದು, ಶ್ರೀದೇವಿ ಭೈರಪ್ಪ ತಮ್ಮ ವಿರುದ್ಧ ಮಾನಹಾನಿಕರ ಹೇಳಿಕೆ ನೀಡುವಂತೆ ನಿರ್ಬಂಧಕಾಜ್ಞೆ ನೀಡುವಂತೆ ಮನವಿ ಸಲ್ಲಿಸಿದ್ದರು.

ನಿರ್ಬಂಧಕಾಜ್ಞೆ ಹೇರಿರುವ ಬೆಂಗಳೂರಿನ ಸಿಟಿ ಸಿವಿಲ್ ನ್ಯಾಯಾ ಲಯ, ಶ್ರೀದೇವಿ ಭೈರಪ್ಪ ಅವರಿಗೆ ನೋಟೀಸ್ ಜಾರಿ ಮಾಡಿ ಆದೇಶ ಹೊರಡಿಸಿದೆ. ಆದರೆ ಶ್ರೀದೇವಿ ಭೈರಪ್ಪ ಪ್ರಸ್ತುತ ವಿದೇಶದಲ್ಲಿದ್ದಾರೆ. ಅವರು ಹಾರ್ವರ್ಡ್ ವಿಶ್ವವಿದ್ಯಾಲಯದಲ್ಲಿ ಶಿಕ್ಷಣದಲ್ಲಿ ತೊಡಗಿದ್ದಾರೆ. ಪ್ರಸ್ತುತ ಯುವ ರಾಜ್‌ಕುಮಾರ್ ವಿಚ್ಛೇದನಕ್ಕಾಗಿ ಅರ್ಜಿ ಸಲ್ಲಿಸಿದ್ದು, ಮುಂದಿನ ದಿನಗಳಲ್ಲಿ ಪ್ರಕರಣ ಯಾವ ತಿರುವು ಪಡೆದುಕೊಳ್ಳಲಿದೆ ಎಂಬುದು ತಿಳಿದು ಬರಲಿದೆ.



ವಿಧಾನಪರಿಷತ್ ಸದಸ್ಯ ಡಾ. ಯತೀಂದ್ರಗೆ ಅಭಿನಂದನೆ

ವಿಧಾನಪರಿಷತ್ತಿನ ನೂತನ ಸದಸ್ಯ ಡಾ. ಯತೀಂದ್ರ ಅವರನ್ನು ಅವರ ಮೈಸೂರಿನ ನಿವಾಸದಲ್ಲಿ ಕರ್ನಾಟಕ ಪ್ರದೇಶ ಕುರುಬರ ಸಂಘದ ನಿರ್ದೇಶಕ ಅಭಿಲಾಶ್ ,ಯು, ಕೆಪಿಸಿಸಿ ಹಿಂದುಳಿದ ರಾಜ್ಯ ಪ್ರಧಾನ ಕಾರ್ಯದರ್ಶಿ ಜೈ ಸ್ವಾಮಿ, ಕಾಂಗ್ರೆಸ್ ಮುಖಂಡ ಮೆಲ್ಲಹಳ್ಳಿ ರವಿ ಎನ್ ಗೌಡ ಮುಂತಾದವರು ಅಭಿನಂದಿಸಿದರು.

ಮೇಕೆದಾಟು ಯೋಜನೆ ಜಾರಿ; ಕಾವೇರಿ ಜಲ ವಿವಾದಕ್ಕೆ ಶಾಶ್ವತ ಪರಿಹಾರಕ್ಕೆ ಆಗ್ರಹಿಸಿ ಪ್ರತಿಭಟನೆ

ಕಾವೇರಿ ಕ್ರಿಯಾ ಸಮಿತಿಯಿಂದ ಮೇಕೆದಾಟು ಬಳಿಯೇ ಧರಣಿ

ಮೈಸೂರು, ಜೂ.15(ಎಸ್‌ಬಿಡಿ)– ಕಾವೇರಿ ನದಿನೀರು ವಿಚಾರದಲ್ಲಿ ಶಾಶ್ವತ ಪರಿಹಾರ ಹಾಗೂ ಮೇಕೆದಾಟು ಯೋಜನೆ ಆರಂಭಕ್ಕೆ ಆಗ್ರಹಿಸಿ ಕಾವೇರಿ ಕ್ರಿಯಾ ಸಮಿತಿ ವತಿಯಿಂದ ಮೇಕೆದಾಟು ಬಳಿ ಧರಣಿ ನಡೆಸಲಾಯಿತು.

ಮೇಕೆದಾಟು ಸಮೀಪದ ಅರಣ್ಯ ಪ್ರದೇಶದ ಟೋಲ್‌ಗೇಟ್ ಮುಂಭಾಗ ಪ್ರತಿಭಟನಾ ಧರಣಿಯನ್ನು ಸಮಿತಿ ಸದಸ್ಯರು, 'ನಮ್ಮ ಕಾವೇರಿ, ನಮ್ಮ ಹಕ್ಕು, ಕರ್ನಾಟಕದ ಹಕ್ಕು' ಎಂದು ಪ್ರತಿಪಾದಿಸಿದರು.

ಈ ವೇಳೆ ಸಮಿತಿ ಅಧ್ಯಕ್ಷ ಎಸ್. ಜಯಪ್ರಕಾಶ್(ಜೆಪಿ) ಮಾತನಾಡಿ, ರಾಜ್ಯದಿಂದ ಕೇಂದ್ರ ಸಚಿವರಾಗಿರುವ ಹೆಚ್.ಡಿ.ಕುಮಾರಸ್ವಾಮಿ, ನಿರ್ಮಲಾ ಸೀತಾರಾಮನ್, ಪ್ರಹ್ಲಾದ್ ಜೋಶಿ, ವಿ. ಸೋಮಣ್ಣ ಹಾಗೂ ಶೋಭಾ ಕರಂದ್ಲಾಜೆಯವರು ಕಾವೇರಿ ನದಿನೀರು ವಿಚಾರದಲ್ಲಿ ರಾಜ್ಯಕ್ಕೆ ನ್ಯಾಯ ಕಲ್ಪಿಸುವುದರ ಜೊತೆಗೆ ಶೀಘ್ರ ಮೇಕೆದಾಟು ಯೋಜನೆ ಪ್ರಾರಂಭಿಸಲು ಪ್ರಾಮಾಣಿಕ ಪ್ರಯತ್ನ ಮಾಡಬೇಕು ಎಂದು ಆಗ್ರಹಿಸಿದರು.



ಮೇಕೆದಾಟು ಯೋಜನೆ ಶೀಘ್ರ ಪ್ರಾರಂಭ ಹಾಗೂ ಕಾವೇರಿ ನದಿ ನೀರು ಹಂಚಿಕೆ ಸಮಸ್ಯೆಗೆ ಶಾಶ್ವತ ಪರಿಹಾರಕ್ಕೆ ಆಗ್ರಹಿಸಿ ಕಾವೇರಿ ಕ್ರಿಯಾ ಸಮಿತಿ ವತಿಯಿಂದ ಮೇಕೆದಾಟು ಬಳಿ ಪ್ರತಿಭಟನೆ ನಡೆಸಲಾಯಿತು.

ರಾಜ್ಯದ ಎಲ್ಲಾ ಪಕ್ಷದ ನಾಯಕರೂ ರಾಜಕೀಯ ಇಚ್ಛಾಸಕ್ತಿ ಬದಿಗೊತ್ತಿ ನಮ್ಮ ಜನರ ಹಿತಕ್ಕಾಗಿ ಕಾರ್ಯ ನಿರ್ವಹಿಸಬೇಕು. ಅಧಿಕಾರ ಹೊಂದಿರುವ ಸಚಿವರು ಈ ನಿಟ್ಟಿನಲ್ಲಿ ಸಾಮರ್ಥ್ಯ ಮೀರಿ ಪ್ರಯತ್ನ ನಡೆಸಬೇಕು. ಅಧಿಕಾರ ಮುಗಿದ ನಂತರ ಪಶ್ಚಾತ್ತಾಪಪಡುವ ಬದಲು ಈಗಿನಿಂದಲೇ ಸಾರ್ಥಕ ಕೆಲಸ ಆರಂಭಿಸಿ. ಮೇಕೆದಾಟು ಯೋಜನೆ ಅನುಷ್ಠಾನ ಹಾಗೂ ಕಾವೇರಿ ನದಿ ನೀರು ವಿಚಾರದಲ್ಲಿ ಶಾಶ್ವತ ಪರಿಹಾರ ಕಲ್ಪಿಸುವ ಮೂಲಕ ರಾಜ್ಯದ ಜನತೆಯ ಋಣ ತೀರಿಸಬೇಕು ಎಂದು ಮನವಿ ಮಾಡಿದರು. ಮೈಸೂರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್ ಮಾತನಾಡಿ, ಕಾವೇರಿ ನೀರಿನ ವಿಚಾರದಲ್ಲಿ ರಾಜ್ಯ ಸರ್ಕಾರ ಜವಾಬ್ದಾರಿಯಿಂದ ನಡೆದುಕೊಳ್ಳಬೇಕು. ನಮ್ಮ ಜನರಿಗೆ ಕುಡಿಯುವ ನೀರಿಗೆ ಸಮಸ್ಯೆ ಇದ್ದರೂ ಅಣೆಕಟ್ಟೆ ನೀರನ್ನು ತಮಿಳುನಾಡಿಗೆ ಹರಿಸುವ ಮೂಲಕ ನಾಡಿಗೆ ದ್ರೋಹ ಮಾಡಬಾರದು ಎಂದು ಹೇಳಿದರು.

ಸಮಿತಿಯ ಪ್ರಧಾನ ಸಂಚಾಲಕ ಮೂಗೂರು ನಂಜುಂಡಸ್ವಾಮಿ ಮಾತನಾಡಿ, ಸಮಿತಿ ಅಧ್ಯಕ್ಷ ಜೆಪಿ ಕಾವೇರಿ ನದಿ ನೀರು ಹಾಗೂ ಮೇಕೆದಾಟು ಯೋಜನೆಯಲ್ಲಿ ರಾಜ್ಯಕ್ಕಾಗುತ್ತಿರುವ ಅನ್ಯಾಯದ ವಿರುದ್ಧ ದಿಟ್ಟ ಹೋರಾಟ ಮುಂದುವರೆಸಿರುವುದು ಶ್ಲಾಘನೀಯ ಎಂದು ಬಣ್ಣಿಸಿದರು. ರೈತ ಮುಖಂಡ ಸಂಪತ್ ಕುಮಾರ್, ಸಮಿತಿ ಕಾರ್ಯದರ್ಶಿ ತೇಜಸ್ ಲೋಕೇಶ್‌ಗೌಡ, ದೇವರಾಜ್, ನಜೀಬುಲ್ಲಾ ಮಾತನಾಡಿ, ಮೇಕೆದಾಟು ಯೋಜನೆ ಅನುಷ್ಠಾನಕ್ಕೆ ಆಗ್ರಹಿಸಿದರು. ಪ್ರತಿಭಟನೆಯಲ್ಲಿ ಸಮಿತಿಯ ಶ್ರೀನಿವಾಸಗೌಡ, ಬೀರೇಶ್, ಸಂಜಯ್, ನೇಹಾ, ಆಟೋ ಮಹದೇವ್, ಜೋಗಿ ಮಂಜು, ದಿನೇಶ್, ರಾಮೇಗೌಡರು, ರಘು, ಮಹೇಶ್ ಗೌಡ, ಹನುಮಂತೇಗೌಡ, ಮಹೇಶ್ ತಲಕಾಡು, ಅಶೋಕ್, ವಿಷ್ಣು ಮತ್ತಿತರರು ಪಾಲ್ಗೊಂಡಿದ್ದರು.

ಮೈಸೂರು ಮಿತ್ರ ಭಾನುವಾರ 16 ಜೂನ್ 2024

ಭೂಪರಿವರ್ತನೆಯನ್ನು ವಿರೋಧಿಸಿ ನಾಳೆ ಸಿದ್ದಾಪುರದಲ್ಲಿ
ಸಿಎನ್‌ಸಿಯಿಂದ ಮಾನವ ಸರಪಳಿ ಜನಜಾಗೃತಿ


ಎನ್.ಯು.ನಾಚಪ್ಪ

ಮಡಿಕೇರಿ,ಜೂ.15– ಸಿದ್ದಾಪುರದ 2400 ಏಕರೆ ಕಾಫಿ ತೋಟ ಸೇರಿದಂತೆ ಕೊಡಗು ಜಿಲ್ಲೆಯಾದ್ಯಂತ ನಡೆಯುತ್ತಿರುವ ಬೃಹತ್ ಭೂಪರಿವರ್ತನೆಯನ್ನು ವಿರೋಧಿಸಿ ಜೂ.17ರಂದು ಸಿದ್ದಾಪುರದಲ್ಲಿ ಕೊಡವ ನ್ಯಾಷನಲ್ ಕೌನ್ಸಿಲ್ ಸಂಘಟನೆ ವತಿಯಿಂದ ಶಾಂತಿಯುತ ಮಾನವ ಸರಪಳಿ ಜನಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಸಿಎನ್‌ಸಿ ಅಧ್ಯಕ್ಷ ಎನ್.ಯು.ನಾಚಪ್ಪ ತಿಳಿಸಿದ್ದಾರೆ.

ಪತ್ರಿಕಾ ಹೇಳಿಕೆ ನೀಡಿರುವ ಅವರು ಸೋಮವಾರ ಬೆಳಿಗ್ಗೆ 10.30 ಗಂಟೆಗೆ ಸಿದ್ದಾಪುರ ಪಟ್ಟಣದಲ್ಲಿ ಮಾನವ ಸರಪಳಿ ನಿರ್ಮಿಸಿ ಬೃಹತ್ ಭೂಪರಿವರ್ತನೆ ಪ್ರಕ್ರಿಯೆಗಳನ್ನು ಸ್ಥಗಿತಗೊಳಿಸುವಂತೆ ಒತ್ತಾಯಿಸಲಾಗುವುದು ಎಂದು ಹೇಳಿದ್ದಾರೆ.

ಸಿದ್ದಾಪುರದ 2400 ಎಕರೆ ಕಾಫಿ ತೋಟದ ಭೂಪರಿವರ್ತನೆಯಿಂದ 2.80 ಲಕ್ಷ ಮಂದಿ, ತಡಿಯಂಡಮೋಲ್‌ನ ಕೆಳಗೆ 300 ಎಕರೆ ಕಾಫಿ ತೋಟಗಳ ಪರಿವರ್ತನೆಯಿಂದ 30 ಸಾವಿರ ಮತ್ತು ಗಾಳಿಬೀಡಿನ ಹಸಿರು ಬೆಲ್ಟ್ ಪ್ರದೇಶದ ಭೂಪರಿವರ್ತನೆಯಿಂದ 10 ಸಾವಿರ ಮಂದಿ ನೆಲೆಸುವ ಸಾಧ್ಯತೆ ಇದೆ. ಈ ಬೆಳವಣಿಗೆಯಿಂದ ಕೊಡಗಿನಲ್ಲಿ ಜನಸಂಖ್ಯಾ ಸ್ಫೋಟ ಸಂಭವಿಸಿ ಬುಡಕಟ್ಟು ಜನಾಂಗ ಮೂಲನಿವಾಸಿ ಕೊಡವರ ಅಸ್ತಿತ್ವಕ್ಕೆ ದಕ್ಕೆ ಬರಬಹುದು. ಸಿದ್ದಾಪುರ 2400 ಎಕರೆ ಕಾಫಿ ತೋಟವನ್ನು ಪರಿವರ್ತಿಸುವ ಮೂಲಕ ದೈತ್ಯಾಕಾರದ ವಿಲ್ಲಾಗಳು, ಮೆಗಾ ಟೌನ್‌ಶಿಪ್‌ಗಳು ಮತ್ತು ಮನೆ ನಿವೇಶನಗಳನ್ನು ನಿರ್ಮಿಸಲು ಅವಕಾಶ ಮಾಡಿಕೊಡಲಾಗುತ್ತಿದೆ.

ಕರ್ನಾಟಕ ಭೂ ಸುಧಾರಣಾ ತಿದ್ದುಪಡಿ ಕಾಯ್ದೆ 79ಎ ಮತ್ತು 79ಬಿಯನ್ನು ಉಲ್ಲಂಘಿಸಿ ಕೃಷಿ ಜಮೀನು, ಭತ್ತದ ಗದ್ದೆಗಳು ಮತ್ತು ಕಾಫಿ ತೋಟಗಳನ್ನು ಪರಿವರ್ತನೆ ಮಾಡಲಾಗುತ್ತಿದೆ. ಕುಟ್ಟ–ಶ್ರೀಮಂಗಲದಲ್ಲಿ ಉದ್ದೇಶಿತ ಪಟ್ಟಣಗಳು ಮತ್ತು ಆರ್ಥಿಕ ಕಾರಿಡಾರ್‌ಗಳಿಗಾಗಿ ಭೂಮಿಯನ್ನು ಜೂಜಾಟದ ರೀತಿಯಲ್ಲಿ ಖರೀದಿಸಲಾಗುತ್ತಿದೆ. ಬೆಂಗಳೂರು, ತಿರುವ ನಂತಪುರ, ಚೆನ್ನೈ, ಹೈದರಬಾದ್ ಸೇರಿದಂತೆ ದೇಶದ ವಿವಿಧೆಡೆಯ ಭೂಮಾಫಿಯ ಮತ್ತು ರಾಜಕೀಯ ಸಂಯೋಜಿತ ಗುಂಪುಗಳು ಈ ಕಾರ್ಯದಲ್ಲಿ ತೊಡಗಿವೆ ಎಂದು ನಾಚಪ್ಪ ಆರೋಪಿಸಿದ್ದಾರೆ.

ಆದಿಮಸಂಜಾತ ಕೊಡವರ ಹಕ್ಕುಗಳನ್ನು ರಕ್ಷಿಸಲು 'ಕೊಡವ ಲ್ಯಾಂಡ್' ಸ್ವಾಯಂ ನಿರ್ಣಯದ ಭೂ ರಾಜಕೀಯ ಸ್ವಾಯತ್ತೆ ಘೋಷಣೆ ಮತ್ತು ಕೊಡವರಿಗೆ ಎಸ್‌ಟಿ ಟ್ಯಾಗ್ ನೀಡುವುದು ಅಗತ್ಯವೆಂದು ಪ್ರತಿಪಾದಿಸಿದ್ದಾರೆ. ಈ ಮಣ್ಣಿನಲ್ಲಿ ನಮ್ಮ ಐತಿಹಾಸಿಕ ನಿರಂತರತೆಗಾಗಿ ಸ್ವಯಂ–ಆಡಳಿತವನ್ನು ಸಂವಿಧಾನದ ವಿಧಿ 244, 371 ಆರ್/ಡಬ್ಲ್ಯೂ 6 ಮತ್ತು 8ನೇ ಶೆಡ್ಯೂಲ್ ಮತ್ತು ಆಂತರಿಕ ರಾಜಕೀಯ ಸ್ವ–ನಿರ್ಣಯ ಹಕ್ಕುಗಳು ವಿಶ್ವ ರಾಷ್ಟ್ರ ಸಂಸ್ಥೆ ಹೊರಡಿಸಿರುವ ಆದಿಮ ಸಂಜಾತ ಜನಾಂಗದ ಹಕ್ಕುಗಳ ಅಂತರಾಷ್ಟ್ರೀಯ ಕಾನೂನಿನಂತೆ ಜಾರಿಯಾಗುವ ಅಗತ್ಯವಿದೆ ಎಂದು ತಿಳಿಸಿದ್ದಾರೆ.

ಜೂ.27 ರಿಂದ ಸೇನಾ ನೇಮಕಾತಿ ರ‍್ಯಾಲಿ

ಮಡಿಕೇರಿ: ಅಗ್ನಿವೀರ್ ಸೇನಾ ನೇಮಕಾತಿ ರ‍್ಯಾಲಿಯು ನಗರದ ಜನರಲ್ ತಿಮ್ಮಯ್ಯ ಜಿಲ್ಲಾ ಕ್ರೀಡಾಂಗಣದಲ್ಲಿ ಜೂ.27 ರಿಂದ ಜು.2 ರವರೆಗೆ ನಡೆಯಲಿದೆ.

ಈ ಕುರಿತು ಜಿಲ್ಲಾಧಿಕಾರಿ ವೆಂಕಟ್ ರಾಜಾ ಅವರ ಅಧ್ಯಕ್ಷತೆಯಲ್ಲಿ ವಿಡಿಯೊ ಸಂವಾದ ನಡೆಯಿತು. ಈ ಸಂದರ್ಭದಲ್ಲಿ ವೆಂಕಟ್‌ರಾಜಾ ಮಾತನಾಡಿ, ಸೇನಾ ನೇಮಕಾತಿ ರ‍್ಯಾಲಿಯನ್ನು ಸುಗಮವಾಗಿ ನಡೆಸಲು ಎಲ್ಲಾ ಹಂತದ ಅಧಿಕಾರಿಗಳು ಶ್ರಮಿಸುವಂತೆ ಸೂಚಿಸಿದರು. ಸೈನಿಕ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಬಾಲಸುಬ್ರಮಣಿಂ ವಿವಿಧ ಇಲಾಖೆ ಅಧಿಕಾರಿಗಳು ಪಾಲ್ಗೊಂಡಿದ್ದರು.

ಕೊಡವ ಸಾಹಿತ್ಯ ಅಕಾಡೆಮಿ ನೂತನ ಅಧ್ಯಕ್ಷರಾಗಿ ಅಜ್ಜಿನಿಕಂಡ ಮಹೇಶ್ ನಾಚಯ್ಯ ಅಧಿಕಾರ ಸ್ವೀಕಾರ


ಅಧಿಕಾರ ಸ್ವೀಕರಿಸುತ್ತಿರುವ ಅಜ್ಜಿನಿಕಂಡ ಮಹೇಶ್.

ಮಡಿಕೇರಿ ಜೂ.15– ಕರ್ನಾಟಕ ಕೊಡವ ಸಾಹಿತ್ಯ ಅಕಾಡೆಮಿ ನೂತನ ಅಧ್ಯಕ್ಷರಾಗಿ ಅಜ್ಜಿನಿಕಂಡ ಮಹೇಶ್ ನಾಚಯ್ಯ ಶನಿವಾರ ಅಧಿಕಾರ ವಹಿಸಿಕೊಂಡಿದ್ದಾರೆ.

ನಗರದ ಕರ್ನಾಟಕ ಕೊಡವ ಸಾಹಿತ್ಯ ಅಕಾಡೆಮಿ ಕಚೇರಿಯಲ್ಲಿ ರಿಜಿಸ್ಟ್ರಾರ್ ಅಜ್ಜಿಕುಟ್ಟೀರ ಗಿರೀಶ್ ಅವರು ನೂತನ ಅಧ್ಯಕ್ಷರಿಗೆ ಆದೇಶ ಪತ್ರ ನೀಡಿದರು. ಕರ್ನಾಟಕ ಕೊಡವ ಸಾಹಿತ್ಯ ಅಕಾಡೆಮಿ ಮಾಜಿ ಅಧ್ಯಕ್ಷರಾದ ಬಿದ್ದಾಟಂಡ ಎಸ್.ತಮ್ಮಯ್ಯ, ಅಮ್ಮಾಟಂಡ ಪಾರ್ವತಿ ಅಪ್ಪಯ್ಯ, ಬಾಚರಣಿಯಂಡ ಅಪ್ಪಣ್ಣ, ಕೊಡಗು ಜಾನಪದ ಪರಿಷತ್ ಜಿಲ್ಲಾ ಅಧ್ಯಕ್ಷರಾದ ಬಿ.ಜಿ.ಅನಂತಶಯನ ಮತ್ತು ಬಳಗದವರು ನೂತನ ಅಧ್ಯಕ್ಷರನ್ನು ಅಭಿನಂದಿಸಿದರು.

ಅಧಿಕಾರ ಸ್ವೀಕಾರಕ್ಕೆ ಮೊದಲು ಮುಕ್ಕೋಡ್ಲು ವ್ಯಾಲಿ ಡ್ಯೂ ತಂಡದವರಿಂದ ಬಟ್ಟೆಪಾಟ್ ಹಾಡುವುದರ ಮೂಲಕ ಅಧ್ಯಕ್ಷರನ್ನು ಸಭಾಂಗಣಕ್ಕೆ ಕರೆತರಲಾಯಿತು. ನೆಲ್ಲಕ್ಕಿ ನಡುಬಾಡೆಯಲ್ಲಿ ಬಾಳೋಪಾಟ್ ತಂಡದವರು ಕಾವೇರಿ ಮಾತೆಯನ್ನು ಸ್ತುತಿಸಿ ಹಾಡಿದರು. ನಂತರ ಚಾಮೆರ ದಿನೇಶ್ ಬೆಳ್ಯಪ್ಪನವರು ಒಕ್ಕಣೆ ಕಟ್ಟಿ ದೇವರ ಹೆಸರಿನಲ್ಲಿ ಅಧ್ಯಕ್ಷರ ಮುಂದಿನ ದಿನಗಳ ಕಾರ್ಯಕ್ರಮಗಳು ಯಶಸ್ವಿಯಾಗಿ ನಡೆಯಲೆಂದು ಅರ್ಪಣೆಯ ನುಡಿಯನ್ನಾಡಿದರು.

ಅಧ್ಯಕ್ಷರು ತಮ್ಮ ಭಾಷಣದಲ್ಲಿ ಅಕಾಡೆಮಿಯ ಸರ್ವಸದಸ್ಯರ ನೇಮಕಾತಿಯ ನಂತರ ಸಭೆ ಕರೆದು ಮುಂದಿನ ಕಾರ್ಯಯೋಜನೆಯನ್ನು ರೂಪಿಸುವುದರ ಮೂಲಕ ಕಾರ್ಯಪ್ರವೃತರಾಗುವುದಾಗಿ ಹೇಳಿದರು.

ಸರ್ವ ಸದಸ್ಯರು ಹಾಗೂ ಜನಾಂಗಗಳ ಒಗ್ಗೂಡುವಿಕೆಯಿಂದ ಅಕಾಡೆಮಿಯ ಕಾರ್ಯಕ್ರಮಗಳನ್ನು ಉನ್ನತ ಮಟ್ಟದಲ್ಲಿ ಮುನ್ನಡೆಸಿಕೊಡುವುದು ಸರ್ವರ ಅಗತ್ಯವೆಂದು ಬಯಸಿದರು. ರಿಜಿಸ್ಟ್ರಾರ್ ಎ.ಸಿ.ಗಿರೀಶ್ ಅವರು ಅಕಾಡೆಮಿಯ ಕಾರ್ಯೋದ್ದೇಶವನ್ನು ಸಂಕ್ಷಿಪ್ತವಾಗಿ ಸಭೆಗೆ ವಿವರಿಸಿದರು.

ಸಭೆಯಲ್ಲಿ ಜಿ.ಪಂ. ಸ್ಥಾಯಿ ಸಮಿತಿ ಮಾಜಿ ಅಧ್ಯಕ್ಷರಾದ ಮನೆಯಪಂಡ ಕಾಂತಿ ಸತೀಶ್, ಕುಶಾಲನಗರ ಕೊಡವ ಸಮಾಜದ ಅಧ್ಯಕ್ಷರಾದ ಮಂಡೇಪಂಡ ಬೋಸ್ ಮೊಣ್ಣಪ್ಪ, ಕಿಗ್ಗಟ್ಟ್‌ನಾಡ್ ಹಿರಿಯ ನಾಗರಿಕ ವೇದಿಕೆಯ ಸಂಸ್ಥಾಪಕರಾದ ಕಾಟಿಮಾಡ ಜಿಮ್ಮಿ ಅಣ್ಣಯ್ಯ, ಡಿಕ್ಕಿ ಅಣ್ಣಯ್ಯ, ಪಾರುವಂಗಡ ಸನ್ನಿ ಮೊಣ್ಣಪ್ಪ, ಕೆಂಜಂಗಡ ರೋಶನ್ ನಾಣಯ್ಯ, ಹಂಚೆಟ್ಟಿರ ಮನುಮುದ್ದಪ್ಪ, ಚೇನಂಡ ಗಿರೀಶ್ ಪೂಣಚ್ಚ, ಸೋಮೆಯಂಡ ಬೋಸ್ ಬೆಳ್ಯಪ್ಪ, ಮೂವೇರ ರೇಖಾ ಪ್ರಕಾಶ್, ಅಮ್ಮಣಿಚಂಡ ಈಶ್ವರಿ ಗಂಗಮ್ಮ, ಮಾಚಿಮಂಡ ಮೀನಾ ವಸಂತ್, ಬಾಚರಣಿಯಂಡ ರಾಣು ಅಪ್ಪಣ್ಣ ಹಾಗೂ ಹಿರಿಯರಾದ ಲಕ್ಷ್ಮಿನಾರಾಯಣ, ಕರ್ನಂಡ ಬೊಳ್ಳಮ್ಮ ನಾಣಯ್ಯ, ಆಚೆಯಡ ಗಗನ್, ಬಾಳೆಯಡ ಪ್ರತೀಶ್, ಕೊಡಗು ಜಾನಪದ ಪರಿಷತ್ ಸದಸ್ಯರಾದ ಅಂಬೆಕಲ್ಲು ಕುಶಾಲಪ್ಪ, ಸಂಪತ್ ಕುಮಾರ್ ಇದ್ದರು.

ತಲಕಾವೇರಿ, ಭಾಗಮಂಡಲದಲ್ಲಿ ಸಂಸದ ಯದುವೀರ್ ವಿಶೇಷ ಪೂಜೆ


ನೂತನ ಸಂಸದ ಯದುವೀರ್ ಅವರು ಕಾವೇರಿ ನದಿಯ ಉಗಮ ಸ್ಥಾನ ತಲಕಾವೇರಿ ಹಾಗೂ ಭಾಗಮಂಡಲದ ಶ್ರೀಭಗಂಡೇಶ್ವರ ದೇವಾಲಯದಲ್ಲಿ ವಿಶೇಷ ಪೂಜೆ ಸಲ್ಲಿಸಿದರು.

ಮಡಿಕೇರಿ,ಜೂ.15– ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ನೂತನ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರು ಕಾವೇರಿ ನದಿಯ ಉಗಮ ಸ್ಥಾನ ತಲಕಾವೇರಿ ಹಾಗೂ ಭಾಗಮಂಡಲದ ಶ್ರೀಭಗಂಡೇಶ್ವರ ದೇವಾಲಯದಲ್ಲಿ ವಿಶೇಷ ಪೂಜೆ ಸಲ್ಲಿಸಿದರು.

ಸಂಸದರಾಗಿ ಗೆಲುವು ಸಾಧಿಸಿದ ನಂತರ ಇದೇ ಮೊದಲ ಬಾರಿಗೆ ಕೊಡಗು ಜಿಲ್ಲೆಗೆ ಆಗಮಿಸಿದ ಯದುವೀರ್ ಅವರಿಗೆ ಗಡಿಭಾಗ ಕೊಪ್ಪದಲ್ಲಿ ಬಿಜೆಪಿ ಕಾರ್ಯಕರ್ತರು ಭವ್ಯ ಸ್ವಾಗತ ಕೋರಿದರು. ನಂತರ ಸಂಸದರು ತಲಕಾವೇರಿ, ಭಾಗಮಂಡಲಕ್ಕೆ ತೆರಳಿದರು. ಭಾಗಮಂಡಲದ ಭಗಂಡೇಶ್ವರ ದೇವಾಲಯದಲ್ಲಿ ಮೊದಲು ಪೂಜೆ ಸಲ್ಲಿಸಿದ ನೂತನ ಸಂಸದರು ಬಳಿಕ ತಲಕಾವೇರಿಗೆ ತೆರಳಿ ಮಾತೆ ಕಾವೇರಿಯ ಪವಿತ್ರ ತೀರ್ಥ ಕುಂಡಿಕೆಗೆ ಕಮಲದ ಹೂವುಗಳನ್ನು ಅರ್ಪಿಸಿ ಪೂಜೆ ಸಲ್ಲಿಸಿದರು.

ನಾಪೋಕ್ಲುವಿಗೆ ತೆರಳಿದ ಅವರು ಶ್ರೀ ಭಗವತಿ ದೇವಾಲಯದಲ್ಲಿ ಪೂಜೆ ಸಲ್ಲಿಸಿ, ದೇವಾಲಯದ ಸಭಾಂಗಣದಲ್ಲಿ ಬಿಜೆಪಿ ಕಾರ್ಯಕರ್ತರ ಸಭೆ ನಡೆಸಿದರು. ತಮ್ಮ ಗೆಲುವಿಗಾಗಿ ಶ್ರಮಿಸಿದ ಮುಖಂಡರು ಹಾಗೂ ಕಾರ್ಯಕರ್ತರಿಗೆ ಕೃತಜ್ಞತೆ ಸಲ್ಲಿಸಿದ ಅವರು ಜಿಲ್ಲೆಯ ಜನರ ನಿರೀಕ್ಷೆಯಂತೆ ಅಭಿವೃದ್ಧಿ ಕಾರ್ಯಗಳಿಗೆ ಒತ್ತು ನೀಡುವುದಾಗಿ ಭರವಸೆ ನೀಡಿದರು. ಪಾಡಿ ಶ್ರೀ ಇಗ್ಗುತ್ತಪ್ಪ ದೇವಾಲಯಕ್ಕೂ ಭೇಟಿ ನೀಡಿ ಪೂಜೆ ಸಲ್ಲಿಸಿದ ಯದುವೀರ್ ಅವರು ದೇವಾಲಯದ ಆಡಳಿತ ಮಂಡಳಿ ಹಾಗೂ ಗ್ರಾಮಸ್ಥರೊಂದಿಗೆ ಸಮಾಲೋಚನೆ ನಡೆಸಿದರು.

ಈ ಸಂದರ್ಭ ವಿಧಾನ ಪರಿಷತ್ ಸದಸ್ಯ ಸುಜಾ ಕುಶಾಲಪ್ಪ, ಜಿಲ್ಲಾ ಬಿಜೆಪಿ ಅಧ್ಯಕ್ಷ ನಾಪಂಡ ರವಿ ಕಾಳಪ್ಪ, ಮಹಿಳಾ ಮೋರ್ಚಾದ ಅಧ್ಯಕ್ಷೆ ಅನಿತಾ ಪೂವಯ್ಯ, ಮಾಜಿ ಶಾಸಕ ಎಂ.ಪಿ.ಅಪ್ಪಚ್ಚು ರಂಜನ್, ಪಕ್ಷದ ವಿವಿಧ ಮೋರ್ಚಾಗಳ ಪದಾಧಿಕಾರಿಗಳು ಮತ್ತಿತರ ಪ್ರಮುಖರು ಹಾಜರಿದ್ದರು.

ಸಂಸದ ಯದುವೀರ್ ಒಡೆಯರ್‌ಗೆ ಭವ್ಯ ಸ್ವಾಗತ



ಕುಶಾಲನಗರ: ಕೊಡಗು–ಮೈಸೂರು ಲೋಕಸಭಾ ಕ್ಷೇತ್ರದ ಬಿಜೆಪಿ ನೂತನ ಸಂಸದ ಯದುವೀರ್ ಒಡೆಯರ್ ಅವರು ಶನಿವಾರ ಜಿಲ್ಲೆಯ ಗಡಿ ಕೊಪ್ಪ ಗೇಟ್ ಬಳಿ ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು ಭವ್ಯ ಸ್ವಾಗತ ನೀಡಿದರು.

ಬೆಳಿಗ್ಗೆ ಕೊಪ್ಪ ಗೇಟ್ ಬಳಿ ಜಿಲ್ಲೆಯ ವಿವಿಧೆಡೆಗಳಿಂದ ಆಗಮಿಸಿದ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಹಾಗೂ ಮಹಿಳಾ ಕಾರ್ಯಕರ್ತರು ಪೂರ್ಣಕುಂಭ ಕಳಶ ಹಿಡಿದು ಮೊದಲ ಬಾರಿಗೆ ಕೊಡಗಿಗೆ ಆಗಮಿಸಿದ ಒಡೆಯರ್ ಅವರನ್ನು ಆತ್ಮೀಯವಾಗಿ ಸ್ವಾಗತಿಸಿ ಬರಮಾಡಿಕೊಂಡರು.

ಒಡೆಯರ್ ಅವರಿಗೆ ಪುಷ್ಪಹಾರ ಹಾಕಿ ಗೌರವಿಸಿದರು. ಕಾರ್ಯಕರ್ತರು ಪ್ರಧಾನಿ ಮೋದಿ,ಒಡೆಯರ್ ಹಾಗೂ ಪಕ್ಷದ ಪರವಾಗಿ ಜಯಘೋಷ ಕೂಗಿ ಸಂಭ್ರಮಿಸಿದರು.

ನಂತರ ಒಡೆಯರ್ ಅವರು ಕಾವೇರಿ ಮಾತೆಗೆ ಪೂಜೆ ಸಲ್ಲಿಸಿದರು. ಬಳಿಕ ಕುಶಾಲನಗರ ಗಣಪತಿ ದೇವಾಲಯದಲ್ಲಿ ಪೂಜೆ ಸಲ್ಲಿಸಿ ದೇವರ ದರ್ಶನ ಪಡೆದರು.

ಈ ಸಂದರ್ಭ ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡಿ ನನ್ನ ಗೆಲುವಿಗೆ ಶ್ರಮಿಸಿದ ಮುಖಂಡರಿಗೆ ಹಾಗೂ ಕಾರ್ಯಕರ್ತರಿಗೆ ಕೃತಜ್ಞತೆ ಸಲ್ಲಿಸಿದರು. ನಂತರ ತಲಕಾವೇರಿಗೆ ಯದುವೀರ್ ಒಡೆಯರ್ ತೆರಳಿದರು.


ಈ ಸಂದರ್ಭ ಮಾಜಿ ಶಾಸಕ ಅಪ್ಪಚ್ಚು ರಂಜನ್, ಮುಖಂಡರಾದ ನಾಪಂಡ ರವಿಕಾಳಪ್ಪ, ಸುನಿಲ್ ಸುಬ್ರಮಣಿ, ಬಿ.ಬಿ. ಭಾರತೀಶ್, ವಿ.ಕೆ.ಲೋಕೇಶ್, ಮಹೇಶ್ ಜೈನ್, ಬಿ.ಜೈವರ್ಧನ್, ಡಿ.ಕೆ.ತಿಮ್ಮಪ್ಪ ಎಂ.ವಿ. ನಾರಾಯಣ, ಆರ್.ಕೆ.ಚಂದ್ರ, ಅನಿತಾ ಪೂವಯ್ಯ, ಗೌತಮ್, ಸೋಮೇಶ್, ಎಂ.ಎಂ. ಚರಣ್, ಮಧುಸೂದನ್, ರಾಮನಾಥನ್ ಮತ್ತಿತರರು ಪಾಲ್ಗೊಂಡಿದ್ದರು.

ಇಂದು ಗೋಣಿಕೊಪ್ಪದಲ್ಲಿ ಕಸದ ತಡೆಗೋಡೆ ಉದ್ಘಾಟನೆ

ಮಡಿಕೇರಿ, ಜೂ.15– ಪೊನ್ನಂಪೇಟೆ ತಾಲೂಕಿನ ಗೋಣಿಕೊಪ್ಪ ಗ್ರಾಮ ಪಂಚಾಯಿತಿ ವತಿಯಿಂದ ನಿರ್ಮಿಸಲಾಗಿರುವ ಕಸದ ತಡೆಗೋಡೆ ಉದ್ಘಾಟನಾ ಕಾರ್ಯಕ್ರಮವು ಜೂ.16 ರಂದು ಮಧ್ಯಾಹ್ನ 3 ಗಂಟೆಗೆ ಗೋಣಿಕೊಪ್ಪದ ಪೊನ್ನಂಪೇಟೆ ರಸ್ತೆಯ ಮಸ್ಜಿದ್ ಹಿದಾಯತ್‌ನಲ್ಲಿ ನಡೆಯಲಿದೆ.

ಮುಖ್ಯಮಂತ್ರಿ ಅವರ ಕಾನೂನು ಸಲಹೆಗಾರರು ಹಾಗೂ ವಿರಾಜಪೇಟೆ ಶಾಸಕ ಎ.ಎಸ್.ಪೊನ್ನಣ್ಣ ಅವರು ಉದ್ಘಾಟಿಸಲಿದ್ದಾರೆ. ಗೋಣಿಕೊಪ್ಪ ಗ್ರಾ.ಪಂ. ಅಧ್ಯಕ್ಷರಾದ ಕುಲ್ಲಚಂಡ ಪ್ರಮೋದ್ ಗಣಪತಿ ಅಧ್ಯಕ್ಷತೆ ವಹಿಸಲಿದ್ದಾರೆ. ಜಿಲ್ಲಾಧಿಕಾರಿ ವೆಂಕಟ್ ರಾಜಾ, ಜಿ.ಪಂ ಸಿಇಒ ವರ್ಣಿತ್ ನೇಗಿ ಇತರರು ಪಾಲ್ಗೊಳ್ಳಲಿದ್ದಾರೆ.

ಕಾಡಾನೆಗಳು ಪ್ರತ್ಯಕ್ಷ



ಗೋಣಿಕೊಪ್ಪ, ಜೂ.15– ಪೊನ್ನಂಪೇಟೆ ತಾಲೂಕಿನ ಕಿರುಗೂರು ಗ್ರಾ.ಪಂ ವ್ಯಾಪ್ತಿಯ ಮತ್ತೂರು ಗ್ರಾಮದ ಕಾಕೇರ ರವಿ ಎಂಬುವರಿಗೆ ಸೇರಿದ ಗದ್ದೆಯಲ್ಲಿ ಕಾಡಾನೆಗಳ ಹಿಂಡು ಪ್ರತ್ಯಕ್ಷವಾಗಿದೆ.

ಮಕ್ಕಿಕಾಡು ಪಕ್ಕದಲ್ಲಿರುವ ಗದ್ದೆಯಲ್ಲಿ ಕಾಣಿಸಿಕೊಂಡು ಆತಂಕ ಮೂಡಿಸಿದ್ದು, ಶನಿವಾರ ಸಂಜೆ 4 ಗಂಟೆ ಸಮಯದಲ್ಲಿ ಮರಿಯಾನೆ ಸಹಿತ ಐದಾರು ಕಾಡಾನೆಗಳ ಹಿಂಡು ಕಾಣಿಕೊಂಡಿದೆ

ಜೂ.25, ಜನಸಂಪರ್ಕ ಸಭೆ

ಮಡಿಕೇರಿ: ಮಡಿಕೇರಿ ಉಪ ವಿಭಾಗ ವ್ಯಾಪ್ತಿ ವಿದ್ಯುತ್ ಗ್ರಾಹಕರ ಕುಂದುಕೊರತೆ ನಿವಾರಿಸುವ ಸಭೆಯು ಜೂ.25 ರಂದು ಬೆಳಗ್ಗೆ 11.30 ಗಂಟೆಯಿಂದ 12.30 ಗಂಟೆವರೆಗೆ ಮಡಿಕೇರಿ ಉಪ ವಿಭಾಗ ಕಚೇರಿ ಆವರಣದಲ್ಲಿ ಕಾರ್ಯನಿರ್ವಾಹಕ ಎಂಜಿನಿಯರ್, ಸೆಸ್ಕ್, ಮಡಿಕೇರಿ ಅವರ ಅಧ್ಯಕ್ಷತೆಯಲ್ಲಿ ನಡೆಯಲಿದೆ. ಸಾರ್ವಜನಿಕರು, ವಿದ್ಯುತ್‌ಗೆ ಸಂಬಂಧಿಸಿದ ಸಮಸ್ಯೆ, ದೂರು ಇದ್ದಲ್ಲಿ ಈ ಸಭೆಯಲ್ಲಿ ಚರ್ಚಿಸ ಬಹುದು.

ಜೂ.18, ರೇಣುಕಾಸ್ವಾಮಿ ಹತ್ಯೆ ಖಂಡಿಸಿ ಬೃಹತ್ ಪ್ರತಿಭಟನೆ


ಚಾಮರಾಜನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಅಖಿಲ ಭಾರತ ವೀರಶೈವ ಮಹಾಸಭಾದ ಜಿಲ್ಲಾಧ್ಯಕ್ಷ ಮುಡ್ಲುಪುರ ನಂದೀಶ್ ಮಾತನಾಡಿದರು.

ಚಾಮರಾಜನಗರ, ಜೂ.15– ಚಿತ್ರದುರ್ಗದ ವೀರಶೈವ ಲಿಂಗಾಯತ ಸಮಾಜದ ರೇಣುಕಾಸ್ವಾಮಿ ಹತ್ಯೆ ಖಂಡಿಸಿ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಹಾಗೂ ವೀರಶೈವ ಲಿಂಗಾಯತ ವಿವಿಧ ಸಂಘ ಸಂಸ್ಥೆಗಳ ನೇತೃತ್ವದಲ್ಲಿ ಜೂ. 18 ರಂದು ಬೃಹತ್ ಪ್ರತಿಭಟನಾ ಮೆರವಣಿಗೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಸಮಾಜದ ಹಿರಿಯ ಮುಖಂಡ ಕೋಡಿಮೋಳೆ ರಾಜಶೇಖರ್ ತಿಳಿಸಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ವೀರಶೈವ ಲಿಂಗಾಯತ ಸಮಾಜದ ಮೇಲೆ ನಿರಂತರ ದೌರ್ಜನ್ಯಗಳು ನಡೆಯುತ್ತಿವೆ. ಕಳೆದ ಎರಡು ತಿಂಗಳ ಹಿಂದೆ ನೇಹಾ ಹತ್ಯೆ ನಡೆಯಿತು. ಇತ್ತೀಚೆಗೆ ವೀರಶೈವ ಲಿಂಗಾಯತ ಸಮಾಜದ ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ವಿರುದ್ದ ಪೋಕ್ಸೊ ಪ್ರಕರಣ ದಾಖಲು ಮಾಡಿ, ಮೂರು ತಿಂಗಳು ರಾಜ್ಯ ಸರ್ಕಾರ ಸುಮ್ಮನಿದ್ದು, ಈಗ ತರಾತುರಿಯಲ್ಲಿ ಬಂಧಿಸಲು ಪಿತೂರಿ ಮಾಡಿದೆ. ಈಗ ರೇಣುಕಾಸ್ವಾಮಿಯನ್ನು ಚಿತ್ರದುರ್ಗದಿಂದ ಬೆಂಗಳೂರಿಗೆ ಕರೆಸಿಕೊಂಡು ನಟ ದರ್ಶನ್ ಮತ್ತು ಗ್ಯಾಂಗ್ ಬರ್ಬರ್‌ವಾಗಿ ಹತ್ಯೆ ಮಾಡಿದೆ. ಮಾನವೀಯತೆ ನೆಲಗಟ್ಟಿನಲ್ಲಿಯೂ ನೋಡದೆ, ದರ್ಶನ್ ಸೇರಿದಂತೆ 17 ಜನರ ಗ್ಯಾಂಗ್ ರೇಣುಕಾಸ್ವಾಮಿಯನ್ನು ಕ್ರೂರವಾಗಿ ಹತ್ಯೆ ಮಾಡಿರುವುದು ಇಡೀ ನಾಗರೀಕ ಸಮಾಜವೇ ತಲೆ ತಗ್ಗಿಸುವಂತೆ ಆಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಇತ್ತೀಚಿನ ದಿನಗಳಲ್ಲಿ ವೀರಶೈವ ಲಿಂಗಾಯತ ಸಮಾಜವನ್ನೇ ಗುರಿಯಾಗಿಸಿಕೊಂಡು ಕೊಲೆ ಹಾಗೂ ಕಿರುಕುಳದಂತಹ ಪ್ರಕರಣಗಳು ನಡೆಯುತ್ತಿದೆ. ಸರ್ಕಾರ ಇಂತಹ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಿ, ಈ ಪ್ರಕರಣಗಳಲ್ಲಿ ಭಾಗಿಯಾಗಿರುವವರ ವಿರುದ್ದ ಉಗ್ರ ಕಾನೂನು ಕ್ರಮಕ್ಕೆ ಮುಂದಾಗಬೇಕು ಎಂದು ಆಗ್ರಹಿಸಿದರು.

ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಜಿಲ್ಲಾಧ್ಯಕ್ಷ ಮೂಡ್ಲುಪುರ ನಂದೀಶ್ ಮಾತನಾಡಿ, ರೇಣುಕಾಸ್ವಾಮಿ ಹತ್ಯೆ ಮಾಡಿರುವುದು ತೀವ್ರ ಖಂಡನೀಯ. ನಟ ದರ್ಶನ್ ಹಾಗೂ ಗ್ಯಾಂಗ್ ಮಾಡಿರುವ ಈ ಕೃತ್ಯವನ್ನು ವೀರಶೈವ ಸಮಾಜ ಜೊತೆಗೆ ಇಡೀ ನಾಗರೀಕ ಸಮಾಜವನ್ನು ಬೆಚ್ಚಿ ಬೀಳಿಸಿದೆ. ಪೊಲೀಸ್ ಇಲಾಖೆ ಸೂಕ್ತ ಕ್ರಮ ವಹಿಸಿ, ಆರೋಪಿಗಳನ್ನು ಬಂಧಿಸಿರುವುದು ನ್ಯಾಯೋಚಿತವಾಗಿದೆ. ಅವರಿಗೆ ಕಠಿಣ ಶಿಕ್ಷೆಯಾಗುವಂತೆ ನೋಡಿಕೊಳ್ಳಬೇಕು. ಇಲ್ಲಿದ್ದರೆ ಉಪವಾಸ ಸತ್ಯಾಗ್ರಹ ಕೈಗೊಳ್ಳುವುದಾಗಿ ಎಚ್ಚರಿಸಿದರು.

ಸಮಾಜದ ಮುಖಂಡ ಆಲೂರು ಮಲ್ಲು ಮಾತನಾಡಿ, ರೇಣುಕಾಸ್ವಾಮಿ ಹತ್ಯೆ ಮಾಡಿರುವ ದರ್ಶನ್ ಅನ್ನು ಚಿತ್ರರಂಗದಿಂದ ಬ್ಯಾನ್ ಮಾಡಬೇಕು. ಆತನ ಕುಟುಂಬಕ್ಕೆ ನ್ಯಾಯ ಕಲ್ಪಿಸಿ, ಸೂಕ್ತ ಭದ್ರತೆ ನೀಡಬೇಕು. ಸರ್ಕಾರ ಕೂಡಲೇ ಪರಿಹಾರ ಘೋಷಣೆ ಮಾಡಿ ಮೃತ ರೇಣುಕಾಸ್ವಾಮಿ ಪತ್ನಿಗೆ ಸರ್ಕಾರಿ ಉದ್ಯೋಗ ನೀಡಬೇಕೆಂದು ಒತ್ತಾಯಿಸಿದರು.

ಈ ಬೃಹತ್ ಪ್ರತಿಭಟನಾ ಮೆರವಣಿಗೆಗೆ ಜಿಲ್ಲೆಯ ಐದು ತಾಲೂಕುಗಳಿಂದ ಸಮಾಜದ ಬಂಧುಗಳು ಹಾಗೂ ಸಹೃದಯ ನಾಗರೀಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಿಕೊಡಬೇಕೆಂದು ಸಂಘಟನೆಯ ಮುಖಂಡರು ಮನವಿ ಮಾಡಿದರು.

ಗೋಷ್ಠಿಯಲ್ಲಿ ಜಿಲ್ಲಾ ಬಸವ ಕೇಂದ್ರದ ಅಧ್ಯಕ್ಷ ಎನ್.ಎಚ್.ಮಹದೇವಸ್ವಾಮಿ, ಮಹಾಸಭಾದ ತಾಲೂಕು ಅಧ್ಯಕ್ಷ ಚಾ.ನಗರ ನಟೇಶ್, ಗುಂಡ್ಲುಪೇಟೆಯ ಹಂಗಳ ನಂಜಪ್ಪ, ನೌಕರರ ಸಂಘದ ಮಾಜಿ ಅಧ್ಯಕ್ಷ ಡಾ. ಪರಮೇಶ್ವರಪ್ಪ ಇತರರು ಇದ್ದರು.

ರೇಣುಕಾಸ್ವಾಮಿ ಕುಟುಂಬಕ್ಕೆ 25 ಲಕ್ಷ ಪರಿಹಾರಕ್ಕೆ ಆಗ್ರಹ

ಕೊಳ್ಳೇಗಾಲ: ಚಿತ್ರದುರ್ಗದ ರೇಣುಕಸ್ವಾಮಿಯವರ ಹತ್ಯೆಯನ್ನು ಖಂಡಿಸಿರುವ ವೀರಶೈವ ಮಹಾಸಭೆ ತಾಲೂಕು ಘಟಕ ಈ ಕೂಡಲೆ ಸಂಕಷ್ಟದಲ್ಲಿರುವ ಅವರ ಕುಟುಂಬಕ್ಕೆ ಸರ್ಕಾರ 25ಲಕ್ಷ ರೂ. ಪರಿಹಾರ ನೀಡಬೇಕು ಎಂದು ಆಗ್ರಹಿಸಿದೆ.

ಈಸಂಬಂಧ ಪತ್ರಿಕಾ ಹೇಳಿಕೆ ನೀಡಿವು ಮಹಾಸಭೆ ತಾಲೂಕು ಅಧ್ಯಕ್ಷ ಮಹದೇವ ಪ್ರಸಾದ್, ಪೊಲೀಸ್ ಇಲಾಖೆ ರೇಣುಕಾಸ್ವಾಮಿ ಕೊಲೆ ಪ್ರಕರಣ ಬೇದಿಸುವಲ್ಲಿ ಯಶಸ್ವಿಯಾಗಿದ್ದು ಮಹಾಸಭೆ ಇಲಾಖೆಯ ದಕ್ಷ ಅಧಿಕಾರಿಗಳನ್ನು ಗೌರವಿಸಲಿದೆ, ದೊಡ್ಡ ನಟ ದರ್ಶನ್ ಮತ್ತು ಅವರ ಸಹಚರರನ್ನು ಬಿಡದೆ ಹೆಡೆಮುರಿ ಕಟ್ಟಿರುವುದು ಅಭಿನಂದನಾರ್ಹ. ಹಾಗಾಗಿ ಸರ್ಕಾರ ಈ ಪ್ರಕರಣವನ್ನು ಗಂಬೀರವಾಗಿ ಪರಿಗಣಿಸಬೇಕು, ತಪ್ಪಿತಸ್ಥರ ರಕ್ಷಣೆಗೆ ಮುಂದಾಗದೆ, ಮೃತನ ಕುಟುಂಬಕ್ಕೆ ಸಾಂತ್ವನ ಹೇಳುವ ಮೂಲಕ ಪರಿಹಾರ ಘೋಷಿಸಬೇಕು, ಒಂದು ವೇಳೆ ಸರ್ಕಾರ ತಪ್ಪಿತಸ್ಥರ ರಕ್ಷಣೆಗೆ ಮುಂದಾದರೆ ಜಿಲ್ಲಾದ್ಯಂತ ಮಹಾಸಭೆ ಹೋರಾಟ ನಡೆಸಲಿದೆ ಎಂದು ಎಚ್ಚರಿಸಿದ್ದಾರೆ.

ಹರದನಹಳ್ಳಿಯಲ್ಲಿ ವಿಜೃಂಭಣೆಯ ಹಾಲರವೆ ಉತ್ಸವ


ಚಾಮರಾಜನಗರ ತಾಲೂಕಿನ ಹರದನಹಳ್ಳಿ ಗ್ರಾಮದಲ್ಲಿ ಕಾಳಮ್ಮ ತಾಯಿಯ ನೂರೊಂದು ಹಾಲರವೆ ಉತ್ಸವ ವಿಜೃಂಭಣೆಯಿಂದ ನೆರವೇರಿತು.

ಚಾಮರಾಜನಗರ, ಜೂ.15– ತಾಲೂಕಿನ ಹರದನಹಳ್ಳಿ ಗ್ರಾಮದಲ್ಲಿ ಕಾಳಮ್ಮ ತಾಯಿಯ ನೂರೊಂದು ಹಾಲರವೆ ಉತ್ಸವ ವಿಜೃಂಭಣೆಯಿಂದ ನೆರವೇರಿತು.

ಉತ್ಸವದ ಅಂಗವಾಗಿ ಗ್ರಾಮದಲ್ಲಿನ ಕಾಳಮ್ಮ ತಾಯಿಯ ದೇವಸ್ಥಾನದಲ್ಲಿ ಹೂವಿನಿಂದ ದೇವರನ್ನು ಸಿಂಗರಿಸಿ, ದೇವರಿಗೆ ಅಭಿಷೇಕ ನೆರವೇರಿಸಲಾಯಿತು. ಗ್ರಾಮದ ಹೊರವಲಯದ ಸಮೀಪ ಗೋಮುಖ ಕ್ಷೇತ್ರದಲ್ಲಿ ವಿಶೇಷ ಪೂಜಾ ಕೈಂಕರ್ಯಗಳನ್ನು ದೇವರ ವಿಗ್ರಹ ಮತ್ತು ಕಂಡಾಯಗಳಿಗೆ ಸಲ್ಲಿಸಿ, ಅಲ್ಲಿಂದ ಹೊರಟ ಹಾಲರವೆ ಉತ್ಸವದ ಮೆರವಣಿಗೆ ಸತ್ತಿರಸ್ತೆ, ಅಮಚವಾಡಿ ಮತ್ತು ಇನ್ನಿತರ ಗ್ರಾಮಗಳಿಗೆ ಸಂಪರ್ಕಿಸುವ ರಸ್ತೆಯಲ್ಲಿ ಸಾಗಿತು. ಕಂಡಾಯ, ಗೊರವರ ಕುಣಿತ, ಸತ್ತಿಗೆ ಸೂರಿಪಾನಿ, ನಾದಸ್ವರ, ನೀಲಗಾರರು, ಕಂಸಾಳೆ ಕುಣಿತ, ಇನ್ನಿತರ ಜಾನಪದ ಕಲಾತಂಡಗಳು ಮೆರವಣಿಗೆಯ ಮೆರುಗನ್ನು ಹೆಚ್ಚಿಸಿತು. ಪ್ರಮುಖ ಬೀದಿಗಳಲ್ಲಿ ಸಾಗಿದ ಮೆರವಣಿಗೆ ಶ್ರೀಕಾಳಮ್ಮತಾಯಿ ದೇವಸ್ಥಾನದ ಮುಂಭಾಗದಲ್ಲಿ ಕೊನೆಗೊಂಡಿತು.

ಹಾಲರವೆ ಉತ್ಸವದ ಅಂಗವಾಗಿ ಗ್ರಾಮದ ಪ್ರಮುಖ ಬೀದಿಗಳನ್ನು ಹಸಿರು ತೋರಣಗಳಿಂದ ಶೃಂಗರಿಸಲಾಗಿತ್ತು. ಮಹಿಳೆಯರು ಪೂಜೆ ಕೈಂಕರ್ಯಗಳಲ್ಲಿ ಪಾಲ್ಗೊಂಡು ದೇವರ ಕೃಪೆಗೆ ಪಾತ್ರರಾದರು. ಈ ವೇಳೆಯಲ್ಲಿ ಯಜಮಾನರು ಹಾಗೂ ಗ್ರಾಮಸ್ಥರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

ನೀಟ್ ಪರೀಕ್ಷಾ ಅಕ್ರಮದ ತನಿಖೆಗೆ ಆಗ್ರಹಿಸಿ ಪ್ರತಿಭಟನೆ

ಚಾಮರಾಜನಗರ: ನೀಟ್ ಪ್ರವೇಶ ಪರೀಕ್ಷೆಯಲ್ಲಿನ ಭ್ರಷ್ಟಾಚಾರ ಹಾಗೂ ಅಕ್ರಮದ ಬಗ್ಗೆ ಉನ್ನತ ಮಟ್ಟದ ತನಿಖೆ ನಡೆಸಬೇಕು ಎಂದು ಆಗ್ರಹಿಸಿ ನಗರದಲ್ಲಿ ಎಐಡಿಎಸ್‌ಒ ಸಂಘಟನೆಯಿಂದ ಪ್ರತಿಭಟನೆ ನಡೆಯಿತು.



ನಗರದ ಬಾಲಕರ ಸರ್ಕಾರಿ ಪದವಿಪೂರ್ವ ಕಾಲೇಜು ಮುಂಭಾಗ ಸಮಾವೇಶಗೊಂಡ ವಿದ್ಯಾರ್ಥಿಗಳು ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಎಐಡಿಎಸ್‌ಒ ಜಿಲ್ಲಾ ಸಹ ಸಂಚಾಲಕರಾದ ಚಂದನಾ ಮಾತನಾಡಿ, ಜೂ.4ರಂದು ಪ್ರಕಟಗೊಂಡ ನೀಟ್ ಫಲಿತಾಂಶದ ಪಾರದರ್ಶಕತೆಯ ಕುರಿತು ದೇಶವ್ಯಾಪಿ ವಿದ್ಯಾರ್ಥಿಗಳು ಹಾಗೂ ಪಾಲಕರು ಹಲವಾರು ಪ್ರಶ್ನೆಗಳನ್ನು ಎತ್ತಿದ್ದಾರೆ. ಯುಜಿಸಿ ಪರೀಕ್ಷಾ ಮಾರ್ಗಸೂಚಿ ಅನ್ವಯ ಅಂಕಗಳನ್ನು ನೀಡಿದ್ದಲ್ಲಿ ವಿದ್ಯಾರ್ಥಿಗಳು ಪಡೆಯಬಹುದಾದ ಅಂಕಗಳೊಂದಿಗೆ, ಪ್ರಸ್ತುತ ಒಂದಿಷ್ಟು ವಿದ್ಯಾರ್ಥಿಗಳು ಪಡೆದಿರುವ ಅಂಕಗಳು ಹೊಂದಿಕೆಯಾಗುತ್ತಿಲ್ಲ. ಕೆಲವು ವಿದ್ಯಾರ್ಥಿಗಳಿಗೆ ಹೆಚ್ಚುವರಿ ಅಂಕ ನೀಡಿರುವುದಾಗಿ ಎನ್‌ಟಿಎ ಸಮಜಾಯಿಷಿ ನೀಡಿದೆ. ಆದರೆ ಹೆಚ್ಚುವರಿ ಅಂಕಗಳನ್ನು ನೀಡಿರುವ ಮಾನದಂಡವು ಸಂಪೂರ್ಣವಾಗಿ ಪಕ್ಷಪಾತಿಯಾಗಿದೆ ಎಂದು ಆರೋಪಿಸಿದರು.

ಈ ವರ್ಷ ಪ್ರಕಟಿಸಲಾಗಿದ್ದ ಮಾರ್ಗಸೂಚಿ ಅನ್ವಯ ಹೆಚ್ಚುವರಿ ಅಂಕಗಳನ್ನು ನೀಡಲು ಅವಕಾಶವಿಲ್ಲ. ಆಶ್ಚರ್ಯಕರವೆಂಬಂತೆ, ಒಂದೇ ಕೇಂದ್ರದಲ್ಲಿ ಪರೀಕ್ಷೆ ಬರೆದ ವಿದ್ಯಾರ್ಥಿಗಳು ಸಮಾನ ಅಂಕಗಳನ್ನು ಗಳಿಸಿದ್ದಾರೆ. ನೀಟ್ ಫಲಿತಾಂಶದಲ್ಲಿನ ಪಾರದರ್ಶಕತೆ ಕೊರತೆ ಮತ್ತು ಭ್ರಷ್ಟಾಚಾರದ ಕುರಿತು ಸಾಕಷ್ಟು ಆರೋಪಗಳು ಕೇಳಿ ಬಂದಿವೆ ಎಂದು ಹೇಳಿದರು.

ನೀಟ್ ಪರೀಕ್ಷೆಯಲ್ಲಿ ಭ್ರಷ್ಟಾಚಾರ ಹಾಗೂ ಅಕ್ರಮದ ಬಗ್ಗೆ ನ್ಯಾಯಾಂಗ ತನಿಖೆ ನಡೆಸಬೇಕು ಮತ್ತು ಇದರಲ್ಲಿ ಭಾಗಿಯಾದ ಎಲ್ಲ ವ್ಯಕ್ತಿಗಳಿಗೂ ಕಠಿಣ ಶಿಕ್ಷೆ ವಿಧಿಸಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಎಐಡಿಎಸ್‌ಒ ಪದಾಧಿಕಾರಿ ಹೇಮಲತಾ ಮತ್ತು ಪದವಿಪೂರ್ವ ಕಾಲೇಜಿನ ವಿದ್ಯಾರ್ಥಿಗಳು ಇದ್ದರು.

ಶಾಂತಿ, ಸೌಹಾರ್ದತೆಯಿಂದ ಬಕ್ರೀದ್ ಆಚರಿಸುವಂತೆ ಡಿಸಿ ಮನವಿ


ಬಕ್ರೀದ್ ಹಬ್ಬದ ಹಿನ್ನೆಲೆಯಲ್ಲಿ ಜಿಲ್ಲಾ ಮಟ್ಟದ ಸೌಹಾರ್ದ ಸಭೆಯಲ್ಲಿ ಜಿಲ್ಲಾಧಿಕಾರಿ ಸಿ.ಟಿ.ಶಿಲ್ಪಾನಾಗ್ ಮಾತನಾಡಿದರು.

ಚಾಮರಾಜನಗರ, ಜೂ.15– ಮುಂಬರಲಿರುವ ಬಕ್ರೀದ್ ಹಬ್ಬವನ್ನು ಜಿಲ್ಲೆಯಲ್ಲಿ ಶಾಂತಿ, ಸೌಹಾರ್ದತೆ ಹಾಗೂ ಸಾಮರಸ್ಯದಿಂದ ಆಚರಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಟಿ. ಶಿಲ್ಪಾನಾಗ್ ಮನವಿ ಮಾಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಬಕ್ರೀದ್ ಹಬ್ಬದ ಹಿನ್ನೆಲೆಯಲ್ಲಿ ನಡೆದ ಜಿಲ್ಲಾ ಮಟ್ಟದ ಸೌಹಾರ್ದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಬಕ್ರೀದ್ ಹಬ್ಬವನ್ನು ಈ ಹಿಂದಿನ ವರ್ಷಗಳಲ್ಲಿ ಆಚರಿಸುತ್ತಿದ್ದ ರೀತಿಯಲ್ಲಿಯೇ ಈ ಬಾರಿಯೂ ಶಾಂತಿ, ಸೌಹಾರ್ದತೆಯಿಂದ ಆಚರಿಸಬೇಕು. ಹಬ್ಬಕ್ಕೆ ಪೂರ್ವಭಾವಿಯಾಗಿ ಕೈಗೊಳ್ಳಬೇಕಿರುವ ಸೌಲಭ್ಯಗಳ ಬಗ್ಗೆ ಅಧಿಕಾರಿಗಳಿಗೆ ಅಗತ್ಯ ಸೂಚನೆ ನೀಡಲಾಗುವುದು ಎಂದರು.

ಸಭೆಯಲ್ಲಿ ಮಾತನಾಡಿದ ಸಮುದಾಯದ ಮುಖಂಡರು, ಪ್ರಾರ್ಥನೆಗೆ ಹೆಚ್ಚಿನ ಬಾಂಧವರು ಸೇರುವುದರಿಂದ ಉಂಟಾಗಬಹುದಾದ ಸಂಚಾರ ದಟ್ಟಣೆ ಸುಗಮಗೊಳಿಸಲು ಏಕಮುಖ ಸಂಚಾರ ಇರಬೇಕು. ಮಾಂಸದ ತ್ಯಾಜ್ಯ ವಿಲೇವಾರಿಗೆ ಸೂಕ್ತ ಏರ್ಪಾಡು ಮಾಡಬೇಕು. ಹಬ್ಬದ ಹಿನ್ನೆಲೆಯಲ್ಲಿ ಕುಡಿಯುವ ನೀರು, ನಿರಂತರ ವಿದ್ಯುತ್ ಸರಬರಾಜು, ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂಬುದು ಸೇರಿದಂತೆ ಇನ್ನಿತರ ಸಲಹೆ, ಅಭಿಪ್ರಾಯಗಳನ್ನು ನೀಡಿದರು.

ನಂತರ ಜಿಲ್ಲಾಧಿಕಾರಿ ಮಾತನಾಡಿ, ನಗರ, ಪಟ್ಟಣ ಸೇರಿದಂತೆ ವಿವಿಧೆಡೆ ಹಬ್ಬದ ಸಂದರ್ಭದಲ್ಲಿ ಕುಡಿಯುವ ನೀರು ಪೂರೈಕೆಗೆ ತೊಂದರೆಯಾಗದಂತೆ ಕ್ರಮ ವಹಿಸಬೇಕು. ಸ್ವಚ್ಛತೆ ಕಾರ್ಯವನ್ನು ಆಗಿಂದ್ದಾಂಗೆ ಕೈಗೊಳ್ಳಬೇಕು. ನಿರಂತರ ವಿದ್ಯುತ್ ಪೂರೈಸಲು ಸಂಬಂಧಪಟ್ಟ ಇಲಾಖೆ ನಿಗಾವಹಿಸಬೇಕು ಎಂದರು.

ಬಳಿಕ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪದ್ಮಿನಿ ಸಾಹು, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉದೇಶ ಮಾತನಾಡಿ, ಹಬ್ಬದ ಪ್ರಾರ್ಥನೆ ಹಿನ್ನೆಲೆಯಲ್ಲಿ ಸುಗಮ ಸಂಚಾರಕ್ಕೆ ಅಗತ್ಯ ವ್ಯವಸ್ಥೆ ಮಾಡಲಾಗುವುದು. ಇನ್ನಿತರ ಕ್ರಮಗಳನ್ನು ಪೊಲೀಸ್ ಇಲಾಖೆಯಿಂದ ತೆಗೆದುಕೊಳ್ಳಲಾಗುವುದು ಎಂದರು.

ಸಭೆಯಲ್ಲಿ ಜಿಪಂ ಉಪ ಕಾರ್ಯದರ್ಶಿ ಲಕ್ಷ್ಮೀ, ತಹಶೀಲ್ದಾರರಾದ ಬಸವರಾಜು, ಮಂಜುಳಾ, ಪೌರಾಯುಕ್ತ ರಾಮದಾಸ್, ಮುಖಂಡರಾದ ಮಹಮ್ಮದ್ ಅಸ್ಗರ್ ಮುನ್ನ, ಅಬ್ರಾರ್‌ಅಹಮದ್, ಚಾ.ರಂ. ಶ್ರೀನಿವಾಸಗೌಡ ಇದ್ದರು.

ಅಭಿವೃದ್ಧಿ ಕೆಲಸ ತಡವಾದರೂ ಪರವಾಗಿಲ್ಲ, ಸ್ವಚ್ಛತೆ, ನೀರಿನ ಸಮಸ್ಯೆ ಪರಿಹಾರವಾಗಬೇಕು

ಪ್ರಗತಿ ಪರಿಶೀಲನಾ ಸಭೆಯಲ್ಲಿ ಶಾಸಕ ಮಂಜುನಾಥ್ ಸೂಚನೆ



ಕೊಳ್ಳೇಗಾಲ: ಗ್ರಾಮ ಪಂಚಾಯ್ತಿಗಳಲ್ಲೂ ಸ್ವಚ್ಛತೆ ಎಂಬುದೆ ಮಾಯವಾಗಿದ್ದು, ಜೂನ್ ತಿಂಗಳು ಕೊನೆಯವರೆಗೆ ಪ್ರತಿ ಪಂಚಾಯ್ತಿ ವ್ಯಾಪ್ತಿಯಲ್ಲೂ ಕುಡಿಯುವ ನೀರಿನ ಸಮಸ್ಯೆ ಹಾಗೂ ಸ್ವಚ್ಛತೆಗೆ ಸಂಬಂಧಪಟ್ಟ ಅಧಿಕಾರಿಗಳು ಗಮನಹರಿಸಬೇಕು, ಇಲ್ಲದಿದ್ದಲ್ಲಿ ಅಧಿಕಾರಿಗಳನ್ನೇ ಹೊಣೆಗಾರರನ್ನಾಗಿಸಬೇಕಾಗುತ್ತದೆ. ಅಭಿವೃದ್ಧಿ ಕೆಲಸ ತಡವಾದರೂ ಪರವಾಗಿಲ್ಲ, ಗ್ರಾಪಂ ವ್ಯಾಪ್ತಿಗಳಲ್ಲಿ ಸ್ವಚ್ಛತೆ ಅತಿಮುಖ್ಯ ಎಂದು ಹನೂರು ಶಾಸಕ ಎಂ.ಆರ್.ಮಂಜುನಾಥ್ ಸೂಚಿಸಿದರು.

ಅವರು ತಾಪಂ ಸಭಾಂಗಣದಲ್ಲಿ ಕೊಳ್ಳೇಗಾಲ ಹಾಗೂ ಪಾಳ್ಯ ಹೋಬಳಿಗೆ ಸಂಬಂಧಿಸಿದಂತೆ ಕರೆಯಲಾಗಿದ್ದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿ, ಸ್ವಚ್ಛತೆ ಹಾಗೂ ಕುಡಿಯುವ ನೀರಿನ ತೊಂದರೆ ಈ ತಿಂಗಳಲ್ಲೆ ಪರಿಹಾರವಾಗಬೇಕು, ಜೂನ್ ತಿಂಗಳ ಕೊನೆಯಲ್ಲಿ ನಾನು ಗ್ರಾಪಂಗಳಿಗೆ ಹಾಗೂ ಆಯಾ ಗ್ರಾಮಗಳಿಗೆ ಬೇಟಿ ನೀಡಿ ಪರಿಶೀಲಿಸುವೆ, ಈವೇಳೆ ಅಂತಹ ಕೆಲಸ, ಕಾರ್ಯಗಳು ಕೈಗೊಳ್ಳದೆ ನಿರ್ಲಕ್ಷ್ಯ ಪ್ರದರ್ಶಿಸಿದರೆ ಸಂಬಂಧಪಟ್ಟ ಅಧಿಕಾರಿಗಳನ್ನೇ ಹೊಣೆಗಾರರನ್ನಾಗಿಸಲಾಗುವುದು ಎಂದರು ಗ್ರಾಪಂ ವ್ಯಾಪ್ತಿಯಲ್ಲಿ ಬಾಕಿ ಇರುವ ಕಾಮಗಾರಿಗಳು ಹಾಗೂ ಮುಂದೆ ಆಗಬೇಕಾಗಿರುವ ಕಾಮಗಾರಿಗಳ ಬಗ್ಗೆಯೂ ಸಹ ಮಾಹಿತಿ ನೀಡಬೇಕು ಎಂದು ಇದೆ ವೇಳೆ ಗ್ರಾಪಂ ಪಿಡಿಓ ಹಾಗೂ ಕಾರ್ಯದರ್ಶಿಗಳಿಗೆ ಸೂಚಿಸಿದರು. ಆರೋಗ್ಯ ಇಲಾಖೆ ರೋಗ ರುಜಿನ ಹರಡದಂತೆ ಜಾಗ್ರತೆಯಿಂದ ಕ್ರಮವಹಿಸಬೇಕು ಎಂದು ಸೂಚಿಸಿದರು. ಸಭೆಯಲ್ಲಿ ತಾ.ಪಂ ಇಒ ಶ್ರೀನಿವಾಸ್, ಚೆಸ್ಕಾಂ ಇಇ ತಬಸ್ಸುಮ್, ಸಮಾಜ ಕಲ್ಯಾಣಾಧಿಕಾರಿ ಕೇಶವಮೂರ್ತಿ, ಜಿಪಂ ಉಪವಿಭಾಗದ ಎಇಇ ಶಿವಪ್ರಕಾಶ್, ಕುಡಿಯುವ ನೀರು ನೈರ್ಮಲ್ಯ ವಿಭಾಗದ ಎಇಇ ಹರೀಶ್ ಕುಮಾರ್, ತಾಲೂಕು ಆರೋಗ್ಯಾಧಿಕಾರಿ ಡಾ.ಗೋಪಾಲ್, ಬಿ.ಆರ್.ಸಿ ಮಹದೇವ ಕುಮಾರ್, ಸಿಡಿಪಿಒ ನಂಜಮ್ಮಣಿ ಇನ್ನಿತರಿದ್ದರು



ಮೈಸೂರಲ್ಲಿ ಹಲಸಿನ ಹಬ್ಬ; ಬಾಯಲ್ಲಿ ನೀರೂರಿಸುತ್ತಿರುವ ವಿವಿಧ ತಳಿಯ ಹಲಸು

ಚಿಕ್ಕನಾಯಕನಹಳ್ಳಿ, ಚೇಳೂರಿನಿಂದ ಬಂದಿರುವ ಕೆಂಪು ತೊಳೆಯ ಹಲಸು, ಕೊಳ್ಳೇಗಾಲದ ಸಹಜ ಕೃಷಿಕರಿಂದ ಬೆಳೆದಿರುವ ಬೆಳುವಲ ತೋಟದ ಫುಟ್‌ಬಾಲ್ ಗಾತ್ರದ ರುದ್ರಾಕ್ಷಿ ಹಲಸು, ಹೆಚ್.ಡಿ.ಕೋಟೆಯ ಹುಲಿಕಾಡು ರೈತರು ಬೆಳೆದಿರುವ ಹಲಸಿನ ಹಣ್ಣುಗಳ ಘಮಘಮ ಜನರ ಬಾಯಲ್ಲಿ ನೀರೂರಿಸಿ, ಆಕರ್ಷಿಸುತ್ತಿವೆ.





ಮೈಸೂರು, ಜೂ. 15(ಆರ್‌ಕೆ)– ಮೈಸೂರಿನ ನಂಜರಾಜ ಬಹದ್ದೂರ್ ಛತ್ರದಲ್ಲಿ ಎರಡು ದಿನಗಳ ಹಲಸಿನ ಹಬ್ಬ ಇಂದಿನಿಂದ ಆರಂಭವಾಗಿದೆ.

ಸಹಜ ಸಮೃದ್ಧ, ರೋಟರಿ ಕ್ಲಬ್ ಆಫ್ ಮೈಸೂರು ಪಶ್ಚಿಮ ಹಾಗೂ ರೀಬಿಲ್ಡ್ ಇಂಡಿಯಾ ಫಂಡ್ ಸಹಯೋಗದಲ್ಲಿ ಆಯೋಜಿಸಿರುವ 'ಹಲಸಿನ ಹಬ್ಬ'– ಪ್ರದರ್ಶನ ಮತ್ತು ಮಾರಾಟವನ್ನು ರೈತ ಮುಖಂಡ ಕುರುಬೂರು ಶಾಂತ ಕುಮಾರ್ ಉದ್ಘಾಟಿಸಿದರು.

ಈ ಸಂದರ್ಭ ಮಾತನಾಡಿದ ಅವರು, ಮಳೆ ಆಶ್ರಿತ ಪ್ರದೇಶಗಳಲ್ಲಿ ಹಲಸು ಬೆಳೆಯಬಹುದಾಗಿದ್ದು, ಇದು ಬರ ಎದುರಿಸುವ ಭವಿಷ್ಯದ ಭರವಸೆಯ ಬೆಳೆಯಾಗಿದೆ. ಆ ನಿಟ್ಟಿನಲ್ಲಿ ಮೈಸೂರು ಭಾಗದಲ್ಲಿ ಉತ್ತಮ ತಳಿಯ ಹಲಸು ಬೆಳೆಯಲು ಪ್ರೋತ್ಸಾಹಿಸಬೇಕು. ಹಲಸು ಬೆಳೆಯಲು ಮುಂದೆ ಬರುವ ರೈತರಿಗೆ ಸರ್ಕಾರ ಸಹಕಾರ ಮತ್ತು ಉತ್ತಮ ಮಾರು ಕಟ್ಟೆ ಒದಗಿಸಬೇಕು ಎಂದು ತಿಳಿಸಿದರು.

ರೋಟರಿ ಕ್ಲಬ್ ಮೈಸೂರು ಪಶ್ಚಿಮದ ಕಾರ್ಯದರ್ಶಿ ಎಂ.ಎಲ್.ನಾಗೇಶ್ ಅತಿಥಿಗಳಾಗಿ ಪಾಲ್ಗೊಂಡು 'ದೇಶಿ ಬೀಜ' ಮಾರ್ಗದರ್ಶಿ ಪುಸ್ತಕ ಬಿಡುಗಡೆ ಮಾಡಿದರು. ಕ್ಲಬ್ ಅಧ್ಯಕ್ಷ ಎಸ್.ಕೆ. ಸುಧೀಂದ್ರ ಅಧ್ಯಕ್ಷತೆ ವಹಿಸಿದ್ದ ಕಾರ್ಯ ಕ್ರಮದಲ್ಲಿ ಸಹಜ ಸಮೃದ್ಧ ಸಂಸ್ಥೆ ನಿರ್ದೇಶಕ ಜಿ. ಕೃಷ್ಣಪ್ರಸಾದ್ ಹಾಗೂ ಇತರರು 2 ದಿನಗಳ ಹಲಸಿನ ಹಬ್ಬ ಉದ್ಘಾಟನಾ ಸಮಾರಂಭದಲ್ಲಿ ಪಾಲ್ಗೊಂಡಿದ್ದರು.

ರುದ್ರಾಕ್ಷಿ, ನಾಗಚಂದ್ರ, ಲಾಲ್‌ಬಾಗ್ ಮಧುರ, ರಾಮಚಂದ್ರ, ಅಂಬಲಿ, ಸದಾನಂದ, ಸರ್ವಋತು, ಅಂಟು ರಹಿತ, ಸಿದ್ದು, ಶಂಕರ, ಚಂದ್ರ ಹಲಸು, ಹೆಬ್ಬಲಸು, ಭೈರಸಂದ್ರ, ತೂವಿನಕೆರೆ, ಕೆ ಗುಂಡಿ, ಮಂಗಳ ಕೆಂಪು, ತೂಬುಗೆರೆ ತಳಿಯ ಹಲಸಿನ ಹಣ್ಣು ಹಾಗೂ ಗಿಡಗಳನ್ನು ಪ್ರದರ್ಶನದಲ್ಲಿ ಇರಿಸಲಾಗಿದೆ.

ಚಿಕ್ಕನಾಯಕನಹಳ್ಳಿ, ಚೇಳೂರಿನಿಂದ ಬಂದಿರುವ ಕೆಂಪು ತೊಳೆಯ ಹಲಸು, ಕೊಳ್ಳೇಗಾಲದ ಸಹಜ ಕೃಷಿಕರಿಂದ ಬೆಳೆದಿರುವ ಬೆಳುವಲ ತೋಟದ ಫುಟ್ ಬಾಲ್ ಗಾತ್ರದ ರುದ್ರಾಕ್ಷಿ ಹಲಸು, ಹೆಚ್.ಡಿ.ಕೋಟೆಯ ಹುಲಿಕಾಡು ರೈತರು ಬೆಳೆದಿರುವ ಹಲಸಿನ ಹಣ್ಣುಗಳ ಘಮ ಘಮ ಜನರ ಬಾಯಲ್ಲಿ ನೀರೂರಿಸಿ, ಆಕರ್ಷಿಸುತ್ತಿವೆ. ಹಲಸಿನ ರಸಾಯನ, ಐಸ್‌ಕ್ರೀಂ, ಚಿಪ್ಸ್, ಚಾಕೊಲೇಟ್, ಹಪ್ಪಳ, ಹಲ್ವ, ಕಬಾಬ್, ಹೋಳಿಗೆ, ವಡೆ, ದೋಸೆ, ಪಲ್ಯ, ಬಿರಿಯಾನಿ, ಹಲಸಿನ ಖಾದ್ಯಗಳನ್ನು ಹಲಸಿನ ಹಬ್ಬದಲ್ಲಿ ಪ್ರದರ್ಶಿಸಲಾಗಿದೆ. ತರಕಾರಿ ಬಿತ್ತನೆ ಬೀಜ, ಸಿರಿಧಾನ್ಯ, ದೇಸೀ ಭತ್ತದ ಬೀಜಗಳು, ಧಾರವಾಡದ ದೇವಧಾನ್ಯ, ವಿವಿಧ ಸೊಪ್ಪು, ಮಾವು, ನೇರಳೆ ಹಣ್ಣು, ಹಲಸಿನಿಂದ ತಯಾರಿಸಿದ ಮೌಲ್ಯವರ್ಧಿತ ಉತ್ಪನ್ನಗಳು, ಸೌಂದರ್ಯವರ್ಧಕ ವಸ್ತುಗಳೂ ತಮ್ಮತ್ತ ಸೆಳೆಯುತ್ತಿವೆ.

ಬೆಳಗ್ಗೆ 10ರಿಂದ ರಾತ್ರಿ 8 ಗಂಟೆವರೆಗೆ ತೆರೆದಿರುವ ಹಬ್ಬದಲ್ಲಿ ಉಚಿತ ಪ್ರವೇಶವಿರುವುದರಿಂದ ಉತ್ತಮ ಪ್ರತಿಕ್ರಿಯೆ ಬರುತ್ತಿದ್ದು, ನಾಳೆ (ಜೂ. 16) ಬೆಳಗ್ಗೆ 10.30 ಗಂಟೆಯಿಂದ 5ರಿಂದ 12 ವರ್ಷದೊಳಗಿನ ಮಕ್ಕಳಿಗೆ 'ನಾ ಕಂಡ ಹಲಸು' ವಿಷಯ ಕುರಿತ ಚಿತ್ರಕಲಾ ಸ್ಪರ್ಧೆ, ಮಧ್ಯಾಹ್ನ 12.30 ಗಂಟೆಗೆ ಹಲಸಿನ ಅಡುಗೆ ತಯಾರಿಸುವ ಸ್ಪರ್ಧೆ, ಮಧ್ಯಾಹ್ನ 3 ಗಂಟೆಗೆ ಹಲಸಿನ ಹಣ್ಣು ತಿನ್ನುವ ಸ್ಪರ್ಧೆಯನ್ನು ಏರ್ಪಡಿಸಲಾಗಿದೆ. ನಂಜರಾಜ ಬಹದ್ದೂರ್ ಕಲ್ಯಾಣ ಮಂಟಪದ ಆವರಣದಲ್ಲಿ ಪ್ರದರ್ಶಿಸುತ್ತಿರುವ ವಿವಿಧ ತಳಿಯ ಹಲಸಿನ ಗಿಡಗಳು ಹಾಗೂ ಇನ್ನಿತರ ಹಣ್ಣಿನ ಸಸಿಗಳನ್ನು ಜನರು ಖರೀದಿಸುತ್ತಿದ್ದು, ಒಟ್ಟಾರೆ ಹಲಸಿನ ಹಬ್ಬಕ್ಕೆ ಸಾರ್ವಜನಿಕರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗುತ್ತಿದೆ.





ಇಂದಿರಾ ಗಾಂಧಿ 'ಭಾರತದ ಮಾತೆ' ಎಂದು ಬಣ್ಣಿಸಿದ ಕೇಂದ್ರ ಸಚಿವ ಸುರೇಶ್ ಗೋಪಿ



ತ್ರಿಶೂರ್, ಜೂ.15– ಮಾಜಿ ಪ್ರಧಾನಿ ದಿ. ಇಂದಿರಾ ಗಾಂಧಿ ಅವರನ್ನು 'ಭಾರತದ ಮಾತೆ' ಎಂದು ಮತ್ತು ದಿವಂಗತ ಕಾಂಗ್ರೆಸ್ ಮುಖ್ಯಮಂತ್ರಿ ಕೆ ಕರುಣಾಕರನ್ ಅವರನ್ನು 'ಧೈರ್ಯಶಾಲಿ ಆಡಳಿತಗಾರ' ಎಂದು ಕೇಂದ್ರ ಸಚಿವ, ಬಿಜೆಪಿ ನಾಯಕ ಸುರೇಶ್ ಗೋಪಿ ಅವರು ಬಣ್ಣಿಸಿದ್ದಾರೆ.

ತ್ರಿಶೂರ್‌ನ ಪುಂಕುನ್ನಂನಲ್ಲಿರುವ ಕರುಣಾಕರನ್ ಅವರ ಸ್ಮಾರಕ "ಮುರಳಿ ಮಂದಿರಂ"ಗೆ ಭೇಟಿ ನೀಡಿ, ಗೌರವ ನಮನ ಸಲ್ಲಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಕೇಂದ್ರ ಸಚಿವ ಸುರೇಶ್ ಗೋಪಿ, ಕರುಣಾಕರನ್ ಮತ್ತು ಹಿರಿಯ ಮಾರ್ಕ್ಸ್‌ವಾದಿ ಇ ಕೆ ನಾಯನಾರ್ ಅವರನ್ನು ತಮ್ಮ ರಾಜಕೀಯ ಗುರುಗಳು ಎಂದು ಹೇಳಿದ್ದಾರೆ.

ಕುತೂಹಲಕಾರಿ ವಿಚಾರ ಎಂದರೆ ಕಳೆದ ಏಪ್ರಿಲ್ 26 ರಂದು ನಡೆದ ಲೋಕಸಭೆ ಚುನಾವಣೆಯಲ್ಲಿ ಕರುಣಾಕರನ್ ಅವರ ಪುತ್ರ ಮತ್ತು ಕಾಂಗ್ರೆಸ್ ಮುಖಂಡ ಕೆ ಮುರಳೀಧರನ್ ಅವರ ವಿರುದ್ಧ ಸುರೇಶ್ ಗೋಪಿ ಅವರು ತ್ರಿಶೂರ್ ಲೋಕಸಭಾ ಕ್ಷೇತ್ರದಿಂದ ಗೆಲುವು ಸಾಧಿಸಿದ್ದಾರೆ.

ಕರುಣಾಕರನ್ ಸ್ಮಾರಕಕ್ಕೆ ಭೇಟಿ ನೀಡಿದ ಬಗ್ಗೆ ಯಾವುದೇ ರಾಜಕೀಯ ಅರ್ಥವನ್ನು ಕಲ್ಪಿಸಬೇಡಿ ಎಂದು ಮಾಧ್ಯಮ ಪ್ರತಿನಿಧಿಗಳಿಗೆ ಒತ್ತಾಯಿಸಿದ ಬಿಜೆಪಿ ನಾಯಕ, ತಮ್ಮ ಗುರುಗಳಿಗೆ ನಮನ ಸಲ್ಲಿಸಲು ಇಲ್ಲಿಗೆ ಬಂದಿದ್ದೇನೆ ಎಂದು ಹೇಳಿದರು.

ಇಕೆ ನಾಯನಾರ್ ಮತ್ತು ಅವರ ಪತ್ನಿ ಶಾರದಾ ಟೀಚರ್ ಮತ್ತು ಕರುಣಾಕರನ್ ಹಾಗೂ ಅವರ ಪತ್ನಿ ಕಲ್ಯಾಣಿಕುಟ್ಟಿ ಅಮ್ಮ ಅವರೊಂದಿಗೆ ತಾವು ಆತ್ಮೀಯತೆ ಹೊಂದಿರುವುದಾಗಿ ಸುರೇಶ್ ಗೋಪಿ ತಿಳಿಸಿದ್ದಾರೆ. ಸುರೇಶ್ ಗೋಪಿ ಅವರು ಇಂದಿರಾ ಗಾಂಧಿಯನ್ನು ಭಾರತದ ಮಾತೆ ಮತ್ತು ಕರುಣಾಕರನ್ ಅವರು ಕೇರಳದಲ್ಲಿ ಕಾಂಗ್ರೆಸ್ ಪಕ್ಷದ ಪಿತಾಮಹ ಎಂದು ಕೂಡ ಹೇಳಿದ್ದಾರೆ. ಇದಲ್ಲದೆ ಪ್ರಸಿದ್ಧ ಲೂರ್ದ್ ಮಾತಾ ಚರ್ಚ್‌ಗೂ ಭೇಟಿ ನೀಡಿ ಪ್ರಾರ್ಥನೆ ಸಲ್ಲಿಸಿದ್ದಾರೆ.

ಸುಶ್ರಾವ್ಯ ಸಂಗೀತ ಸುಧೆಯಲ್ಲಿ ಮಂತ್ರಮುಗ್ಧರಾದ ಶ್ರೋತೃ ವರ್ಗ

ಇನ್ಫೋಸಿಸ್ ಪ್ರತಿಷ್ಠಾನ, ಭಾರತೀಯ ವಿದ್ಯಾಭವನ ಜಂಟಿ ಆಶ್ರಯದಲ್ಲಿ ಶಾಸ್ತ್ರೀಯ ಸಂಗೀತ ಕಛೇರಿ



ಮೈಸೂರಿನ ವಿಜಯನಗರ 1ನೇ ಹಂತದಲ್ಲಿರುವ ಬಿವಿಬಿ ಮೈಸೂರು ಕೇಂದ್ರದ ಸಭಾಂಗಣದಲ್ಲಿ ಶನಿವಾರ ಹಮ್ಮಿಕೊಂಡಿದ್ದ ಸಂಗೀತ ಕಾರ್ಯಕ್ರಮದಲ್ಲಿ ವಿದ್ವಾನ್ ಸಿದ್ಧಾರ್ಥ ಬೆಳ್ಮಣ್ಣು ಗಾಯನ ಸಾದರಪಡಿಸಿದರು. ಪಕ್ಕವಾದ್ಯದಲ್ಲಿ ರೂಪಕ್ ಕಲ್ಲೂರ್ಕರ್ (ತಬಲಾ), ಭರತ್ ಹೆಗ್ಡೆ (ಹಾರ್ಮೋನಿಯಂ) ಹಾಗೂ ಮೇಘನಾ ಭಟ್ (ತಂಬೂರಿ) ಸಹಕಾರ ನೀಡಿದರು.

ಮೈಸೂರು,ಜೂ.15(ಪಿಎಂ)– ಸುಶ್ರಾವ್ಯವಾಗಿ ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ ಹಾಗೂ ಭಕ್ತಿ ಸಂಗೀತದ ಗಾನ ಸುಧೆಯನ್ನು ತಮ್ಮ ಕಂಚಿನ ಕಂಠದಲ್ಲಿ ವಿದ್ವಾನ್ ಸಿದ್ಧಾರ್ಥ ಬೆಳ್ಮಣ್ಣು ಸಾದರ ಪಡಿಸಿ, ಶ್ರೋತೃಗಳನ್ನು ಮಂತ್ರಮುಗ್ಧಗೊಳಿಸಿ, ಭಕ್ತಿಭಾವ ಮೂಡಿಸಿದರು. ಅರ್ಧ ತಾಸು ಆನಂದಿ ಕಲ್ಯಾಣ್ ರಾಗದಲ್ಲಿ ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ ಪ್ರಸ್ತುತಪಡಿಸಿ, ತಮ್ಮ ಗಾನ ಮೋಡಿಯಲ್ಲಿ ಶ್ರೋತೃಗಳು ಮೈ ಮರೆಯುವಂತೆ ಮಾಡಿದರು.

ಮೈಸೂರಿನ ವಿಜಯನಗರದ 1ನೇ ಹಂತದಲ್ಲಿರುವ ಭಾರತೀಯ ವಿದ್ಯಾಭವನದ (ಬಿವಿಬಿ) ಸಭಾಂಗಣದಲ್ಲಿ ಇನ್ಫೋಸಿಸ್ ಪ್ರತಿಷ್ಠಾನ ಮತ್ತು ಭಾರತೀಯ ವಿದ್ಯಾ ಭವನ (ಬಿವಿಬಿ) ಬೆಂಗಳೂರು–ಮೈಸೂರು ಕೇಂದ್ರಗಳ ಜಂಟಿ ಆಶ್ರಯದಲ್ಲಿ ಶನಿವಾರ ಹಮ್ಮಿಕೊಂಡಿದ್ದ ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ ಮತ್ತು ಭಕ್ತಿ ಸಂಗೀತ ಕಾರ್ಯ ಕ್ರಮದಲ್ಲಿ ಅವರು ಗಾನ ಮಾಧುರ್ಯದ ಮೂಲಕ ಸಭಿಕರು ಭಕ್ತಿ ಸುಧೆಯಲ್ಲಿ ತೇಲುವಂತೆ ಮಾಡಿದರು.

ಪ್ರತಿ ತಿಂಗಳು ಮೂರನೇ ಶನಿವಾರ ಆಯೋಜಿಸುವ ಸಂಗೀತ ಕಾರ್ಯಕ್ರಮದ ಪೈಕಿ ಇದು 129ನೇ ಸಂಗೀತ ಕಛೇರಿಯಾಗಿದ್ದು, ಆರಂಭದಲ್ಲಿ ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ ಶೈಲಿಯಲ್ಲಿ ಗಾಯನ ಪ್ರಸ್ತುತಪಡಿಸಿದ ಸಿದ್ಧಾರ್ಥ ಬೆಳ್ಮಣ್ಣು, ಗಾನದ ಅಲೆಯಲ್ಲಿ ಶ್ರೋತೃಗಳು ಸಂಭ್ರಮಿಸುವಂತೆ ಮಾಡಿದರು. ಈ ಸಂಗೀತ ಮುಕ್ತಾಯಗೊಳಿಸುತ್ತಿದ್ದಂತೆ ಸಭಿಕರು ಅಭಿಮಾನದಿಂದ ಚಪ್ಪಾಳೆ ಮಳೆ ಸುರಿಸಿದರು.

ಬಳಿಕ ಭಕ್ತಿ ಗೀತೆಗಳ ಮೂಲಕ ಸಭಿಕರಲ್ಲಿ ಭಕ್ತಿಯ ಪರಾಕಾಷ್ಠೆ ಮೂಡಿಸಿದರು. ಕಮಲೇಶ ವಿಠ್ಠಲದಾಸರ ರಚನೆಯ 'ಕರೆದರೆ ಬರಬಾರದೇ ಗುರುವೇ... ವರಮಂತ್ರಾಲಯ ಪುರಮಂದಿರ ತವ ಚರಣ ಸೇವಕರು ಕರವ ಮುಗಿದು...' ಗೀತೆಯನ್ನು ಸಾದರ ಪಡಿಸಿ, ಸಭಿಕರನ್ನು ಭಕ್ತಿಯಲ್ಲಿ ತೇಲಿಸಿದರು. ಬಳಿಕ ಪುರಂದರ ದಾಸರ ರಚನೆಯ 'ನಾನೇನ ಮಾಡಿದೆನೋ ರಂಗಯ್ಯ ರಂಗ ನೀ ಯನ್ನ ಕಾಯಬೇಕೊ... ದೀನ ರಕ್ಷಕ ತಿರುಪತಿ ವೆಂಕಟರಮಣ...' ಗೀತೆಯನ್ನು ಹಾಡಿ, ಪುರಂದರದಾಸರ ದೈವ ಭಕ್ತಿಯ ಪರಾಕಾಷ್ಠೆ ಅನಾವರಣಗೊಳಿಸಿ, ಸಭಿಕರಲ್ಲಿಯೂ ಭಕ್ತಿಭಾವ ಮೂಡಿಸಿದರು.

'ಚಿಣ್ಣಿಕೋಲು ಚೆಂಡು ಬುಗರಿ... ಆಡಲು ಪೋಗೋಣ ಬಾರೊ ರಂಗ ಕೂಡಿ ಯಮುನಾ ತೀರದಲ್ಲಿ...' ಎಂಬ ಪುರಂದರದಾಸರ ರಚನೆಯ ಗೀತೆಯನ್ನು ಪ್ರಸ್ತುತಪಡಿಸಿದರು. ಆ ಮೂಲಕ ಪುರಂದರದಾಸರ ಭಕ್ತಿಯ ಸಾಲುಗಳನ್ನು ತಮ್ಮ ಕಂಠಸಿರಿಯಲ್ಲಿ ಸಾದರಪಡಿಸಿ, ಸಭಿಕರಲ್ಲಿಯೂ ಭಕ್ತಿಯ ಸಿಂಚನ ಉಂಟು ಮಾಡಿದರು. ಪ್ರಖ್ಯಾತ ಮರಾಠಿ ಸಂತ ಏಕನಾಥ್ ಅವರ ರಚನೆಯಲ್ಲಿ ವಿಠ್ಠಲನ ಆರಾಧನೆಯ ಸಾಹಿತ್ಯ ಒಳಗೊಂಡಿರುವ 'ಮಾಝೆ ಮಾಹೇರ ಪಂಢರಿ ಆಹೆ ಭೀಮರೇಚ್ಯಾ ತೀರಿ...' ಸಾದರಪಡಿಸಿ ಭಕ್ತಿಯ ಸಿಂಚನ ಮೂಡಿಸಿದರು.

ಪಕ್ಕವಾದ್ಯದಲ್ಲಿ ರೂಪಕ್ ಕಲ್ಲೂರ್ಕರ್ (ತಬಲಾ), ಭರತ್ ಹೆಗ್ಡೆ (ಹಾರ್ಮೋನಿಯಂ) ಹಾಗೂ ಮೇಘನಾ ಭಟ್ (ತಂಬೂರಿ) ಸಹಕಾರ ನೀಡಿದರು. ಇದಕ್ಕೂ ಮುನ್ನ ಬಿವಿಬಿ ಮೈಸೂರು ಕೇಂದ್ರದ ಕಾರ್ಯದರ್ಶಿ ಪಿ.ಎಸ್. ಗಣಪತಿ ಕಾರ್ಯಕ್ರಮ ಉದ್ಘಾಟಿಸಿದರು. ಬಿವಿಬಿ ಮೈಸೂರು ಕೇಂದ್ರದ ಖಜಾಂಚಿ ಎ.ಟಿ.ಭಾಷ್ಯಂ, ಕಾರ್ಯಕಾರಿ ಸಮಿತಿ ಸದಸ್ಯರಾದ ಡಾ.ತುಳಸಿ ರಾಮಚಂದ್ರ, ಟಿ.ಎಸ್.ಗಂಗಾಧರ್, ಗಾಯತ್ರಿ, ಕೃಷ್ಣೇಗೌಡ, ಆಡಳಿತಾಧಿಕಾರಿ ಎಸ್.ಆರ್.ರವಿಕುಮಾರ್, ಬಿವಿಬಿ ಶಾಲೆಯ ಪ್ರಾಂಶುಪಾಲರಾದ ಲೇಖಾ ನಾಯರ್ ಮತ್ತಿತರರು ಹಾಜರಿದ್ದರು.

ಮೈಸೂರು ಮೃಗಾಲಯ ಪ್ರವೇಶಕ್ಕೆ ಸರದಿ ಸಾಲಲ್ಲಿ ನಿಲ್ಲಬೇಕಿಲ್ಲ; ವಾಟ್ಸ್‌ಅಪ್ ಮೂಲಕವೇ ಟಿಕೆಟ್ ಪಡೆಯಿರಿ

● ನೂತನ ಸೌಕರ್ಯಕ್ಕೆ ಅರಣ್ಯ ಸಚಿವ ಈಶ್ವರ ಖಂಡ್ರೆ ಚಾಲನೆ ● ಲೈವ್ ಫೀಡ್ ಘಟಕ ಉದ್ಘಾಟನೆ ಸೇರಿದಂತೆ ವಿವಿಧ ಕಾರ್ಯಕ್ರಮಕ್ಕೆ ಚಾಲನೆ



ಮೈಸೂರಿನ ಶ್ರೀ ಚಾಮರಾಜೇಂದ್ರ ಮೃಗಾಲಯದಲ್ಲಿ 'ವಾಟ್ಸ್‌ಅಪ್‌ನಲ್ಲಿ ಟಿಕೆಟ್ ಪಡೆಯುವ ಸೌಲಭ್ಯ'ಕ್ಕೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ್ ಬಿ.ಖಂಡ್ರೆ ಚಾಲನೆ ನೀಡಿದರು.



ಮೃಗಾಲಯದಲ್ಲಿ ಜನಿಸಿದ ಗಂಡು ಜಿರಾಫೆಗೆ 'ದಕ್ಷ' ಎಂಬ ಹೆಸರನ್ನು ನಾಮಕರಣ ಮಾಡಲಾಯಿತು. ಅರಣ್ಯ ಸಚಿವ ಈಶ್ವರ್ ಬಿ.ಖಂಡ್ರೆ, ಮಾಜಿ ಶಾಸಕರಾದ ಸಂದೇಶ್ ನಾಗರಾಜ್, ಹೆಚ್.ಪಿ.ಮಂಜುನಾಥ್ ಮತ್ತಿತರರಿದ್ದರು.

ಮೈಸೂರು, ಜೂ.15(ಎಂಕೆ)– ಮೈಸೂರಿನ ಶ್ರೀ ಚಾಮರಾಜೇಂದ್ರ ಮೃಗಾಲಯಕ್ಕೆ ಶನಿವಾರ ಭೇಟಿ ನೀಡಿದ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ್ ಬಿ.ಖಂಡ್ರೆ 'ವಾಟ್ಸ್‌ಅಪ್‌ನಲ್ಲಿ ಟಿಕೆಟ್ ಪಡೆಯುವ ಸೌಲಭ್ಯ', 'ಲೈವ್ ಫೀಡ್ ಘಟಕ'ದ ಉದ್ಘಾಟನೆ ಸೇರಿದಂತೆ ವಿವಿಧ ಕಾರ್ಯಕ್ರಮಗಳಿಗೆ ಚಾಲನೆ ನೀಡಿದರು.

ಮೃಗಾಲಯ ವೀಕ್ಷಣೆಗೆ ಬರುವ ಪ್ರವಾಸಿಗರು ಟಿಕೆಟ್ ಪಡೆಯಲು ಸರತಿ ಸಾಲಿನಲ್ಲಿ ನಿಲ್ಲುವುದನ್ನು ತಪ್ಪಿಸಿ, ನೇರ ಹಾಗೂ ಸುಲಭವಾಗಿ ವಾಟ್ಸ್‌ಅಪ್ ಮೂಲಕ ಟಿಕೆಟ್ ಪಡೆಯುವ ಸೌಲಭ್ಯಕ್ಕೆ ಚಾಲನೆ ನೀಡಲಾಯಿತು. ಮೃಗಾಲಯದ 9686668818 ನಂಬರ್‌ಗೆ ವಾಟ್ಸ್‌ಅಪ್‌ನಲ್ಲಿ 'ಹಾಯ್' ಎಂಬ ಸಂದೇಶ ಕಳುಹಿಸುವ ಮೂಲಕ ಟಿಕೆಟ್ ಪಡೆದು ವೀಕ್ಷಣೆ ಮಾಡಬಹುದಾಗಿದೆ. ಹಾಗೆಯೇ ಪ್ರಾಣಿಗಳನ್ನು ದತ್ತು ಪಡೆಯಲು ಹೊಸದಾಗಿ ಮಾರ್ಪಾಡು ಮಾಡಿರುವ ದತ್ತು ಸ್ವೀಕಾರ ಯೋಜನೆಗೂ ಚಾಲನೆ ದೊರೆಯಿತು.

ಒಂದು ದಿನ, ಒಂದು ತಿಂಗಳು, ಆರು ತಿಂಗಳು ಹಾಗೂ ಒಂದು ವರ್ಷದ ಅವಧಿಗೆ ತಮಗಿಷ್ಟದ ಪ್ರಾಣಿಗಳನ್ನು ದತ್ತು ಪಡೆದುಕೊಳ್ಳಲು ಅವಕಾಶ ನೀಡಿದ್ದು, ಆನ್‌ಲೈನ್ ಮೂಲಕ ದತ್ತು ಸ್ವೀಕಾರ ಯೋಜನೆಯ ದೃಢಿಕರಣ ಪತ್ರ ಹಾಗೂ ಪಾಸ್‌ಗಳನ್ನು ಪಡೆಯಬಹುದಾಗಿದೆ. ಈ ಯೋಜನೆಯೂ ಎಲ್ಲಾ ವರ್ಗದ ವೀಕ್ಷಕರು, ವನ್ಯಜೀವಿ ಸಂರಕ್ಷಣೆಯಲ್ಲಿ ಭಾಗವಹಿಸಲು ಅನುವು ಮಾಡಿಕೊಟ್ಟಿದೆ. ಹಾಗೆಯೇ ಮೈಸೂರು ಮೃಗಾಲಯದ ವೆಬ್‌ಸೈಟ್ www.mysuruzoo.info ಮೂಲಕ ಪ್ರಾಣಿಗಳನ್ನು ದತ್ತು ಪಡೆಯಲು ಅವಕಾಶ ನೀಡಲಾಗಿದೆ.

ಕೆಎಸ್‌ಡಿಎಲ್(ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಯಮಿತ, ಬೆಂಗಳೂರು) ಸಂಸ್ಥೆಯು ಸಿಎಸ್‌ಆರ್ ಯೋಜನೆಯಡಿ ಮೈಸೂರು ಮೃಗಾಲಯಕ್ಕೆ ನೀಡಿರುವ 8.62 ಲಕ್ಷ ರೂ.ಮೊತ್ತದ ಬೊಲೆರೋ ವಾಹನ ಹಾಗೂ ಮೃಗಾಲಯ ಪ್ರಾಣಿಗಳ ಚಿಕಿತ್ಸೆಗಾಗಿ 11.73 ಲಕ್ಷ ರೂ.ಗಳ ವನ್ಯಜೀವಿ ಆಂಬುಲೆನ್ಸ್ ಬಳಕೆಗೆ ಚಾಲನೆ ನೀಡಲಾಯಿತು.

ಉದ್ಘಾಟನೆ: ಮೃಗಾಲಯ ಆವರಣದಲ್ಲಿ ಸರ್ಪಗಳ ಆಹಾರಕ್ಕಾಗಿ ನಿರ್ಮಾಣ ಮಾಡಿರುವ ಲೈವ್‌ಫೀಡ್ ಘಟಕವನ್ನು ಉದ್ಘಾಟಿಸಲಾಯಿತು. ಲೈವ್ ಫೀಡ್ ಘಟಕದಲ್ಲಿ ಇಲಿ ಮತ್ತು ಮೊಲಗಳನ್ನು ಬೆಳೆಸಿ ಪೋಷಣೆ ಮಾಡಲಾಗುತ್ತಿದೆ. ರೋಗಮುಕ್ತ, ನೈರ್ಮಲ್ಯದ ಪರಿಸರದಲ್ಲಿ ಬೆಳೆಸಿ, ಉತ್ತಮ ಗುಣಮಟ್ಟ ಹಾಗೂ ಪೌಷ್ಟಿಕಾಂಶವುಳ್ಳ ಆಹಾರವನ್ನು ಒದಗಿಸಲು ಹಾಗೂ ಪ್ರಾಣಿಗಳ ಒಟ್ಟಾರೆ ಆರೋಗ್ಯ ಮತ್ತು ಯೋಗಕ್ಷೇಮಕ್ಕೆ ಈ ಘಟಕ ಕೊಡುಗೆ ನೀಡಲಿದೆ.

ಪುನರ್‌ವಸತಿ ಕೇಂದ್ರ ಪರಿಶೀಲನೆ, ಕಚೇರಿ ಉದ್ಘಾಟನೆ...

ಕೂರ್ಗಳ್ಳಿಯಲ್ಲಿರುವ ಶ್ರೀ ಚಾಮುಂಡಿ ವನ್ಯಜೀವಿ ರಕ್ಷಣೆ, ಸಂರಕ್ಷಣೆ ಹಾಗೂ ಪುನರ್ವಸತಿ ಕೇಂದ್ರಕ್ಕೆ ಭೇಟಿ ನೀಡಿದ ಅರಣ್ಯ ಸಚಿವ ಈಶ್ವರ ಬಿ.ಖಂಡ್ರೆ, ಪರಿಶೀಲನೆ ನಡೆಸಿದರು. ಆನೆಗಳು ವಿಹರಿಸುವ ಈಜುಕೊಳದ ಸುತ್ತಮುತ್ತ ಸ್ವಚ್ಛತೆ, ನಿರ್ವಹಣೆ ಕುರಿತು ಮಾಹಿತಿ ಪಡೆದುಕೊಂಡರು. ಬಳಿಕ ಇಲ್ಲಿರುವ ಕರ್ನಾಟಕ ಮೃಗಾಲಯ ಪ್ರಾಧಿಕಾರದ ಆಡಳಿತ ಕಚೇರಿಯಲ್ಲಿ ಅಧ್ಯಕ್ಷರ ಕಚೇರಿ ಹಾಗೂ ಶಸ್ತ್ರಚಿಕಿತ್ಸಾ ಘಟಕವನ್ನು ಉದ್ಘಾಟಿಸಿದರು.

'ದಕ್ಷ' ಹೆಸರು ನಾಮಕರಣ: 2024ರ ಜ.14 ರಂದು ಮೃಗಾಲಯದಲ್ಲಿ ಜನಿಸಿದ ಗಂಡು ಜಿರಾಫೆಗೆ 'ದಕ್ಷ' ಎಂಬ ಹೆಸರನ್ನು ನಾಮಕರಣ ಮಾಡಲಾಯಿತು. ಜಿರಾಫೆ ಭರತ್ ಮತ್ತು ಜಿರಾಫೆ ಲಕ್ಷ್ಮಿಗೆ ಜನಿಸಿದ 5 ತಿಂಗಳ ಗಂಡು ಜಿರಾಫೆಗೆ ಹೆಸರಿಡಲಾಯಿತು. ಪ್ರಸ್ತುತ ಮೃಗಾಲಯದಲ್ಲಿ 3 ಗಂಡು ಹಾಗೂ 5 ಹೆಣ್ಣು ಜಿರಾಫೆಗಳಿದ್ದು, ವಿದೇಶಿ ಜಾತಿಯ ಹಾಗೂ ಉದ್ದನೆಯ ಜಿರಾಫೆಯನ್ನು ಸಂರಕ್ಷಣೆ ಹಾಗೂ ಸಂತಾನಾಭಿವೃದ್ಧಿ ಮಾಡಿಸುತ್ತಿರುವ ಹೆಗ್ಗಳಿಕೆ ಮೈಸೂರು ಮೃಗಾಲಯದ್ದಾಗಿದೆ.

ಸಚಿವರೊಂದಿಗೆ ಮಾಜಿ ಶಾಸಕರಾದ ಸಂದೇಶ್ ನಾಗರಾಜ್, ಹೆಚ್.ಪಿ.ಮಂಜುನಾಥ್, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಡಾ.ಬಿ.ಜೆ. ವಿಜಯ್‌ಕುಮಾರ್, ಕೆಪಿಸಿಸಿ ಕಾರ್ಯದರ್ಶಿ ವರುಣ ಮಹೇಶ್, ಮುಖಂಡ ಪ್ರದೀಪ್‌ಕುಮಾರ್, ಕರ್ನಾಟಕ ಮೃಗಾಲಯ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಡಾ.ಸುನಿಲ್ ಪನ್ವಾರ್, ಮೈಸೂರು ವೃತ್ತದ ಸಿಎಫ್ ಡಾ.ಮಾಲತಿ ಪ್ರಿಯಾ, ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ನಿರ್ದೇಶಕ ಪ್ರಭಾಕರನ್, ನಾಗರಹೊಳೆ ಹುಲಿ ಸಂರಕ್ಷಿತಾರಣ್ಯ ನಿರ್ದೇಶಕ ಹರ್ಷಕುಮಾರ್, ಹುಣಸೂರು ಡಿಸಿಎಫ್ ಸೀಮಾ, ಮೈಸೂರು ವನ್ಯಜೀವಿ ಡಿಸಿಎಫ್ ಶರಣಬಸಪ್ಪ ಹೆಚ್.ಡಿ.ಕೋಟೆ ಎಸಿಎಫ್ ಅಭಿಷೇಕ್, ಮೈಸೂರು ಮೃಗಾಲಯ ಕಾರ್ಯನಿರ್ವಾಹಕ ನಿರ್ದೇಶಕ ಮಹೇಶ್‌ಕುಮಾರ್, ಉಪನಿರ್ದೇಶಕಿ ರೋಷಿಣಿ, ಮೈಸೂರು ಎಸಿಎಫ್ ಲಕ್ಷ್ಮೀಕಾಂತ್, ಡಾ.ಆದರ್ಶ್ ಪಶುವೈದ್ಯ, ಆರ್‌ಎಫ್‌ಒ ಮುನಿರಾಜು, ಆರ್‌ಎಫ್‌ಒ ರಾಮಚಂದ್ರ ಮತ್ತಿತರರಿದ್ದರು.

ಮೃಗಾಲಯಕ್ಕೆ ಶ್ರೀಗಂಧದ ವಸ್ತುಸಂಗ್ರಹಾಲಯ ಸ್ಥಳಾಂತರ



ಅರಣ್ಯ ಸಚಿವ ಈಶ್ವರ ಬಿ.ಖಂಡ್ರೆ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು.

ಮೈಸೂರು, ಜೂ.15(ಎಂಕೆ)– ಮೈಸೂರು ಅರಣ್ಯ ಭವನದಲ್ಲಿರುವ ಶ್ರೀಗಂಧ ವಸ್ತುಸಂಗ್ರಹಾಲಯವನ್ನು ಮೈಸೂರು ಮೃಗಾಲಯಕ್ಕೆ ಸ್ಥಳಾಂತರಿಸಲು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ.ಖಂಡ್ರೆ ಸಮ್ಮತಿ ನೀಡಿದರು.

ಕೂರ್ಗಳ್ಳಿಯ ಚಾಮುಂಡಿ ವನ್ಯಜೀವಿ ಸಂರಕ್ಷಣೆ, ರಕ್ಷಣೆ ಹಾಗೂ ಪುನರ್ವಸತಿ ಕೇಂದ್ರದಲ್ಲಿ ಅರಣ್ಯ ಇಲಾಖೆ ಅಧಿಕಾರಿಗಳೊಂದಿಗೆ ನಡೆದ ಸಭೆಯಲ್ಲಿ ಮೈಸೂರು ವೃತ್ತದ ಸಿಎಫ್ ಡಾ.ಮಾಲತಿ ಪ್ರಿಯಾ, ಶ್ರೀಗಂಧದ ವಸ್ತುಸಂಗ್ರಹಾಲಯ ಸ್ಥಳಾಂತರದ ವಿಷಯ ಪ್ರಸ್ತಾಪಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಸಚಿವರು, ಪ್ರವಾಸಿಗರ ಅನುಕೂಲತೆಗಳನ್ನು ಗಮನದಲ್ಲಿಟ್ಟುಕೊಂಡು ಸ್ಥಳಾಂತರಿಸುವಂತೆ ಸೂಚಿಸಿದರಲ್ಲದೆ ಶ್ರೀಗಂಧದ ವಸ್ತು ಸಂಗ್ರಹಾಲಯವನ್ನು ಮೃಗಾಲಯಕ್ಕೆ ಸ್ಥಳಾಂತರಿಸಿದರೆ, ಪ್ರವಾಸಿಗರಿಗೆ ಶ್ರೀಗಂಧದ ಹಿರಿಮೆಯನ್ನು ತಿಳಿಸಲು ಅನುಕೂಲವಾಗುತ್ತದೆ. ಇದರಿಂದ ಮೈಸೂರಿನ ಖ್ಯಾತಿಯೂ ಹೆಚ್ಚುವುದರ ಜೊತೆಗೆ ಪ್ರವಾಸಿಗರ ಸಂಖ್ಯೆಯೂ ಹೆಚ್ಚುತ್ತದೆ ಎಂದು ಅಭಿಪ್ರಾಯಪಟ್ಟರು.

ಅಂದಾಜು ಪಟ್ಟಿ ಸಿದ್ಧಪಡಿಸಿ: ಮೃಗಾಲಯ ಆವರಣದಲ್ಲಿರುವ ದಶಕದಿಂದ ನೆನಗುದಿಗೆ ಬಿದ್ದಿರುವ ಮತ್ಸ್ಯಾಗಾರ(ಅಕ್ವೇರಿಯಂ) ಕಾಮಗಾರಿ ಪೂರ್ಣಗೊಳಿಸಲು ತಗಲು ಖರ್ಚು ವೆಚ್ಚದ ಕುರಿತು ಅಂದಾಜು ಪಟ್ಟಿ ಸಿದ್ಧಪಡಿಸುವಂತೆ ಕರ್ನಾಟಕ ಮೃಗಾಲಯ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಡಾ.ಸುನಿಲ್ ಪನ್ವಾರ್ ಅವರಿಗೆ ಸೂಚಿಸಿದರು. ಅಲ್ಲದೆ ಅರಣ್ಯ ಇಲಾಖೆ ಹಮ್ಮಿಕೊಂಡಿರುವ ಗಿಡಗಳನ್ನು ನೆಡುವ ಕಾರ್ಯಕ್ರಮ ಸ್ಥಿತಿಗತಿ ಹಾಗೂ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶ ಹಾಗೂ ನಾಗರಹೊಳೆ ಹುಲಿ ಸಂರಕ್ಷಿತಾರಣ್ಯದಲ್ಲಿ ಪ್ರಾಣಿಗಳ ಸಂರಕ್ಷಣೆ ಕುರಿತು ಹೊಸ ಕಾರ್ಯಕ್ರಮಗಳನ್ನೇನಾದರೂ ರೂಪಿಸಿದ್ದೀರಾ ಎಂಬಿತ್ಯಾದಿ ವಿಷಯಗಳ ಕುರಿತು ಚರ್ಚಿಸಿದರು.

ಮೈಸೂರು ಮೃಗಾಲಯ ಅಂತರರಾಷ್ಟ್ರೀಯ ಪ್ರವಾಸಿ ತಾಣವಾಗಿ ಅಭಿವೃದ್ಧಿ

ಚಾಮುಂಡಿಬೆಟ್ಟಕ್ಕೆ ರೋಪ್ ವೇ ನಿರ್ಮಾಣಕ್ಕೆ ಸಂಬಂಧಿಸಿದಂತೆ ಪ್ರಗತಿ ಎಂದು ಹಾನಿ ಮಾಡುವುದಲ್ಲ. ಪರಿಸರಕ್ಕೆ ಯಾವುದೇ ಹಾನಿಯಾಗದ ರೀತಿಯಲ್ಲಿ ಜೀವನ ಮತ್ತು ಜೀವನೋಪಾಯವೂ ಆಗಬೇಕು. ಸುಸ್ಥಿರ ಅಭಿವೃದ್ಧಿಯಾಗಬೇಕು. ಹಾಗಾಗಿ ಯಾರೂ ಆತಂಕಪಡುವ ಅಗತ್ಯವಿಲ್ಲ.
– ಈಶ್ವರ್ ಬಿ.ಖಂಡ್ರೆ, ಅರಣ್ಯ ಸಚಿವ

ಮೈಸೂರು, ಜೂ.15(ಎಂಕೆ)– ಮೈಸೂರಿನ ಶ್ರೀ ಚಾಮರಾಜೇಂದ್ರ ಮೃಗಾಲಯವನ್ನು ಅಂತರರಾಷ್ಟ್ರೀಯ ಮಟ್ಟದ ಪ್ರವಾಸಿ ತಾಣವನ್ನಾಗಿ ಅಭಿವೃದ್ಧಿಪಡಿಸಲಾಗುವುದು ಎಂದು ಅರಣ್ಯ, ಜೀವ ಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ್ ಬಿ.ಖಂಡ್ರೆ ತಿಳಿಸಿದರು.

ಮೈಸೂರಿನ ಶ್ರೀ ಚಾಮರಾಜೇಂದ್ರ ಮೃಗಾಲಯದಲ್ಲಿ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದ ಅವರು, ಮೈಸೂರು ಮೃಗಾಲಯದಲ್ಲಿ ಪ್ರವಾಸಿಗರಿಗೆ ಎಲ್ಲಾ ರೀತಿಯ ಸೌಲಭ್ಯ ಕಲ್ಪಿಸುವ ನಿಟ್ಟಿನಲ್ಲಿ ಹಾಗೂ ಹೆಚ್ಚಿನ ಪ್ರವಾಸಿಗರನ್ನು ಸೆಳೆಯುವ ದೃಷ್ಟಿಯಿಂದ ಅಂತರರಾಷ್ಟ್ರೀಯ ಮಟ್ಟದ ಪ್ರವಾಸಿ ತಾಣವನ್ನಾಗಿ ಅಭಿವೃದ್ಧಿಪಡಿಸಲಾಗುವುದು ಎಂದರು.

ವಿದ್ಯುತ್ ತಂತಿ ತಗುಲಿ ದಸರಾ ಆನೆ ಅಶ್ವತ್ಥಾಮ ಸಾವು ಕುರಿತು ಪ್ರತಿಕ್ರಿಯಿಸಿ, ವಿದ್ಯುತ್ ಸ್ಪರ್ಶದಿಂದ ಆನೆ ಮೃತಪಟ್ಟಿರುವುದು ಗಮನಕ್ಕೆ ಬಂದಿದೆ. ಇದರ ಬಗ್ಗೆ ಸಮಿತಿ ರಚಿಸಿ ತನಿಖೆ ಮಾಡಿ, ವರದಿ ನೀಡುವಂತೆ ಅಧಿಕಾರಿಗಳಿಗೆ ಸೂಚಿಸಿದ್ದೇನೆ. ಹಿರಿಯ ಅಧಿಕಾರಿಗಳು ತನಿಖೆ ಮಾಡುತ್ತಿದ್ದಾರೆ. ಇಂತಹ ಘಟನೆಗಳು ಆಗಬಾರದು. ಇದರಿಂದ ಅತ್ಯಂತ ಬಹಳ ದುಃಖವಾಗುತ್ತದೆ. ಎಂದು ಸಂತಾಪ ವ್ಯಕ್ತಪಡಿಸಿದರಲ್ಲದೆ ವಿದ್ಯುತ್ ಸ್ಪರ್ಶದಿಂದ ಆನೆಗಳು ಸಾವಾಗುತ್ತಿರುವುದನ್ನು ರಾಜ್ಯ ಸರ್ಕಾರ ಗಂಭೀರವಾಗಿ ಪರಿಗಣಿಸಿದೆ. ಮುಂದಿನ ದಿನಗಳಲ್ಲಿ ಈ ರೀತಿಯ ಘಟನೆಗಳು ನಡೆಯದಂತೆ ಶಾಶ್ವತ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಭರವಸೆ ನೀಡಿದರು.

ಅರ್ಜುನ ಆನೆ ಸ್ಮಾರಕ: ದಸರಾ ಅಂಬಾರಿ ಆನೆ ಅರ್ಜುನನಿಗೆ ಸ್ಮಾರಕ ನಿರ್ಮಿಸಲು ನಿರ್ಧರಿಸಲಾಗಿದೆ. ಸ್ಮಾರಕದ ವಿನ್ಯಾಸ ತಯಾರಾಗುತ್ತಿದ್ದು, ಮುಂದಿನ 15 ದಿನಗಳಲ್ಲಿ ಶಂಕುಸ್ಥಾಪನೆ ನೆರವೇರಿಸಲಾಗುವುದು. ಹಾಸನ ಹಾಗೂ ಬಳ್ಳೆಯಲ್ಲೂ ಅರ್ಜುನ ಆನೆಗೆ ಸ್ಮಾರಕ ನಿರ್ಮಿಸಲಾಗುವುದು ಎಂದು ತಿಳಿಸಿದರು.

ದಸರಾ ಆನೆಗಳು ನಮ್ಮ ಅಸ್ಮಿತೆ ಕೊಡಲ್ಲ: ಆಂಧ್ರ ಸರ್ಕಾರದವರು ಆನೆಗಳು ಬೇಕೆಂದು ಮನವಿ ಕೊಟ್ಟಿದ್ದಾರೆ. ಪುಂಡಾನೆಗಳ ಹಾವಳಿ ನಿಯಂತ್ರಿಸಲು ಸಹಾಯ ಮಾಡಿ ಎಂದು ಪತ್ರ ಬರೆದಿದ್ದಾರೆ. ಆದರೆ, ಇದರ ಬಗ್ಗೆ ಇನ್ನೂ ಯಾವುದೇ ತೀರ್ಮಾನ ತೆಗೆದುಕೊಂಡಿಲ್ಲ. ಹಿರಿಯ ಅಧಿಕಾರಿಗಳೊಂದಿಗೆ ಚರ್ಚಿಸಿ ಅಂತಿಮ ತೀರ್ಮಾನಕ್ಕೆ ಬರಲಾಗುವುದು. ಏನೇ ತೀರ್ಮಾನ ತೆಗೆದುಕೊಂಡರು ದಸರಾ ಆನೆಗಳು ನಮ್ಮ ಅಸ್ಮಿತೆ. ದಸರಾಗೆ ಬೇಕಾದ ಆನೆಗಳನ್ನು ಯಾರಿಗೂ ಕೊಡುವುದಿಲ್ಲ. ಹಾಗಾಗಿ ಆತಂಕಕ್ಕೆ ಒಳಗಾಗುವ ಅಗತ್ಯವಿಲ್ಲ.

ವಾರದ ಮಿತ್ರ
ಸಾಪ್ತಾಹಿಕ ಪುರವಣಿ
ಮೈಸೂರು ಮಿತ್ರ
ಭಾನುವಾರ 16-6-2024

ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಅವರು ಕೇಂದ್ರ ಸಚಿವರಾದ ಹಿನ್ನೆಲೆಯಲ್ಲಿ ಅವರ ರಾಜಕಾರಣದ ಮೇಲೊಂದು ಬೆಳಕು ಚೆಲ್ಲುವ ಲೇಖನವಿದು.

ಅಂದು ಪರಿಸ್ಥಿತಿಯ 'ಶಿಶು
ಇಂದು ಪ್ರಬುದ್ಧ ನಾಯಕ



ಜನನಾಯಕ 'ಮಣ್ಣಿನ ಮಗ' ಎಂದ ತಕ್ಷಣ ನಮ್ಮ ಕಣ್ಮುಂದೆ ಪ್ರತ್ಯಕ್ಷ ಆಗುವ ಮತ್ತು ಅಭಿಮಾನದಿಂದ ಕಿವಿಯಲ್ಲಿ ಗುಂಯ್ ಗುಡುವ ಹೆಸರೆಂದರೆ ಅದು ಹರದನಹಳ್ಳಿ ದೇವೇಗೌಡ ಅರ್ಥಾತ್ ಹೆಚ್.ಡಿ.ದೇವೇಗೌಡ. ಹೇಮಾವತಿ ನದಿಯ ಮಣ್ಣಿನ ಮಡಿಲಲ್ಲಿ ಬೆಳೆದು ರಾಜಕೀಯ ಕ್ಷೇತ್ರದಲ್ಲಿ ದಾಖಲಾರ್ಹ ಚರಿತ್ರೆ ಬರೆದ ಒಕ್ಕಲಿಗ ಕುಟುಂಬವಿದು. ದೇವೇಗೌಡ ರಂತೂ ಕನ್ನಡ ನಾಡು ಮಾತ್ರವಲ್ಲದೆ ದೇಶ ಕಂಡಂತಹ ಮಹಾಸಾಧಕರು. ಕನ್ನಡ ನಾಡಿನ ಮಣ್ಣಿನ ಮಗನೊಬ್ಬ ದೇಶದ ರಾಜಧಾನಿ ದೆಹಲಿಯ ಕೆಂಪು ಕೋಟೆಯ ಮೇಲೆ ರಾಷ್ಟ್ರ ಧ್ವಜ ಹಾರಿಸುವುದೆಂದರೆ ಸಾಮಾನ್ಯ ಸಾಧನೆಯಲ್ಲ. ಅಂಥ ಸಾಧನೆಯನ್ನು ಭಾರತದ ಪ್ರಧಾನಿಯಾಗಿ ಅದೂ ಮೊದಲ ಕನ್ನಡಿಗ ಪ್ರಧಾನಿಯಾಗಿ ಹೆಚ್.ಡಿ. ದೇವೇಗೌಡರು ಮಾಡಿದ್ದು ಇನ್ನೂ ಹಚ್ಚಹಸಿರಾಗಿದೆ. ಅಂದ ಹಾಗೆ ಹಸಿರಿಗೂ ಇವರ ಹೆಸರಿಗೂ ಅವಿನಾಭಾವ ಸಂಬಂಧ. ಇಂತಹ ಕುಟುಂಬದ ಕುಡಿ ಹರದನಹಳ್ಳಿ ದೇವೇಗೌಡ ಕುಮಾರಸ್ವಾಮಿ ಅರ್ಥಾತ್ ಹೆಚ್.ಡಿ. ಕುಮಾರಸ್ವಾಮಿ ಕೂಡ ತಂದೆಗೆ ತಕ್ಕ ಮಗನಾಗಿ ಜನಪರ ಧ್ವನಿಯಾಗಿರುವುದು ಕನ್ನಡನಾಡಿನ ಭಾಗ್ಯವೇ ಸರಿ!

ಕರ್ನಾಟಕದ ರಾಜಕೀಯ ಇತಿಹಾಸದಲ್ಲಿ ಎರಡನೇ ಬಾರಿಗೆ ಮುಖ್ಯಮಂತ್ರಿಯಾದವರಲ್ಲಿ ಎಸ್.ನಿಜಲಿಂಗಪ್ಪ, ಡಿ.ದೇವರಾಜ ಅರಸು, ವೀರೇಂದ್ರ ಪಾಟೀಲ್, ರಾಮಕೃಷ್ಣ ಹೆಗಡೆ, ಹೆಚ್.ಡಿ.ಕುಮಾರಸ್ವಾಮಿ, ಬಿ.ಎಸ್.ಯಡಿಯೂರಪ್ಪ, ಸಿದ್ದರಾಮಯ್ಯ ಪ್ರಮುಖರು. ಆದರೆ ಕುಮಾರಸ್ವಾಮಿ ಅವರಿಗೆ ಪೂರ್ಣಾವಧಿ ಮುಖ್ಯಮಂತ್ರಿಯಾಗಿ ಆಡಳಿತ ನಡೆಸಲು ಯೋಗ್ಯತೆ ಮತ್ತು ಅರ್ಹತೆ ಇದ್ದರೂ ಕೂಡ ಎರಡು ಬಾರಿಯೂ ಅವಧಿ ಮುಗಿಯುವ ಮುನ್ನವೇ ಮುಖ್ಯಮಂತ್ರಿ ಕುರ್ಚಿಯಿಂದ ಕೆಲವೊಂದು ಅನಿವಾರ್ಯ ಕಾರಣ; ಅನಿರೀಕ್ಷಿತ ರಾಜಕೀಯ ಬೆಳವಣಿಗೆಯಿಂದ ಇಳಿಯಬೇಕಾಯಿತು. ಅವರ ಅಧಿಕಾರದ ಅವಧಿಯಲ್ಲಿ ಅದರಲ್ಲೂ ವಿಶೇಷವಾಗಿ ಅವರು ಮೊದಲ ಬಾರಿ ಮುಖ್ಯಮಂತ್ರಿಯಾದಾಗ ಭ್ರಷ್ಟಾಚಾರ ರಹಿತವಾಗಿ ಗ್ರಾಮ ವಾಸ್ತವ್ಯದಂತಹ ಕ್ರಾಂತಿಕಾರಿ ಹೆಜ್ಜೆಗಳಿಂದ ದೇಶಕ್ಕೆ ಮಾದರಿಯಾಗುವಂತಹ ಜನ ಮೆಚ್ಚಿದ ಆಡಳಿತ ನೀಡಿದ್ದರು.

ರಾಜಕೀಯ ಕ್ಷೇತ್ರದ ಜನ ಪರ ನಾಯಕ, ಚಲನಚಿತ್ರ ನಿರ್ಮಾಪಕ, ಚಲನಚಿತ್ರ ವಿತರಕ, ಬಹುಮುಖ ಸಮಾಜ ಸೇವಕ ಹೆಚ್.ಡಿ.ಕುಮಾರಸ್ವಾಮಿ ಅವರು ಜನಿಸಿದ್ದು ಹಾಸನ ಜಿಲ್ಲೆಯ ಹೊಳೆನರಸೀಪುರ ತಾಲೂಕಿನ ಹರದನಹಳ್ಳಿ ಎಂಬ ಪುಟ್ಟ ಗ್ರಾಮದಲ್ಲಿ.ತಂದೆ 'ಮಣ್ಣಿನ ಮಗ' ಎಂದೇ ದೇಶದ ಉದ್ದಗಲಕ್ಕೂ ಕರೆಯಲ್ಪಡುವ ಹೆಚ್.ಡಿ.ದೇವೇಗೌಡ. ತಾಯಿ ಜನಪರ ಕಾಳಜಿಯುಳ್ಳ ಸುಸಂಸ್ಕೃತೆ ಚೆನ್ನಮ್ಮ.ಇವರ ಮೂರನೇ ಪುತ್ರನೇ ಹೆಚ್.ಡಿ.ಕುಮಾರಸ್ವಾಮಿ. ಇವರ ಜನ್ಮ ದಿನಾಂಕ 1959 ಡಿಸೆಂಬರ್ 16. ಹುಟ್ಟಿದೂರು ಹರದನಹಳ್ಳಿಯಲ್ಲೇ ಪ್ರಾಥಮಿಕ ಮತ್ತು ಮಾಧ್ಯಮಿಕ ಶಿಕ್ಷಣ ಮುಗಿಸಿದ ಕುಮಾರಸ್ವಾಮಿ, ಪ್ರೌಢ ಶಿಕ್ಷಣ ಮತ್ತು ಕಾಲೇಜು ವಿದ್ಯಾಭ್ಯಾಸಕ್ಕಾಗಿ ಬೆಂಗಳೂರಿನತ್ತ ಪಯಣಿಸಿದರು. ಅಲ್ಲಿ ಪ್ರತಿಷ್ಠಿತ ವಿಜಯ ಕಾಲೇಜಿನಲ್ಲಿ ಪಿಯುಸಿ ವ್ಯಾಸಂಗ ಮಾಡಿ ಅಷ್ಟೇ ಪ್ರತಿಷ್ಠಿತ ನ್ಯಾಷನಲ್ ಕಾಲೇಜಿನಲ್ಲಿ ಕಲಿತು ಬಿಎಸ್ಸಿ ಪದವಿ ಗಳಿಸಿದರು. ವಿದ್ಯಾರ್ಥಿ ದಿಸೆಯಲ್ಲೇ ಇವರು ನಾಯಕತ್ವ ಗುಣಗಳನ್ನು ಹೊಂದಿದ್ದು ಸಂಘಟನೆ ಮತ್ತು ಸಮಾಜಮುಖಿ ಕಾರ್ಯಗಳನ್ನು ಮಾಡುತ್ತಿದ್ದರು. ಹಾಗಾಗಿ ಇವರು ಶಾಲಾ-ಕಾಲೇಜುಗಳಲ್ಲಿ ಹಾಗೂ ಇಲ್ಲಿಂದ ಹೊರತಾಗಿಯೂ ಎಲ್ಲರ ಮೆಚ್ಚುಗೆ ಗಳಿಸಿದ್ದರು.

ಬಿಎಸ್ಸಿ ಪದವಿ ಮುಗಿಸಿದ ಇವರು ಇನ್ನು ಮುಂದಕ್ಕೆ ವಿದ್ಯಾಭ್ಯಾಸವನ್ನು ಮುಂದುವರಿಸಲಿಲ್ಲ. ರಾಜಕೀಯ ಕುಟುಂಬದ ಕುಡಿಯಾದರೂ ಎಂದೂ ರಾಜಕಾರಣಿಯಾಗಬೇಕೆಂದು ಕನಸು ಮನಸಿನಲ್ಲೂ ಆಸೆ ಪಟ್ಟವರಲ್ಲ.ತಂದೆಯ ರಾಜಕಾರಣವೂ ಇವರನ್ನು ಆಕರ್ಷಿಸಲಿಲ್ಲ. ಅದೇಕೋ ಏನೋ ಕೆಎಎಸ್ ಅಧಿಕಾರಿಯಾದ ಅಣ್ಣ ಬಾಲಕೃಷ್ಣೇಗೌಡರ ಸರಕಾರಿ ನೌಕರಿಯೂ ಇವರಿಗೆ ಸರಿ ಎನಿಸಲಿಲ್ಲ. ಮತ್ತೊಬ್ಬ ಅಣ್ಣ ರೇವಣ್ಣರ ರಾಜಕೀಯ ಪ್ರವೇಶವೂ ಇವರನ್ನು ಸ್ವಲ್ಪವೂ ಪ್ರೇರೇಪಿಸಲಿಲ್ಲ.ಭಿನ್ನ ಚಿಂತನೆ, ವಿಭಿನ್ನ ಆಲೋಚನೆಗಳುಳ್ಳ ಇವರು ಏನಾದರೂ ಅದ್ಭುತವಾದುದನ್ನು,

> **ಧರಂಸಿಂಗ್ ರಾಜ್ಯದ ಮುಖ್ಯಮಂತ್ರಿಗಳಾಗಿದ್ದಾಗ 2006ರಲ್ಲಿ ನಡೆದ ರಾಜಕೀಯದ ಕ್ಷಿಪ್ರ ಬೆಳವಣಿಗೆಯ ಸಂದರ್ಭವದು. ಮೊದಲ ಸಲ ಶಾಸಕರಾಗಿದ್ದ ಹೆಚ್.ಡಿ.ಕುಮಾರಸ್ವಾಮಿ ಅವರು ಆಗ ರಾಜಕೀಯ ರಂಗದ ಜೆಡಿಎಸ್ ಪಕ್ಷದ ಯುವ ನಾಯಕರಾಗಿ ಹೊರಹೊಮ್ಮಿದ್ದರು. ಕಾಂಗ್ರೆಸ್ ಮತ್ತು ಜೆಡಿಎಸ್ ಸಮ್ಮಿಶ್ರ ಸರ್ಕಾರದಲ್ಲಿ ಎನ್.ಧರಂಸಿಂಗ್ ಮುಖ್ಯಮಂತ್ರಿಗಳಾಗಿದ್ದ ವೇಳೆ ಉಪ ಮುಖ್ಯ ಮಂತ್ರಿಯಾಗಿದ್ದ ಸಿದ್ದರಾಮಯ್ಯನವರೊಂದಿಗಿನ ಭಿನ್ನಾಭಿಪ್ರಾಯಗಳು ತಾರಕಕ್ಕೇರಿದ್ದಾಗ ಸಿಡಿದೆದ್ದ ಕುಮಾರಸ್ವಾಮಿ, ತಮ್ಮ ತಂದೆ ಹೆಚ್. ಡಿ. ದೇವೇಗೌಡರ ಮಾತನ್ನೂ ಮೀರಿ ತಮ್ಮ ರಾಜಕೀಯ ಚಾಣಾಕ್ಷತನದಿಂದ ತಮ್ಮ ಜೆಡಿಎಸ್ ಪಕ್ಷದ ಶಾಸಕರೊಡಗೂಡಿ ಬಿಜೆಪಿಯೊಂದಿಗೆ ಮೈತ್ರಿ ಮಾಡಿ ಕೊಂಡು 2006ರ ಫೆಬ್ರವರಿ 3ರರಂದು ಬಿಜೆಪಿ ಜೆಡಿಎಸ್ ಸಮ್ಮಿಶ್ರ ಸರ್ಕಾರ ರಚಿಸಿ ತಾವೇ ಮುಖ್ಯಮಂತ್ರಿಯಾದರು. ಅಕ್ಷರಶಃ ಬಿಸಿ ರಕ್ತದ ಯುವಕ ಕುಮಾರಸ್ವಾಮಿ ಕರ್ನಾಟಕ ಸರ್ಕಾರದ ಮುಖ್ಯಮಂತ್ರಿಯಾಗಿ ಇತಿಹಾಸ ಬರೆದರು.**

ಜನೋಪಯೋಗಿ ಆದದ್ದನ್ನು ಸಾಧಿಸಬೇಕೆಂಬ ಹಂಬಲ ಉಳ್ಳವರಾಗಿದ್ದರು. ಹಾಗಾಗಿ ಸಿನಿಮಾಲೋಕದಂತಹ ಬಣ್ಣದ ಲೋಕದತ್ತ ಕುಮಾರಸ್ವಾಮಿ ಅವರು ಆಕರ್ಷಿತರಾದರು.

ಹಾಗಾಗಿ ಅವರು ಮೊದಲಿಗೆ ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ತಮ್ಮ ತಾಯಿಯ ಹೆಸರಿನಲ್ಲಿ ಚೆನ್ನಾಂಬಿಕಾ ಫಿಲಂಸ್ ಎಂಬ ಚಲನಚಿತ್ರ ವಿತರಣಾ ಸಂಸ್ಥೆಯನ್ನು ಸ್ಥಾಪಿಸಿದರು. ಪ್ರಸಿದ್ಧ ಸದಭಿರುಚಿ ಚಲನ ಚಿತ್ರಗಳನ್ನು ವಿತರಣೆ ಮಾಡ ಮಾಡುತ್ತಲೇ ತಮ್ಮ ಚೆನ್ನಾಂಬಿಕಾ ಫಿಲಂಸ್ ಬ್ಯಾನರ್‌ನಲ್ಲಿ ಅನೇಕ ಚಲನ ಚಿತ್ರಗಳನ್ನು ನಿರ್ಮಿಸಿದರು. ಇವರು ಚಿತ್ರ ನಿರ್ಮಾಪಕರಾಗಿ ತೆರೆಗೆ ತಂದ ಪ್ರಮುಖ ಚಿತ್ರ ಗಳೆಂದರೆ ಸೂರ್ಯವಂಶ, ಪ್ರೇಮೋತ್ಸವ, ಗಲಾಟೆ ಅಳಿಯಂದ್ರು, ಜಿತೇಂದ್ರ, ಚಂದ್ರ ಚಕೋರಿ, ತಮ್ಮ ಪುತ್ರ ನಿಖಿಲ್ ಕುಮಾರಸ್ವಾಮಿ ಅವರನ್ನೇ ನಾಯಕ ನಟನನ್ನಾಗಿ ಮಾಡಿ ಜಾಗ್ವಾರ್, ಸೀತಾರಾಮ ಕಲ್ಯಾಣ ಮುಂತಾದ ಕನ್ನಡ ಚಲನಚಿತ್ರಗಳನ್ನು ನಿರ್ಮಿಸಿ ಕನ್ನಡ ಚಿತ್ರಲೋಕದ ಗಮನ ಸೆಳೆದರು. ಬಹಳಷ್ಟು ಕಲಾವಿದರಿಗೆ, ತಂತ್ರಜ್ಞರಿಗೆ ಹಾಗೂ ನಿರ್ದೇಶಕರಿಗೆ ಆಶ್ರಯಧಾತರಾದರು. ಅನ್ನದಾತರೂ ಆದರು. ಹೀಗೆ ಸಿನಿಮಾ ಲೋಕ ಸೇರಿದಂತೆ ಸಾಹಿತ್ಯ-ಸಂಗೀತ, ನಾಟಕ-ನೃತ್ಯ ಮುಂತಾದ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ತಮ್ಮನ್ನು ತೊಡಗಿಸಿಕೊಂಡು ನಾಡಿನಲ್ಲಿ ಗುರುತರವಾದ ಸಮಾಜಮುಖಿ ಕಾರ್ಯಗಳನ್ನು ಮಾಡತೊಡಗಿದರು. ತಾವು ಕಂಡುಕೊಂಡಿದ್ದ, ತಮಗೆ ಸರಿಯೆನಿಸಿದ್ದ ಈ ಹಾದಿಯಲ್ಲಿ ಅವರು ನಡೆಯ ಬಯಸಿದರೂ ಕೂಡ ಬೇರೊಂದು ಲೋಕ ಅವರಿಗರಿವಿಲ್ಲದಂತೆಯೇ ಅವರನ್ನು ಸೆಳೆಯುತ್ತಿತ್ತು.ಈ ನಡುವೆ 1986 ಮಾರ್ಚ್ 13ರಂದು ಸುಸಂಸ್ಕೃತ ಮನೆತನದ ಅನಿತಾ ಅವರನ್ನು ವಿವಾಹವಾಗಿ ನಿಖಿಲ್ ಗೌಡ



ಬನ್ನೂರು ಕೆ. ರಾಜು
ಸಾಹಿತಿ, ಪತ್ರಕರ್ತ
ಮೊ: 94815 33167

ಎಂಬ ಓರ್ವ ಪುತ್ರನ ತಂದೆ ಆದರು.

1994ರಲ್ಲಿ ತಂದೆ ಹೆಚ್.ಡಿ.ದೇವೇಗೌಡರು ಮುಖ್ಯಮಂತ್ರಿ ಆಗಿದ್ದಾಗಲೂ ಮನೆ ತುಂಬ ಜನ ತುಂಬಿ ತುಳುಕುತ್ತಾ ರಾಜಕಾರಣದ ವೈಭೋಗವೇ ಮೆರೆಯುತ್ತಿದ್ದರೂ ಅತ್ತ ಇವರು ವಾಲಿರಲಿಲ್ಲ. ಆದರೆ ರಕ್ತಗತವಾಗಿ ಇವರಲ್ಲಿದ್ದ ರಾಜಕಾರಣ ಇವರನ್ನು ಮಾತ್ರ ಬಿಡಲಿಲ್ಲ. ತಂದೆಯ ಜೊತೆಯಲ್ಲಿದ್ದ ಹಿರಿಯರು, ಜೊತೆಯಲ್ಲಿದ್ದ ಹಿತೈಷಿಗಳು-ಸ್ನೇಹಿತರು, ಬಂಧು-ಬಳಗ ಇವರೆಲ್ಲರ ಒತ್ತಾಯದ ಮೇರೆಗೆ 1996ರಲ್ಲಿ ಕರ್ನಾಟಕದ ಬಹುದೊಡ್ಡ ಕ್ಷೇತ್ರವೆಂದು ಹೆಸರಾಗಿದ್ದ ಕನಕಪುರ ಲೋಕಸಭಾ ಕ್ಷೇತ್ರದ ಅಭ್ಯರ್ಥಿಯಾಗಿ ಸ್ಪರ್ಧಿಸಿದರು. ಖ್ಯಾತ ಚಲನಚಿತ್ರ ನಟ ರೆಬಲ್ ಸ್ಟಾರ್ ಅಂಬರೀಶ್ ಅವರಂತಹ ಘಟಾನುಘಟಿ ಪ್ರಸಿದ್ಧ ವ್ಯಕ್ತಿಗಳು ಇವರ ಹಿಂದೆ ನಿಂತು ಪ್ರಚಾರ ಕೈಗೊಂಡಿದ್ದರು. ಅವರೆಲ್ಲರ ಆಶಯದಂತೆ ಇವರು ಗೆದ್ದು ಸಂಸದರಾಗುವ ಮೂಲಕ ರಾಜಕಾರಣಿ ಆದರು. ಆಗ ಅವರು ತಾನು ಪರಿಸ್ಥಿತಿಯ ಶಿಶು ಎಂದಿದ್ದರು. ಆದರೂ ಅವರ ಇಷ್ಟದ ಸಿನಿಮಾ ಮತ್ತು ಸಾಂಸ್ಕೃತಿಕ ಲೋಕವನ್ನು ಅವರು ಬಿಡಲಿಲ್ಲ. ಇವರು ಲೋಕಸಭಾ ಸದಸ್ಯರಾಗುತ್ತಿದ್ದಂತೆಯೇ ತಂದೆ ದೇವೇಗೌಡರು ದೇಶದ ಪ್ರಧಾನಮಂತ್ರಿಯಾದರು. ನೀರಿಗೆ ಬಿದ್ದ ಮೇಲೆ ಬಿಸಿಲಾದರೇನು, ಮಳೆಯಾದರೇನು, ಚಳಿಯಾದರೇನು, ಎಂಬಂತೆ ಕರ್ನಾಟಕದ ರಾಜಕಾರಣದ ಜೊತೆಗೆ ತಂದೆಯೊಡನೆ ದೇಶದ ರಾಜಕೀಯವನ್ನು ಚೆನ್ನಾಗಿ ಕರಗತ ಮಾಡಿಕೊಂಡ

ಇವರು 1998ರಲ್ಲಿ ಮತ್ತೆ ಎದುರಾದ ಕನಕಪುರ ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸಿ ಸೋಲುಂಡರು. ಆದರೆ ಇದರಿಂದ ವಿಚಲಿತರಾಗದೆ ಮತ್ತೆ 1999ರಲ್ಲಿ ಸಾತನೂರು ವಿಧಾನಸಭಾ ಚುನಾವಣೆಯಲ್ಲಿ ನಿಂತು ಡಿ.ಕೆ.ಶಿವಕುಮಾರ್ ಎದುರು ಸೋತರು. ಆದರೂ ಎದೆ ಗುಂದಲಿಲ್ಲ. ರಾಜಕೀಯವೇ ಹಾಗೆ. ಸೋಲೇ ಗೆಲುವಿನ ಮೆಟ್ಟಿಲು ಎಂದು ಭಾವಿಸಿ ಇಷ್ಟೊತ್ತಿಗೆ ಪಳಗಿದ ರಾಜಕಾರಣಿಯಾಗಿದ್ದ ಇವರು 2004 ರಲ್ಲಿ ರಾಮನಗರ ವಿಧಾನಸಭಾ ಕ್ಷೇತ್ರದಿಂದ ಸ್ಪರ್ಧಿಸಿ ಅಭೂತಪೂರ್ವ ಯಶಸ್ಸಿನಿಂದ ಪ್ರಥಮ ಬಾರಿಗೆ ಯುವ ಶಾಸಕರಾಗಿ ವಿಧಾನಸಭೆಯನ್ನು ಪ್ರವೇಶ ಮಾಡಿದರು.


ಧರಂಸಿಂಗ್ ರಾಜ್ಯದ ಮುಖ್ಯಮಂತ್ರಿಗಳಾಗಿದ್ದಾಗ 2006ರಲ್ಲಿ ನಡೆದ ರಾಜಕೀಯ ಕ್ಷಿಪ್ರ ಬೆಳವಣಿಗೆಯ ಸಂದರ್ಭವದು. ಮೊದಲ ಸಲ ಶಾಸಕರಾಗಿದ್ದ ಹೆಚ್.ಡಿ.ಕುಮಾರಸ್ವಾಮಿ ಅವರು ಆಗ ರಾಜಕೀಯ ರಂಗದ ಜೆಡಿಎಸ್ ಪಕ್ಷದ ಯುವ ನಾಯಕರಾಗಿ ಹೊರಹೊಮ್ಮಿದ್ದರು. ಕಾಂಗ್ರೆಸ್ ಮತ್ತು ಜೆಡಿಎಸ್ ಸಮ್ಮಿಶ್ರ ಸರ್ಕಾರದಲ್ಲಿ ಎನ್. ಧರಂಸಿಂಗ್ ಮುಖ್ಯಮಂತ್ರಿಗಳಾಗಿದ್ದ ವೇಳೆ ಉಪ ಮುಖ್ಯಮಂತ್ರಿಯಾಗಿದ್ದ ಸಿದ್ದರಾಮಯ್ಯನವರೊಂದಿಗಿನ ಭಿನ್ನಾಭಿಪ್ರಾಯಗಳು ತಾರಕಕ್ಕೇರಿ ದ್ದಾಗ ಸಿಡಿದೆದ್ದ ಕುಮಾರಸ್ವಾಮಿ, ತಮ್ಮ ತಂದೆ ಹೆಚ್.ಡಿ.ದೇವೇಗೌಡರ ಮಾತನ್ನೂ ಮೀರಿ ತಮ್ಮ ರಾಜಕೀಯ ಚಾಣಾಕ್ಷತನದಿಂದ ತಮ್ಮ ಜೆಡಿಎಸ್ ಪಕ್ಷದ ಶಾಸಕರೊಡಗೂಡಿ ಬಿಜೆಪಿಯೊಂದಿಗೆ ಮೈತ್ರಿ ಮಾಡಿಕೊಂಡು 2006ರ ಫೆಬ್ರವರಿ 3ರರಂದು ಬಿಜೆಪಿ ಜೆಡಿಎಸ್ ಸಮ್ಮಿಶ್ರ ಸರ್ಕಾರ ರಚಿಸಿ ತಾವೇ ಮುಖ್ಯಮಂತ್ರಿ ಯಾದರು. ಅಕ್ಷರಶಃ ಬಿಸಿ ರಕ್ತದ ಯುವಕ ಕುಮಾರಸ್ವಾಮಿ ಕರ್ನಾಟಕ ಸರ್ಕಾರದ ಮುಖ್ಯಮಂತ್ರಿಯಾಗಿ ಇತಿಹಾಸ ಬರೆದರು. ಆಗ ಇವರು ತಾನು **ಪರಿಸ್ಥಿತಿಯ ಶಿಶು** ಎಂದಿದ್ದರು. ಇನ್ನು ಮುಂದೆ ನಡೆದದ್ದೆಲ್ಲವೂ ಇತಿಹಾಸ.


2006ರ ಫೆಬ್ರವರಿ 3ರಿಂದ 2008 ಅಕ್ಟೋಬರ್ 8ರವರೆಗೆ 610 ದಿನಗಳ ಕಾಲ ಮುಖ್ಯಮಂತ್ರಿಗಳಾಗಿದ್ದ ಕುಮಾರಸ್ವಾಮಿ, ಅಧಿಕಾರ ಸಿಕ್ಕ ಅಲ್ಪ ಅವಧಿಯಲ್ಲೇ ಹಲವಾರು ಜನಪರ ಕಾರ್ಯ ಗಳನ್ನು ಮಾಡಿ ಅನೇಕ ಜನೋಪಯೋಗಿ ಯೋಜನೆಗಳನ್ನು ನಾಡಿಗೆ ಕೊಟ್ಟು ಜನರ ಗಮನ ಸೆಳೆದಿದ್ದರು. ಹೆಂಡ ಸಾರಾಯಿ ನಿಷೇಧ, ಲಾಟರಿ ನಿಷೇಧ, ಮಹಿಳಾ ಮೀನುಗಾರರಿಗೆ ಶೇಕಡಾ 4 ರಷ್ಟು ಬಡ್ಡಿ ದರದಲ್ಲಿ ಸಾಲ, ಕೃಷಿ ಕ್ಷೇತ್ರಕ್ಕೆ ಏಳು ಸಾವಿರ ಕೋಟಿ ರೂಪಾಯಿಗಳ ಅನುದಾನ, ರೈತರ ಸಾಲ ಮನ್ನಾ, ಯುವಜನರಿಗೆ ಕೌಶಲ್ಯ ಅಭಿವೃದ್ಧಿ, ಗ್ರಾಮ ವಾಸ್ತವ್ಯ, ಸುವರ್ಣ ಗ್ರಾಮೋದಯ ಯೋಜನೆ, ಅಕ್ರಮ ಸರಕಾರಿ ಭೂ ಒತ್ತುವರಿ ತಡೆಯಲು ಸಮಿತಿ ಮತ್ತು ಸೂಕ್ತ ಕ್ರಮ, ಉತ್ತರ ಕರ್ನಾಟಕದಲ್ಲಿ ಸಂಚಾರಿ ಹೈಕೋರ್ಟ್ ಪೀಠ ಸ್ಥಾಪನೆ, ವಿದ್ಯಾರ್ಥಿಗಳಿಗೆ ಸೈಕಲ್ ವಿತರಣೆ, ಆಸರೆ, ಅಮೃತ, ಬೆಳಗಾವಿಯಲ್ಲಿ ಸುವರ್ಣಸೌಧ ನಿರ್ಮಾಣಕ್ಕೆ ಅಡಿಗಲ್ಲು ಇನ್ನೂ ಮುಂತಾದ ಅದು ವರೆಗೆ ಕರ್ನಾಟಕ ಕಂಡರಿಯದಂತಹ ಅನೇಕ ಅದ್ಭುತ ಅಮೃತ ಯೋಜನೆ ಗಳನ್ನು ರೂಪಿಸಿ ಕರ್ನಾಟಕದ ಸಮಗ್ರ ಅಭಿವೃದ್ಧಿಗೆ ಶ್ರಮಿಸಿದರು. ಹಾಗಾಗಿ ನಾಡು ಮೆಚ್ಚಿದ ಮುಖ್ಯಮಂತ್ರಿಯಾಗಿ ಜನಮನ್ನಣೆ ಗಳಿಸಿದರು. ನಂತರದ ದಿನಗಳಲ್ಲಿ ಬದಲಾದ ರಾಜಕೀಯ ಸ್ಥಿತ್ಯಂತರ ಪರಿಸ್ಥಿತಿಯಿಂದಾಗಿ ಯಡಿ ಯೂರಪ್ಪ ನವರಿಗೆ ಮುಖ್ಯಮಂತ್ರಿ ಸ್ಥಾನವನ್ನು ಬಿಟ್ಟು ಕೊಡುವ ವಿಚಾರದಲ್ಲಿ ಉಂಟಾದ ಭಿನ್ನಾಭಿಪ್ರಾಯ ಹಾಗೂ ಇನ್ನಿತರೆ ರಾಜಕೀಯ ವಿಷಯಗಳಿಂದಾಗಿ ಬಿಜೆಪಿ ಪಕ್ಷ ಜೆಡಿಎಸ್ ಪಕ್ಷಕ್ಕೆ ಅರ್ಥಾತ್ ಕುಮಾರ ಸ್ವಾಮಿಗೆ ನೀಡಿದ್ದ ಬೆಂಬಲ ಹಿಂತೆಗೆದ ಕಾರಣ 2007ರ ನವೆಂಬರ್ 9ರಂದು ಮುಖ್ಯಮಂತ್ರಿ ಸ್ಥಾನವನ್ನು ಕುಮಾರ ಸ್ವಾಮಿಯವರು ಕಳೆದುಕೊಂಡರು.

ಅವರು ಮುಖ್ಯಮಂತ್ರಿ ಸ್ಥಾನವನ್ನು ಕಳೆದುಕೊಂಡರೂ, ತಮ್ಮ ಅಭೂತಪೂರ್ವ ಯಶಸ್ವೀ ಸಾಧನೆಗಳಿಂದ, ಕ್ರಾಂತಿಕಾರಿ ಯೋಜನೆಗಳಿಂದ ಮತ್ತೆ 2008ರಲ್ಲಿ ನಡೆದ ವಿಧಾನಸಭಾ ಚುನಾವಣೆಯಲ್ಲಿ ರಾಮನಗರ ವಿಧಾನಸಭಾ ಕ್ಷೇತ್ರದಿಂದ ಗೆದ್ದು ಬಂದರು. ಮತ್ತೆ 2013ರಲ್ಲಿ ಇಲ್ಲಿಂದಲೇ ಮರು ಆಯ್ಕೆ ಆದರು. 2018ರಲ್ಲಿ ರಾಮನಗರ ಮತ್ತು ಚನ್ನಪಟ್ಟಣ ಎರಡೂ ವಿಧಾನಸಭಾ ಕ್ಷೇತ್ರಗಳಲ್ಲಿ ಸ್ಪರ್ಧಿಸಿ ಉಭಯ ಕ್ಷೇತ್ರಗಳಲ್ಲೂ ಗೆದ್ದರು. 2018ರ ವಿಧಾನಸಭಾ ಚುನಾವಣೆಯಲ್ಲಿ ಯಾವ ಪಕ್ಷಗಳಿಗೂ ಬಹುಮತ ಬಾರದ ಕಾರಣ ಕುಮಾರ ಸ್ವಾಮಿಯವರೇ ಮುಖ್ಯಮಂತ್ರಿ ಎಂದು ಸ್ವತಃ ಕಾಂಗ್ರೆಸ್ ಪಕ್ಷವೇ ಘೋಷಿಸಿ ಬೆಂಬಲ ಸೂಚಿಸಿದ ಹಿನ್ನೆಲೆಯಲ್ಲಿ ಜೆಡಿಎಸ್ ಮತ್ತು ಕಾಂಗ್ರೆಸ್‌ನ ಸಮ್ಮಿಶ್ರ ಸರ್ಕಾರದಲ್ಲಿ ಎರಡನೇ ಬಾರಿಗೆ ಕುಮಾರ ಸ್ವಾಮಿ ಅವರು ಕರ್ನಾಟಕ ರಾಜ್ಯದ 25ನೇ ಮುಖ್ಯಮಂತ್ರಿಯಾಗಿ ಮೇ 23 ರಂದು ಸಾಯಂಕಾಲ 4 ಗಂಟೆ 32 ನಿಮಿಷದ ಸುಮಾರಿಗೆ ದೇವರು ಮತ್ತು ಕನ್ನಡ ಜನತೆಯ ಹೆಸರಿನಲ್ಲಿ ಪ್ರಮಾಣವಚನ ಸ್ವೀಕರಿಸಿ ಒಂದು ರೀತಿ ದಾಖಲೆ ಬರೆದರು.

ಆಗಲೂ ಕೂಡ ಅವರು ತಾವು **ಪರಿಸ್ಥಿತಿಯ ಕೂಸು** ಎಂದೇ ಹೇಳಿದ್ದರು. ಮುಂದಿನದ್ದೆಲ್ಲ ಇತಿಹಾಸ. ನಾಡಿನ 25ನೆಯ ಮುಖ್ಯಮಂತ್ರಿಯಾಗಿ ಅನ್ನದಾತರ ಸಾಲಮನ್ನಾ ಸೇರಿದಂತೆ ಹತ್ತು ಹಲವು ಯೋಜನೆಗಳನ್ನು ಜಾರಿಗೊಳಿಸಿ ನಾಡನ್ನು ಅಭಿವೃದ್ಧಿಯ ಪಥದಲ್ಲಿ ಕುಮಾರಸ್ವಾಮಿ ಕೊಂಡೊಯ್ದು ಅಭಿ ವೃದ್ಧಿಯ ಹರಿಕಾರ ಎನಿಸಿದರೂ ಕೆಲವರ ಚಿತಾವಣೆಯಿಂದಾಗಿ ಕಾಂಗ್ರೆಸ್ ಮತ್ತು ಜೆಡಿಎಸ್ ನ 17ಶಾಸಕರು ಬಿಜೆಪಿ ಪಕ್ಷಕ್ಕೆ ಸೇರಿದ ಹಿನ್ನೆಲೆಯಲ್ಲಿ 2019ರ ಜುಲೈ 23ರಂದು ಮುಖ್ಯಮಂತ್ರಿ ಸ್ಥಾನದಿಂದ ಕುಮಾರಸ್ವಾಮಿ ನಿರ್ಗಮಿಸಿದರು.

ಅದು ಯಾವುದೇ ಕ್ಷೇತ್ರ ಇರಬಹುದು ಅಲ್ಲಿ ಬದಲಾವಣೆ ಸಹಜ.ಅದರಲ್ಲೂ ವಿಶೇಷವಾಗಿ ರಾಜಕೀಯ ಕ್ಷೇತ್ರವೆಂದರೆ ಬದಲಾವಣೆ ಅನ್ನುವುದು ಅನಿವಾರ್ಯ ಹಾಗಾಗಿ ಅದು ನಿರಂತರವಾಗಿ ನಡೆಯುತ್ತಲೇ ಇರುತ್ತದೆ. ಹೀಗೆ ಬದಲಾದ ರಾಜಕೀಯ ಸಂದರ್ಭದಲ್ಲಿ ಪ್ರಸ್ತುತ ಜೆಡಿಎಸ್ ಪಕ್ಷದ ರಾಜ್ಯಾಧ್ಯಕ್ಷರಾಗಿದ್ದ ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ ಅವರು ಬಿಜೆಪಿ ಪಕ್ಷದ ಜೊತೆ ಮೈತ್ರಿ ಮಾಡಿ ಕೊಂಡು ಲೋಕಸಭಾ ಚುನಾವಣೆಯನ್ನು ಎದುರಿಸಿದರು. ಮಂಡ್ಯ ಲೋಕಭಾ ಕ್ಷೇತ್ರದಲ್ಲಿ ಸ್ವತಃ ತಾವೇ ಅಭ್ಯರ್ಥಿಯಾಗಿ ಸ್ಪರ್ಧಿಸಿ 8,51, 881ಮತ ಗಳನ್ನು ಪಡೆದು 2,84,620 ಮತಗಳ ದಾಖಲಾರ್ಹ ಅಂತರದ ಗೆಲುವು ಗಳಿಸಿದರು. ಮೂರನೇ ಬಾರಿಗೆ ಲೋಕಸಭೆ ಪ್ರವೇಶಿಸಿರುವ ಕುಮಾರ ಸ್ವಾಮಿ ನರೇಂದ್ರ ಮೋದಿಯವರ ಸಂಪುಟದಲ್ಲಿ ಕೇಂದ್ರ ಸಚಿವ ಸ್ಥಾನ ಪಡೆದಿದ್ದಾರೆ. ನಿಜಕ್ಕೂ ಇದು ಕನ್ನಡಿಗರಾದ ನಮಗೆ ಹೆಮ್ಮೆಯ ವಿಷಯ. ಹೀಗೆಯೇ ಇವರು ಅಭಿವೃದ್ಧಿಯ ಪಥದಲ್ಲಿ ರಾಜಕೀಯದ ಹೆದ್ದಾರಿಯಲ್ಲಿ ಸಾಗಿ ಮುಂದೊಂದು ದಿನ ತಮ್ಮ ತಂದೆಯಂತೆಯೇ ದೇಶದ ಅಚ್ಚರಿ ಪ್ರಧಾನಿ ಪ್ರಧಾನಿಯಾಗಬಹುದು.





ವಾರಭವಿಷ್ಯ

16.6.2024 ರಿಂದ 22.6.2024

ಈ ವಾರದಲ್ಲಿ ಗ್ರಹಗಳ ರಾಶಿ ಸಂಚಾರ:- ರವಿ-ಮಿಥುನ, ಚಂದ್ರ-ತುಲಾ, ವೃಶ್ಚಿಕ, ಧನುಸ್ಸು, ಮಕರ, ಕುಜ-ವೃಷಭ, ಬುಧ-ಕಟಕ, ಗುರು-ವೃಷಭ, ಶುಕ್ರ-ಮಿಥುನ, ಶನಿ-ಕುಂಭ, ರಾಹು-ಮೀನ ಮತ್ತು ಕೇತು-ಕನ್ಯಾ.



ವಿ.ಕೇಶವಮೂರ್ತಿ
ಜ್ಯೋತಿಷ್ಯ ವಿದ್ವಾಂಸರು, 'ಭಾವಸಾರ ರತ್ನ'
'ಚೈತನ್ಯಶ್ರೀ ಪ್ರಶಸ್ತಿ ಪುರಸ್ಕೃತರು'
ಕಲ್ಪದ್ರುಮ ಜ್ಯೋತಿಷ್ಯ ಅಧ್ಯಯನ ಕೇಂದ್ರ
ವಿಳಾಸ: 533, 6ನೇ ಕ್ರಾಸ್, ಬೋಗಾದಿ ಉತ್ತರ,
೧ ಹಂತ, ಮೈಸೂರು ನಿರ್ಮಿತಿ ಕೇಂದ್ರ ಹತ್ತಿರ, ಮೈಸೂರು.
ಮೊ.9740973224, 9739548720

ಮೇಷ (ಚು.ಚೆ.ಲ.ಲಿ.ಲು.ಲೆ.ಲೋ.ಅ)
ಈ ವಾರದಲ್ಲಿ ಹೆಚ್ಚಿನ ಶುಭ ಫಲಗಳನ್ನು ನಿರೀಕ್ಷಿಸಬಹುದು. ವಿದೇಶಿ ವ್ಯಾಪಾರೋದ್ಯಮದಲ್ಲಿ ಭಾಗ್ಯಲಕ್ಷ್ಮೀ ನಿಮ್ಮನ್ನೊಲಿಯುವಳು. ಗುತ್ತಿಗೆದಾರರಿಗೆ ಉತ್ತಮ ಲಾಭ ತರುವ ಯೋಜನೆಗಳು ದೊರಕಲಿದೆ. ಪಿತ್ರಾರ್ಜಿತ ಆಸ್ತಿ ಹಂಚಿಕೆಯಲ್ಲಿ ಉಂಟಾಗಿದ್ದ ತಕರಾರುಗಳು ನಿವಾರಣೆ ಆಗುವುದು. ನಿಮ್ಮ ಅಹಂಕಾರದಿಂದಾಗಿ ಮಿತ್ರರು ಶತ್ರುಗಳಾಗುವ ಸಂಭವ ಇರುವುದು.
- ಶ್ರೀ ಗಣೇಶ ಪ್ರಾರ್ಥನೆ. ಶುಭ ಸಂಖ್ಯೆ-5

ವೃಷಭ (ಇ.ಉ.ಎ.ಒ.ವ.ವಿ.ವು.ವೆ.ವೊ)
ವಾರದಾರಂಭಕ್ಕೆ ಅಷ್ಟಿಷ್ಟು ಹಣ ಸಂಪಾದನೆ ಆದರೂ ಜೀವನ ಸುಖಗಳನ್ನು ಅನುಭವಿಸಲಾರಿರಿ. ಬಾಳ ಸಂಗಾತಿ ಹಾಗೂ ಮಕ್ಕಳ ಬಗ್ಗೆ ಚಿಂತಿತರಾಗಿರುವಿರಿ. ನಿಮ್ಮ ರಹಸ್ಯವನ್ನು ಇತರರು ಅರಿತು ತೊಂದರೆಗೀಡು ಮಾಡುವರು. ವಾರಮಧ್ಯಾನಂತರ ದೂರದೃಷ್ಟಿಯೊಂದಿಗೆ ನಡೆದು ಹಾಗೂ ಸ್ನೇಹಪರ ವರ್ತನೆಯಿಂದ ನಿಮ್ಮ ವ್ಯಾಕುಲತೆಗಳು ದೂರವಾಗುವುದು. ತಪ್ಪು-ಆಹಾರ ಸೇವನೆಯಿಂದ ಆರೋಗ್ಯ ಕೆಡಬಹುದು.
- ಶ್ರೀ ಚಾಮುಂಡೇಶ್ವರಿ ದರ್ಶನ. ಶುಭ ಸಂಖ್ಯೆ-8

ಮಿಥುನ (ಕ.ಕಿ.ಕು.ಘ.ಙ.ಛ.ಕೆ.ಕೊ.ಹ)
ನಿಮ್ಮ ಸುತ್ತಮುತ್ತ ನಡೆಯುವ ಪ್ರಸಂಗಗಳು ನಿಮ್ಮ ಮನಃಶಾಂತಿಯನ್ನು ಹಾಳು ಮಾಡಬಹುದು. ಗುರು ವ್ಯಯಸ್ಥಾನದಲ್ಲಿ ಇರುವ ಕಾರಣ ಖರ್ಚುಗಳು ಹೆಚ್ಚಾಗಿ ಸಾಲ ಮಾಡಬೇಕಾದ ಪರಿಸ್ಥಿತಿ ಬರಬಹುದು. ರಾಹು ದಶಮ ಸ್ಥಾನದಲ್ಲಿರುವ ಕಾರಣ ಶ್ರಮಕ್ಕೆ ಪ್ರತಿಫಲ ದೊರೆಯುವಲ್ಲಿ ವಿಳಂಬವಾದೀತು. ಗಣಕಯಂತ್ರ ವ್ಯಾಪಾರಿಗಳಿಗೆ ದೊಡ್ಡ ಮೊತ್ತದ ಆರ್ಡರ್ ದೊರೆಯಲಿದೆ.
- ಶ್ರೀ ರಾಮ ರಕ್ಷಾ ಸ್ತೋತ್ರ ಪಠಿಸಿ. ಶುಭ ಸಂಖ್ಯೆ-2

ಕಟಕ (ಹೊ.ಹು.ಹೆ.ಹೊ.ಡ.ಡಿ.ಡು)
ಮನೆಯಲ್ಲಿ ನಡೆಯಬೇಕಾದ ಮಂಗಳ ಕಾರ್ಯದ ಕುರಿತು ಹಿರಿಯರೊಂದಿಗೆ ಸಮಾಲೋಚನೆಗಳು ನಡೆಯಲಿದೆ. ಗುರು ಲಾಭ ಸ್ಥಾನದಲ್ಲಿ ಸಂಚರಿಸುತ್ತಿದ್ದು ಶೈಕ್ಷಣಿಕ ಮತ್ತು ಇತರ ಚಟುವಟಿಕೆಗಳಲ್ಲಿ ಕೀರ್ತಿಯನ್ನು ಗಳಿಸುವಿರಿ. ನಿಮ್ಮ ಕಠಿಣ ಪರಿಶ್ರಮಕ್ಕೆ ಸಿಹಿ ಫಲ ದೊರಕುವುದು. ನಿಮ್ಮ ವೈಯಕ್ತಿಕ ಅಭಿವೃದ್ಧಿಯ ಕಡೆಗೆ ಅನೇಕ ಹೊಸ ಅವಕಾಶಗಳು ನಿಮ್ಮನ್ನು ಅರಸಿ ಬರುವುದು. ವಾರಾಂತ್ಯಕ್ಕೆ ಪಿಕ್ನಿಕ್.
- ಶ್ರೀ ಸತ್ಯನಾರಾಯಣ ದರ್ಶನ. ಶುಭ ಸಂಖ್ಯೆ-7

ಸಿಂಹ (ಮ.ಮಿ.ಮು.ಮೊ.ಮೆ.ಟ.ಟಿ.ಟು.ಟೆ)
ವಾರದ ಆದಿಗೆ ನಿಮ್ಮ ವೈಯಕ್ತಿಕ ಜೀವನದಲ್ಲಿ ಏರಿಳಿತಗಳಿಂದ ಹೊರಬರಲು ನೀವು ಯಶಸ್ವಿಯಾಗುವಿರಿ. ನಿಮ್ಮ ಅನುಕೂಲಕ್ಕೆ ತಕ್ಕಂತೆ ಮನೆ ಮಂದಿಯ ಸಹಕಾರ ದೊರಕುವುದು. ಮನೆ ರಿಪೇರಿ ಕೆಲಸಗಳಿಗೆ ಹಣ ವ್ಯಯವಾಗಲಿದೆ. ದ್ವಿತೀಯ ಸ್ಥಾನದಲ್ಲಿ ಕೇತು ಸಂಚಾರವಿದ್ದು, ದುಡುಕು ನಿರ್ಣಯಗಳಿಂದ ನಿಮ್ಮ ಖ್ಯಾತಿಗೆ ಭಂಗ ಬರುವುದು. ಉದ್ಯೋಗದಲ್ಲಿ ಬದಲಾವಣೆ ಆಗಲಿದೆ. ವೈದ್ಯರ ಸಲಹೆಯಂತೆ ವಿಶ್ರಾಂತಿ ಪಡೆಯಿರಿ. - ಶ್ರೀ ಹನುಮಾನ್ ಚಾಲೀಸ ಪಠಿಸಿ. ಶುಭ ಸಂಖ್ಯೆ-6

ಕನ್ಯಾ (ಟೊ.ಪ.ಪಿ.ಪು.ಫ.ಣ.ಠ.ಪೆ.ಪೊ)
ಶ್ರೀ ಬೃಹಸ್ಪತಿಯು ಭಾಗ್ಯ ಸ್ಥಾನದಲ್ಲಿ ಸಂಚರಿಸುತ್ತಿದ್ದು, ಈ ವಾರ ಹಣಕಾಸಿನ ವಿಷಯ, ಆಸ್ತಿ ಗಳಿಕೆ ವಿಷಯಗಳು ವೇಗವನ್ನು ಪಡೆದುಕೊಳ್ಳುವುದು. ಮನೆಯಲ್ಲಿ ಮಂಗಳ ಕಾರ್ಯಗಳು ನಡೆಯುವುದು. ಸ್ನೇಹಿತರು ಹಾಗೂ ಸಂಬಂಧಿಕರು ಸೂಕ್ತ ಸಹಕಾರ ನೀಡುವರು. ವಿದ್ಯಾರ್ಥಿಗಳಿಗೆ ಪಾಠ, ಪ್ರವಚನಗಳಲ್ಲಿ ಆಸಕ್ತಿ ಹೆಚ್ಚಾಗುವುದು. ಯಾರ ಮೇಲೂ ಕೋಪ ಪ್ರದರ್ಶಿಸಬೇಡಿ.
- ಶ್ರೀ ಗಣೇಶಾಷ್ಟಕ ಪಠಿಸಿ. ಶುಭ ಸಂಖ್ಯೆ-1

ತುಲಾ (ರ.ರಿ.ರು.ರೆ.ರೊ.ತ.ತಿ.ತು.ತೆ)
ಅಷ್ಟಮದಲ್ಲಿರುವ ಗುರುದೇವನಿಂದ ನಿಮಗೆ ಜೀವನದ ಸಾಧಕ-ಬಾಧಕಗಳ ಅರಿವು ನಿಗೂಢವಾಗಿದೆ. ಇದರ ನಡುವೆಯೇ ಚಂದ್ರನ ಶುಭ ಸಂಚಾರದ ಪರಿಣಾಮ ಮನೆಯಲ್ಲಿ ಹರುಷದ ವಾತಾವರಣ, ಸಾಮಾಜಿಕವಾಗಿ ಪ್ರತಿಷ್ಠೆ ಹೆಚ್ಚುವುದು. ಹೊಸ ವಸ್ತ್ರ-ಆಭರಣ ಕೊಳ್ಳುವುದರಿಂದ ಶ್ರೀಮತಿಗೆ ಸಂತೋಷ. ವಾರದ ಕಡೆಗೆ ಆಪ್ತರೆನಿಸಿಕೊಂಡವರ ನಡವಳಿಕೆಯಿಂದ ಮನಃಶಾಂತಿ ಕೆಡುವುದು.
- ಶ್ರೀ ದೇವೀಸ್ತುತಿ. ಶುಭ ಸಂಖ್ಯೆ-4

ವೃಶ್ಚಿಕ (ತೊ.ನ.ನಿ.ನು.ನೆ.ನೊ.ಯು.ಯಿ.ಯ
ನಿಮ್ಮ ರಾಶಿಯ ಮೇಲೆ ಶ್ರೀ ಗುರುವಿನ ಸಂಪೂರ್ಣ ದೃಷ್ಟಿ ಇದ್ದು, ಅಲೆಗಳಂತೆ ಬಂದ ಕಷ್ಟಗಳು ಸೂರ್ಯನೆದುರಲಿ ಮಂಜು ಕರಗಿದಂತೆ ಮಾಯವಾಗುವುದು. ಕೈಗೊಂಡ ಮಹತ್ವದ ಕೆಲಸಗಳಲ್ಲಿ ಪರಿಶ್ರಮಕ್ಕೆ ತಕ್ಕ ಪ್ರತಿಫಲ ದೊರೆಯುವುದು. ವಿವಾಹಾಕಾಂಕ್ಷಿಗಳಿಗೆ ಸೂಕ್ತ ವಧು-ವರ ದೊರೆಯುವ ಸಾಧ್ಯತೆ ಇರುತ್ತದೆ. ಆಭರಣ ವ್ಯಾಪಾರಿಗಳಿಗೆ ಹೇರಳ ಧನಲಾಭವಾಗುವುದು.
- ಶ್ರೀ ಗುರು ಅಷ್ಟೋತ್ತರ ಪಠಿಸಿ. ಶುಭ ಸಂಖ್ಯೆ-3

ಧನುಸ್ಸು (ಯೆ.ಯೊ.ಬ.ಬಿ.ಬು.ಧ.ಭ.ಢ.ಬೆ)
ವಾರದಾರಂಭಕ್ಕೆ ಗೆಳೆಯರೊಂದಿಗೆ ಭೋಜನ, ಮನರಂಜನಾ ಕಾರ್ಯಕ್ರಮದಲ್ಲಿ ಭಾಗವಹಿಸುವಿರಿ. ಸರ್ಕಾರಿ ಅಧಿಕಾರಿಗಳಿಂದ ನಿಮ್ಮ ಸಮಸ್ಯೆಗೆ ಪರಿಹಾರ ದೊರಕುವುದು. ಗುರುಬಲವಿಲ್ಲದ ಕಾರಣ ಇನ್ನೂ ಸ್ವಲ್ಪ ಸಮಯ ಹೊಸ ಯೋಜನೆಗಳ ಬಗ್ಗೆ ಚಿಂತಿಸದಿರಿ. ಕುಟುಂಬ ಸದಸ್ಯರಲ್ಲಿ ಸಾಮರಸ್ಯದ ಕೊರತೆಯಿಂದ ಅಸಮಾಧಾನ ಉಂಟಾಗುತ್ತದೆ. ಆರೋಗ್ಯದಲ್ಲಿ ಏರುಪೇರು ಉಂಟಾದೀತು.
- ಶ್ರೀ ಅಶ್ವತ್ಥವೃಕ್ಷ ಪ್ರದಕ್ಷಿಣೆ. ಶುಭ ಸಂಖ್ಯೆ-9

ಮಕರ (ಬೊ.ಜ.ಜಿ.ಶಿ.ಶು.ಶೆ.ಶೊ.ಗ.ಗಿ.)
ಸಕಲಗ್ರಹ ಬಲನಾದ ಸರಸಿಜಾಕ್ಷನ ಕೃಪೆಯಿಂದ ಹಾಗೂ ನಿಮ್ಮ ಸುಗುಣಾದರ್ಶಗಳಿಂದ ಸಮಾಜದಲ್ಲಿ ಮನ್ನಣೆಯನ್ನು ಪಡೆಯುವಿರಿ. ವೈಯಕ್ತಿಕವಾಗಿಯೂ, ಸಾಮಾಜಿಕವಾಗಿಯೂ ಉತ್ಕರ್ಷ ಸಾಧಿಸುವ ನಿಮ್ಮ ಪ್ರಯತ್ನದಲ್ಲಿ ಜಯಶೀಲರಾಗುವಿರಿ. ನಿಮ್ಮ ಸುದೀರ್ಘ ಪರಿಶ್ರಮದ ಫಲವಾಗಿ ಇಷ್ಟಕಾರ್ಯಗಳು ಸಿದ್ಧಿಸುತ್ತವೆ. ಶನಿದೇವ ಅಶುಭನಿದ್ದಾನೆ. ಸಾಲಕೊಟ್ಟು ಕೈ ಸುಟ್ಟುಕೊಳ್ಳದಿರಿ.
- ಶ್ರೀ ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿ. ಶುಭ ಸಂಖ್ಯೆ-3

ಕುಂಭ (ಗು.ಗೆ.ಗೊ.ಸ.ಸಿ.ಸು.ಸೆ.ಸೊ.ದ)
ವಾರದಾರಂಭಕ್ಕೆ ವಿಶಿಷ್ಟ ವ್ಯಕ್ತಿಗಳ ಸಂಪರ್ಕ ನಿಮಗಾಗುವುದು. ಮಾನಸಿಕವಾಗಿ ಉಂಟಾಗಿದ್ದ ಕೆಲವು ಉದ್ವೇಗದ ಪ್ರಸಂಗಗಳು ತಿಳಿಯಾಗಲಿದೆ. ರಾಜಕಾರಣಿಗಳಿಗೆ ಹೊಸ ಅಗ್ನಿ ಪರೀಕ್ಷೆಗಳು ಎದುರಾಗುವುದು. ಜನ್ಮಶನಿಯ ಕಾರಣ 'ಹಂಗಿನ ಅರಮನೆಗಿಂತ ರಾಗಿ ಅಂಬಲಿ ಲೇಸು' ಎಂಬ ಗಾದೆ ನಿಮ್ಮ ಅನುಭವಕ್ಕೆ ಬರುವುದು. ಸರ್ಕಾರಿ ನೌಕರರಿಗೆ ಸ್ಥಾನ ಪಲ್ಲಟದಿಂದ ಖುಷಿ ಆಗದು.
- ಶ್ರೀ ಅಷ್ಟಾಕ್ಷರಿ ಮಂತ್ರ ಜಪಿಸಿ. ಶುಭ ಸಂಖ್ಯೆ-2

ಮೀನ (ದಿ.ದು.ಖ.ಝ.ಥ.ತೆ.ದೊ.ಚ.ಚಿ)
ಯಾವುದೇ ವ್ಯವಹಾರ ಮಾಡುವುದಿದ್ದರೆ ಸ್ವಂತವಾಗಿ ಮಾಡಿ, ಪಾರ್ಟನರ್ ಬೇಡ. ಅನಿರೀಕ್ಷಿತ ಖರ್ಚು-ವೆಚ್ಚಗಳು ಹೆಚ್ಚಾಗಿ ಕೈ ಸಾಲ ಮಾಡಬೇಕಾಗುವುದು. ಹೋಟೆಲ್ ಹಾಗೂ ಕ್ಷೀರಜನ್ಯ ವಸ್ತು ವ್ಯಾಪಾರಿಗಳಿಗೆ ನಿರೀಕ್ಷೆ ಮೀರಿ ಧನಲಾಭವಾಗುವುದು. ಇಂಜಿನಿಯರುಗಳಿಗೆ, ಗುತ್ತಿಗೆದಾರರಿಗೆ ಬೇಡಿಕೆ ಹೆಚ್ಚಾಗುವುದು. ಮಂಡಿ ನೋವು, ಬೆನ್ನು ನೋವು ಕಾಡಿಸಬಹುದು. ವಾರಾಂತ್ಯಕ್ಕೆ ಧರ್ಮಕ್ಷೇತ್ರ ಸಂದರ್ಶನ.
- ಶ್ರೀ ರಾಘವೇಂದ್ರ ಆರಾಧನೆ. ಶುಭ ಸಂಖ್ಯೆ-2

ಮೈಸೂರು ಮಿತ್ರ

ರೇಣುಕಾಸ್ವಾಮಿ ಹತ್ಯೆ ಪ್ರಕರಣ

ನಟ ದರ್ಶನ್, ಸಹಚರರಿಗೆ ಕಠಿಣ ಶಿಕ್ಷೆಗೆ ಆಗ್ರಹ



ರೇಣುಕಾಸ್ವಾಮಿ ಹತ್ಯೆ ಖಂಡಿಸಿ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದಿಂದ ಪ್ರತಿಭಟನೆ ನಡೆಸಲಾಯಿತು.

ತಿ.ನರಸೀಪುರ, ಜೂ.15– ಚಿತ್ರದುರ್ಗದ ರೇಣುಕಾಸ್ವಾಮಿಯನ್ನು ಸಿನಿಮಾ ಶೈಲಿಯಲ್ಲಿ ಹತ್ಯೆ ಮಾಡಿರುವ ನಟ ದರ್ಶನ್ ಹಾಗೂ ಆತನ ಸಹಚರರನ್ನು ಗಲ್ಲಿಗೇರಿಸುವಂತೆ ಒತ್ತಾಯಿಸಿ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಆಶ್ರಯದಲ್ಲಿ ಶನಿವಾರ ಪಟ್ಟಣದಲ್ಲಿ ಪ್ರತಿಭಟನೆ ನಡೆಸಲಾಯಿತು.

ಪಟ್ಟಣದ ತಾಲೂಕು ಕಚೇರಿ ಎದುರು ಜಮಾಯಿಸಿದ ಲಿಂಗಾಯತ ಹಾಗೂ ಇತರೆ ಸಮಾಜದ ನೂರಾರು ಮಂದಿ ರೇಣುಕಾಸ್ವಾಮಿಯನ್ನು ಬರ್ಬರವಾಗಿ ಕೊಲೆ ಮಾಡಿದ ಆರೋಪ ಹೊತ್ತಿರುವ ನಟ ದರ್ಶನ್ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಅಖಿಲ ಭಾರತ ವೀರಶೈವ ಲಿಂಗಾಯಿತ ಮಹಾಸಭಾ ಅಧ್ಯಕ್ಷ ತೊಟ್ಟವಾಡಿ ಮಹದೇವಸ್ವಾಮಿ ಮಾತನಾಡಿ, ನಟ ದರ್ಶನ್ ತೂಗುದೀಪ ಆತನ ಸ್ನೇಹಿತೆ ಪ್ರವಿತ್ರಗೌಡ ಹಾಗೂ 15 ಮಂದಿ ಸೇರಿ ಚಿತ್ರದುರ್ಗದ ರೇಣುಕಾಸ್ವಾಮಿ ಅವರನ್ನು ಸಿನಿಮಾ ಶೈಲಿಯಲ್ಲಿ ಹಲ್ಲೆ ನಡೆಸಿ ಕೊಲೆ ಮಾಡಿರುವುದು ನಾಗರಿಕ ಸಮಾಜ ತಲೆತಗ್ಗಿಸುವಂತಾಗಿದೆ. ವೀರಶೈವ ಲಿಂಗಾಯತ ಸಮಾಜಕ್ಕೆ ಸೇರಿದ ರೇಣುಕಾಸ್ವಾಮಿ ವಯಸ್ಸಾದ ತಂದೆ–ತಾಯಿ, ಗರ್ಭಿಣಿ ಪತ್ನಿಯನ್ನು ಅಗಲಿರುವುದರಿಂದ ಆ ಕುಟುಂಬ ದಿಗ್ಭ್ರಮೆಗೆ ಒಳಗಾಗಿದೆ. ಹೀಗಾಗಿ ಸರ್ಕಾರ ಆ ಕುಟುಂಬಕ್ಕೆ 50 ಲಕ್ಷ ರೂ., ಆತನ ಪತ್ನಿಗೆ ಸರ್ಕಾರಿ ಉದ್ಯೋಗ ನೀಡಬೇಕೆಂದು ಒತ್ತಾಯಿಸಿದರು.

ಆರೋಪಿಗಳು ಪ್ರಭಾವಿ ವ್ಯಕ್ತಿಗಳಾಗಿರುವುದರಿಂದ ಪೊಲೀಸರು ನಿಷ್ಪಕ್ಷಪಾತವಾಗಿ ತನಿಖೆ ನಡೆಸಬೇಕು. ಆ ಮೂಲಕ ಆರೋಪಿಗಳು ಕಾನೂನಿನಿಂದ ತಪ್ಪಿಸಿಕೊಳ್ಳದಂತೆ ನೋಡಿಕೊಳ್ಳಬೇಕು. ಹಲವು ಕ್ರಿಮಿನಲ್ ಪ್ರಕರಣದಲ್ಲಿ ಭಾಗಿಯಾಗಿರುವ ದರ್ಶನ್ ವಿರುದ್ಧ ರೌಡಿಶೀಟ್ ತೆರೆಯಬೇಕು. ಪ್ರಕರಣದ ವಿಚಾರಣೆಗೆ ತ್ವರಿತಗತಿಯ ನ್ಯಾಯಾಲಯ ಸ್ಥಾಪಿಸಿ ಶಿಕ್ಷೆ ವಿಧಿಸಬೇಕೆಂದು ಆಗ್ರಹಿಸಿದರು.

ಕಾಂಗ್ರೆಸ್ ಸರ್ಕಾರದಲ್ಲಿ ಲಿಂಗಾಯತ ಸಮಾಜದ ಮೇಲಿನ ದೌರ್ಜನ್ಯ ಮೇರೆ ಮೀರಿದೆ. ಇತ್ತೀಚೆಗೆ ನಡೆದ ನೇಹಾ ಕೊಲೆ ಪ್ರಕರಣ ಮಾಸುವ ಮುನ್ನವೇ ರೇಣುಕಾಸ್ವಾಮಿಯನ್ನು ಅಮಾನುಷವಾಗಿ ಮಾನವ ಸಮಾಜವೇ ತಲೆ ತಗ್ಗಿಸುವಷ್ಟರ ಮಟ್ಟಿಗೆ ಬರ್ಬರವಾಗಿ ಹತ್ಯೆ ಮಾಡಲಾಗಿದೆ. ಪ್ರಕರಣದಲ್ಲಿ ಸಚಿವರು ಮತ್ತು ಇತರರು ದರ್ಶನ್ ಪರ ಲಾಬಿ ಮಾಡದೇ ಆರೋಪಿಗಳಿಗೆ ಕಠಿಣ ಶಿಕ್ಷೆ ಕೊಡಿಸಬೇಕು ಎಂದರು.

ಇದೇ ವೇಳೆ ತಹಸೀಲ್ದಾರ್ ಟಿ.ಜಿ.ಸುರೇಶ್ ಆಚಾರ್ ಅವರಿಗೆ ಮನವಿ ಸಲ್ಲಿಸಲಾಯಿತು. ಪ್ರತಿಭಟನೆಯಲ್ಲಿ ಬಸವ ಬಳಗದ ಅಧ್ಯಕ್ಷ ಪರಮೇಶ್ ಪಟೇಲ್, ಕಾರ್ಯದರ್ಶಿ ಪರಶಿವಮೂರ್ತಿ, ಜೆಡಿಎಸ್ ತಾಲೂಕು ಅಧ್ಯಕ್ಷ ಸಿ.ಬಿ.ಹುಂಡಿ ಚಿನ್ನಸ್ವಾಮಿ, ಜಿಲ್ಲಾ ಕಾರ್ಯದರ್ಶಿ ಕರೋಹಟ್ಟಿ ಬಸವರಾಜು, ಪುರಸಭಾ ಸದಸ್ಯ ಎಸ್.ಕೆ.ಕಿರಣ್, ಮಾಜಿ ಸದಸ್ಯ ಎನ್.ಲೋಕೇಶ್, ಗ್ರಾಪಂ ಉಪಾಧ್ಯಕ್ಷ ಕೈಯಂಬಳ್ಳಿ ಅಶೋಕ್, ಕಿರಗಸೂರು ಗ್ರಾಂ ಸದಸ್ಯ ಮಹದೇವಸ್ವಾಮಿ, ಡೈರಿ ಅಧ್ಯಕ್ಷರಾದ ಡಿ.ಎಲ್.ಮಹದೇವಪ್ಪ, ಮಹದೇವಸ್ವಾಮಿ, ಬಿಜೆಪಿ ಕ್ಷೇತ್ರಾಧ್ಯಕ್ಷ ಶಿವಕುಮಾರ್, ಆಡಿಟರ್ ಮಂಜು, ಸಿದ್ದಲಿಂಗಸ್ವಾಮಿ, ಹೆಳವರಹುಂಡಿ ಮೂರ್ತಿ, ಕೆ.ಮಲ್ಲು, ಫ್ಯಾನ್ಸಿ ಮೋಹನ್, ಶೇಖರ್, ಶ್ರೀಕಂಠ, ಮಾದಪ್ಪ, ತೋಟದಪ್ಪ ಬಸವರಾಜು, ಚೌಹಳ್ಳಿ ಮಹದೇವಪ್ಪ, ಸ್ಟುಡಿಯೋ ಜಗದೀಶ್, ಪೂಜಿತ್ ಮೆಡಿಕಲ್ ಕುಮಾರ್, ರಾಜಶೇಖರ್, ತೊಂಟೇಶ್, ಬನ್ನಳ್ಳಿಹುಂಡಿ ಶಿವಕುಮಾರ್, ಕಾರ್ ಮಲ್ಲಪ್ಪ, ತಾಪಂ ಮಾಜಿ ಸದಸ್ಯ ಚಂದ್ರಶೇಖರ್, ಪರಶಿವಮೂರ್ತಿ, ನವೀನ್, ಯೋಗೇಶ್, ಸೀಹಳ್ಳಿ ಮಹೇಶ್, ನಾಗಭೂಷಣ್, ರಾಜೇಶ್ ಭಾಗವಹಿಸಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಹರೋಂ ಹರ (ತೆ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಮಹಾರಾಜ (ತ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಚಂದು ಚಾಂಪಿಯನ್ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಮಹಾರಾಜ (ತ)	4 ಪ್ರದರ್ಶನಗಳು
ಗಾಯಿತ್ರಿ	
ಜಡ್ಜ್‌ಮೆಂಟ್ (ಕ)	4 ಪ್ರದರ್ಶನಗಳು
ರಾಜಕಮಲ್	
ಮಹಾರಾಜ (ತ)	4 ಪ್ರದರ್ಶನಗಳು
ಸಂಗಂ	
ಕೋಟಿ (ಕ)	4 ಪ್ರದರ್ಶನಗಳು
ಲಿಡೋ	
ಕರಟಕ ದಮನಕ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಮಹಾರಾಜ (ತ)	4 ಪ್ರದರ್ಶನಗಳು
ಪ್ರಭಾ	
ಅಮೀನ (ಹಿಂ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಇನ್‌ಸೈಡ್ ಔಟ್ 2(3ಡಿ) (ಇಂ): ಬೆ.10.15ಕ್ಕೆ, ಮ.12.15ಕ್ಕೆ, ಮ.2.15ಕ್ಕೆ, ಚಂದು ಚಾಂಪಿಯನ್ (ಹಿಂ): ಸಂ.4.15ಕ್ಕೆ, ರಾ.7.05ಕ್ಕೆ, ರಾ.10.05ಕ್ಕೆ.
ಸ್ಕ್ರೀನ್ 2	ಲವ್ ಲಿ (ಕ): ಬೆ.11ಕ್ಕೆ, ರಾ.7ಕ್ಕೆ, ಮುಂಜ್ಯಾ (ಹಿಂ): ಮ.2.15ಕ್ಕೆ, ಶಿವಮ್ಮ ಯರೆಹಂಚಿನಾಳ (ಕ): ಸಂ.4.40ಕ್ಕೆ, ಹರೋಂ ಹರ (ತೆ): ರಾ.10.15ಕ್ಕೆ.
ಸ್ಕ್ರೀನ್ 3	ಮುಂಜ್ಯಾ (ಹಿಂ): ಬೆ.10.40ಕ್ಕೆ, ಮಹಾರಾಜ (ತ): ಮ.1.15ಕ್ಕೆ, ಸಂ.4.20ಕ್ಕೆ, ಚೆಫ್ ಚಿದಂಬರ (ಕ): ರಾ.7.20ಕ್ಕೆ, ಡಿಎನ್‌ಎ (ಮ): ರಾ.9.50ಕ್ಕೆ.
ಸ್ಕ್ರೀನ್ 4	ಕೋಟಿ (ಕ): ಬೆ.10.10ಕ್ಕೆ, ಮ.1.25ಕ್ಕೆ, ಸಂ.6.45ಕ್ಕೆ, ರಾ.10ಕ್ಕೆ, ಇನ್‌ಸೈಡ್ ಔಟ್ (3ಡಿ)(ಇಂ): ಸಂ.4.40ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಇನ್‌ಸೈಡ್ ಔಟ್ (3ಡಿ)(ಹಿಂ): ಬೆ.11ಕ್ಕೆ, ಇನ್‌ಸೈಡ್ ಔಟ್ (3ಡಿ)(ಇಂ): ಮ.1.20ಕ್ಕೆ, ಸಂ.4.20ಕ್ಕೆ, ಸಂ.6.40ಕ್ಕೆ, ಮುಂಜ್ಯಾ (ಹಿಂ): ರಾ.9ಕ್ಕೆ.
ಸ್ಕ್ರೀನ್ 2	ಮುಂಜ್ಯಾ (ಹಿಂ): ಬೆ.10ಕ್ಕೆ, ರಾ.7.35ಕ್ಕೆ, ರಾಕ್‌ಸ್ಟಾರ್ (ಹಿಂ): ಮ.12.45ಕ್ಕೆ, ಕೋಟಿ (ಕ): ಸಂ.4.05ಕ್ಕೆ, ರಾ.10.20ಕ್ಕೆ,
ಸ್ಕ್ರೀನ್ 3	ಚಂದು ಚಾಂಪಿಯನ್ (ಹಿಂ): ಬೆ.9.50ಕ್ಕೆ, ಮ.1ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ.
ಸ್ಕ್ರೀನ್ 4	ಕೋಟಿ (ಕ): ಬೆ.10.05ಕ್ಕೆ, ಮಹಾರಾಜ (ತ): ಮ.1.35ಕ್ಕೆ, ರಾ.7.05ಕ್ಕೆ, ಶಿವಮ್ಮ ಹರೆಹಂಚಿನಾಳ (ಕ): ಸಂ.4.40ಕ್ಕೆ, ಜಿಆರ್‌ಆರ್‌ಆರ್ (ಮ): ರಾ.10.10ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ಚೆಫ್ ಚಿದಂಬರ (ಕ): ಬೆ.11.15ಕ್ಕೆ, ಶಿವಮ್ಮ ಹರೆಹಂಚಿನಾಳ (ಕ): ಮ.1.30ಕ್ಕೆ, ಮ್ಯೂಸಿಕ್ ಶಾಪ್ ಮೂರ್ತಿ (ತೆ): ಮ.3.45ಕ್ಕೆ, ಹರೋಂ ಹರ (ತೆ): ಸಂ.6.15ಕ್ಕೆ, ಮಹಾರಾಜ (ತ): ರಾ.9.15ಕ್ಕೆ.
ಸ್ಕ್ರೀನ್ 2	ಇನ್‌ಸೈಡ್ ಔಟ್ (3ಡಿ)(ಇಂ): ಬೆ.11ಕ್ಕೆ, ಕೋಟಿ (ಕ): ಮ.1ಕ್ಕೆ, ಸಂ.4.15ಕ್ಕೆ, ರಾ.7.30ಕ್ಕೆ.
ಸ್ಕ್ರೀನ್ 3	ಲವ್ ಲಿ (ಕ): ಮ.1ಕ್ಕೆ, ಮಹಾರಾಜ (ತ): ಸಂ.4.05ಕ್ಕೆ, ಸಂ.6.45ಕ್ಕೆ, ಇನ್‌ಸೈಡ್ ಔಟ್ (3ಡಿ)(ಇಂ): ರಾ.9.30ಕ್ಕೆ.
ಸ್ಕ್ರೀನ್ 4	ಕೋಟಿ (ಕ): ಬೆ.10.40ಕ್ಕೆ, ರಾ.9.20ಕ್ಕೆ, ಚೆಫ್ ಚಿದಂಬರ (ಕ): ಮ.1.55ಕ್ಕೆ, ಲವ್ ಲಿ (ಕ): ಸಂ.4.10ಕ್ಕೆ, ಇನ್‌ಸೈಡ್ ಔಟ್ (3ಡಿ)(ಇಂ): ರಾ.7.20ಕ್ಕೆ

ಪಿವಿಆರ್ ಸಿನಿಮಾಸ್
ನೆಕ್ಸಸ್ ಸೆಂಟರ್‌ಸಿಟಿ ಮಾಲ್,
2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ

ಗರುಡ ಮಾಲ್,
1ನೇ ಮಹಡಿ, ಮೊ.ನಂ: 9901373210

ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1.15ಕ್ಕೆ, ಮ.3.40ಕ್ಕೆ, ರಾ.7.15ಕ್ಕೆ, ರಾ.10ಕ್ಕೆ, ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10.05ಕ್ಕೆ, ಮ.12ಕ್ಕೆ, ಮ.3.10ಕ್ಕೆ, ಸಂ.6.20ಕ್ಕೆ, ರಾ.9.30ಕ್ಕೆ, ಸ್ಟಾರ್ (ತ): ಮ.1ಕ್ಕೆ, ರಾ.7.10ಕ್ಕೆ, ರಾ.10.30ಕ್ಕೆ, **4N6** (ಕ): ಮ.1.05ಕ್ಕೆ, ಅಂಜನೀಪುತ್ರ (ಕ): ಸಂ.4.15ಕ್ಕೆ, ಕೃಷ್ಣಮ್ಮ (ತೆ): ಸಂ.4.20ಕ್ಕೆ, ರಾ.10.15ಕ್ಕೆ, ಪವರ್ (ಕ): ಸಂ.6.40ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಮಲ್ಕುಂಡಿಯಲ್ಲಿ ಅದ್ಧೂರಿ ಬಸವ ಜಯಂತಿ



ಮಲ್ಕುಂಡಿ, ಜೂ.15– ಗ್ರಾಮದಲ್ಲಿ ಅದ್ಧೂರಿಯಾಗಿ ಬಸವ ಜಯಂತಿ ಆಚರಿಸಲಾಯಿತು. ಬಸವ ಜಯಂತಿ ಅಂಗವಾಗಿ ಗ್ರಾಮವನ್ನು ಬಣ್ಣ ಬಣ್ಣದ ವಿದ್ಯುತ್ ದೀಪಗಳು ಹಾಗೂ ತಳಿರು ತೋರಣ, ರಂಗೋಲೆಗಳಿಂದ ಅಲಂಕರಿಸಲಾಗಿತ್ತು. ಅಲ್ಲದೇ ಗ್ರಾಮದ ಪ್ರಮುಖ ಬೀದಿಗಳಲ್ಲಿ ಬಸವಣ್ಣ ಮತ್ತು ಶ್ರೀಶಿವಕುಮಾರಸ್ವಾಮಿಗಳ ಭಾವಚಿತ್ರವನ್ನು ಬೆಳ್ಳಿ ರಥದಲ್ಲಿ ಪ್ರತಿಷ್ಠಾಪಿಸಿ ವಿವಿಧ ಜಾನಪದ ಕಲಾ ತಂಡಗಳೊಂದಿಗೆ ಮೆರವಣಿಗೆ ಮಾಡಲಾಯಿತು. ಇದೇ ವೇಳೆ ಸಾವಿರಾರು ಮಂದಿಗೆ ಅನ್ನಸಂತರ್ಪಣೆ ಮಾಡಲಾಯಿತು.

ಶುದ್ಧ ಕುಡಿಯುವ ನೀರು ಪೂರೈಕೆಗೆ ಆಗ್ರಹಿಸಿ ಪ್ರತಿಭಟನೆ



ಶುದ್ಧ ಕುಡಿಯುವ ನೀರು ಪೂರೈಕೆಗೆ ಆಗ್ರಹಿಸಿ ಪ್ರತಿಭಟನೆ ನಡೆಸಲಾಯಿತು.

ನಂಜನಗೂಡು, ಜೂ.15– ನಗರ ವ್ಯಾಪ್ತಿಯ ಜನರಿಗೆ ಕಲುಷಿತ ಕುಡಿಯುವ ನೀರು ಪೂರೈಸಲಾಗುತ್ತಿದ್ದು, ಜನರ ಆರೋಗ್ಯದ ಹಿತದೃಷ್ಟಿಯಿಂದ ಶುದ್ಧ ಕುಡಿಯುವ ನೀರು ಪೂರೈಸಲು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ನಗರದ ಗೌತಮ ಬಡಾವಣೆ ನಾಗರಿಕರೊಡಗೂಡಿ ಜನ ಸಂಗ್ರಾಮ ಪರಿಷತ್ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಶನಿವಾರ ನಗರದ ದೇವೀರಮ್ಮನಹಳ್ಳಿ ಬಡಾವಣೆಯಲ್ಲಿರುವ ಕುಡಿಯುವ ನೀರಿನ ಶುದ್ಧೀಕರಣ ಘಟಕದ ಆವರಣದಲ್ಲಿ ಜಮಾಯಿಸಿದ ಪ್ರತಿಭಟನಾಕಾರರು ಶುದ್ಧ ಕುಡಿಯುವ ನೀರು ಪೂರೈಸುವಂತೆ ಆಗ್ರಹಿಸಿದರು.

ಜನ ಸಂಗ್ರಾಮ ಪರಿಷತ್ ರಾಜ್ಯಾಧ್ಯಕ್ಷ ನಗರ್ಲೆ ವಿಜಯ್ ಕುಮಾರ್ ಮಾತನಾಡಿ, ಕಪಿಲಾ ನದಿಯಿಂದ ನೀರೆತ್ತಿ ನಗರದ ದೇವೀರಮ್ಮನಹಳ್ಳಿ ಬಡಾವಣೆಯಲ್ಲಿ ಕಳೆದ 30 ವರ್ಷಗಳ ಹಿಂದೆ ನಿರ್ಮಿಸಿರುವ ಶುದ್ಧೀಕರಣ ಘಟಕದಿಂದ ನಂಜನಗೂಡು ನಗರಕ್ಕೆ ನೀರು ಪೂರೈಸಲಾಗುತ್ತಿದೆ. ಆದರೆ ನೀರು ಶುದ್ಧೀಕರಣ ಘಟಕದಲ್ಲಿ ಯಾವುದೇ ತಾಂತ್ರಿಕ ನಿರ್ವಹಣೆ ಅಥವಾ ಸಿಬ್ಬಂದಿಗಳಾಗಲೀ ಇಲ್ಲದಿರುವುದರಿಂದ ನೀರನ್ನು ಶುದ್ಧ ಮಾಡದೆ ಹಾಗೇ ಪೂರೈಕೆ ಮಾಡಲಾಗುತ್ತಿದೆ. ಇದರಿಂದಾಗಿ ಜನರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿದೆ. ಆದ್ದರಿಂದ ಕೂಡಲೆ ನೀರಿನ ಟ್ಯಾಂಕ್‌ಗಳನ್ನು ಶುಚಿಗೊಳಿಸಿ, ನೀರು ಶುದ್ಧೀಕರಣ ಘಟಕದಲ್ಲಿ ಕೆಟ್ಟು ನಿಂತಿರುವ ಯಂತ್ರಗಳನ್ನು ದುರಸ್ತಿಪಡಿಸಿ ಮುಂಬರುವ ದಿನಗಳಲ್ಲಿ ಶುದ್ಧ ಕುಡಿಯುವ ನೀರು ಪೂರೈಸಲು ಕ್ರಮ ಕೈಗೊಳ್ಳಬೇಕು ಹಾಗೂ ಶುದ್ಧ ಕುಡಿಯುವ ನೀರು ಪೂರೈಸಲು ವಿಫಲರಾಗಿರುವ ನಗರಸಭೆ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಈ ವೇಳೆ ಸ್ಥಳಕ್ಕಾಗಮಿಸಿದ ತಹಸೀಲ್ದಾರ್ ಶಿವಕುಮಾರ್ ಕಾಸ್ನೂರು, ಪ್ರತಿಭಟನಾಕಾರರಿಂದ ಮನವಿ ಸ್ವೀಕರಿಸಿ ಮುಂಬರುವ ದಿನಗಳಲ್ಲಿ ಶುದ್ಧ ಕುಡಿಯುವ ನೀರು ಪೂರೈಸಲು ಕ್ರಮ ಕೈಗೊಳ್ಳುವಂತೆ ನಗರಸಭೆ ಅಧಿಕಾರಿಗಳಿಗೆ ನಿರ್ದೇಶನ ನೀಡುವುದಾಗಿ ಭರವಸೆ ನೀಡಿದರು. ಬಳಿಕ ಪ್ರತಿಭಟನಾಕಾರರು ಧರಣಿ ಕೈಬಿಟ್ಟರು. ಈ ಸಂದರ್ಭ ನಿವೃತ್ತ ಮುಖ್ಯೋಪಾಧ್ಯಾಯ ಅಂಕಯ್ಯ ಸೇರಿದಂತೆ ಗೌತಮ ಬಡಾವಣೆ ನಿವಾಸಿಗಳು ಉಪಸ್ಥಿತರಿದ್ದರು.

ನಿಲುವಾಗಿಲು, ಬೀರನಹಳ್ಳಿಯಲ್ಲಿ ಬೀದಿ ನಾಟಕ



ಹುಣಸೂರು, ಜೂ.15– ತಾಲೂಕಿನ ಕರ್ಣಕುಪ್ಪೆ, ಹನಗೋಡು ವಲಯದ ನಿಲುವಾಗಿಲು ಮತ್ತು ಬೀರನಹಳ್ಳಿ ಕಾರ್ಯ ಕ್ಷೇತ್ರದ ನೇತ್ರಾ ಹಾಗೂ ವೈಭವಲಕ್ಷ್ಮಿ ಜ್ಞಾನ ವಿಕಾಸ ಕೇಂದ್ರಗಳಲ್ಲಿ ಬೀದಿ ನಾಟಕ ಹಮ್ಮಿಕೊಳ್ಳಲಾಗಿತ್ತು.

ಕೆ.ಆರ್.ನಗರ ವ್ಯಾಪ್ತಿಯ ಜಿಲ್ಲಾ ನಿರ್ದೇಶಕ ಮುರಳೀಧರ್ ದೀಪ ಬೆಳಗುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ನಂತರ ಮಾತನಾಡಿದ ಅವರು, ಗ್ರಾಮೀಣ ಜನರಿಗೆ ನೀರಿನ ಸದ್ಬಳಕೆ, ಬಾಲ್ಯವಿವಾಹ, ಮಹಿಳೆ ಕುಟುಂಬ ನಿರ್ವಹಣೆ ಮಾಡುವ ಜವಾಬ್ದಾರಿ, ಆರ್ಥಿಕ ಸಮಸ್ಯೆಗಳ ಪರಿಹಾರ ಸೇರಿದಂತೆ ಇನ್ನಿತರ ವಿಷಯಗಳ ಕುರಿತು ಸಾರ್ವಜನಿಕರಿಗೆ ನಮ್ಮ ಕಲಾ ತಂಡಗಳ ಮೂಲಕ ಅರಿವು ಮೂಡಿಸಲಾಗುತ್ತಿದೆ ಎಂದರು. ಈ ವೇಳೆ ಹುಣಸೂರು ಯೋಜನಾಧಿಕಾರಿ ನಾರಾಯಣ್, ಜ್ಞಾನವಿಕಾಸ ಸಮನ್ವಯ ಅಧಿಕಾರಿ ರೂಪ, ಮೇಲ್ವಿಚಾರಕಿ ಶೋಭಾ, ಸುನಂದ, ಸ್ನೇಹಜೀವಿ ಕಲಾ ತಂಡದ ನಾಗರಾಜ್ ಮತ್ತು ಸಂಗಡಿಗರು, ಸೇವಾ ಪ್ರತಿನಿಧಿ ಮಹಾದೇವಿ, ಆನಂದ್, ಗ್ರಾಮಸ್ಥರು ಸೇರಿದಂತೆ ಇನ್ನಿತರರಿದ್ದರು.

ಅರ್ಜಿ ಆಹ್ವಾನ

ತಿ.ನರಸೀಪುರ, ಜೂ.15– ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಶೇ.60ಕ್ಕಿಂತ ಹೆಚ್ಚು ಅಂಕ ಗಳಿಸಿದ ತಾಲೂಕಿನ ಗಾಣಿಗ ಸಮಾಜದ ವಿದ್ಯಾರ್ಥಿಗಳಿಂದ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಹ ವಿದ್ಯಾರ್ಥಿಗಳು ಅರ್ಜಿ ಜೊತೆಗೆ ಭಾವಚಿತ್ರ, ಅಂಕಪಟ್ಟಿ, ಆಧಾರ್ ಕಾರ್ಡ್ ಜೆರಾಕ್ಸ್ ಪ್ರತಿಯೊಂದಿಗೆ ಜು.30ರೊಳಗೆ ತಿ.ನರಸೀಪುರ ತಾಲೂಕು ಗಾಣಿಗರ ಸಂಘ (ರಿ) ಸೋಸಲೆ, ನಂ.35 ಜ್ಯೋತಿ ನಿಲಯ ದಳವಾಯಿ ಅಗ್ರಹಾರ, ತಿ.ನರಸೀಪುರ ಟೌನ್ ವಿಳಾಸಕ್ಕೆ ತಲುಪಿಸುವಂತೆ ಪ್ರಕಟಣೆ ತಿಳಿಸಿದೆ. ಮಾಹಿತಿಗೆ 9916621138 /9945382936 ಸಂಪರ್ಕಿಸಿ.

ಹೊಲಿಗೆ ತರಬೇತಿ ಪಡೆದವರಿಗೆ ಪ್ರಮಾಣ ಪತ್ರ ವಿತರಣೆ



ಹೆಚ್.ಡಿ.ಕೋಟೆ, ಜೂ.15– ಭಾರತ ಸರ್ಕಾರದ ಕೌಶಲ್ಯಾಭಿವೃದ್ಧಿ ಮತ್ತು ಉದ್ಯಮಶೀಲತಾ ಸಚಿವಾಲಯ ಹಾಗೂ ಮೈಸೂರು ಜನ ಶಿಕ್ಷಣ ಸಂಸ್ಥೆ ಆಶ್ರಯದಲ್ಲಿ ಹೊಲಿಗೆ ಮತ್ತು ಜೂಟ್ ತರಬೇತಿ ಪಡೆದ ತಾಲೂಕಿನ ಅಂತರಸಂತೆ ಮತ್ತು ಹೊಸಹಳ್ಳಿ ಗ್ರಾಮಗಳ 60 ಮಂದಿ ನಿರುದ್ಯೋಗಿ ಮಹಿಳೆಯರಿಗೆ ಪ್ರಮಾಣ ಪತ್ರ ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಜನಶಿಕ್ಷಣ ಸಂಸ್ಥೆ ನಿರ್ದೇಶಕ ಸಿ.ರಮೇಶ್, ಕೌಶಲ್ಯಾಭಿವೃದ್ಧಿ ಸಂಸ್ಥೆ ಕಾರ್ಯಕ್ರಮ ಸಹಾಯಕಾಧಿಕಾರಿ ಸುರೇಶ್ ಕುಮಾರ್, ವೃತ್ತಿ ಬೋಧಕಿ ಸವಿತಾ ರವಿಕುಮಾರ್ ಇನ್ನಿತರರಿದ್ದರು.

ಎನ್‌ಸಿಸಿಯಿಂದ ನಾಯಕತ್ವ ಗುಣ ಬೆಳವಣಿಗೆ

ಜೆಎಸ್‌ಎಸ್ ಪ್ರೌಢಶಾಲೆ ಮುಖ್ಯ ಶಿಕ್ಷಕ ಮ.ಗು.ಬಸವಣ್ಣ ಅಭಿಮತ



ನಂಜನಗೂಡು, ಜೂ.15– ಎನ್‌ಸಿಸಿ ತರಬೇತಿಯಿಂದ ನಾಯಕತ್ವ ಗುಣ ಬೆಳೆಯಲಿದೆ ಎಂದು ಸುತ್ತೂರು ಜೆಎಸ್‌ಎಸ್ ಪ್ರೌಢಶಾಲೆ ಮುಖ್ಯೋಪಾಧ್ಯಾಯ ಮ.ಗು.ಬಸವಣ್ಣ ಅಭಿಪ್ರಾಯಪಟ್ಟರು.

ಮೈಸೂರಿನ ಜವಹರ್ ನವೋದಯ ವಿದ್ಯಾಲಯದಲ್ಲಿ ಆಯೋಜಿಸಿದ್ದ ಎನ್‌ಸಿಸಿ ಶಿಬಿರದಲ್ಲಿ ಸುತ್ತೂರು ಜೆಎಸ್‌ಎಸ್ ಪ್ರೌಢಶಾಲೆಯಲ್ಲಿ 25 ವರ್ಷಕ್ಕೂ ಹೆಚ್ಚು ಕಾಲ ಎನ್‌ಸಿಸಿ ಅಧಿಕಾರಿಯಾಗಿ ಸೇವೆ ಸಲ್ಲಿಸಿದ್ದಕ್ಕಾಗಿ ಎನ್‌ಸಿಸಿ ಅಧಿಕಾರಿಗಳಿಂದ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ಶಿಸ್ತು, ಸಮಯ ನಿರ್ವಹಣೆ, ಸೇವಾ ಗುಣ, ರಾಷ್ಟ್ರೀಯ ಭಾವೈಕ್ಯತೆ, ಸ್ಪರ್ಧಾತ್ಮಕ ಮನೋಭಾವ ಇವೇ ಮೊದಲಾದ ಗುಣಗಳನ್ನು ಎನ್‌ಸಿಸಿ ತರಬೇತಿಯಿಂದ ಕಲಿಯಲು ಸಾಧ್ಯ ಎಂದು ನುಡಿದರು.

ಜೆಎಸ್‌ಎಸ್ ಸಂಸ್ಥೆ ಮತ್ತು ಎನ್‌ಸಿಸಿ ಘಟಕ ನೀಡಿದ ಈ ಅಪೂರ್ವ ಅವಕಾಶದಿಂದಾಗಿ 1997ರಿಂದ 2023ರವರೆಗೆ 25 ವರ್ಷಗಳಿಗೂ ಹೆಚ್ಚು ಕಾಲ ಎನ್‌ಸಿಸಿ ವಾಯುದಳದ ಅಧಿಕಾರಿಯಾಗಿ ಸೇವೆ ಸಲ್ಲಿಸಲು ಸಾಧ್ಯವಾಯಿತು. ಶಾಲಾ ಮುಖ್ಯೋಪಾಧ್ಯಾಯರಾಗಿ ಪದೋನ್ನತಿ ಪಡೆದಿದ್ದರಿಂದಾಗಿ ಎನ್‌ಸಿಸಿಯಿಂದ ಸ್ವಯಂ ನಿವೃತ್ತರಾಗಿರುವುದಾಗಿ ತಿಳಿಸಿದ ಅವರು, ಚೆನ್ನೈನ ತಾಂಬರಂ ವಾಯುನೆಲೆಯಲ್ಲಿ ತರಬೇತಿ ಪಡೆಯುವಾಗ ಅತ್ಯುತ್ತಮ ಎನ್‌ಸಿಸಿ ಅಧಿಕಾರಿ ಪ್ರಶಸ್ತಿ ಪಡೆದಿರುವುದನ್ನು ಸ್ಮರಿಸಿಕೊಂಡರು.

ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ವಿಂಗ್ ಕಮಾಂಡರ್ ಜಿ.ಎಸ್.ಆಶಿಶ್, ಎನ್‌ಸಿಸಿ ಕೆಡೆಟ್‌ಗಳಿಗೆ ಉತ್ತಮ ತರಬೇತಿ ನೀಡಿ ಅವರ ಭವಿಷ್ಯ ರೂಪಿಸುವ ಕೆಲಸವನ್ನು ಮ.ಗು.ಬಸವಣ್ಣ ಉತ್ತಮವಾಗಿ ನಿರ್ವಹಿಸಿದ್ದಾರೆ ಎಂದು ಪ್ರಶಂಸಿಸಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಪ್ರಾಚ್ಯವಸ್ತು ಮತ್ತು ವಸ್ತು ಸಂಗ್ರಹಾಲಯಗಳ ನಿರ್ದೇಶಕ ದೇವರಾಜ್ ಮಾತನಾಡಿ, ಶಾಲಾ ಹಂತದಲ್ಲಿ ವಿದ್ಯಾರ್ಥಿಗಳಲ್ಲಿ ವೈಯಕ್ತಿಕ ಶಿಸ್ತು ಮತ್ತು ರಾಷ್ಟ್ರೀಯತೆ ಬೆಳೆಸುವಲ್ಲಿ ಎನ್‌ಸಿಸಿ ಮಹತ್ತರ ಪಾತ್ರ ವಹಿಸುತ್ತದೆ ಎಂದರು.

10 ದಿನಗಳ ಶಿಬಿರದಲ್ಲಿ ವಿವಿಧ ಶಾಲೆಗಳ ಎನ್‌ಸಿಸಿ ಅಧಿಕಾರಿಗಳು, 400ಕ್ಕೂ ಹೆಚ್ಚು ಕೆಡೆಟ್‌ಗಳು ಭಾಗವಹಿಸಿದ್ದರು.

ನೀಟ್ ಪರೀಕ್ಷೆ ಅಕ್ರಮದ ತನಿಖೆಗೆ ಆಗ್ರಹಿಸಿ ಪ್ರತಿಭಟನೆ



ನೀಟ್ ಪರೀಕ್ಷೆ ಅಕ್ರಮ ತನಿಖೆಗೆ ಆಗ್ರಹಿಸಿ ವಿದ್ಯಾರ್ಥಿಗಳು ಪ್ರತಿಭಟನೆ ನಡೆಸಿದರು.

ಹೆಚ್.ಡಿ.ಕೋಟೆ, ಜೂ.15– ನೀಟ್ ಪ್ರವೇಶ ಪರೀಕ್ಷೆಯಲ್ಲಿ ಭ್ರಷ್ಟಾಚಾರ ಹಾಗೂ ಪರೀಕ್ಷಾ ಅಕ್ರಮದ ತನಿಖೆಗೆ ಆಗ್ರಹಿಸಿ ಪಟ್ಟಣದಲ್ಲಿ ಎಐಡಿಎಸ್‌ಓ ನೇತೃತ್ವದಲ್ಲಿ ವಿದ್ಯಾರ್ಥಿಗಳು ಪಟ್ಟಣದ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದ ಬಳಿ ಪ್ರತಿಭಟನೆ ನಡೆಸಿದರು.

ಎಐಡಿಎಸ್‌ಓ ಮೈಸೂರು ಜಿಲ್ಲಾ ಉಪಾಧ್ಯಕ್ಷೆ ಸ್ವಾತಿ ಮಾತನಾಡಿ, ಜೂ.4ರಂದು ಪ್ರಕಟಗೊಂಡ ನೀಟ್ ಪರೀಕ್ಷಾ ಫಲಿತಾಂಶದ ಪಾರದರ್ಶಕತೆಯ ಕುರಿತು ದೇಶವ್ಯಾಪಿ ವಿದ್ಯಾರ್ಥಿಗಳು ಹಾಗೂ ಪಾಲಕರು ಹಲವು ಪ್ರಶ್ನೆಗಳನ್ನು ಎತ್ತಿದ್ದಾರೆ ಎಂದರು.

ಯುಜಿಸಿ ಪರೀಕ್ಷಾ ಮಾರ್ಗಸೂಚಿ ಅನ್ವಯ ಅಂಕಗಳನ್ನು ನೀಡಿದ್ದಲ್ಲಿ ವಿದ್ಯಾರ್ಥಿಗಳು ಪಡೆಯಬಹುದಾದ ಅಂಕಗಳೊಂದಿಗೆ ಪ್ರಸ್ತುತ ಒಂದಿಷ್ಟು ವಿದ್ಯಾರ್ಥಿಗಳು ಪಡೆದಿರುವ ಅಂಕಗಳು ಹೊಂದಿಕೆಯಾಗುತ್ತಿಲ್ಲ. ಕೆಲವು ವಿದ್ಯಾರ್ಥಿಗಳಿಗೆ ಹೆಚ್ಚುವರಿ ಅಂಕ ನೀಡಿರುವುದಾಗಿ ಎನ್‌ಟಿಎ ಸಮಜಾಯಿಷಿ ನೀಡಿದೆ. ಆದರೆ ಹೆಚ್ಚುವರಿ ಅಂಕ ನೀಡಿರುವ ಮಾನದಂಡವು ಸಂಪೂರ್ಣವಾಗಿ ಪಕ್ಷಪಾತಿಯಾಗಿದೆ ಎಂದರು.

ಈ ವರ್ಷ ಪ್ರಕಟಿಸಲಾಗಿದ್ದ ಮಾರ್ಗಸೂಚಿ ಅನ್ವಯ ಹೆಚ್ಚುವರಿ ಅಂಕ ನೀಡಲು ಅವಕಾಶವಿಲ್ಲ. ಆದರೆ ಒಂದೇ ಕೇಂದ್ರದಲ್ಲಿ ಪರೀಕ್ಷೆ ಬರೆದ ವಿದ್ಯಾರ್ಥಿಗಳು ಸಮಾನ ಅಂಕಗಳನ್ನು ಗಳಿಸಿದ್ದಾರೆ. ಇದರೊಂದಿಗೆ ಪರೀಕ್ಷೆಗೂ ಮುನ್ನವೇ ಪ್ರಶ್ನೆ ಪತ್ರಿಕೆಗಳು ಸೋರಿಕೆಯಾಗಿದ್ದವು ಅಥವಾ ಈ ಕುರಿತು ಸಮರ್ಪಕ ತನಿಖೆ ನಡೆಸಲಾಗಿಲ್ಲ ಎಂಬ ಆರೋಪವಿದೆ. ಅನಿರೀಕ್ಷಿತ ಕೆಟ್ಟ ಫಲಿತಾಂಶದಿಂದಾಗಿ ಈಗಾಗಲೇ ಕೆಲವು ವಿದ್ಯಾರ್ಥಿಗಳು ಆತ್ಮಹತ್ಯೆಗೆ ತುತ್ತಾಗಿದ್ದಾರೆ. ಒಟ್ಟಾರೆ ನೀಟ್ ಪರೀಕ್ಷೆ ಫಲಿತಾಂಶದಲ್ಲಿನ ಪಾರದರ್ಶಕತೆ ಕೊರತೆ ಮತ್ತು ಭ್ರಷ್ಟಾಚಾರದ ಕುರಿತು ಸಾಕಷ್ಟು ಆರೋಪಗಳು ಕೇಳಿ ಬಂದಿವೆ ಎಂದು ಹೇಳಿದರು.

ಪರೀಕ್ಷೆಗೂ ಮುನ್ನವೇ ಪ್ರಶ್ನೆ ಪತ್ರಿಕೆ ಸೋರಿಕೆಯಾಗಿದೆ ಎಂಬ ಆರೋಪ ಕೇಳಿ ಬರುತ್ತಿದ್ದರೂ, ಈ ಬಗ್ಗೆ ಸೂಕ್ತ ತನಿಖೆ ನಡೆಸದಿರುವುದು ಖಂಡನೀಯ. ಈ ಹಿಂದೆ ರಾಜ್ಯಮಟ್ಟದಲ್ಲಿ ಜಂಟಿ ಪ್ರವೇಶ ಪರೀಕ್ಷೆಗಳು ಜಾರಿಯಲ್ಲಿದ್ದಾಗ, ಭ್ರಷ್ಟಾಚಾರದ ಕಾರಣವೊಡ್ಡಿ ಅಖಿಲ ಭಾರತ ಮಟ್ಟದ ನೀಟ್ ಪರೀಕ್ಷೆ ಪ್ರಾರಂಭಿಸಲಾಗಿತ್ತು. ಭ್ರಷ್ಟಾಚಾರದ ಕುರಿತು ತನಿಖೆ ನಡೆಸಿ ಸಂಬಂಧಪಟ್ಟವರಿಗೆ ಸೂಕ್ತ ಶಿಕ್ಷೆ ವಿಧಿಸುವುದರ ಬದಲಿಗೆ ಪರೀಕ್ಷಾ ಪದ್ಧತಿ ಬದಲಾಯಿಸುವುದು ಪರಿಹಾರವಲ್ಲ ಎಂದರು. ಸರ್ಕಾರದ ನಿಷ್ಕಾಳಜಿ ಮತ್ತು ಪರೀಕ್ಷಾ ವ್ಯವಸ್ಥೆ ಸಂಪೂರ್ಣ ವ್ಯಾಪಾರೀಕರಣದಿಂದಾಗಿ ಇಡೀ ವೈದ್ಯಕೀಯ ಪ್ರವೇಶ ಪರೀಕ್ಷೆಯು ಕುಸಿತಕ್ಕೊಳಗಾಗುತ್ತಿದೆ. ಅಲ್ಲದೇ ಅಮಾಯಕ ವಿದ್ಯಾರ್ಥಿಗಳು ಬಲಿಪಶುಗಳಾಗಿದ್ದಾರೆ. ಈ ಹಿನ್ನೆಲೆಯಲ್ಲಿ, ಒಟ್ಟು ಪ್ರಕರಣದ ಕುರಿತು ನ್ಯಾಯಾಂಗ ತನಿಖೆ ನಡೆಸಬೇಕು ಮತ್ತು ಇದರಲ್ಲಿ ಭಾಗಿಯಾದವರಿಗೆ ಕಠಿಣ ಶಿಕ್ಷೆ ವಿಧಿಸಬೇಕೆಂದು ಸರ್ಕಾರವನ್ನು ಆಗ್ರಹಿಸಿದರು.

ಸಾಹಿತಿ ಷಣ್ಮುಖಸ್ವಾಮಿ ನಿಧನ ತುಂಬಲಾರದ ನಷ್ಟ

ನುಡಿನಮನ ಕಾರ್ಯಕ್ರಮದಲ್ಲಿ ಜಿಲ್ಲಾ ಕಸಾಪ ಮಾಜಿ ಅಧ್ಯಕ್ಷ ವೈ.ಡಿ.ರಾಜಣ್ಣ ಅಭಿಪ್ರಾಯ



ಹಿರಿಯ ಸಾಹಿತಿ ದಿ.ಕೆ.ಆರ್.ಷಣ್ಮುಖಸ್ವಾಮಿ ಅವರಿಗೆ ನುಡಿ ನಮನ ಸಲ್ಲಿಸಲಾಯಿತು.

ತಿ.ನರಸೀಪುರ, ಜೂ.15– ಸೈಕಲ್ ತುಳಿದು ಕನ್ನಡಾಭಿಮಾನಿಗಳನ್ನು ಸಂಘಟಿಸಿ ಕನ್ನಡ ಸಾಹಿತ್ಯ ಪರಿಷತ್ ಚಟುವಟಿಕೆಗಳನ್ನು ನಡೆಸಿದ ಕೀರ್ತಿ ಸಾಹಿತಿ ದಿ.ಷಣ್ಮುಖಸ್ವಾಮಿ ಅವರಿಗೆ ಸಲ್ಲುತ್ತದೆ ಎಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಮಾಜಿ ಅಧ್ಯಕ್ಷ ವೈ.ಡಿ.ರಾಜಣ್ಣ ಅಭಿಪ್ರಾಯಪಟ್ಟರು.

ಪಟ್ಟಣದ ಮರೀಗೌಡ ಸ್ಮಾರಕ ಭವನದಲ್ಲಿ ಕನ್ನಡ ಸಾಹಿತ್ಯ ಕ್ರಿಯಾ ಸಮಿತಿ ಮತ್ತು ಶರಣ ಸಾಹಿತ್ಯ ಪರಿಷತ್ ಸಹಯೋಗದಲ್ಲಿ ಇತ್ತೀಚೆಗೆ ನಿಧನರಾದ ತಾಲೂಕಿನ ಹಿರಿಯ ಸಾಹಿತಿ, ಕಸಾಪ ತಾಲೂಕು ಘಟಕದ ಮಾಜಿ ಅಧ್ಯಕ್ಷ ಕೆ.ಆರ್.ಷಣ್ಮುಖಸ್ವಾಮಿ ಅವರಿಗೆ ಶನಿವಾರ ಸಂಜೆ ಹಮ್ಮಿಕೊಂಡಿದ್ದ ನುಡಿ ನಮನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.


ಅಂಚೆ ಇಲಾಖೆಯ ಒಂದು ಸಣ್ಣ ನೌಕರಿಯಲ್ಲಿದ್ದುಕೊಂಡು ತಾಲೂಕಿನಾದ್ಯಂತ ಭಾಷಾಭಿಮಾನಿಗಳನ್ನು ಒಂದೆಡೆ ಸೇರಿಸಿ ಸಾಹಿತ್ಯ ಪರಿಷತ್ ಸ್ಥಾಪನೆಗೆ ಭದ್ರ ಬುನಾದಿ ಹಾಕಿದವರಲ್ಲಿ ಷಣ್ಮುಖಸ್ವಾಮಿ ಮೊದಲಿಗರು.

ರಾಜ್ಯ ಹಾಗೂ ಜಿಲ್ಲೆಯಲ್ಲಿ ತಿ.ನರಸೀಪುರ ಕಸಾಪ ಎಂದರೆ ಷಣ್ಮುಖಸ್ವಾಮಿ ಎಂದು ಗುರುತಿಸುವ ಮಟ್ಟಿಗೆ ಪರಿಷತ್ ಅನ್ನು ಬೆಳೆಸಿದವರು. ಜೊತೆಗೆ ಸಾಹಿತ್ಯ ಕೃಷಿ ಕೂಡ ಮಾಡಿಕೊಂಡು ಪುಸ್ತಕಗಳನ್ನು ರಚಿಸಿದ್ದಾರೆ. ಇವರ ಅಗಲಿಕೆ ತಾಲೂಕು ಸಾಹಿತ್ಯ ಬಳಗಕ್ಕೆ ತುಂಬಲಾರದ ನಷ್ಟ ಹಾಗೂ ಕನ್ನಡಪರ ಚಟುವಟಿಕೆಗಳಿಗೂ ನಷ್ಟ ಎಂದರೆ ತಪ್ಪಾಗಲಾರದು ಎಂದರು.

ಸಾಹಿತ್ಯ ಕ್ರಿಯಾ ಸಮಿತಿ ಅಧ್ಯಕ್ಷ ಎಂ.ರಾಜು ಮಾತನಾಡಿ, 6 ಬಾರಿ ತಾಲೂಕು ಘಟಕದ ಅಧ್ಯಕ್ಷರಾಗಿದ್ದ ಷಣ್ಮುಖಸ್ವಾಮಿ ಅವರು ಅನೇಕ ಸಮ್ಮೇಳನಗಳನ್ನು ನಡೆಸಿ ಯಶಸ್ವಿಯಾಗಿದ್ದರು. ಅವರು ಸಾಹಿತ್ಯ ಕಾರ್ಯಗಳನ್ನು ಪ್ರೋತ್ಸಾಹಿಸಲು ಬಹಳಷ್ಟು ಶ್ರಮವಹಿಸುತ್ತಿದ್ದರು. ನಾಡಿನ ಸಂಸ್ಕೃತಿ, ಸಾಹಿತ್ಯ ಎತ್ತಿ ಹಿಡಿಯಲು ಪ್ರತಿಯೊಂದು ಕಾರ್ಯಕ್ರಮಕ್ಕೂ ವಾಟಾಳು ಶ್ರೀಗಳ ಜೊತೆ ಚರ್ಚಿಸಿ ಅವರ ಮಾರ್ಗದರ್ಶನ ಪಡೆದು ಅವರ ಆಶೀರ್ವಾದದಿಂದ ನಡೆಸುತ್ತಿದ್ದರು. ಅವರ ಒಡನಾಟ ನಮಗೆ ಸಾಹಿತ್ಯಾಸಕ್ತಿಯನ್ನು ಹೆಚ್ಚಿಸಿ ನಾವು ಕೂಡ ಪರಿಷತ್‌ನಲ್ಲಿ ಉತ್ತಮ ಸೇವೆ ಸಲ್ಲಿಸಲು ಸಹಕಾರಿಯಾಯಿತು ಎಂದರು. ಕಾರ್ಯಕ್ರಮದಲ್ಲಿ ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಹೆಳವರ ಹುಂಡಿ ಸಿದ್ದಪ್ಪ, ವಾಟಾಳು ಮಠಾಧೀಶ ಸಿದ್ದಲಿಂಗಶಿವಾಚಾರ್ಯ ಸ್ವಾಮೀಜಿ, ಕಸಾಪ ಮಾಜಿ ಅಧ್ಯಕ್ಷ ಚಂದ್ರಶೇಖರ್, ತಲಕಾಡು ಗೋವಿಂದೇಗೌಡ, ಸಮಾಜ ಸೇವಕ ಎಂ.ಮಾದೇಶ್, ಶರಣ ಸಾಹಿತ್ಯ ಪರಿಷತ್ ತಾಲೂಕು ಅಧ್ಯಕ್ಷ ತೋಂಟೇಶ್, ಮಲ್ಲೇಶ್, ಬನ್ನೂರು ಸಿದ್ದೇಗೌಡ, ವಕೀಲ ಕಿರಗಸೂರು ರಾಜಪ್ಪ, ಎಲ್‌ಐಸಿ ಶಿವರುದ್ರಸ್ವಾಮಿ, ತಲಕಾಡು ಶಾಂತಕುಮಾರ್, ಜ್ಞಾನೇಂದ್ರ ಮೂರ್ತಿ, ಶ್ರೀನಿವಾಸ್, ವನಜಾಕ್ಷಿ, ಜಾನಕಿ, ಶಶಿಕಲಾ, ನಾಗರಾಜು, ಕಲ್ಕುಂದ ರತ್ನಶೇಖರ್ ಮತ್ತಿತರರಿದ್ದರು.

ರೇಣುಕಾಸ್ವಾಮಿಗೆ ಎಲೆಕ್ಟ್ರಿಕ್ ಶಾಕ್ ಕೊಟ್ಟು ಸಾಯಿಸಿದ್ದಾರೆ

ಕೋರ್ಟ್‌ಗೆ ಎಸ್‌ಪಿಪಿ ಪಿ.ಪ್ರಸನ್ನಕುಮಾರ್ ಮಾಹಿತಿ



ಬೆಂಗಳೂರು, ಜೂ.15– ನಟಿ ಪವಿತ್ರ ಗೌಡಗೆ ಕೆಟ್ಟದಾಗಿ ಸಂದೇಶ ಕಳಿಸಿದ್ದಾರೆಂಬ ಕೋಪಕ್ಕೆ ರೇಣುಕಾಸ್ವಾಮಿಯನ್ನು ಕರೆತಂದು ಭೀಕರವಾಗಿ ಮರ್ಮಾಂಗಕ್ಕೆ ಹಲ್ಲೆ ಮಾಡಿದ್ದೂ ಅಲ್ಲದೇ ಎಲೆಕ್ಟ್ರಿಕ್ ಶಾಕ್ ಕೊಟ್ಟು ಚಿತ್ರಹಿಂಸೆ ನೀಡಿ ಕೊಲೆ ಮಾಡಲಾಗಿದೆ ಎಂದು ಸರ್ಕಾರಿ ವಿಶೇಷ ಅಭಿಯೋಜಕ (ಎಸ್‌ಪಿಪಿ) ಪಿ. ಪ್ರಸನ್ನ ಕುಮಾರ್ ಅವರು ನ್ಯಾಯಾಧೀಶರ ಮುಂದೆ ಮಾಹಿತಿ ನೀಡಿದ್ದಾರೆ.

ರೇಣುಕಾಸ್ವಾಮಿ ಕೊಲೆ ಕೇಸಿನಲ್ಲಿ ನಟ ದರ್ಶನ್ ಹಾಗೂ ಆತನ ಸಹಚರರು ಸೇರಿ 18 ಜನರನ್ನು ಬಂಧಿಸಲಾಗಿದ್ದು, 6 ದಿನ ಪೊಲೀಸ್ ಕಸ್ಟಡಿಗೆ ಕೊಡಲಾ ಗಿತ್ತು. ಈಗ ಕಸ್ಟಡಿ ಪೂರ್ಣಗೊಂಡ ಹಿನ್ನೆಲೆಯಲ್ಲಿ ಪುನಃ ಕೋರ್ಟ್ ಮುಂದೆ ಹಾಜರುಪಡಿಸಲಾಗಿತ್ತು.

ಈ ವೇಳೆ ನ್ಯಾಯಾಧೀಶರಿಗೆ ಪೊಲೀಸ್ ತನಿಖೆಯ ಬಗ್ಗೆ ವರದಿ ಒಪ್ಪಿಸಿದ ಎಸ್‌ಪಿಪಿ ಪ್ರಸನ್ನ ಕುಮಾರ್ ಅವರು, ಆರೋಪಿಗಳ ಮೊಬೈಲ್ ವಶಕ್ಕೆ ಪಡೆಯಲಾಗಿದೆ. ಮೊಬೈಲ್ ಡೇಟಾ ರಿಟ್ರೀವ್ ಮಾಡಬೇಕಿದೆ. ಮೈಸೂರು, ಬೆಂಗಳೂರಿನಲ್ಲಿ ಸ್ಥಳ ಮಹಜರು ಮಾಡಬೇಕಿದೆ. 30 ಲಕ್ಷ ರೂ. ಆರೋಪಿಗಳಿಂದ ವಶಪಡಿಸಿಕೊಳ್ಳಲಾಗಿದೆ.

ರೇಣುಕಾಸ್ವಾಮಿಗೆ ಗಂಭೀರ ಹಲ್ಲೆ ಮಾಡಿ, ಚಿತ್ರಹಿಂಸೆ ನೀಡಿದ್ದೂ ಅಲ್ಲದೇ ಮೆಗ್ಗರ್ ಎಂಬ ಡಿವೈಸ್‌ನಿಂದ ಎಲೆಕ್ಟ್ರಿಕ್ ಶಾಕ್ ಕೊಟ್ಟು ಸಾಯಿಸಲಾಗಿದೆ. ಮೆಗ್ಗರ್ ಡಿವೈಸ್ ಎಲ್ಲಿದೆ ಎಂಬುದನ್ನು ಆರೋಪಿಗಳು ಪೊಲೀಸರ ಮುಂದೆ ಬಾಯಿ ಬಿಡುತ್ತಿಲ್ಲ. ಆರೋಪಿಗಳು ಎಲ್ಲರೂ ಒಂದೇ ಹೇಳಿಕೆಯನ್ನು ನೀಡದೇ ಒಬ್ಬೊಬ್ಬರು ಒಂದೊಂದು ಹೇಳಿಕೆ ನೀಡುತ್ತಿದ್ದಾರೆ ಎಂದು ಪೊಲೀಸರು ಹೇಳುತ್ತಿದ್ದಾರೆ. ಕೊಲೆ ಆರೋಪಿಗಳಾದ ಎ3 ಆರೋಪಿ ಪವನ್ ಮತ್ತು ಎ5 ಆರೋಪಿ ನಂದೀಶ್ ಎಲೆಕ್ಟ್ರಿಕ್ ಶಾಕ್ ಕೊಟ್ಟಿದ್ದಾರೆ ಎಂದು ತಿಳಿದು ಬಂದಿದೆ ಎಂದು ಎಸ್‌ಪಿಪಿ ಮಾಹಿತಿ ನೀಡಿದರು.

ಮೈಸೂರು ಮಿತ್ರ
ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತು ಗಳು ವಿಶ್ವಾಸಪೂರ್ಣವೇ ಆದರೂ ಅವು ಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

ಹಸಿರು ನಮ್ಮ ಉಸಿರು

JSS MEDICAL SERVICE TRUST
JSS HOSPITAL
Jagadguru Dr. Sri Shivaratri Rajendra Circle, Mysuru-570 004 Ph.: 0821-2548212 Fax: 0821-2548218
www.jssonline.org

No. MED-I/HOS/EST/68/2020-21 Date: 14-06-2024

REQUIRED TRANSPLANT CO-ORDINATOR

Applications are invited from competent, qualified professionals for the Post of Transplant Co-ordinator at JSS Hospital, Mysuru.

Qualification: Medical social work (MSW) with minimum 2 Years of experience as Transplant co-ordinator

Please send your Bio-data to **the Director, Medical Education Division, JSS Mahavidyapeetha, Mysuru** or to **med@jssonline.org** within **15 days** from the date of this notification.

Sd/-
Executive Member

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
ತಾಲ್ಲೂಕು ಪಂಚಾಯಿತಿ ಕಾರ್ಯಾಲಯ, ಹನೂರು
Telephone : 08224-200130 E-mail:talukpanchyathanur@gmail.com

ಇ–ಟೆಂಡರ್ ಪ್ರಕಟಣೆ

ಹನೂರು ತಾಲ್ಲೂಕು ಪಂಚಾಯಿತಿ ಕಛೇರಿಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಸಹಾಯಕ ನಿರ್ದೇಶಕ (ಗ್ರಾ.ಉ) ರವರ ಪ್ರವಾಸಕ್ಕಾಗಿ 2024–25ನೇ ಸಾಲಿನ ಜುಲೈ–2024 ರಿಂದ ಮಾರ್ಚಿ–2025 ರವರೆಗೆ ಹೊರಗುತ್ತಿಗೆ ಆಧಾರದ ಮೇಲೆ ಮಾಸಿಕ ಬಾಡಿಗೆ ಆಧಾರದ ಮೇಲೆ ಹವಾನಿಯಂತ್ರಣ ರಹಿತ ವಾಹನ ಸೇವೆ (ಚಾಲಕ ಸಹಿತ)ಯನ್ನು ಹೊರಗುತ್ತಿಗೆ ಸಂಸ್ಥೆಯ ಮೂಲಕ ಕರ್ನಾಟಕ ಸಾರ್ವಜನಿಕ ಸಂಗ್ರಹಣೆ ಮತ್ತು ಪಾರದರ್ಶಕ ಅಧಿನಿಯಮ 1999/2000 ರನ್ವಯ ಪಡೆಯಲು E-Procurement ಮೂಲಕ ಟೆಂಡರ್ ಕರೆಯಲಾಗಿದ್ದು, ಆಸಕ್ತಿಯುಳ್ಳ ಸಂಸ್ಥೆಯವರು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು https://kppp.karnataka.gov.in, ಪೋರ್ಟಲ್ ಮೂಲಕ ಟೆಂಡರ್‌ನಲ್ಲಿ ಭಾಗವಹಿಸಿ ದಿನಾಂಕ: 11–06–2024 ರಿಂದ 25–06–2024 ರ ಮಧ್ಯಾಹ್ನ 3–00 ಗಂಟೆಯೊಳಗೆ ಟೆಂಡರ್ ಫಾರಂ ಸಲ್ಲಿಸಲು ಅವಕಾಶ ನೀಡಲಾಗಿದೆ. ಹೆಚ್ಚಿನ ಮಾಹಿತಿಗಾಗಿ https://kppp. karnataka.gov.in ಹಾಗೂ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಹನೂರು ರವರ ಕಛೇರಿ ದೂರವಾಣಿ ಸಂಖ್ಯೆ : 08224–200130 ಸಂಪರ್ಕಿಸಬಹುದು.

ಟೆಂಡರ್ ಪ್ರಕಟಣೆ ಸಂಖ್ಯೆ ಮತ್ತು ದಿನಾಂಕ	ಸಂಖ್ಯೆ : ತಾ.ಪಂ.ಹ/ಆಡಳಿತ/ ಹೊ.ಗು.ವಾ.ಸೇ./01/ 2024–25 ದಿ: 11–06–2024.
EMD ಮೊತ್ತ	ರೂ. 16000/-
KPPP ಪೋರ್ಟಲ್ ನಲ್ಲಿ ದಾಖಲೆಗಳನ್ನು ಅಪ್ಲೋಡ್ ಮಾಡಲು ಕೊನೆಯ ದಿನಾಂಕ	25–06–2024 ಮಧ್ಯಾಹ್ನ 3–00 ಗಂಟೆಯೊಳಗೆ
KPPP ಪೋರ್ಟಲ್ ನಲ್ಲಿ ತಾಂತ್ರಿಕ ಬಿಡ್ ತೆರೆಯುವ ದಿನಾಂಕ	26–06–2024 ಮಧ್ಯಾಹ್ನ 3–00 ಗಂಟೆಯೊಳಗೆ
KPPP ಪೋರ್ಟಲ್ ನಲ್ಲಿ ಆರ್ಥಿಕ ಬಿಡ್ ತೆರೆಯುವ ದಿನಾಂಕ	27–06–2024 ಬೆಳಿಗ್ಗೆ 11–00 ಗಂಟೆಗೆ
ಸಂಪರ್ಕಿಸಬೇಕಾದ ಅಧಿಕಾರಿಯ ವಿವರ (ಕಛೇರಿ ವೇಳೆಯಲ್ಲಿ ಮಾತ್ರ)	ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಹನೂರು.

ಟೆಂಡರ್‌ನಲ್ಲಿ ಸಲ್ಲಿಸಬೇಕಾದ ದಾಖಲಾತಿಗಳ ಹಾಗೂ ಇನ್ನಿತರ ನಿಬಂಧನೆಗಳ ವಿವರಗಳನ್ನು e-Procurement ಪೋರ್ಟಲ್ ನಲ್ಲಿ ಪಡೆಯಬಹುದು.

ಸಹಿ/– ಕಾರ್ಯನಿರ್ವಾಹಕ ಅಧಿಕಾರಿ
ತಾಲ್ಲೂಕು ಪಂಚಾಯಿತಿ, ಹನೂರು
ಸಂ:ವಾಸಾಸಂಇ:ಚಾ.ನಗರ:14:2024–25

IN THE PUBLIC TRUSTS REGISTRATION OFFICE GREATER MUMBAI REGION, MUMBAI.
Dharmaday Ayukta Bhavan, 2nd floor, 83, Dr. Annie Besant Road, Worli, Mumbai- 400 018.

PUBLIC NOTICE OF INQUIRY
Change Report No.: **ACC/VII/6621/2023**
Filed by **H. N. Dastur**
In the matter of **"Bharatiya Vidya Bhavan"**
P.T.R. No. F-358 (Bom).

To,
All concerned having interest

WHEREAS the Trustees of the above trust have filed a Change Report under Section 22 of the Bombay Public Trusts Act, 1950 for bringing the below described properties on the records of the above-named trust and an inquiry is to be made by the Joint/Assistant Charity Commissioner, Greater Mumbai Region, Mumbai, viz.

1. Whether this immovable property is the property of the trust and could be registered in the trust name Bharatiya Vidya Bhavan.

DESCRIPTION OF THE IMMOVABLE PROPERTY:

All that piece and parcel of undeveloped converted land for residential purpose bearing the following survey Nos situated at Yelawala Village, Yelawala Hobli, Mysore Taluk and bounded as follows:

Sr No	Survey No	Extent	
		A	G
1	241/1A	2	02
2	241/1B	0	20
3	241/1C	0	12

The aforementioned property was acquired vide Registered Deed of Sale dated 8th July, 2023 between Smt. M. L. Annapurna and Bharatiya Vidya Bhavan.

This is to call upon you and to submit your objections if any in the matter before the Assistant Charity Commissioner Greater Mumbai Region, Mumbai at the above address within 30 days from the date of publication of this notice.

Given under my hand and seal of the Joint / Charity Commissioner, Greater Mumbai Region, Mumbai.

This **5th** day of **June, 2024.**

Seal

Sd/-
Superintendent-J
Public Trusts Registration Office,
Greater Mumbai Region, Mumbai

ಕರ್ನಾಟಕ ಸರ್ಕಾರ
ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
ತಾಲ್ಲೂಕು ಪಂಚಾಯಿತಿ ಕಾರ್ಯಾಲಯ, ಹೊಳೆನರಸೀಪುರ, ಹಾಸನ ಜಿಲ್ಲೆ.
ದೂ.08175–273237, 273900 ಇ–ಮೇಲ್:hnp.mis.nrega@gmail.com
ನಂ::ತಾಪಂಹೊ/ಸಿ–9/2024–25 ದಿ:13.06.2024

ಇ–ಪ್ರಕ್ಯೂರ್ ಮೆಂಟ್ ಇ–ಟೆಂಡರ್ ಪ್ರಕಟಣೆ

ಹೊಳೆನರಸೀಪುರ ತಾಲ್ಲೂಕು ಪಂಚಾಯಿತಿ ಕಛೇರಿಗೆ ಡಾಟಾ ಎಂಟ್ರಿ ಆಪರೇಟರ್‌ಗಳನ್ನು ಮಾನವ ಸಂಪನ್ಮೂಲ ಸೇವೆಯನ್ನು ಅರ್ಹ ಮತ್ತು ಅನುಭವ ಹೊಂದಿರುವ ಹಾಗೂ ಕಾರ್ಮಿಕ ಇಲಾಖೆಯಲ್ಲಿ ನೋಂದಾಯಿಸಲ್ಪಟ್ಟ ಹೊರ ಸಂಸ್ಥೆಗಳ (ಏಜೆನ್ಸಿಯ) ಮುಖಾಂತರ ಹೊರಗುತ್ತಿಗೆ ಆಧಾರದ ಮೇಲೆ ಪಡೆಯಲು ಇ–ಟೆಂಡರ್ ಕರೆಯುವ ಬಗ್ಗೆ. ಟೆಂಡರ್ ಪ್ರಕಟಣೆ ಸಂಖ್ಯೆ ಮತ್ತು ದಿನಾಂಕ: ನ:ತಾ.ಪಂ.ಹೊ/ಸಿ.9/ಹೊ.ಗು/2024–25 ದಿನಾಂಕ: 13/06/2024 ಟೆಂಡರ್‌ಗೆ ಇಟ್ಟ ಅಂದಾಜು ಮೊತ್ತ: ರೂ.1313280=00 ಟೆಂಡರರ್ ಫಾರಂ ಅಪ್ ಲೋಡ್ ಮಾಡಲು ಕೊನೆಯ ದಿನಾಂಕ: 03/07/2024 E-Procurement ನಂತೆ www.eproc.karnataka.gov.in ಸಂಜೆ 5.00 ಘಂಟೆ ಇ–ಪೋರ್ಟಲ್ ತಾಂತ್ರಿಕ ಬಿಡ್ ತೆರೆಯುವ ವೇಳೆ ದಿನಾಂಕ ಮತ್ತು ಸ್ಥಳ ದಿನಾಂಕ: 08/07/2024 ರಂದು ಬೆಳಿಗ್ಗೆ 11.00 ಘಂಟೆಗೆ ತಾಲ್ಲೂಕು ಪಂಚಾಯಿತಿ ಕಛೇರಿ, ಹೊಳೆನರಸೀಪುರ ಇ–ಪೋರ್ಟಲ್ ಆರ್ಥಿಕ ಬಿಡ್ ತೆರೆಯುವ ವೇಳೆ ದಿನಾಂಕ ಮತ್ತು ಸ್ಥಳ ದಿನಾಂಕ: 09/07/2024 ರಂದು ಬೆಳಿಗ್ಗೆ 11.00 ಘಂಟೆಗೆ ತಾಲ್ಲೂಕು ಪಂಚಾಯಿತಿ ಕಛೇರಿ, ಹೊಳೆನರಸೀಪುರ ಟೆಂಡರ್‌ನೊಂದಿಗೆ ಪಾವತಿಸಬೇಕಾದ ಇ.ಎಂ.ಡಿ ಮೊತ್ತ: ರೂ.32800/– ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಬೇಕಾದ ಅಧಿಕಾರಿ ಹಾಗೂ ವಿಳಾಸ ದೂರವಾಣಿ ಸಂಖ್ಯೆ: www.eproc.karnataka.gov.in ಕಾರ್ಯನಿರ್ವಾಹಕ ಅಧಿಕಾರಿಗಳ ಕಛೇರಿ ತಾಲ್ಲೂಕು ಪಂಚಾಯಿತಿ, ಹೊಳೆನರಸೀಪುರ ದೂರವಾಣಿ ಸಂಖ್ಯೆ: 9480867130 ಟೆಂಡರ್‌ನಲ್ಲಿ ಸಲ್ಲಿಸಬೇಕಾದ ದಾಖಲಾತಿಗಳ ಹಾಗೂ ಇನ್ನಿತರ ನಿಬಂಧನೆಗಳ ವಿವರಗಳನ್ನು ಇ–ಪೋರ್ಟಲ್‌ನಲ್ಲಿ ಪಡೆಯಬಹುದು.

ಸಹಿ/– ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಹೊಳೆನರಸೀಪುರ.
ವಾಸಾಸಂಇ/ಹಿಸನಿ/ಹಾಸನ/55/ಕೆಎಸ್‌ಎಂಸಿಎ/2024–25

ಕರ್ನಾಟಕ ಸರ್ಕಾರ
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ
ಹುಣಸೂರು ಮೈಸೂರು ಜಿಲ್ಲೆ
ದೂ.ಸಂ.:08222–252254 ಇ.ಮೇಲ್– cdpohunsur@gmail.com
ಸಂ.ಶಿಅಯೋ/ಹು/ವಾ.ಟೆಂಡರ್.ಪ್ರಕಟಣೆ/2024–25 ದಿನಾಂಕ: 13.06.2024

ಟೆಂಡರ್ ಪ್ರಕಟಣೆ

ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ, ಹುಣಸೂರು, ಯೋಜನೆಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಹುಣಸೂರು ಈ ಕಛೇರಿಯ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಅಧಿಕೃತ ಕೆಲಸಗಳಿಗಾಗಿ ಜುಲೈ–2024 ರಿಂದ ಜೂನ್–2025 ರವರೆಗೆ (ಒಂದು ವರ್ಷದ ಅವಧಿಗೆ) ಹವಾ ನಿಯಂತ್ರಿತ (ಎಸಿ) ವಾಹನಗಳಾದ ಟಾಟಾ ಇಂಡಿಗೋ/ಇಟಿಯೋಸ್/ಸ್ವಿಫ್ಟ್ ಡಿಜೈರ್/ಫೋರ್ಡ್‌ಫಿಗೋ ಆಸ್ಪೈರ್ ಇಂತಹ ವಾಹನವನ್ನು ಮಾಸಿಕ ಬಾಡಿಗೆ ಆಧಾರದ ಮೇಲೆ ಒದಗಿಸುವ ಸಲುವಾಗಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999 ಮತ್ತು ನಿಯಮಗಳು 2000ರ ಪ್ರಕಾರ ಆಸಕ್ತ ಅರ್ಹ ಸರಬರಾಜುದಾರರಿಂದ ಟೆಂಡರ್ ಆಹ್ವಾನಿಸಲಾಗಿದೆ. ಟೆಂಡರ್ ನಮೂನೆ ತಾಂತ್ರಿಕ ನಿರ್ದಿಷ್ಟತೆ ಮತ್ತು ಇತರೆ ವಿವರಗಳನ್ನು ಈ ಮೇಲ್ಕಂಡ ಕಛೇರಿ ವಿಳಾಸದಲ್ಲಿ ಪಡೆಯಬಹುದಾಗಿದೆ. ಟೆಂಡರ್ ಸ್ವೀಕರಿಸಲು ಕೊನೆಯ ದಿ: 28.06.2024 ಸಂಜೆ 04.00 ಗಂಟೆಯವರೆಗೆ.

ಸಹಿ/– ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು
DIPR/DDMYS-91/KSMCA-66/2024-25

PUBLIC NOTICE

Notice is hereby given that SRI. MANOJ BHALCHANDRA SOHONI, son of Sri.Bhalchandra Wasudeo Sohoni and SMT. KANCHAN MANOJ SOHONI, wife of Sri. Manoj Bhalchandra Sohoni, is desirous to sell the under mentioned property to my client and any person or persons claiming any interest on the under mentioned property or any part thereof, is hereby required to communicate the same to me with documentary evidence at my office, situated at DOOR No.2765/1A D13/A1, "KEYANS", 5 TH MAIN ROAD, V.V. PURAM (V.V. MOHALLA), MYSORE – 570002, within 10 (ten) days from the date of this publication, as otherwise the said sale will be completed without any reference or regard to any such purported claim or interest, which shall be deemed to have been waived for all intents and purposes.

SCHEDULE PROPERTY

Residential Site No.34, in the MUDA approved layout "Mendelevium", formed in (1) Sy.No.86/1B, measuring 1 Acre 5 Guntas, (2) Sy.No.86/2B, measuring 1 Acre 4 Guntas, (3) Sy.No.87/2 (New) (Old No.87) measuring 15 Guntas, (4) Sy.No.86/3A2 (Old No.86/3A) measuring 10 ½ Guntas, (5) Sy.No.86/3B measuring 1 Acre 34 Guntas, (6) Sy.No. 86/3B measuring 10 Guntas, (7)Sy.No. 86/3A1 (New) (Old Sy.No.86/3A3) measuring 10.08 Guntas (10 ½ Guntas) totally measuring 5 Acres 09 Guntas, situated at Yelwala Village, Yelwala Hobli, Mysore Taluk, site measuring East to West 24.00 Meters and North to South 15.00 Meters, bounded on: East: 12 Meters Road, West: Site No.30&31, North: Site No.35 and South: Site No.33.

Sd/- Dhirendra Kumar R. Mehta
Advocate KEY-ANS LAW SOLUTIONS
Date: 15.06.2024
Place: Mysore

ಹಾಲು–ತುಪ್ಪ ಮತ್ತು ಉತ್ತರಕ್ರಿಯಾದಿ ಆಹ್ವಾನ ಪತ್ರಿಕೆ



ಶ್ರೀ ಮಾಯಣ್ಣಗೌಡ ಉ|| ಆಲದಹಳ್ಳಿ ಮಾಯಣ್ಣ ರವರು
ನಿಧನ: 06–06–2024
ಆಲದಹಳ್ಳಿ ಗ್ರಾಮ, ಕಿರುಗಾವಲು ಹೋ||, ಮಳವಳ್ಳಿ ತಾ|| ಮಂಡ್ಯ ಜಿಲ್ಲೆ
ಇವರು ದಿ:06–06–2024 ಗುರುವಾರ ದೈವಾಧೀನರಾದರೆಂದು ತಿಳಿಸಲು ವಿಷಾಧಿಸುತ್ತೇವೆ. ತತ್ಸಂಬಂಧವಾಗಿ ಮೃತರ ಹಾಲು–ತುಪ್ಪ ಮತ್ತು ಉತ್ತರಕ್ರಿಯಾದಿ ಕಾರ್ಯವನ್ನು ದಿನಾಂಕ: 16–06–2024 ಭಾನುವಾರ ಬೆಳಿಗ್ಗೆ 11.00 ಗಂಟೆಗೆ ಭುಗತಗಳ್ಳಿ ಗ್ರಾಮದ ಲೇ|| ಆರ್. ಮಹದೇವಪ್ಪನವರ ತೋಟದ ಮನೆಯಲ್ಲಿ ಏರ್ಪಡಿಸಲಾಗಿದೆ.
ಆಹ್ವಾನ ಪತ್ರಿಕೆ ತಲುಪದವರು ಇದನ್ನೇ ಆಹ್ವಾನವೆಂದು ತಿಳಿದು ತಾವುಗಳು ಆಗಮಿಸಿ ಮೃತರ ಆತ್ಮಕ್ಕೆ ಚಿರಶಾಂತಿಯನ್ನು ಕೋರಬೇಕಾಗಿ ವಿನಂತಿ.
ದುಃಖತಪ್ತರು: ಮೃತರ ಪತ್ನಿ ಶ್ರೀಮತಿ ಕಲಾವತಿ, ಹೆಣ್ಣುಮಕ್ಕಳು ಮಾನಸ ಮಂಜುನಾಥ ಮಾಲಿನಿ ಅರುಣ್‌ಕುಮಾರ್, ಲೇ|| ಆರ್. ಮಹದೇವಪ್ಪನವರ ಕುಟುಂಬವರ್ಗ ಹಾಗೂ ಆಲದಹಳ್ಳಿ ಲೇ|| ಮಾಯಿಗೌಡರ ಕುಟುಂಬವರ್ಗ
ಮೊ: 9036750558, 9880986245

PUBLIC NOTICE

Notice is hereby given that SRI. R. VENKATESH, son of Late M.T Rajaiah, is desirous to sell the under mentioned property to my client/s and any person or persons claiming any interest on the under mentioned property or any part thereof, is hereby required to communicate the same to me with documentary evidence at my office, situated at DOOR No.2765/1A D13/A1, "KEYANS", 5th MAIN ROAD, V.V. PURAM (V.V. MOHALLA), MYSORE – 570 002, within 7 (Seven) days from the date of this publication, as otherwise the said sale will be completed without any reference or regard to any such purported claim or interest, which shall be deemed to have been waived for all intents and purposes.

Scheduled Property

Dry Agricultural Land bearing following Survey Numbers, Extents and Boundaries, situated at Soorahalli Village, Kasaba Hobli, Nanjanagud Taluk, Mysore District.

Survey No.	Extent		Boundaries			
	A	G	East	West	North	South
33/1 (Old No.33)	3	12	Road	Sy. No.33/3	Road	Sy.No.34 & 37
33/3 (Old No.33 and Re Sy.No.33/2)	1	28	Sy.No.33/1	Sy.No.33/2	Road	Sy.No.34

Date: 15.06.2024, Place: Mysore
Sd/- Dhirendra Kumar R. Mehta, Advocate
KEY-ANS LAW SOLUTIONS